ಸಂಪುಟ: 05 ಸಂಚಿಕೆ: 134 ಪುಟಗಳು: 08 ಭಾನುವಾರ 27 ಜುಲೈ 2025 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**
ದಾನದಿಂದ ಮನೆ ಸಂಪದ್ಭರಿತ
ಧ್ಯಾನದಿಂದ ಮನಸ್ಸು ಸಂಪದ್ಭರಿತ
ಪ್ರೀತಿಯಿಂದ ಹೃದಯ ಸಂಪದ್ಭರಿತ

## ಕಸಾಪದ ಅವ್ಯವಹಾರಗಳ ವಿಚಾರಣೆಗೆ ತಡೆ ನೀಡಲು ಹೈಕೋರ್ಟ್ ನಕಾರ

• ಉದಯವಾಹಿನಿ, ಬೆಂಗಳೂರು

ಕನ್ನಡ ಸಾಹಿತ್ಯ ಪರಿಷತ್‌ನ (ಕಸಾಪ) 2023-24ನೇ ಸಾಲಿನ ಆದಾಯ, ಅನುದಾನ, ಖರೀದಿ ಮತ್ತು ಮಾರಾಟ ಸೇರಿದಂತೆ ಆರ್ಥಿಕ ವಹಿವಾಟಿನಲ್ಲಿ ನಡೆದಿದೆ ಎನ್ನಲಾದ ಅವ್ಯವಹಾರಗಳ ಬಗ್ಗೆ ವಿಚಾರಣೆ ನಡೆಸಲು ವಿಚಾರಣಾಧಿಕಾರಿ ನೇಮಿಸಿ ಬೆಂಗಳೂರು ನಗರ ಜಿಲ್ಲಾ 2ನೇ ವಲಯದ ಸಹಕಾರ ಸಂಘಗಳ ಉಪ ನಿಬಂಧಕರು ಹಾಗೂ ಸಂಘಗಳ ನೋಂದಣಾಧಿಕಾರಿ ಹೊರಡಿಸಿರುವ ಆದೇಶಕ್ಕೆ ತಡೆ ನೀಡಲು ಹೈಕೋರ್ಟ್ ನಿರಾಕರಿಸಿದೆ. 'ಸಹಕಾರ ಸಂಘಗಳ ನಿಬಂಧಕರ ಆದೇಶಕ್ಕೆ ತಡೆ ನೀಡಬೇಕು' ಎಂದು ಕೋರಿ ಕಸಾಪ ಅಧ್ಯಕ್ಷ ಮಹೇಶ ಜೋಶಿ ಸಲ್ಲಿಸಿದ್ದ ರಿಟ್ ಅರ್ಜಿಯ ಮಧ್ಯಂತರ ಮನವಿ ಬಗ್ಗೆ ವಿಚಾರಣೆ ಪೂರ್ಣಗೊಳಿಸಿ ಕಾಯ್ದಿರಿಸಿದ್ದ ಆದೇಶವನ್ನು ನ್ಯಾಯಮೂರ್ತಿ ಎಸ್. ಸುನೀಲ್ ದತ್ ಯಾದವ್ ಅವರಿದ್ದ ಏಕಸದಸ್ಯ ನ್ಯಾಯಪೀಠ ಪ್ರಕಟಿಸಿದೆ. ಬಳ್ಳಾರಿ ಜಿಲ್ಲೆಯ ಸಂಡೂರಿನಲ್ಲಿ ಕಸಾಪದ 2023-24ನೇ ಸಾಲಿನ ವಾರ್ಷಿಕ ಸರ್ವ ಸದಸ್ಯರ ಸಭೆ ನಡೆಸುವುದನ್ನು ರದ್ದುಪಡಿಸಿರುವ ಸಹಕಾರ ಸಂಘಗಳ ಉಪ ನಿಬಂಧಕರ ಕ್ರಮವನ್ನು ಪೀಠ ಅಮಾನ್ಯಗೊಳಿಸಿದೆ.

## ಹೆಚ್. ಆಂಜನೇಯ ವಿರುದ್ಧ ಮಹಿಳಾ ಆಯೋಗಕ್ಕೆ ದೂರು

• ಉದಯವಾಹಿನಿ, ಬೆಂಗಳೂರು

ನವದೆಹಲಿಯ ಕರ್ನಾಟಕ ಭವನದಲ್ಲಿ ಡಿಸಿಎಂ ಡಿ.ಕೆ.ಶಿವಕುಮಾರ್ ಅವರ ವಿಶೇಷಾಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿರುವ ಹೆಚ್. ಆಂಜನೇಯ ವಿರುದ್ಧ ಮಹಿಳಾ ಆಯೋಗಕ್ಕೆ ದೂರು ನೀಡಲಾಗಿದೆ.

ಹೆಚ್.ಆಂಜನೇಯ ದರ್ಪದಿಂದ ವರ್ತಿಸುತ್ತಿದ್ದು, ಸಿಬ್ಬಂದಿಗಳನ್ನು ಅಗೌರವದಿಂದ ಕಾಣುತ್ತಿದ್ದಾರೆ ಎಂದು ಮಹಿಳಾ ಸಿಬ್ಬಂದಿಯೊಬ್ಬರು ರಾಜ್ಯ ಮಹಿಳಾ ಆಯೋಗಕ್ಕೆ ದೂರು ನೀಡಿದ್ದಾರೆ. ದೆಹಲಿ ಕರ್ನಾಟಕ ಭವನದಲ್ಲಿ ಉಪ ಸಮನ್ವಯಾಧಿಕಾರಿ ಮತ್ತು ಲೆಕ್ಕಪತ್ರ ಅಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿರುವ ದೂರುದಾರೆ ಕುಸುಮಾ ಪಿ.ನಂದಗಿರಿ, ಹೆಚ್.ಆಂಚನೇಯ ವಿರುದ್ಧ ದೂರು ನೀಡಿದ್ದಾರೆ. ಮಹಿಳಾ ನೌಕರರು ಅಸುರಕ್ಷಿತ ವಾತಾವರಣದಲ್ಲಿ ಕೆಲಸ ಮಾಡಬೇಕಾದ ಸ್ಥಿತಿ ಇದೆ ಎಂದು ಬೇಸರ ವ್ಯಕ್ತಪಡಿಸಿದ್ದಾರೆ.

## 108 ಆಂಬುಲೆನ್ಸ್ ನೌಕರರಿಂದ ಮತ್ತೆ ಮುಷ್ಕರ ಎಚ್ಚರಿಕೆ!

• ಉದಯವಾಹಿನಿ, ಬೆಂಗಳೂರು

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವಿರುದ್ಧ ಆಕ್ರೋಶ ವ್ಯಕ್ತಪಡಿಸಿರುವ 108 ಆಂಬುಲೆನ್ಸ್ ಸೇವೆ ನೌಕರರು ಮತ್ತೆ ಮುಷ್ಕರದ ಎಚ್ಚರಿಕೆ ನೀಡಿದ್ದಾರೆ. 108 ಆಂಬುಲೆನ್ಸ್ ಆರೋಗ್ಯ ಕವಚ ಸೇವೆಯನ್ನು ಈವರೆಗೆ ಜಿವಿಕೆ ಎಂಬ ಖಾಸಗಿ ಸಂಸ್ಥೆ ನಿರ್ವಹಣೆ ಮಾಡುತ್ತಿತ್ತು.

ಇನ್ಮುಂದೆ ಆರೋಗ್ಯ ಇಲಾಖೆಯೇ ನಿರ್ವಹಣೆ ಮಾಡಲಿದೆ. ಈವರೆಗೆ ಆಂಬುಲೆನ್ಸ್ ಸಿಬ್ಬಂದಿಗಳಾಗಿ ಕೆಲಸ ಮಾಡುತ್ತಿದ್ದ ನೌಕರರನ್ನು ಮುಂದುವರೆಸುವ ಬಗ್ಗೆ ಆರೋಗ್ಯ ಇಲಾಖೆ ಯಾವುದೇ ಸ್ಪಷ್ಟನೆ ನೀಡಿಲ್ಲ. ಇದರಿಂದ ಅಸಮಾಧಾನಗೊಂಡಿರುವ ನೌಕರರು ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ. 108 ಆಂಬುಲೆನ್ಸ್ ನಲ್ಲಿ 3500 ಸಿಬ್ಬಂದಿಗಳು ಕೆಲಸ ಮಾಡುತ್ತಿದ್ದಾರೆ. ಆದರೆ ಮುಂಬರುವ ದಿನಗಳಲ್ಲಿ ಇವರನ್ನೇ ಮುಂದುವರೆಸುವ ಬಗ್ಗೆ ಸರ್ಕಾರ ಅಥವಾ ಇಲಾಖೆ ಸ್ಪಷ್ಟಪಡಿಸಿಲ್ಲ. ಅಲ್ಲದೇ ಎರಡು ಪಾಳಿಯ ಆಂಬುಲೆನ್ಸ್ ಸಿಬ್ಬಂದಿಯ ಸೇವೆಯನ್ನು ಮೂರು ಪಾಳಿ ಮಾಡಲಾಗಿದೆ. ಇದು ಅವೈಜ್ಞಾನಿಕ. ಗ್ರಾಮೀಣ ಪ್ರದೇಶದಲ್ಲಿ ನೌಕರರಿಗೆ ಸಾರಿಗೆ ಸೇವೆ ಇಲ್ಲ. ಮಹಿಳಾ ಸಿಬ್ಬಂದಿಗಳು ತೀವ್ರ ಸಮಸ್ಯೆ ಎದುರಿಸುತ್ತಿದ್ದಾರೆ.


## ಪಡಿತರದಾರರಿಗೆ ಬೇಳೆ, ಎಣ್ಣೆ ವಿತರಣೆ: ಬಿಪಿಎಲ್ ಕಾರ್ಡ್ ಪರಿಷ್ಕರಣೆ

• ಉದಯವಾಹಿನಿ, ಹುಬ್ಬಳ್ಳಿ

ಬಿಪಿಎಲ್ ಕಾರ್ಡ್‌ಗಳನ್ನು ಪರಿಷ್ಕರಣೆ ಮಾಡಬೇಕಾಗಿದೆ. ಕೇಂದ್ರ ಸರ್ಕಾರ ಮಿತಿ ಹೇರಿದೆ ಎಂದು ಆಹಾರ ಇಲಾಖೆ ಸಚಿವ ಕೆ.ಹೆಚ್. ಮುನಿಯಪ್ಪ ತಿಳಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ 17 ಲಕ್ಷ ಹೆಚ್ಚುವರಿ ಕಾರ್ಡುಗಳಿಗೆ ಪಡಿತರ ನೀಡಲಾಗುತ್ತಿದೆ. ಪಡಿತರ ಹೆಚ್ಚು ಮಾಡಬೇಕೆಂದು ಮನವಿ ಮಾಡಿದ್ದೇವೆ. ಜೋಳ ಖರೀದಿಸಿ ಮೂರು ತಿಂಗಳು ಬಿಟ್ಟರೆ ಹುಳ ಆಗುತ್ತಿದೆ.

ಹೀಗಾಗಿ ಖರೀದಿಸಿದ ತಕ್ಷಣ ಹಂಚಿಕೆ ಮಾಡಲು ಹೇಳಿದ್ದೇನೆ. ಬೇಳೆ, ಎಣ್ಣೆ ಕೊಡುವ ಬಗ್ಗೆಯೂ ಚಿಂತನೆ ನಡೆದಿದೆ. ಕಾಳಸಂತೆ ಮಾರಾಟ ಮಾಡುವ ವಿಚಾರದ ಬಗ್ಗೆ ಕಠಿಣ ಕ್ರಮ ಕೈಗೊಳ್ಳಲು ಮುಂದಾಗಿದ್ದೇವೆ ಎಂದು ತಿಳಿಸಿದ್ದಾರೆ. ರಾಜ್ಯದಲ್ಲಿ ಯಾವುದೇ ಕ್ರಾಂತಿ ಆಗುವುದಿಲ್ಲ ಎಂದು ಮುನಿಯಪ್ಪ ಹೇಳಿದ್ದು, ಸಿದ್ದರಾಮಯ್ಯ ಅವರನ್ನು ನಾಲ್ವಡಿ ಕೃಷ್ಣರಾಜ ಒಡೆಯರ್ ಗೆ ಹೋಲಿಸಿದ ಯತೀಂದ್ರ ಸಿದ್ದರಾಮಯ್ಯ ಹೇಳಿಕೆಗೆ ಪ್ರತಿಕ್ರಿಯೆ ನೀಡುವುದಿಲ್ಲ.

ಆದರೆ, ಸಿಎಂ ಸಿದ್ದರಾಮಯ್ಯ ಅಭಿವೃದ್ಧಿ ಕೆಲಸ ಮಾಡುತ್ತಿದ್ದಾರೆ. ಐದು ಗ್ಯಾರಂಟಿಗಳನ್ನು ಮುಂದುವರೆಸಿದ್ದಾರೆ. ಅಭಿವೃದ್ಧಿಗೂ ಹಣ ಕೊಟ್ಟಿದ್ದಾರೆ. ರಸಗೊಬ್ಬರ ಪೂರೈಸುವಂತೆ ಕೇಂದ್ರಕ್ಕೆ ಸಿಎಂ ಪತ್ರ ಬರೆದಿದ್ದಾರೆ. ಈ ಹಿಂದೆ ಸಕಾಲದಲ್ಲಿ ಗೊಬ್ಬರ ಪೂರೈಸುತ್ತಿದ್ದರು. ಪ್ರಸಕ್ತ ವರ್ಷ ಕೊರತೆಯಾಗಿದೆ ಎಂದು ಹೇಳಿದ್ದಾರೆ.



# ನಮೋಗೆ ಅಗ್ರಸ್ಥಾನ ಟ್ರಂಪ್‌ಗೆ ಅವಮಾನ

## ವಿಶ್ವದಲ್ಲಿ ಮೋದಿಯೇ ನಂ.1




ನವದೆಹಲಿ: ಅಮೆರಿಕ ಮೂಲದ ವ್ಯಾಪಾರ ಗುಪ್ತಚರ ಸಂಸ್ಥೆ ಮಾರ್ನಿಂಗ್ ಕನ್ಸಲ್ಟ್ ಬಿಡುಗಡೆ ಮಾಡಿದ ಇತ್ತೀಚಿನ ಗ್ಲೋಬಲ್ ಲೀಡರ್ ಅಪ್ರೂವಲ್ ರೇಟಿಂಗ್‌ನಲ್ಲಿ ಪ್ರಧಾನಿ ಮೋದಿ ಅವರು 75% ಅಪ್ರೂವಲ್ ರೇಟಿಂಗ್ ಗಳಿಸುವ ಮೂಲಕ ಮತ್ತೊಮ್ಮೆ ವಿಶ್ವದ ಅತ್ಯಂತ ಜನಪ್ರಿಯ ನಾಯಕರಾಗಿ ಹೊರಹೊಮ್ಮಿದ್ದಾರೆ. ದಕ್ಷಿಣ ಕೊರಿಯಾದ ಹೊಸದಾಗಿ ಆಯ್ಕೆಯಾದ ಅಧ್ಯಕ್ಷ ಲೀ ಜೇ ಮ್ಯುಂಗ್ ಅವರನ್ನು ಹಿಂದಿಕ್ಕಿ ಮೋದಿ ಜಾಗತಿಕ ಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿದ್ದಾರೆ, ಅವರು ಶೇ. 59 ರಷ್ಟು ಅನುಮೋದನೆಯೊಂದಿಗೆ ಎರಡನೇ ಸ್ಥಾನ ಪಡೆದರು. 2025ರ ಜುಲೈ 4 ಮತ್ತು 10ರ ನಡುವೆ ನಡೆಸಲಾದ ಈ ಸಮೀಕ್ಷೆಯು, ಬಹು ದೇಶಗಳಲ್ಲಿ ಏಳು ದಿನಗಳ ಸರಾಸರಿಗಳನ್ನು ಬಳಸಿಕೊಂಡು ಪ್ರಜಾಪ್ರಭುತ್ವ ವಿಶ್ವ ನಾಯಕರ ಸಾರ್ವಜನಿಕ ಅಭಿಪ್ರಾಯವನ್ನು ಟ್ರ್ಯಾಕ್ ಮಾಡುತ್ತದೆ. ಮಾರ್ನಿಂಗ್ ಕನ್ಸಲ್ಟ್ ಪ್ರಕಾರ, ಸಮೀಕ್ಷೆಗೆ ಒಳಗಾದ ಪ್ರತಿ ನಾಲ್ವರು ಭಾರತೀಯರಲ್ಲಿ ಮೂವರು ಮೋದಿ ನಾಯಕತ್ವದ ಬಗ್ಗೆ ಸಕಾರಾತ್ಮಕ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ, ಆದರೆ 18% ಜನರು ಅಸಮ್ಮತಿ ವ್ಯಕ್ತಪಡಿಸಿದ್ದಾರೆ ಮತ್ತು 7% ಜನರು ಇನ್ನೂ ನಿರ್ಧಾರ ತೆಗೆದುಕೊಳ್ಳಿಲ್ಲ. ಕಳೆದ ವರ್ಷ ಮತ್ತೆ ಅಧಿಕಾರಕ್ಕೆ ಬಂದ ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಶೇ. 44 ರಷ್ಟು ಅನುಮೋದನೆ ರೇಟಿಂಗ್‌ನೊಂದಿಗೆ ಎಂಟನೇ ಸ್ಥಾನದಲ್ಲಿದ್ದರು, ಅವರ ಹಲವಾರು ಜಾಗತಿಕ ಸಹವರ್ತಿಗಳಿಗಿಂತ ಬಹಳ ಹಿಂದಿದ್ದಾರೆ. ವ್ಯಾಪಾರ ಮತ್ತು ದೇಶೀಯ ನಿರ್ಧಾರಗಳು ಸೇರಿದಂತೆ ಇತ್ತೀಚಿನ ನೀತಿ ಕ್ರಮಗಳು ಅವರ ಸ್ಥಾನಮಾನದ ಮೇಲೆ ಪರಿಣಾಮ ಬೀರಿರಬಹುದು ಎಂದು ವಿಶ್ಲೇಷಕರು ಸೂಚಿಸುತ್ತಾರೆ.

ಮೋದಿ ಅವರ ಜಾಗತಿಕ ಜನಪ್ರಿಯತೆಯನ್ನು ಬಿಜೆಪಿ ಮತ್ತು ಹಲವಾರು ಸಚಿವರು ಶ್ಲಾಘಿಸಿದ್ದಾರೆ. ಪಕ್ಷದ ಐಟಿ ಸೆಲ್ ಮುಖ್ಯಸ್ಥ ಅಮಿತ್ ಮಾಳವೀಯ ಅವರು ಎಕ್ಸ್ ನಲ್ಲಿ ಪೋಸ್ಟ್ ಹಂಚಿಕೊಂಡಿದ್ದಾರೆ, ಒಂದು ಶತಕೋಟಿಗೂ ಹೆಚ್ಚು ಭಾರತೀಯರಿಂದ ಪ್ರೀತಿಸಲ್ಪಟ್ಟ ಮತ್ತು ಪ್ರಪಂಚದಾದ್ಯಂತ ಲಕ್ಷಾಂತರ ಜನರಿಂದ ಗೌರವಿಸಲ್ಪಟ್ಟ ಪ್ರಧಾನಿ ನರೇಂದ್ರ ಮೋದಿ ಅವರು ಮಾರ್ನಿಂಗ್ ಕನ್ಸಲ್ಟ್ ಗ್ಲೋಬಲ್ ಲೀಡರ್ ಅಪ್ರೂವಲ್ ಟ್ರ್ಯಾಕರ್‌ನಲ್ಲಿ ಮತ್ತೊಮ್ಮೆ ಅಗ್ರಸ್ಥಾನದಲ್ಲಿದ್ದಾರೆ, ವಿಶ್ವದಾದ್ಯಂತ ಅತ್ಯುನ್ನತ ರೇಟಿಂಗ್ ಪಡೆದ ಮತ್ತು ಅತ್ಯಂತ ವಿಶ್ವಾಸಾರ್ಹ ನಾಯಕ. ಬಲವಾದ ನಾಯಕತ್ವ. ಜಾಗತಿಕ ಗೌರವ. ಭಾರತ ಸುರಕ್ಷಿತ ಕೈಯಲ್ಲಿದೆ ಎಂದು ಬರೆದಿದ್ದಾರೆ.

ಕೇಂದ್ರ ಸಚಿವ ಸರ್ಬಾನಂದ ಸೋನೋವಾಲ್ ಕೂಡ ಪ್ರಧಾನ ಮಂತ್ರಿಯವರ ನಾಯಕತ್ವವನ್ನು ಶ್ಲಾಘಿಸಿ ತಮ್ಮ ಪೋಸ್ಟ್‌ನಲ್ಲಿ ಬರೆದುಕೊಂಡಿದ್ದಾರೆ. ಮತ್ತೊಮ್ಮೆ, ಗೌರವಾನ್ವಿತ ಪ್ರಧಾನ ಮಂತ್ರಿ ಅವರು ಮಾರ್ನಿಂಗ್ ಕನ್ಸಲ್ಟ್ ಗ್ಲೋಬಲ್ ಲೀಡರ್ ಅಪ್ರೂವಲ್ ಟ್ರ್ಯಾಕರ್‌ನಲ್ಲಿ ಅಗ್ರಸ್ಥಾನದಲ್ಲಿದ್ದಾರೆ, ವಿಶ್ವದ ಅತ್ಯಂತ ವಿಶ್ವಾಸಾರ್ಹ ಮತ್ತು ಅತ್ಯುನ್ನತ ರೇಟಿಂಗ್ ಪಡೆದ ನಾಯಕರಾಗಿ ಹೊರಹೊಮ್ಮಿದ್ದಾರೆ. ಒಂದು ಶತಕೋಟಿಗೂ ಹೆಚ್ಚು ಭಾರತೀಯರಿಂದ ಬೆಂಬಲ ಪಡೆದು, ಖಂಡಗಳಾದ್ಯಂತ ಮೆಚ್ಚುಗೆ ಪಡೆದಿದ್ದಾರೆ' ಎಂದು ಬರೆದಿದ್ದಾರೆ. ಮೇ 2024 ರಲ್ಲಿ ಪ್ರಧಾನಿಯಾಗಿ ತಮ್ಮ ಮೂರನೇ ಅವಧಿಯನ್ನು ಪ್ರಾರಂಭಿಸಿದ ಮೋದಿ, ಮಾರ್ನಿಂಗ್ ಕನ್ಸಲ್ಟ್‌ನ ಮಾಸಿಕ ಅನುಮೋದನೆ ಟ್ರ್ಯಾಕರ್‌ನಲ್ಲಿ ನಿರಂತರವಾಗಿ ಉನ್ನತ ಸ್ಥಾನ ಪಡೆದಿದ್ದಾರೆ, ಇದು ಒಂದು ಡಜನ್‌ಗಿಂತಲೂ ಹೆಚ್ಚು ಪ್ರಜಾಪ್ರಭುತ್ವ ರಾಷ್ಟ್ರಗಳಲ್ಲಿ ಪ್ರತಿದಿನ ಸಾವಿರಾರು ವಯಸ್ಕರನ್ನು ಸಮೀಕ್ಷೆ ಮಾಡುತ್ತದೆ.

**ಪ್ರಧಾನಿ ಮೋದಿ ನಂತರದ ಸ್ಥಾನದಲ್ಲಿ ಯಾರಿದ್ದಾರೆ..:** ಭಾರತದ ಪ್ರಧಾನಿ ಮೋದಿ ಶೇ.75 ರಷ್ಟು ಗ್ಲೋಬಲ್ ಲೀಡರ್ ಅಪ್ರೂವಲ್ ರೇಟಿಂಗ್ ಹೊಂದಿದ್ದರೇ, ದಕ್ಷಿಣ ಕೋರಿಯಾದ ಲಿ.ಜೆ ಮಯುಂಗ್ ಶೇ.59 ರಷ್ಟು ಗ್ಲೋಬಲ್ ಲೀಡರ್ ಅಪ್ರೂವಲ್ ರೇಟಿಂಗ್‌ನಲ್ಲಿ 2ನೇ ಸ್ಥಾನದಲ್ಲಿದ್ದಾರೆ. ಇನ್ನೂ ಅರ್ಜೆಂಟೈನಾದ ಜೇವಿಯರ್ ಮಿಲಿ ಶೇ.57 ರಷ್ಟು ಗ್ಲೋಬಲ್ ಲೀಡರ್ ಅಪ್ರೂವಲ್ ರೇಟಿಂಗ್ ಹೊಂದಿದ್ದಾರೆ. ಇನ್ನೂ ಕೆನಡಾದ ಹೊಸ ಪ್ರಧಾನಿ ಮಾರ್ಕ್ ಕಾರ್ನಿ ಶೇ.56 ರಷ್ಟು ಗ್ಲೋಬಲ್ ಲೀಡರ್ ಅಪ್ರೂವಲ್ ರೇಟಿಂಗ್ ಹೊಂದಿದ್ದಾರೆ. ಅಮೆರಿಕಾದ ಅಧ್ಯಕ್ಷ ಡೋನಾಲ್ಡ್ ಟ್ರಂಪ್ ಈ ರ್‍ಯಾಂಕಿಂಗ್‌ನಲ್ಲಿ 8ನೇ ಸ್ಥಾನದಲ್ಲಿದ್ದಾರೆ. ಡೋನಾಲ್ಡ್ ಟ್ರಂಪ್ ಶೇ.44 ರಷ್ಟು ಗ್ಲೋಬಲ್ ಲೀಡರ್ ಅಪ್ರೂವಲ್ ರೇಟಿಂಗ್ ಪಡೆದಿದ್ದಾರೆ. ಈ ಸಮೀಕ್ಷೆಯ ಫಲಿತಾಂಶವು ಜಾಗತಿಕ ಮಟ್ಟದಲ್ಲಿ ಪ್ರಧಾನಿ ಮೋದಿ ಜನಪ್ರಿಯತೆ ಹೆಚ್ಚಾಗುತ್ತಿರುವುದನ್ನು ತೋರಿಸುತ್ತೆ. ಜಗತ್ತಿನಲ್ಲಿ ಅತಿ ಹೆಚ್ಚು ಅಪ್ರೂವಲ್ ರೇಟಿಂಗ್ ಹೊಂದಿರುವುದನ್ನು ಮತ್ತೊಮ್ಮೆ ದೃಢಪಡಿಸಿದೆ. ಮಾರ್ನಿಂಗ್ ಕನ್ಸಲ್ಟ್, 2021 ರ ಸೆಪ್ಟೆಂಬರ್‌ನಿಂದ ಆಗ್ಗಾಗ್ಗೆ ಗ್ಲೋಬಲ್ ಲೀಡರ್ ಅಪ್ರೂವಲ್ ರೇಟಿಂಗ್ ಟ್ರ್ಯಾಕರ್ ನಡೆಸುತ್ತಿದೆ. 2021ರಲ್ಲಿ ಪ್ರಧಾನಿ ಮೋದಿ ಶೇ.70 ರಷ್ಟು ಗ್ಲೋಬಲ್ ಲೀಡರ್ ಅಪ್ರೂವಲ್ ರೇಟಿಂಗ್ ಹೊಂದಿದ್ದರು. 2022ರ ಪ್ರಾರಂಭದಲ್ಲಿ ಶೇ.71 ರಷ್ಟು ಅಪ್ರೂವಲ್ ರೇಟಿಂಗ್ ಹೊಂದಿದ್ದರು. ಆಗಲೂ ವಿಶ್ವದ 13 ನಾಯಕರ ಪೈಕಿ ಮೋದಿಯೇ ಟಾಪ್ ಸ್ಥಾನದಲ್ಲಿದ್ದರು. ಈಗ 2025 ರಲ್ಲೂ ಪ್ರಧಾನಿ ಮೋದಿ ಜಾಗತಿಕ ನಾಯಕರ ಪೈಕಿ ನಂಬರ್ ಒನ್ ಸ್ಥಾನದಲ್ಲಿದ್ದಾರೆ.



**ಜಾಗತಿಕ ಅನುಮೋದನೆಯಲ್ಲಿ ಶೇ. 75 ರಷ್ಟು ಬೆಂಬಲದೊಂದಿಗೆ ಅಗ್ರಸ್ಥಾನ..!**

**ವಿಶ್ವದ ವಿಶ್ವಾಸಾರ್ಹ ನಾಯಕರಲ್ಲಿ ಮೋದಿಗೆ ಮತ್ತೆ ಅಗ್ರಸ್ಥಾನ; ಟ್ರಂಪ್‌ಗೆ ಹಿನ್ನಡೆ...!**

**ಅಮೆರಿಕ ಅಧ್ಯಕ್ಷ ಟ್ರಂಪ್ ಅಲ್ಲವೇ ಅಲ್ಲ, 2ನೇ ಸ್ಥಾನದಲ್ಲಿ ಯಾರಿದ್ದಾರೆ...**

### 22 ದೇಶಗಳ ಡೇಟಾ ಸಂಗ್ರಹಿಸಿ ಜಾಗತಿಕ ಮನ್ನಣೆ!

ಈ ಸಮೀಕ್ಷೆಯು 22 ದೇಶಗಳ 43,000ಕ್ಕೂ ಹೆಚ್ಚು ಜನರಿಂದ ಸಂಗ್ರಹಿಸಿದ ಡೇಟಾವನ್ನು ಆಧರಿಸಿದ್ದು, ಮೋದಿಯವರ ನಾಯಕತ್ವಕ್ಕೆ ಜಾಗತಿಕ ಮನ್ನಣೆಯನ್ನು ಪ್ರತಿಬಿಂಬಿಸುತ್ತದೆ. ಮೋದಿಯವರ ಈ ಸಾಧನೆಗೆ ಕಾರಣವೆಂದರೆ, ಭಾರತದ ಆರ್ಥಿಕ ಬೆಳವಣಿಗೆ, ವಿದೇಶಾಂಗ ನೀತಿಯ ಯಶಸ್ಸು, ಮತ್ತು ಜನಪರ ಕಾರ್ಯಕ್ರಮಗಳು. ಡಿಜಿಟಲ್ ಇಂಡಿಯಾ, ಮೇಕ್ ಇನ್ ಇಂಡಿಯಾ, ಮತ್ತು ಆಯುಷ್ಮಾನ್ ಭಾರತದಂತಹ ಯೋಜನೆಗಳು ದೇಶಾದ್ಯಂತ ಜನರ ಜೀವನವನ್ನು ಸುಧಾರಿಸಿವೆ. ಅಂತರರಾಷ್ಟ್ರೀಯವಾಗಿ ಕ್ವಾಡ್‌ನಂತಹ ವೇದಿಕೆಗಳಲ್ಲಿ ಭಾರತದ ಪಾತ್ರವನ್ನು ಬಲಪಡಿಸಿದ್ದಾರೆ. ರಷ್ಯಾ-ಯುಕ್ರೇನ್ ಸಂಘರ್ಷದಂತಹ ಜಾಗತಿಕ ಬಿಕ್ಕಟ್ಟುಗಳಲ್ಲಿ ಭಾರತದ ತಟಸ್ಥತೆ ಮತ್ತು ಶಾಂತಿಯ ಕರೆಯು ಅವರನ್ನು ಜಾಗತಿಕ ರಾಜತಾಂತ್ರಿಕ ನಾಯಕನಾಗಿ ಎತ್ತಿ ತೋರಿಸಿದೆ.

### ಮೋದಿ ಸಾಧನೆ ಕೊಂಡಾಡಿದ ನಾಯಕರು

ಅಮಿತ್ ಮಾಳವೀಯರ ಎಕ್ಸ್ ಪೋಸ್ಟ್‌ನಲ್ಲಿ, ಬಲವಾದ ನಾಯಕತ್ವ, ಜಾಗತಿಕ ಗೌರವ ಎಂದು ಕೊಂಡಾಡಲಾಗಿದೆ. ಈ ಸಾಧನೆಯು ಭಾರತದ ಜನತೆಯ ಆಕಾಂಕ್ಷೆಗಳನ್ನು ಪೂರೈಸುವ ಮೋದಿಯವರ ಸಾಮರ್ಥ್ಯವನ್ನು ತೋರಿಸುತ್ತದೆ. ಭಾರತವನ್ನು 2047ರ ವೇಳೆಗೆ ವಿಕಸಿತ ರಾಷ್ಟ್ರವಾಗಿಸುವ ಅವರ ದೃಷ್ಟಿಕೋನವು, ದೇಶದ ಯುವ ಶಕ್ತಿಯನ್ನು ಸದ್ಬಳಕೆ ಮಾಡಿಕೊಂಡು, ಆರ್ಥಿಕ ಸುಧಾರಣೆಗಳ ಮೂಲಕ ಸಾಧ್ಯವಾಗುತ್ತಿದೆ. ಇತ್ತ ಪಿಯುಷ್ ಗೋಯಲ್ ಕೂಡ ಭಾರತದ ಬೆಳೆಯುತ್ತಿರುವ ಜಾಗತಿಕ ಖ್ಯಾತಿಗೆ ಇದು ಸಾಕ್ಷಿ ಎಂದು ಬಣ್ಣಿಸಿದ್ದಾರೆ. ಈ ರೇಟಿಂಗ್, ಭಾರತದ ಜಾಗತಿಕ ಪ್ರಭಾವವನ್ನು ಹೆಚ್ಚಿಸುವ ಮೋದಿಯವರ ಸಾಮರ್ಥ್ಯವನ್ನು ತೋರಿಸುತ್ತದೆ. ಈ ಸಾಧನೆಯು ಭಾರತೀಯರಿಗೆ ಹೆಮ್ಮೆಯ ಕ್ಷಣವಾಗಿದ್ದು, ಮೋದಿಯವರ ನಾಯಕತ್ವದಲ್ಲಿ ದೇಶವು ಜಾಗತಿಕ ವೇದಿಕೆಯಲ್ಲಿ ಮುಂಚೂಣಿಯಲ್ಲಿ ಇದೆ. ಭಾರತ ಸುರಕ್ಷಿತ ಕೈಯಲ್ಲಿದೆ ಎಂಬ ಮಾಳವೀಯರ ಹೇಳಿಕೆ, ಈ ಸಾಧನೆಯ ಮೂಲಕ ದೃಢವಾಗಿದೆ.



### ಮಾಲ್ಡೀವ್ಸ್‌ನ ಸ್ವಾತಂತ್ರ್ಯ ದಿನಾಚರಣೆಯಲ್ಲಿ ಮುಖ್ಯ ಅತಿಥಿಯಾಗಿ ಮೋದಿ

ಮೋದಿ ಅವರು ಮಾಲ್ಡೀವ್ಸ್‌ನ 60ನೇ ಸ್ವಾತಂತ್ರ್ಯ ದಿನಾಚರಣೆಯಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದಾರೆ. ಮಾಲ್ಡೀವ್ಸ್ ಅಧ್ಯಕ್ಷ ಮೊಹಮ್ಮದ್ ಮುಯಿಝು ಅವರ ಆಹ್ವಾನದ ಮೇರೆಗೆ ಮೋದಿ ದ್ವೀಪ ರಾಷ್ಟ್ರಕ್ಕೆ ಎರಡು ದಿನಗಳ ಪ್ರವಾಸಕ್ಕೆ ತೆರಳಿದ್ದಾರೆ. ಪ್ರಧಾನಿ ಮೋದಿ ಯುನೈಟೆಡ್ ಕಿಂಗ್‌ಡಮ್‌ಗೆ ಭೇಟಿ ನೀಡಿದ ಬಳಿಕ ಮಾಲ್ಡೀವ್ಸ್‌ಗೆ ಆಗಮಿಸಿದರು. ದ್ವೀಪ ರಾಷ್ಟ್ರಕ್ಕೆ ಬಂದ ನಂತರ ಮೋದಿ ಅವರು ಮುಯಿಝು ಅವರೊಂದಿಗೆ ದ್ವಿಪಕ್ಷೀಯ ಸಭೆ ನಡೆಸಿದರು.ವ್ಯಾಪಾರ ಮತ್ತು ರಕ್ಷಣೆ ಸೇರಿದಂತೆ ಹಲವಾರು ವಿಷಯಗಳ ಕುರಿತು ಚರ್ಚಿಸಿದರು. ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡ ಬಳಿಕ ಮೋದಿ ಮಾಲ್ಡೀವ್ಸ್‌ನಿಂದ ತೆರಳಲಿದ್ದಾರೆ. ದ್ವೀಪ ರಾಷ್ಟ್ರವು ತನ್ನ ವಜ್ರ ಮಹೋತ್ಸವ ಅಂದರೆ ಸ್ವಾತಂತ್ರ್ಯದ 60ನೇ ವಾರ್ಷಿಕೋತ್ಸವ ಮಾಲ್ಡೀವ್ಸ್ ರಾಜಧಾನಿ ಮಾಲೆಯಲ್ಲಿ ಭವ್ಯ ಸಮಾರಂಭದೊಂದಿಗೆ ಆಚರಿಸುತ್ತಿದೆ. ಮೋದಿ ಅವರ ಉಪಸ್ಥಿತಿಯು ತಿಂಗಳುಗಳ ರಾಜತಾಂತ್ರಿಕ ಉದ್ವಿಗ್ನತೆಯ ನಂತರ ಭಾರತ-ಮಾಲ್ಡೀವ್ಸ್ ಸಂಬಂಧಕ್ಕೆ ಸಕಾರಾತ್ಮಕ ತಿರುವು ನೀಡಿದೆ.

## ಮೈಸೂರು ಒಡೆಯರಿಗೂ, ಸೈಟು ಕೊಳ್ಳೆ ಹೊಡೆದವರಿಗೂ ಹೋಲಿಕೆ ಮಾಡಬಾರದು

• ಉದಯವಾಹಿನಿ, ಬೆಂಗಳೂರು

ಮೈಸೂರು ಮಹಾರಾಜರಿಗೂ, ಮುಡಾ ಸೈಟು ಕೊಳ್ಳೆ ಹೊಡೆದವರಿಗೂ ಹೋಲಿಕೆ ಮಾಡಬಾರದು ಎಂದು ವಿರೋಧ ಪಕ್ಷದ ನಾಯಕ ಆರ್ ಅಶೋಕ್ ಆಕ್ರೋಶ ವ್ಯಕ್ತಪಡಿಸಿದರು. ಬೆಂಗಳೂರಿನಲ್ಲಿ ಶನಿವಾರ ಮಾತನಾಡಿದ ಅವರು, ಯತೀಂದ್ರ ಸಿದ್ದರಾಮಯ್ಯ ವಿರುದ್ಧ ಕಿಡಿ ಕಾರಿದರು. ಸಿಎಂ ಸಿದ್ದರಾಮಯ್ಯ ಅವರು ಮೈಸೂರು ಅರಸರಿಗಿಂತ ಹೆಚ್ಚಿನ ಕೆಲಸ ಮಾಡಿದ್ದಾರೆ ಎಂದು ಯತೀಂದ್ರ ಸಿದ್ದರಾಮಯ್ಯ ಹೇಳಿಕೆ ನೀಡಿದ್ದರು. ಇದಕ್ಕೆ ಪ್ರತಿಕ್ರಿಯೆ ನೀಡಿದ ಆರ್ ಅಶೋಕ್ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು ಹಳೆ ಮೈಸೂರು ಭಾಗಕ್ಕೆ ನೀಡಿದ ಕೊಡುಗೆಯನ್ನು ನಾವು ಇಂದಿಗೂ ಸ್ಮರಿಸಬೇಕಾಗಿದೆ. ಮೈಸೂರು ಕೆಆರ್‌ಎಸ್ ಜಲಾಶಯದಿಂದಾಗಿ ಜನರಿಗೆ ಇಂದು ನೀರು ದೊರೆತಿದೆ. ಅವರು ಅಂದು ಮಾಡಿರುವ ಸಾಧನೆಗಳಿಂದಾಗಿ ಜನರು ಇಂದು ಅನ್ನ ತಿನ್ನುತ್ತಿದ್ದಾರೆ ಎಂದರು.

ಬಿಬಿಎಂಪಿ ಚುನಾವಣೆಯಲ್ಲಿ ಗೆಲ್ಲುವ ಉದ್ದೇಶದಿಂದ ಕಾಂಗ್ರೆಸ್ ಸರ್ಕಾರ ತನಗೆ ಬೇಕಾದಂತೆ ಬೆಂಗಳೂರನ್ನು ವಿಭಜನೆ ಮಾಡಿದೆ. ಇದನ್ನು ವಿರೋಧಿಸಿ ಬಿಜೆಪಿ ಹೋರಾಟ ಮಾಡಲಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಹೇಳಿದರು. ಬೆಂಗಳೂರನ್ನು ಅತಂತ್ರವಾಗಿ ಐದು ಭಾಗ ಮಾಡಲಾಗಿದೆ. ರಾಜಕೀಯ ದೃಷ್ಟಿಯಿಂದ ಹಾಗೂ ಕಾಂಗ್ರೆಸ್ ಗೆಲ್ಲಬೇಕೆಂಬ ಗುರಿಯಿಂದ ವಿಭಜನೆ ಮಾಡಲಾಗಿದೆ. ಐದು ಪಾಲಿಕೆಗಳ ನಡುವೆ ತಾರತಮ್ಯ ಉಂಟಾಗಲಿದೆ. ಇದರ ವಿರುದ್ಧ ಕೋರ್ಟ್ ಮೊರೆ ಹೋಗಿ ಹೋರಾಟ ಮಾಡಲಾಗುವುದು. ಬೆಂಗಳೂರನ್ನು ಒಡೆಯಿರಿ ಎಂದು ಜನರು ಕೇಳಿಲ್ಲ. ಈಗಾಗಲೇ ನಗರದಲ್ಲಿ ತೆರಿಗೆ, ಸೆಸ್, ಇ ಖಾತಾದಿಂದ ಸಮಸ್ಯೆ ಉಂಟುಮಾಡಿದ್ದಾರೆ. ಇಂತಹ ಸಮಯದಲ್ಲಿ ಬಿಬಿಎಂಪಿ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಸೋಲು ಖಚಿತವಾಗಿದೆ. ಅದನ್ನು ತಪ್ಪಿಸಲು ಹೀಗೆ ಭಾಗ ಮಾಡಿದ್ದಾರೆ ಎಂದರು. ಕಪ್ಪು ಪಟ್ಟಿಯಲ್ಲಿರುವ ಗುತ್ತಿಗೆದಾರರಿಗೆ ಸುರಂಗ ರಸ್ತೆ ಯೋಜನೆಯನ್ನು ನೀಡಲಾಗುತ್ತಿದೆ. ಸುರಂಗ ರಸ್ತೆಗೆ ಟೋಲ್ ಕೂಡ ಇರುವುದರಿಂದ ಶ್ರೀಮಂತರು ಮಾತ್ರ ಇದನ್ನು ಬಳಸಬಹುದು. ಜನಸಾಮಾನ್ಯರಿಗೆ ಇದರಿಂದ ಪ್ರಯೋಜನವಿಲ್ಲ. ಅಭಿವೃದ್ಧಿಗೆ ನಮ್ಮ ಸಹಕಾರವಿದೆ. ಆದರೆ ದುಡ್ಡು ಕೊಳ್ಳೆ ಹೊಡೆಯುವ ಯೋಜನೆಗಳನ್ನು ವಿರೋಧಿಸುತ್ತೇವೆ. ನಾಡಪ್ರಭು ಕೆಂಪೇಗೌಡರು ಕಟ್ಟಿದ ಬೆಂಗಳೂರನ್ನು ಭೂಕಂಪದ ನಾಡು ಮಾಡಬಾರದು ಎಂದರು. ಎಲ್ಲಾ ಕಡೆಯಿಂದ ವಾಹನಗಳು ಹೆಬ್ಬಾಳ ಮೇಲ್ಸೇತುವೆ ಬಳಿಯ ಜಂಕ್ಷನ್‌ಗೆ ಬರುತ್ತವೆ. ಅಂತಹ ಜಾಗವನ್ನು ಖಾಸಗಿ ಭೂ ಮಾಲೀಕರಿಗೆ ನೀಡಲು ಸರ್ಕಾರ ಮುಂದಾಗಿದೆ. ಇದನ್ನು ವಿರೋಧಿಸಿ ಸದನದಲ್ಲಿ ಚರ್ಚಿಸಲಾಗುವುದು. ಇ ಖಾತಾ ವಿಚಾರದಲ್ಲಿ ಜನರಿಗೆ ತೊಂದರೆ ನೀಡಲಾಗುತ್ತಿದೆ. ಹಣ ಲೂಟಿ ಮಾಡಲು ಬೆಂಗಳೂರನ್ನು ಬಳಸಬಾರದು ಎಂದರು.



# ಕಾಂಗ್ರೆಸ್‌ನಲ್ಲಿ ಸೆಪ್ಟೆಂಬರ್ ಕ್ರಾಂತಿ: ಸುರ್ಜೇವಾಲ ಬದಲಾವಣೆ ಬಗ್ಗೆ ರಾಜಣ್ಣ ಸುಳಿವು

**● ಕಾಂಗ್ರೆಸ್‌ನಲ್ಲಿ ಸೆಪ್ಟಂಬರ್ ಕ್ರಾಂತಿ ಗದ್ದಲ ● ಸುರ್ಜೇವಾಲ ಬದಲಾವಣೆಯ ಮುನ್ಸೂಚನೆ**

• ಉದಯವಾಹಿನಿ, ಬೆಂಗಳೂರು

ರಾಜ್ಯ ಕಾಂಗ್ರೆಸ್ ನಲ್ಲಿ ಸಚಿವ ಕೆ ಎನ್ ರಾಜಣ್ಣ ನೀಡಿರುವ 'ಸೆಪ್ಟಂಬರ್ ಕ್ರಾಂತಿ' ಹೇಳಿಕೆಯೊಂದು ಈಗಾಗಲೇ ಸಾಕಷ್ಟು ಚರ್ಚೆಗೆ ಗ್ರಾಸವಾಗುತ್ತಿದೆ. ತನ್ನ ಮಾತಿಗೆ ನಾನು ಬದ್ಧ ಎಂದು ರಾಜಣ್ಣ ಅವರು ಪದೇ ಪದೇ ಉಲ್ಲೇಖಿಸುತ್ತಿದ್ದಾರೆ. ಆದರೆ ಸೆಪ್ಟಂಬರ್ ನಲ್ಲಿ ಏನು ಕ್ರಾಂತಿ ನಡೆಯಲಿದೆ ಎಂಬ ಪ್ರಶ್ನೆಗೆ ಅವರು ಸ್ಪಷ್ಟವಾದ ಉತ್ತರ ಕೊಡುತ್ತಿಲ್ಲ.

ಹಾಗಿದ್ದರೂ ಸದ್ಯ ರಾಜ್ಯ ಕಾಂಗ್ರೆಸ್‌ನಲ್ಲಿ ನಡೆಯುತ್ತಿರುವ ವಿದ್ಯಮಾನ ನೋಡಿದರೆ ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಅವರ ಬದಲಾವಣೆಯ ಸುಳಿವನ್ನೇ ರಾಜಣ್ಣ ನೀಡುತ್ತಿದ್ದಾರಾ ಎಂಬ ಅನುಮಾನಗಳು ವ್ಯಕ್ತವಾಗಿದೆ.



**ಮೂರು ಸುತ್ತಿನ ಸಭೆ**

ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಅವರ ಬಗ್ಗೆ ಕೆ ಎನ್ ರಾಜಣ್ಣ ಅವರಿಗೆ ಅಸಮಾಧಾನ ಇದೆ. ಸುರ್ಜೇವಾಲ ರಾಜ್ಯದಲ್ಲಿ ಶಾಸಕರು ಮತ್ತು ಸಚಿವರ ಸಭೆಯನ್ನು ನಡೆಸಿದ್ದರು. ಶಾಸಕರು ಜೊತೆಗೆ 3 ಸುತ್ತಿನ ಸಭೆಯನ್ನು ನಡೆಸಿದರೆ ಬಳಿಕ ಸಚಿವರ ಜೊತೆಗೂ ಮೂರು ಸುತ್ತಿನ ಸಭೆಯನ್ನು ನಡೆಸಿದ್ದರು. ಈ ವೇಳೆ ಕೆಲವು ಶಾಸಕರು ತಮ್ಮ ಅಸಮಾಧಾನವನ್ನು ಸುರ್ಜೇವಾಲ ಅವರ ಬಳಿಕ ತೋಡಿಕೊಂಡಿದ್ದರು.

**ಗೈರಾಗಿದ್ದ ರಾಜಣ್ಣ:** ಸಚಿವರ ಸಭೆಗೆ ಕೆ ಎನ್ ರಾಜಣ್ಣ ಗೈರಾಗಿದ್ದರು. ಸಭೆಯ ಸಂದರ್ಭದಲ್ಲೇ ಅವರು ವಿದೇಶ ಪ್ರವಾಸಕ್ಕೆ ಕುಟುಂಬದ ಜೊತೆಗೆ ತೆರಳಿದ್ದರು. ಈ ವಿಚಾರವಾಗಿ ಅವರು ಸ್ಪಷ್ಟನೆ ನೀಡಿದ್ದಾರೆ. ಸಭೆಗೆ ಕರೆದಿಲ್ಲ, ಅದಕ್ಕೆ ಹಾಜರಾಗಿಲ್ಲ ಎಂದು ತಿಳಿಸಿದ್ದಾರೆ. ಆದರೆ ಅದೇ ಸಂದರ್ಭದಲ್ಲಿ ರಣದೀಪ್ ಸಿಂಗ್ ಸುರ್ಜೇವಾಲ ಅವರ ಕಾರ್ಯವೈಖರಿಯ ಬಗ್ಗೆಯೂ ರಾಜಣ್ಣ ಅಸಮಾಧಾನವನ್ನು ಹೊರ ಹಾಕಿರುವುದು ಕುತೂಹಲಕ್ಕೆ ಕಾರಣವಾಗಿದೆ.



**ಹೈಕಮಾಂಡ್ ಭೇಟಿಗೆ ನಿರ್ಧಾರ**

ಮುಂದಿನ ತಿಂಗಳಲ್ಲಿ ಶಾಸಕರ ಒಂದು ಗುಂಪು ದೆಹಲಿಗೆ ತೆರಳುವ ಸಾಧ್ಯತೆಗಳ ಬಗ್ಗೆ ಕಾಂಗ್ರೆಸ್ ಆಂತರಿಕ ವಲಯದಲ್ಲಿ ಚರ್ಚೆಗಳು ನಡೆಯುತ್ತಿವೆ. ಹೈಕಮಾಂಡ್ ನಾಯಕರನ್ನು ಭೇಟಿ ಮಾಡಿ ಸುರ್ಜೇವಾಲ ವಿರುದ್ಧ ದೂರು ಕೊಡುವ ಸಾಧ್ಯತೆಯೂ ಇದೆ. ಅದರಲ್ಲೂ ಸುರ್ಜೇವಾಲ ಅವರು ಶಾಸಕರ ಜೊತೆಗೆ ಪ್ರತ್ಯೇಕ ಸಭೆಯನ್ನು ನಡೆಸಿದ್ದು ಸಿದ್ದರಾಮಯ್ಯ ಬಣದ ಅಸಮಧಾನಕ್ಕೆ ಕಾರಣವಾಗಿದೆ. ಸಿಎಂ ಹಾಗೂ ಡಿಸಿಎಂ ಅನುಪಸ್ಥಿತಿಯಲ್ಲಿ ಸುರ್ಜೇವಾಲ ಅವರು ಪ್ರತ್ಯೇಕ ಸಭೆಯನ್ನು ಕರೆದಿರುವ ಉದ್ದೇಶ ಏನು ಎಂದು ಕೆಲವು ನಾಯಕರು ಅಸಮಾಧಾನಗೊಂಡಿದ್ದರು. ಈ ಎಲ್ಲಾ ಬೆಳವಣಿಗೆಗಳನ್ನು ಗಮನಿಸಿದರೆ ಸಿದ್ದರಾಮಯ್ಯ ಅವರ ಆಪ್ತ ಬಳಗ ರಾಜ್ಯ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಅವರ ಬದಲಾವಣೆಗೆ ಪಟ್ಟು ಹಿಡಿಯಲಿದ್ಯಾ ಈ ವಿಚಾರವನ್ನೇ ಪರೋಕ್ಷವಾಗಿ ಪ್ರಸ್ತಾಪಿಸಿ ಕೆ ಎನ್ ರಾಜಣ್ಣ ಅವರು ಸೆಪ್ಟಂಬರ್ ಕ್ರಾಂತಿಯ ಕುರಿತಾಗಿ ಹೇಳಿಕೆ ನೀಡುತ್ತಿದ್ದರಾ ಎಂಬ ಅನುಮಾನಗಳು ಶುರುವಾಗಿದೆ.

**ಸುರ್ಜೇವಾಲ ಬದಲಾವಣೆ ಕೂಗು!:** ಕಾಂಗ್ರೆಸ್ ನಲ್ಲಿ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಅವರ ಬದಲಾವಣೆಯ ಕೂಗು ಕೇಳಿ ಬರುತ್ತಿದೆ.
ಈಗಾಗಲೇ ಒಂದು ಬಣ ಸುರ್ಜೇವಾಲ ಅವರನ್ನು ಬದಲಾವಣೆ ಮಾಡಬೇಕು ಎಂದು ಪಟ್ಟು ಹಿಡಿದಿದೆ. ರಣದೀಪ್ ಸಿಂಗ್ ಸುರ್ಜೇವಾಲ ಅವರು ಏಕ ಪಕ್ಷೀಯವಾಗಿ ನಡೆದುಕೊಳ್ಳುತ್ತಿದ್ದಾರೆ, ಎಲ್ಲರನ್ನು ಸಮಾನವಾಗಿ ನೋಡಿಕೊಳ್ಳುತ್ತಿಲ್ಲ ಎಂಬುವುದು ಆರೋಪವಾಗಿದೆ.

ಈ ಹಿನ್ನೆಲೆಯಲ್ಲಿ ಈ ಹಿಂದೆ ಸುರ್ಜೇವಾಲ ಅವರ ವಿರುದ್ಧ ಸಹಿ ಸಂಗ್ರಹ ಮಾಡಲಾಗಿತ್ತು. ಆದರೆ ಹೈಕಮಾಂಡ್‌ಗೆ ಅಧಿಕೃತವಾಗಿ ದೂರು ಸಲ್ಲಿಕೆ ಮಾಡಲಾಗುವುದು ಎಂದು ಕೆಲವು ಶಾಸಕರು ಹೇಳಿಕೊಂಡಿದ್ದರು.

**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.03 ₹/L ಬಂಗಾರ: ₹9,993/Gram24ct ₹9,160/Gram22ct ಬೆಳ್ಳಿ: ₹116.00/Gram

# ಬೆಂಗಳೂರಿನ 11 ಸಾವಿರ ಮರಗಳಿಗೆ ಕೊಡಲಿ ಏಟು

## 44.65 ಕಿ.ಮೀ. ಉದ್ದದ ಮಾರ್ಗ 15,611 ಕೋಟಿ ರೂ. ವೆಚ್ಚದಲ್ಲಿ ಅನುಷ್ಠಾನ

• ಉದಯವಾಹಿನಿ, ಬೆಂಗಳೂರು

ಮೆಟ್ರೋ ರೈಲು ನಿಗಮದ ವತಿಯಿಂದ ಹಮ್ಮಿಕೊಳ್ಳಲಿರುವ 44.65 ಕಿ.ಮೀ. ಉದ್ದದ 3ನೇ ಹಂತದ ಮೆಟ್ರೋ ಮತ್ತು ಡಬಲ್ ಡೆಕ್ಕರ್ ಯೋಜನೆಯು ಸುಮಾರು 11,000 ಮರಗಳ ಮೇಲೆ ಪರಿಣಾಮ ಬೀರಬಹುದು ಎಂದು ಅಂದಾಜಿಸಲಾಗಿದೆ. ಸುಮಾರು 15,611 ಕೋಟಿ ರೂ. ವೆಚ್ಚದಲ್ಲಿ ಬಿಎಂಆರ್‌ಸಿಎಲ್ ಹಮ್ಮಿಕೊಳ್ಳಲು ಉದ್ದೇಶಿರುವ ಜೆ.ಪಿ ನಗರ 4ನೇ ಹಂತ-ಕೆಂಪಾಪುರ ಮತ್ತು ಹೊಸಹಳ್ಳಿ-ಕಡಬಗೆರೆ ಎರಡೂ ಕಾರಿಡಾರ್‌ಗಳ 3ನೇ ಹಂತದ ಮೆಟ್ರೋ ಮತ್ತು ಡಬಲ್ ಡೆಕ್ಕರ್ ಯೋಜನೆ ಆರಂಭಿಸಲು ತಯಾರಿ ನಡೆಸುತ್ತಿದ್ದು, ಪರಿಸರಕ್ಕೆ ಸಂಬಂಧಿಸಿದಂತೆ ಮೌಲ್ಯಮಾಪನ ಶುರುವಾಗಿದೆ. ಡಿಪಿಆರ್ ಪ್ರಕಾರ, ಯೋಜನೆಯಿಂದಾಗಿ 44.65 ಕಿ.ಮೀ. ಉದ್ದದಲ್ಲಿ 11,137 ಮರಗಳ ಮೇಲೆ ಪರಿಣಾಮ ಬೀರಬಹುದು ಎಂದು ಅಂದಾಜಿಸಲಾಗಿದೆ. ಈ ಸಂಖ್ಯೆಯು ಕತ್ತರಿಸಬಹುದಾದ ಮತ್ತು ಸ್ಥಳಾಂತರಿಸಬಹುದಾದ ಮರಗಳ ಸಂಖ್ಯೆಯನ್ನೂ ಒಳಗೊಂಡಿದೆ ಎಂದು ಬಿಎಂಆರ್‌ಸಿಎಲ್ ಸ್ಪಷ್ಟಪಡಿಸಿದೆ. ಮರಗಳ ಸಂಖ್ಯೆಯನ್ನು ಅಂತಿಮಗೊಳಿಸಲು ಸಾರ್ವಜನಿಕರೊಂದಿಗೆ ಸಮಾಲೋಚನೆ ಕೂಡ ನಡೆಸಿದೆ.

**ಆಕ್ಷೇಪಣೆಗಳು:** ಈ ಎರಡೂ ಕಾರಿಡಾರ್‌ಗಳ ಮೇಲೆ ಕೇಂದ್ರೀಕರಿಸಿ ಬಿಎಂಆರ್‌ಸಿಎಲ್ ಕಳೆದ ಜುಲೈ 21, 22, 23 ಮೂರು ದಿನಗಳ ಕಾಲ ಯೋಜನೆಯ ವ್ಯಾಪ್ತಿಯ ವಿವಿಧೆಡೆ 5 ಸಾರ್ವಜನಿಕ ಸಭೆಗಳನ್ನು ನಡೆಸುವ ಮೂಲಕ ನಗರದ ನಾಗರಿಕರು ಮತ್ತು ಪರಿಸರ ಪ್ರೇಮಿಗಳ ಜತೆ ಸಮಾಲೋಚನೆ ನಡೆಸಿ, ಸಲಹೆಗಳನ್ನು ಪಡೆದಿದೆ. ಈ ವೇಳೆ ಇಷ್ಟೊಂದು ಮರಗಳನ್ನು ಕಡಿಯಲು ಸಭೆಯಲ್ಲಿ ಭಾಗವಹಿಸಿದ್ದ ಪರಿಸರವಾದಿಗಳು ಆಕ್ಷೇಪಣೆ ವ್ಯಕ್ತಪಡಿಸಿದ್ದಾರೆ.



ಆದಾಗ್ಯೂ, ಮೆಟ್ರೋದಂತಹ ಸಾರ್ವಜನಿಕ ಸಾರಿಗೆ ವ್ಯವಸ್ಥೆಯು ಮತ್ತೊಂದು ಆಯಾಮದಲ್ಲಿ ಪರಿಸರಕ್ಕೆ ಅನುಕೂಲವೇ ಆಗಿದೆ. ಆದರೆ, ಸುಸ್ಥಿರ ಅಭಿವೃದ್ಧಿಗೆ ಆದ್ಯತೆ ನೀಡಬೇಕು ಎಂದು ಒತ್ತಾಯಿಸಿದ್ದಾರೆ.

**ತಾಪಮಾನ ಹೆಚ್ಚಳ:** ಭೂಮಿ ಬಳಸುವ ರೀತಿಯಿಂದಾಗಿ ರಾಜಧಾನಿಯು ನಗರ ಉಷ್ಣ ದ್ವೀಪ ಆಗಿ ಮಾರ್ಪಡುತ್ತಿದೆ ಎಂದು ಭಾರತೀಯ ವಿಜ್ಞಾನ ಸಂಸ್ಥೆಯು ಕೆಲ ದಿನಗಳ ಹಿಂದೆಯಷ್ಟೇ ಬಿಡುಗಡೆ ಮಾಡಿದ ಅಧ್ಯಯನ ವರದಿಯಲ್ಲಿ ಬಹಿರಂಗಗೊಂಡಿದೆ. ಸುತ್ತಲಿನ ಗ್ರಾಮೀಣ ಪ್ರದೇಶಕ್ಕೆ ಹೋಲಿಸಿದಲ್ಲಿ ನಗರ ಪ್ರದೇಶದಲ್ಲಿ ತಾಪಮಾನ ಹೆಚ್ಚಳವಾಗಿದೆ. ನಿರಂತರವಾಗಿ ಅಭಿವೃದ್ಧಿಗೆ ತೆರೆದುಕೊಂಡಿರುವ ನಗರದಲ್ಲಿ ಹಸಿರು ಹೊದಿಕೆ, ಜಲಮೂಲಗಳ ಕ್ಷೀಣಿಸುತ್ತಿರುವ ಪರಿಣಾಮ ನೈಸರ್ಗಿಕ ತಂಪಾಗುವ ಪ್ರಕ್ರಿಯೆ ನಶಿಸಿದೆ. ಬದಲಾಗಿ, ಹೆಚ್ಚುತ್ತಿರುವ ಕಾಂಕ್ರೀಟ್ ಡಾಂಬರು ನಿರ್ಮಾಣಗಳು ಶಾಖ ಹೀರಿಕೊಂಡು ಸಂಗ್ರಹಿಸುತ್ತಿದೆ. ಇದರ ಪರಿಣಾಮ ನಗರದ ಭೂಮಿ ಉಷ್ಣ ವಿದ್ಯುತ್ ಸ್ಥಾವರದಂತಾಗಿದೆ. ಮುಂಬರುವ ದಿನಗಳಲ್ಲಿ ನಗರ ವಾಸಯೋಗ್ಯವಾಗಿರಬೇಕಾದರೆ, ನಗರದ ಭೂ ಬಳಕೆ ಕೆಲವು ವಿಧಾನಗಳನ್ನು ಕೈಬಿಡಬೇಕಾರುವುದು ಅಗತ್ಯ ಎಂದು ಐಐಎಸ್‌ಸಿ ಸಲಹೆ ನೀಡಿದೆ. ಇಂತಹ ಸಂದರ್ಭದಲ್ಲಿ ಮೆಟ್ರೋ 3ನೇ ಹಂತದ ಕಾಮಗಾರಿ 11,000 ಮರಗಳ ಮೇಲೆ ಪರಿಣಾಮ ಬೀರುತ್ತದೆ ಎಂಬುದು ಮತ್ತಷ್ಟು ಕಳವಳಕಾರಿ ವಿಷಯವಾಗಿದೆ.

3ನೇ ಹಂತದ ಮೆಟ್ರೋ ಮತ್ತು ಡಬಲ್ ಡೆಕ್ಕರ್ ಯೋಜನೆಗೆ ಸಂಬಂಧಿಸಿದಂತೆ ಬಿಎಂಆರ್‌ಸಿಎಲ್ ನಾಗರಿಕ ಗುಂಪುಗಳ ಜತೆ ಸಮಾಲೋಚನೆ ನಡೆಸಿದೆ. ನಾವು ಸುಸ್ಥಿರ ಅಭಿವೃದ್ಧಿಗೆ ಆದ್ಯತೆ ನೀಡಬೇಕು ಮತ್ತು ಕಡಿಯಬಹುದಾದ ಮರಗಳ ಸಂಖ್ಯೆಯನ್ನು ಕಡಿಮೆಗೊಳಿಸಬೇಕು ಎಂದು ಒತ್ತಾಯಿಸಿದ್ದೇವೆ. ಅಲ್ಲದೆ, ರೀಪ್ಲಾಂಟೇಷನ್ ಸಮಯದಲ್ಲಿಯೂ ನಮ್ಮನ್ನು ತೊಡಗಿಸಿಕೊಳ್ಳಬೇಕು ಎಂದು ಸಲಹೆ ನೀಡಿದ್ದೇವೆ. ಕಡಿಯಬಹುದಾದ ಮರಗಳ ಸಂಖ್ಯೆ 11 ಸಾವಿರದಿಂದ 6800 ಇಳಿಸಬಹುದು. ಆದರೆ, ಇದೇ ಅಂತಿಮವಲ್ಲ. ಮತ್ತೊಮ್ಮೆ ಮೌಲ್ಯಮಾಪನ ಮಾಡಿ, ಅಂತಿಮ ಸಂಖ್ಯೆಯನ್ನು ಬಹಿರಂಗಪಡಿಸಲಾಗುವುದು ಎಂದು ಬಿಎಂಆರ್‌ಸಿಎಲ್ ತಿಳಿಸಿದೆ ಎಂಬುದಾಗಿ ಪರಿಸರವಾದಿ ವಿಜಯ್ ನಿಶಾಂತ್ ಹೇಳಿದ್ದಾರೆ.

**ಮರಗಳ ನಿಖರ ಸಂಖ್ಯೆ ತಿಳಿಸಲು ಆಗ್ರಹ**

ಉದ್ದೇಶಿತ 44.65 ಕಿ.ಮೀ. ಉದ್ದದ ಮಾರ್ಗದಲ್ಲಿ 11ಸಾವಿರ ಮರಗಳು ಎಂದರೆ ಸರಾಸರಿ ಪ್ರತಿ ಕಿ.ಮೀ.ಗೆ 250 ಮರಗಳನ್ನು ಕಡಿಯಬೇಕಾಗುತ್ತದೆ. ಆದರೆ, ಉದ್ದೇಶಿತ ಮಾರ್ಗದಲ್ಲಿ ಅಷ್ಟು ಮರಗಳಿವೆಯೇ ಎಂಬುದು ಅನುಮಾನ. ಹಾಗಾಗಿ, ಬಿಎಂಆರ್‌ಸಿಎಲ್ ನಿಖರವಾಗಿ ಮರಗಳ ಸಂಖ್ಯೆಯನ್ನು ತಿಳಿಸಬೇಕು ಮತ್ತು ಕಡಿಯಬಹುದಾದ ಮರಗಳ ಸಂಖ್ಯೆಯನ್ನು ಸಾಧ್ಯವಾದಷ್ಟು ಕಡಿಮೆಗೊಳಿಸಬೇಕು. ಯೋಜನೆಗೂ ಮುನ್ನ ಮರಗಳನ್ನು ಕಡಿಯಲು ಸಲಹೆ ಪಡೆಯುವುದಕ್ಕಾಗಿ ಸಭೆ ಕರೆಯುವಂತೆ, ಕಡಿದ ಮರಗಳಿಗೆ ಪರಿಹಾರವಾಗಿ 1:10ರ ಆಧಾರದಲ್ಲಿ ರೀಪ್ಲಾಂಟೇಷನ್ ಸಮಯದಲ್ಲಿಯೂ ಸಭೆ ಕರೆಯಬೇಕು. ಅವುಗಳ ಬೆಳವಣಿಗೆಯ ಪ್ರಗತಿಯನ್ನೂ ತಿಳಿಸಬೇಕು ಎಂಬ ಸಲಹೆಗಳು ಬಂದಿವೆ.

**ಬಿಎಂಆರ್‌ಸಿಎಲ್ ಭರವಸೆ**

ಇದು ಪರಿಸರಕ್ಕೆ ಸಂಬಂಧಿಸಿದಂತೆ ನಾಗರಿಕರಿಂದ ಸಲಹೆಗಳನ್ನು ಪಡೆಯಲು ಹಮ್ಮಿಕೊಂಡಿರುವ ಪ್ರಾಥಮಿಕ ಸಭೆಯಾಗಿದೆ. ಉದ್ದೇಶಿತ ಯೋಜನೆಯ ಮಾರ್ಗದಲ್ಲಿ ಯೋಜನೆಗೆ ಒಳಪಡುವ ಜಾಗ, ಅಲ್ಲಿರುವ ಮರ ಮತ್ತು ಪ್ರಾಕೃತಿಕ ಸಂಪನ್ಮೂಲ ಸಂಬಂಧಪಟ್ಟಂತೆ ಅಧ್ಯಯನ ನಡೆಸಿ, ಇನ್ನೆರಡು ತಿಂಗಳಲ್ಲಿ ಮತ್ತೊಮ್ಮೆ ಸಭೆ ಕರೆಯಲಾಗುವುದು. ಅಲ್ಲದೆ, ಅಂದಾಜು ಮಾಡಿರುವ 11 ಸಾವಿರ ಮರಗಳ ಸಂಖ್ಯೆಯನ್ನು ಸಾಧ್ಯವಾದಷ್ಟು ಕಡಿಮೆ ಮಾಡಲಾಗುವುದು ಎಂದು ಬಿಎಂಆರ್‌ಸಿಎಲ್ ಭರವಸೆ ನೀಡಿದೆ.

## ಭಜನ - ಪ್ರವಚನ - ಸಂಕೀರ್ತನ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ತಿರುಮಲ ತಿರುಪತಿ ದೇವಸ್ಥಾನಗಳು ಹಿಂದೂಧರ್ಮ ಪ್ರಚಾರ ಪರಿಷತ್ ವತಿಯಿಂದ ಹೊಸಕೆರೆಹಳ್ಳಿಯ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಜು.29 ರಿಂದ ಆ. 1ರವರೆಗೆ ಧಾರ್ಮಿಕ, ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು **ಅವುಗಳ ವಿವರಗಳು ಈ ರೀತಿ ಇವೆ:** ಭಜನಾ ಕಾರ್ಯಕ್ರಮ (ಸಂಜೆ 6 ರಿಂದ 7) ಜುಲೈ 29- ಚಂದ್ರಿಕಾ ಭಜನಾ ಮಂಡಳಿ, ಜುಲೈ 30-ಶೃತಿ ಭಜನಾ ಮಂಡಳಿ, ಜುಲೈ 31-ಅಲಕನಂದ ಭಜನಾ ಮಂಡಳಿ.

ಪ್ರವಚನ ಕಾರ್ಯಕ್ರಮ (ಪ್ರತಿದಿನ ಸಂಜೆ 7 ರಿಂದ 8) ಜುಲೈ 29 ರಿಂದ 31ರ ವರೆಗೆ ಮ||ಶಾ||ಸಂ|| ಹೊಳವನಹಳ್ಳಿ ಶ್ರೀನಿವಾಸಾಚಾರ್ಯರಿಂದ ಶ್ರೀಗುರುಸಾರ್ವಭೌಮರ ವೈಭವ ವಿಷಯವಾಗಿ ಧಾರ್ಮಿಕ ಪ್ರವಚನ. ಹರಿನಾಮ ಸಂಕೀರ್ತನೆ ಆಗಸ್ಟ್ 1, ಸಂಜೆ 6-30 ರಿಂದ 8-00 ವಿದುಷಿ ಶ್ರೀಮತಿ ಅನುಷಾ ರಾಘವೇಂದ್ರ, ಸಂಗಡಿಗರಿಂದ ಹರಿನಾಮ ಸಂಕೀರ್ತನೆ ಗಾಯನ ಕಾರ್ಯಕ್ರಮ ಏರ್ಪಡಿಸಲಾಗಿದೆ ಎಂದು ಟಿ ಟಿ ಡಿ ಹೆಚ್.ಡಿ.ಪಿ.ಪಿ. ಸಂಚಾಲಕರಾದ ಡಾ. ಪಿ. ಭುಜಂಗರಾವ್ ತಿಳಿಸಿದ್ದಾರೆ.

## ಜ್ಯುವೆಲರಿ ಅಂಗಡಿಯಲ್ಲಿ ಪಿಸ್ತೂಲ್‌ನಿಂದ ಬೆದರಿಸಿ ಚಿನ್ನಾಭರಣ ಲೂಟಿ

• ಉದಯವಾಹಿನಿ, ಬೆಂಗಳೂರು

ಜ್ಯುವೆಲರಿ ಅಂಗಡಿಯ ಮಾಲೀಕನಿಗೆ ಪಿಸ್ತೂಲ್‌ನಿಂದ ಬೆದರಿಸಿ 180 ಗ್ರಾಂ ಚಿನ್ನಾಭರಣಗಳನ್ನು ದೋಚಿ ದರೋಡೆಕೋರರು ಪರಾರಿ ಆರುವ ಘಟನೆ ಮಾದನಾಯಕನಹಳ್ಳಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ. ಮಾಚೋಹಳ್ಳಿ ಗೇಟ್ ಸಮೀಪದ ಭೈರವೇಶ್ವರ ಕಾಂಪ್ಲೆಕ್ಸ್‌ನಲ್ಲಿರುವ ರಾಮ್ ಜ್ಯುವೆಲರ್‌ರಸ ಅಂಗಡಿಯ ಮಾಲೀಕರು ರಾತ್ರಿ 8.30ಸುಮಾರಿನಲ್ಲಿ ಅಂಗಡಿ ಬಾಗಿಲು ಹಾಕಲು ಚಿನ್ನಾಭರಣಗಳನ್ನು ತೆಗೆದಿಡುತ್ತಿದ್ದರು. ಆ ಸಮಯದಲ್ಲಿ ಮೂವರು ಮುಸುಕುದಾರಿ ದರೋಡೆಕೋರರು ಅಂಗಡಿಯೊಳಗೆ ನುಗ್ಗಿ ಪಿಸ್ತೂಲಿನಿಂದ ಅವರನ್ನು ಬೆದರಿಸಿ 180 ಗ್ರಾಂ ಚಿನ್ನಾಭರಣಗಳನ್ನು ಬ್ಯಾಗಿನಲ್ಲಿ ತುಂಬಿಕೊಂಡಿದ್ದಾರೆ. ದರೋಡೆಕೋರರಿಂದ ಭಯಬೀತರಾಗಿ ಜ್ಯುವೆಲರಿ ಅಂಗಡಿ ಮಾಲೀಕರು ಕಿರುಚಾಡುತ್ತಿದ್ದುದ್ದನ್ನು ಕೇಳಿ ಪಕ್ಕದ ಅಂಗಡಿಯ ಹುಡುಗರು ಬರುತ್ತಿದ್ದಂತೆ ದರೋಡೆಕೋರರು ಮಾಲೀಕ, ಹುಡುಗರನ್ನು ತಳ್ಳಿಕೊಂಡು ಪರಾರಿ ಆಗಿದ್ದಾರೆ. ತಕ್ಷಣ ಜ್ಯುವೆಲರಿ ಅಂಗಡಿ ಮಾಲೀಕರು ಮಾದನಾಯಕನಹಳ್ಳಿ ಠಾಣೆ ಪೊಲೀಸರಿಗೆ ವಿಷಯ ತಿಳಿಸಿದ್ದಾರೆ.

ಸುದ್ದಿ ತಿಳಿದು ಸ್ಥಳಕ್ಕೆ ಆಗಮಿಸಿದ ಪೊಲೀಸರು ಅಂಗಡಿಯನ್ನು ಪರಿಶೀಲಿಸಿ, ಪ್ರಕರಣ ದಾಖಲಿಸಿಕೊಂಡಿದ್ದಾರೆ. ಅಂಗಡಿಯ ಸಿಸಿ ಕ್ಯಾಮೇರಾವನ್ನು ಪರಿಶೀಲಿಸಿದಾಗ ಮೂವರು ದರೋಡೆಕೋರರು ಆಟಿಕೆ ಪಿಸ್ತೂಲ್ ತೋರಿಸಿ ಆಭರಣ ದೋಚಿರುವುದು ಪೊಲೀಸರ ತನಿಖೆಯಿಂದ ಗೊತ್ತಾಗಿದೆ. ಸಿಸಿ ಕ್ಯಾಮೇರಾದಲ್ಲಿ ಸೆರೆಯಾಗಿರುವ ದರೋಡೆಕೋರರ ದೃಶ್ಯಾವಳಿ, ಸುತ್ತಮುತ್ತ ರಸ್ತೆಗಳಲ್ಲಿರುವ ಸಿಸಿ ಕ್ಯಾಮೇರಾಗಳಲ್ಲಿನ ದೃಶ್ಯಾವಳಿಗಳನ್ನು ಆಧರಿಸಿ ದರೋಡೆಕೋರರ ಪತ್ತೆಗೆ ಪೊಲೀಸರು ಶೋಧ ಕಾರ್ಯ ಮುಂದುವರೆಸಿದ್ದಾರೆ. ಕಳೆದ ವರ್ಷ ಇದೇ ರೀತಿ ಬ್ಯಾಡರಹಳ್ಳಿ, ಕೋಡಿಗೆಹಳ್ಳಿ, ಕೆಆರ್‌ಪುರಂ ಪೊಲೀಸ್ ಠಾಣೆ ವ್ಯಾಪ್ತಿಗಳಲ್ಲೂ ಜ್ಯುವೆಲರಿ ಅಂಗಡಿಗಳ ದರೋಡೆ ನಡೆದಿದ್ದವು.

## ಬಿಎಸ್‌ಎಸ್: ಮೇಲಧಿಕಾರಿ ಅನುಮತಿ ಕಡ್ಡಾಯ

• ಉದಯವಾಹಿನಿ, ಬೆಂಗಳೂರು

ಪ್ರಥಮ ವರ್ತಮಾನ ವರದಿಯಲ್ಲಿ, ತನಿಖೆಯಲ್ಲಿ ಭಾರತ ನ್ಯಾಯ ಸಂಹಿತೆಯ ಸೆಕ್ಷನ್ 304, 103(2), 111, 113(ಬಿ) ಅನ್ನು ಅಳವಡಿಸಿಕೊಳ್ಳುವ ಮುನ್ನ ಎಲ್ಲಾ ಠಾಣೆಗಳ ತನಿಖಾಧಿಕಾರಿಗಳು ತಮ್ಮ ವ್ಯಾಪ್ತಿಯ ಮೇಲಧಿಕಾರಿಗಳ ಅನುಮೋದನೆ ಪಡೆದುಕೊಳ್ಳಬೇಕು ಎಂದು ರಾಜ್ಯ ಪೊಲೀಸ್ ಮಹಾನಿರ್ದೇಶಕ ಎಂ.ಎ.ಸಲೀಂ ಅವರು ಆದೇಶದಲ್ಲಿ ತಿಳಿಸಿದ್ದಾರೆ. 304 (ಚರ ಆಸ್ತಿಯನ್ನು ದೋಚುವುದು ಅಥವಾ ಕಸಿದುಕೊಳ್ಳುವುದು), 103(2) , 111, 113(ಬಿ) (ಭಾರತದ ಏಕತೆ, ಸಮಗ್ರತೆ, ಸಾರ್ವಭೌಮತ್ವ, ಭದ್ರತೆ ಅಥವಾ ಆರ್ಥಿಕ ಭದ್ರತೆಗೆ ಬೆದರಿಕೆ ಹಾಕುವ ಉದ್ದೇಶ ಹೊಂದಿರುವ ಕೃತ್ಯಗಳಲ್ಲಿ ಭಾಗಿ ಆಗುವುದು). ಈ ಸೆಕ್ಷನ್‌ಗಳನ್ನು ಅಳವಡಿಸಿಕೊಳ್ಳುವ ಮುನ್ನ ಮೇಲಾಧಿಕಾರಿಗಳ ಅನುಮತಿ ಪಡೆದುಕೊಳ್ಳಬೇಕು ಎಂದು ಸೂಚಿಸಲಾಗಿದೆ.

ಜಿಲ್ಲಾಮಟ್ಟದಲ್ಲಿ ಎಸ್‌ಪಿ, ಕಮಿಷನರೇಟ್ ವ್ಯಾಪ್ತಿಯಲ್ಲಿ ಡಿಸಿಪಿಯನ್ನೂ ಒಳಗೊಂಡ ಮೇಲಾಧಿಕಾರಿಯಿಂದ ಲಿಖಿತ ಅನುಮತಿ ಪಡೆದಿರಬೇಕು. ತುರ್ತು ಕಾರ್ಯಗಳ ನಿಮಿತ್ತ ಮೌಖಿಕವಾಗಿ ಆದೇಶ ಪಡೆದರೆ, 24 ಗಂಟೆ ಒಳಗೆ ಲಿಖಿತ ಅನುಮತಿ ಪಡೆಯಬೇಕು. ಹಿರಿಯ ಪೊಲೀಸ್ ಅಧಿಕಾರಿಗಳು ಪರಿಶೀಲಿಸಿ ಅನುಮೋದನೆ ನೀಡಿದ ನಂತರ ಆ ಕಾಯ್ದೆಗಳಡಿ ಎಫ್‌ಐಆರ್ ದಾಖಲಿಸಿಕೊಳ್ಳುವಂತೆ ಆದೇಶದಲ್ಲಿ ಸೂಚಿಸಲಾಗಿದೆ. ಭಾರತೀಯ ನ್ಯಾಯ ಸಂಹಿತೆಯಲ್ಲಿ ಇರುವ ಕೆಲವು ಕಾಯ್ದೆಗಳು ದುರ್ಬಳಕೆ ಆಗುವುದನ್ನು ತಡೆಗಟ್ಟಲು ಈ ಕ್ರಮಕ್ಕೆ ಇಲಾಖೆ ಮುಂದಾಗಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದರು.

## ತೆರಿಗೆ ಪಾವತಿಸದ ಐಷಾರಾಮಿ ಕಾರು ಮಾಲೀಕರಿಗೆ ದಂಡ

• ಉದಯವಾಹಿನಿ, ಬೆಂಗಳೂರು

ಬೇರೆ ರಾಜ್ಯಗಳಲ್ಲಿ ನೋಂದಣಿ ಮಾಡಿಕೊಂಡು ರಾಜ್ಯದ ತೆರಿಗೆ ತಪ್ಪಿಸಿ ಸಂಚರಿಸುತ್ತಿದ್ದ ಎರಡು ಕಾರುಗಳ ಮಾಲೀಕರಿಂದ ದಂಡ ಸಹಿತ ತೆರಿಗೆಯನ್ನು ಸಾರಿಗೆ ಅಧಿಕಾರಿಗಳು ವಸೂಲಿ ಮಾಡಿದ್ದಾರೆ. ಪುದುಚೇರಿಯಲ್ಲಿ ನೋಂದಣಿಯಾಗಿದ್ದ ಮರ್ಸಿಡಿಸ್ ಬೆಂಜ್ ಮತ್ತು ಜಾರ್ಖಂಡ್‌ನಲ್ಲಿ ನೋಂದಣಿಯಾಗಿದ್ದ ಫೆರಾರಿ 812 ಸೂಪರ್ ಫಾಸ್ಟ್ ಕಾರು ರಾಜ್ಯದಲ್ಲಿ ಓಡಾಡುತ್ತಿರುವುದನ್ನು ಸಾರಿಗೆ ಅಧಿಕಾರಿಗಳು ಕಳೆದ ಮಾರ್ಚ್‌ನಲ್ಲೇ ಪತ್ತೆ ಹಚ್ಚಿ ನೋಟಿಸ್ ನೀಡಿದ್ದರು. ಆದರೆ, ಕಾರು ತಂದು ಮೂರು ತಿಂಗಳು ಆಗಿರುವುದು ಎಂದು ಮಾಲೀಕರು ಉತ್ತರಿಸಿದ್ದರು.

ಕಾರು ಎಷ್ಟು ಸಮಯದಿಂದ ಎಲ್ಲೆಲ್ಲಿ ಓಡಾಡಿದೆ ಎಂಬುದನ್ನು ಟ್ರಾಫಿಕ್ ಮ್ಯಾನೇಜ್‌ಮೆಂಟ್ ಸೆಂಟರ್‌ನಿಂದ ಮಾಹಿತಿ ಪಡೆದಾಗ 12 ತಿಂಗಳು ದಾಟಿರುವುದು ಗೊತ್ತಾಗಿದೆ. ಅದರಂತೆ ಶುಕ್ರವಾರ ಕಾರ್ಯಾಚರಣೆ ನಡೆಸಿ ದಂಡ ಸಹಿತ ತೆರಿಗೆ ಪಾವತಿಸುವಂತೆ ತಿಳಿಸಿದ್ದರು. ಕಾರು ಮಾಲೀಕರಾಗಿರುವ ಈಸ್ಟ್ ಪಾಯಿಂಟ್ ಗ್ರೂಪ್ ಸಿಇಒ ರಾಜೀವ್ ಗೌಡ ಅವರು ಒಂದು ಕಾರಿಗೆ 37.03 ಲಕ್ಷ, ಇನ್ನೊಂದು ಕಾರಿಗೆ 61.94 ಲಕ್ಷ ಪಾವತಿಸಿದರು.

## ಸರ್ಕಾರಿ ಶಾಲೆಗಳಿಗೆ ಮಳೆ ನೀರು ಸಂಗ್ರಹ ವ್ಯವಸ್ಥೆ

• ಉದಯವಾಹಿನಿ, ಬೆಂಗಳೂರು

ಗೋಕಲ್‌ದಾಸ್ ಎಕ್ಸ್‌ಪೋರ್ಟ್ಸ್ ಫೌಂಡೇಷನ್ ಕಾರ್ಪೊರೇಟ್ ಕಂಪನಿಗಳ ಸಾಮಾಜಿಕ ಹೊಣೆಗಾರಿಕೆ ನಿಧಿಯಡಿ ಚಿಕ್ಕ ಬಿದಿರುಕಲ್ಲಿನ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಮತ್ತು ಮಲ್ಲಸಂದ್ರದ ಸರ್ಕಾರಿ ಪ್ರೌಢಶಾಲೆಯಲ್ಲಿ ಮಳೆ ನೀರು ಸಂಗ್ರಹ ವ್ಯವಸ್ಥೆಯನ್ನು ಅಳವಡಿಸಲಾಗಿದೆ. ಉದ್ಘಾಟನಾ ಕಾರ್ಯಕ್ರಮದಲ್ಲಿ ಮಾತನಾಡಿದ ಫೌಂಡೇಷನ್‌ನ ಸಿಎಸ್‌ಆರ್ ಉಪಾಧ್ಯಕ್ಷ ಪ್ರಾಂಜಲ್, ಮಳೆ ನೀರು ಸಂಗ್ರಹ ವ್ಯವಸ್ಥೆಯಿಂದ ಸಂಗ್ರಹವಾದ ನೀರನ್ನು ಸಮರ್ಪಕವಾಗಿ ನಿರ್ವಹಣೆ ಮಾಡಬೇಕು. ಈ ನಿಟ್ಟಿನಲ್ಲಿ ಶಿಕ್ಷಕರು, ವಿದ್ಯಾರ್ಥಿಗಳ ಜವಾಬ್ದಾರಿ ಹೆಚ್ಚಿದೆ ಎಂದು ಹೇಳಿದರು. ಫೌಂಡೇಷನ್ ರಾಜೇಂದ್ರ ಪ್ರಸಾದ್, ಮಳೆ ನೀರು ಸಂಗ್ರಹ ವ್ಯವಸ್ಥೆ ಕೇವಲ ನೀರಿನ ಸಂಗ್ರಹಣೆಗೆ ಸಂಬಂಧಿಸಿದ್ದಲ್ಲ, ಅಂತರ್ಜಲವನ್ನು ಮರುಪೂರಣ ಮಾಡಲು ಸಹಕಾರಿಯಾಗಿದೆ. ನೀರಿಗೆ ಸಂಬಂಧಿಸಿದಂತೆ ಬಾಹ್ಯ ಮೂಲಗಳ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡಲಿದೆ ಎಂದರು.

## ಗೌರಿ ಲಂಕೇಶ್ ಹತ್ಯೆ : ವಿಶೇಷ ನ್ಯಾಯಾಲಯ ಸ್ಥಾಪನೆಗೆ ಒತ್ತಾಯ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಪತ್ರಕರ್ತೆ ಗೌರಿ ಲಂಕೇಶ್ ಹತ್ಯೆ ಪ್ರಕರಣದ ತ್ವರಿತ ವಿಚಾರಣೆಗೆ ವಿಶೇಷ ನ್ಯಾಯಾಲಯ ಸ್ಥಾಪಿಸಬೇಕೆಂಬುದು ಅವರ ಅಭಿಮಾನಿಗಳು, ಹಿತೈಷಿಗಳು, ಒಡನಾಡಿಗಳ ಒತ್ತಾಯವಾಗಿದೆ ಎಂದು ಅಂಕಣಕಾರ ಶಿವಸುಂದರ್ ಹೇಳಿದರು. ಬೆಂಗಳೂರು ಅಂತರರಾಷ್ಟ್ರೀಯ ಕೇಂದ್ರದಲ್ಲಿ ರೋಲೋ ರೋಮಿಗ್ ಅವರ 'ಐ ಆ್ಯಮ್ ಆನ್ ದಿ ಹಿಟ್ ಲಿಸ್ಟ್' ಎಂಬ ಪುಸ್ತಕ ಕುರಿತು, ಗೌರಿ ಫೈಲ್ಸ್- ಪತ್ರಕರ್ತೆಯೊಬ್ಬರ ಹತ್ಯೆ ಮತ್ತು ಅದರ ಪರಿಣಾಮಗಳ ಕುರಿತು ಆಯೋಜಿಸಿದ್ದ ಸಂವಾದದಲ್ಲಿ ಮಾತನಾಡಿದರು.

2017ರಲ್ಲಿ ಗೌರಿ ಲಂಕೇಶ್ ಹತ್ಯೆಯಾಯಿತು. 18 ಆರೋಪಿಗಳನ್ನು ಬಂಧಿಸಿದ್ದು, ಒಬ್ಬ ಆರೋಪಿ ಮಾತ್ರ ತಲೆಮರೆಸಿಕೊಂಡಿದ್ದಾನೆ. 2022ರಲ್ಲಿ ವಿಚಾರಣೆ ಆರಂಭವಾಯಿತು. ವಿಚಾರಣೆ ವಿಳಂಬವಾದ ಕಾರಣ ಎಲ್ಲಾ ಆರೋಪಿಗಳಿಗೂ ಜಾಮೀನು ದೊರೆತಿದ್ದು, ಈ ಪೈಕಿ ಕೆಲ ಆರೋಪಿಗಳು ಸಾಕ್ಷಿಗಳಿಗೆ ಬೆದರಿಕೆ ಹಾಕುತ್ತಿದ್ದಾರೆ ಎಂದು ತಿಳಿಸಿದರು. ವಿಚಾರಣೆ ತ್ವರಿತವಾಗಿ ನಡೆಯಲು ವಿಶೇಷ ನ್ಯಾಯಾಲಯ ಸ್ಥಾಪನೆ ಮಾಡುವಂತೆ ಹೈಕೋರ್ಟ್‌ಗೆ ಸರ್ಕಾರ ಪತ್ರ ಬರೆದಿತ್ತು.

ಆದರೆ ನ್ಯಾಯಾಲಯ ಇದನ್ನು ಪರಿಗಣಿಸಲಿಲ್ಲ. 80 ಸಾಕ್ಷಿಗಳ ವಿಚಾರಣೆ ಬಾಕಿ ಇದೆ. ತಿಂಗಳಲ್ಲಿ 4-5 ದಿನ ವಿಚಾರಣೆ ನಡೆಯುತ್ತದೆ. ನ್ಯಾಯ ಸಿಗುವುದು ವಿಳಂಬವಾಗುತ್ತದೆ ಎಂದು ಬೇಸರ ವ್ಯಕ್ತಪಡಿಸಿದರು.


ಲೇಖಕ ರೋಲೋ ರೋಮಿಗ್ ಮಾತನಾಡಿ, ದಕ್ಷಿಣ ಭಾರತದಲ್ಲಿ ವರದಿಗಾರನಾಗಿ ಕೆಲಸ ಮಾಡಿದ್ದರಿಂದ ಗೌರಿ ಲಂಕೇಶ್ ಹತ್ಯೆ ಕುರಿತು ಪುಸ್ತಕ ಬರೆದೆ. ಅವರು ತಮಗೆ ಅನಿಸಿದ್ದನ್ನು ನೇರವಾಗಿ ಬರೆಯುತ್ತಿದ್ದರು. ಸಮಾಜದಲ್ಲಿ ಬದಲಾವಣೆಗೆ ಕಾರಣರಾಗಿದ್ದರು.

> ಭಾರತ ದೇಶದಲ್ಲಿ ಮುಸ್ಲಿಮರು ದಾಳಿಗೆ ಒಳಗಾಗುತ್ತಿದ್ದಾರೆ. ವಿಶೇಷವಾಗಿ ಮೋದಿ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಮುಸ್ಲಿಂ ಸಮುದಾಯದ ಮೇಲೆ ದಾಳಿ ಮಾಡುತ್ತಿದ್ದಾರೆ. ಮುಸ್ಲಿಂ ಪರ ಧ್ವನಿ ಎತ್ತುವ ಕೆಲಸ ಕೆಲವರು ಮಾತ್ರ ಮಾಡುತ್ತಿದ್ದು, ಅವರು ಟೀಕೆ ಒಳಗಾಗುತ್ತಿದ್ದಾರೆ. ಧ್ವನಿ ಎತ್ತುವ ಕೆಲಸವನ್ನು ಪತ್ರಕರ್ತರು ಮಾಡಬೇಕು. ಗೌರಿ ಅದನ್ನೇ ಮಾಡಿದ್ದರು ಎಂದರು.

ಹಲವು ಗ್ರಂಥಾಲಯಗಳಿಗೆ ಭೇಟಿ ನೀಡಿ ಅನುವಾದಕರ ನೆರವು ಪಡೆದು ಅವರ ಕುರಿತು ಪ್ರಕಟಗೊಂಡಿದ್ದ ಲೇಖನಗಳನ್ನು ಓದಿ, ಮಾಹಿತಿ ಪಡೆದೆ. ಆಕೆಯ ಹತ್ಯೆಯ ಸುದ್ದಿ ಅಂತರರಾಷ್ಟ್ರೀಯ ಮಾಧ್ಯಮಗಳಲ್ಲೂ ಪ್ರಕಟಗೊಂಡಿತು ಎಂದು ವಿವರಿಸಿದರು.

## ಎಲ್ಲರಿಗೂ ಎ ಖಾತಾ: ನಗರಾಭಿವೃದ್ಧಿ ಇಲಾಖೆ ಅಧಿಸೂಚನೆ

• ಉದಯವಾಹಿನಿ, ಬೆಂಗಳೂರು



ಗ್ರೇಟರ್ ಬೆಂಗಳೂರು ಆಡಳಿತ ಕಾಯ್ದೆ-2024 ವ್ಯಾಪ್ತಿಯಲ್ಲಿ ಮಾನ್ಯತೆ ಸಿಗದೆ, ಕಟ್ಟಡ ಕಟ್ಟಲು ನಕ್ಷೆ ಲಭಿಸದ 'ಬಿ ಖಾತಾ' ಹೊಂದಿರುವ, ಹೊಂದಿರದ ಆಸ್ತಿಗಳಿಗೆ ಎ- ಖಾತಾ ನೀಡಲು ನಗರಾಭಿವೃದ್ಧಿ ಇಲಾಖೆ ಅಧಿಸೂಚನೆ ಹೊರಡಿಸಿದೆ. ಬಿ ಖಾತಾ ಆಸ್ತಿ ಹೊಂದಿದವರು, ತಮ್ಮ ಆಸ್ತಿಯನ್ನೇ ಕಳೆದುಕೊಳ್ಳುವ ಭೀತಿಯಲ್ಲಿದ್ದರು. ಅದಕ್ಕೆ, ಪರಿಹಾರ ಕಲ್ಪಿಸಲು ಎಲ್ಲರಿಗೂ ಎ ಖಾತಾ ನೀಡಲು ಜು. 17ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ನಿರ್ಣಯ ಕೈಗೊಳ್ಳಲಾಗಿದೆ. ಅದರಂತೆ ನಗರಾಭಿವೃದ್ಧಿ ಇಲಾಖೆ ಅಧಿಸೂಚನೆ ಹೊರಡಿಸಿದೆ.

ಬಿಬಿಎಂಪಿ ವ್ಯಾಪ್ತಿಯಲ್ಲಿರುವ ಎಲ್ಲಾ ನಿವೇಶನಗಳು ಎ ಖಾತಾದ ಸಕಲ ಸೌಲಭ್ಯಗಳನ್ನು ಪಡೆಯಲು ಅರ್ಹವಾಗಿದ್ದು, ಮಾರ್ಗಸೂಚಿ ದರದಂತೆ ಅಗತ್ಯವಾದ ಶುಲ್ಕ, ಅಭಿವೃದ್ಧಿ ಶುಲ್ಕವನ್ನು ಬಿಬಿಎಂಪಿಗೆ ಪಾವತಿಸಬೇಕು. ಶುಲ್ಕ ಪಾವತಿ ನಂತರ, ಇ-ಖಾತಾ ಸೇರಿದಂತೆ ಕಟ್ಟಡ ನಕ್ಷೆಯೂ ಲಭ್ಯವಾಗಲಿದೆ. 'ಬಿ' ಖಾತಾ ಹೊಂದಿರುವ ಅಥವಾ ಯಾವುದೇ ಖಾತಾ ಹೊಂದಿರದ ನಿವೇಶನಗಳಿಗೆ ಆನ್‌ಲೈನ್‌ನಲ್ಲೇ 'ಎ' ಖಾತಾ, 'ಇ' ಖಾತಾ ನೀಡುವ 'ಸಮಗ್ರ ತಂತ್ರಾಂಶ'ವನ್ನು ಬಿಬಿಎಂಪಿ ಅಳವಡಿಸಿಕೊಳ್ಳಲಿದೆ.

ಕಾವೇರಿ ತಂತ್ರಾಂಶದೊಂದಿಗೆ ಮಾಹಿತಿ ಕಲೆಹಾಕುವುದು ಸೇರಿದಂತೆ ಕಂದಾಯ ಇಲಾಖೆ, ಬಿಬಿಎಂಪಿಯ ಕಂದಾಯ ವಿಭಾಗ, ನಗರ ಯೋಜನೆಯ ಅಧಿಕಾರಿಗಳು ಸಮಗ್ರ ತಂತ್ರಾಂಶ ಮೂಲಕವೇ ಎಲ್ಲಾ ರೀತಿಯ ಅನುಮೋದನೆಯನ್ನು ನೀಡಲಿದ್ದಾರೆ. ನಿವೇಶನ 'ಎ' ಖಾತಾವಾಗಿ ಕಾನೂನುಬದ್ಧವಾಗಲು ಪಾವತಿಸಬೇಕಾದ ಶುಲ್ಕದ ಲೆಕ್ಕಾಚಾರವೂ ಆನ್‌ಲೈನ್‌ನಲ್ಲೇ ಆಗಲಿದೆ. ಈ ಪ್ರಕ್ರಿಯೆ ಆಗಸ್ಟ್ 15ರ ವೇಳೆಗೆ ಜಾರಿಯಾಗಲಿದೆ ಎಂದು ಬಿಬಿಎಂಪಿ ಅಧಿಕಾರಿಗಳು ಹೇಳಿದ್ದಾರೆ.

## ಉದ್ಯೋಗ ಭದ್ರತೆಗೆ ಎನ್‌ಎಚ್‌ಎಂ ಸಿಬ್ಬಂದಿ: ಆಗ್ರಹ

• ಉದಯವಾಹಿನಿ, ಬೆಂಗಳೂರು

ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ ಕಾರ್ಯನಿರ್ವಹಿಸುತ್ತಿರುವ ಗುತ್ತಿಗೆ ಸಿಬ್ಬಂದಿಯನ್ನು ಕಾರ್ಯಕ್ಷಮತೆ ಮೌಲ್ಯಮಾಪನದ ಹೆಸರಿನಲ್ಲಿ ವಜಾಗೊಳಿಸಬಾರದು ಎಂದು ಕರ್ನಾಟಕ ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಇಲಾಖೆ ಗುತ್ತಿಗೆ ಹಾಗೂ ಹೊರಗುತ್ತಿಗೆ ನೌಕರರ ಸಂಘವು ರಾಜ್ಯ ಸರ್ಕಾರಕ್ಕೆ ಮನವಿ ಮಾಡಿದೆ. ಈ ಬಗ್ಗೆ ಸಂಘದ ರಾಜ್ಯಾಧ್ಯಕ್ಷ ಶ್ರೀಕಾಂತ್ ಸ್ವಾಮಿ ಅವರು ಸಿಎಂ ಸಿದ್ದರಾಮಯ್ಯ ಹಾಗೂ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರಿಗೆ ಪತ್ರ ಬರೆದಿದ್ದಾರೆ.

ಎನ್‌ಎಚ್‌ಎಂ ಅಡಿ 30 ಸಾವಿರ ಸಿಬ್ಬಂದಿ ಗುತ್ತಿಗೆ ಆಧಾರದಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ. ಈ ನೌಕರರ ಗುತ್ತಿಗೆ ನವೀಕರಣದ ಬಗ್ಗೆ ಈವರೆಗೂ ನಿರ್ಧಾರ ಕೈಗೊಂಡಿಲ್ಲ. ಇದರಿಂದ ನೌಕರರು ಉದ್ಯೋಗ ಭದ್ರತೆ ಇಲ್ಲದೆ ಆತಂಕಕ್ಕೆ ಒಳಗಾಗಿದ್ದಾರೆ. ಕಾರ್ಯಕ್ಷಮತೆ ಮೌಲ್ಯಮಾಪನದ ನೆಪದಲ್ಲಿ ದೀರ್ಘ ಕಾಲದಿಂದ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಯನ್ನು ವಜಾಗೊಳಿಸಲು ಕ್ರಮಕೈಗೊಳ್ಳಬಾರದು' ಎಂದು ಆಗ್ರಹಿಸಿದ್ದಾರೆ.

ಈ ಸಿಬ್ಬಂದಿಯನ್ನು ಕೈಬಿಟ್ಟಲ್ಲಿ ಸಾರ್ವಜನಿಕ ಆರೋಗ್ಯ ಕಾರ್ಯಕ್ರಮಗಳ ಮೇಲೆ ನಕಾರಾತ್ಮಕ ಪರಿಣಾಮಗಳು ಉಂಟಾಗುತ್ತವೆ. ಆದ್ದರಿಂದ ಅನಗತ್ಯ ಮೌಲ್ಯಮಾಪನ ಹಾಗೂ ಸಿಬ್ಬಂದಿಯನ್ನು ತೆಗೆದುಹಾಕುವ ನಿರ್ಧಾರದಿಂದ ಹಿಂದೆ ಸರಿಯಬೇಕು. ಈಗಾಗಲೇ ಪೂರ್ಣಗೊಂಡ 'ಕಾರ್ಯಕ್ಷಮತೆ ಮೌಲ್ಯಮಾಪನ'ದ ಆಧಾರದ ಮೇಲೆ ನೌಕರರ ಮುಂದುವರಿಕೆಗೆ ಆದೇಶ ಹೊರಡಿಸಬೇಕು' ಎಂದು ಒತ್ತಾಯಿಸಿದ್ದಾರೆ.

## ಜೆಜೆಎಂ ಕಾಮಗಾರಿಗೆ ರಸ್ತೆ ಅಧ್ವಾನ

• ಉದಯವಾಹಿನಿ, ಆನೇಕಲ್



ಉದಯವಾಹಿನಿ ಚಿತ್ರ

ಜಲ ಜೀವನ್ ಮಿಷನ್ (ಜೆಜೆಎಂ) ಕಾಮಗಾರಿಯಿಂದಾಗಿ ಗ್ರಾಮಗಳ ರಸ್ತೆಗಳು ಅಧ್ವಾನಗೊಂಡಿದೆ. ಅಗೆದ ಗುಂಡಿಗಳನ್ನು ಮುಚ್ಚಿಸಿ ಸುಗಮ ಸಂಚಾರಕ್ಕೆ ಅನವು ಮಾಡಿಕೊಡಬೇಕು, ಕಾಮಗಾರಿಗೆ ವೇಗ ನೀಡಬೇಕೆಂದು ವಿವಿಧ ಗ್ರಾಮಸ್ಥರು ಆಗ್ರಹಿಸಿದರು. ತಾಲ್ಲೂಕಿನ ಹುಸ್ಕೂರು ಗ್ರಾಮದಲ್ಲಿ ನಡೆದ ಗ್ರಾಮಸಭೆಯಲ್ಲಿ ಹುಸ್ಕೂರು ಗ್ರಾಮ ಪಂಚಾಯತಿ ವ್ಯಾಪ್ತಿಯ ವಿವಿಧ ಗ್ರಾಮಗಳ ಗ್ರಾಮಸ್ಥರು ಅಹವಾಲು ಸಲ್ಲಿಸಿದರು.

ಜಲಜೀವನ್ ಮಿಷನ್ ಯೋಜನೆಯಡಿ ಪೈಪ್ ಅಳವಡಿಸಲು ರಸ್ತೆಯನ್ನು ಅಗೆಯಲಾಗಿತ್ತು ಆದರೆ ಕಾಮಗಾರಿ ಬಳಿಕ ಮುಚ್ಚಿಲ್ಲ. ಇದರಿಂದ ರಸ್ತೆಯಲ್ಲಿ ಸಂಚರಿಸಲು ಆಗುತ್ತಿಲ್ಲ, ನಿರಂತರ ಮಳೆ ಬರುತ್ತಿರುವುದರಿಂದ ಗುಂಡಿ ತೆಗೆದ ಜಾಗದಲ್ಲಿ ಕೆಸರು ಗದ್ದೆಯಂತೆ ಆಗಿದೆ ಎಂದು ಅವಲತ್ತು ಕೊಂಡರು. ಚಿಂತಲ ಮಡಿವಾಳ ಗ್ರಾಮದ ರಸ್ತೆ ಅಭಿವೃದ್ಧಿಪಡಿಸಬೇಕು ಎಂದು ಒತ್ತಾಯಿಸಿದರು. ಗ್ರಾಮಸಭೆಯಲ್ಲಿ ಸಾರ್ವಜನಿಕರು ಹೇಳಿರುವ ಸಮಸ್ಯೆಗಳ ಪರಿಹಾರಕ್ಕೆ ಶ್ರಮಿಸಲಾಗುವುದು.

ಜಲಜೀವನ್ ಮಿಷನ್ ಅಡಿಯಲ್ಲಿ ಗುಣಮಟ್ಟದ ಕಾಮಗಾರಿ ಕೈಗೊಳ್ಳಲು, ಕಾಮಗಾರಿಗೆ ವೇಗ ನೀಡುವ ಸಲುವಾಗಿ ಜಿಲ್ಲಾ ಪಂಚಾಯಿತಿಗೆ ಪತ್ರ ಬರೆಯಲಾಗುವುದು ಎಂದು ಗ್ರಾಮ ಪಂಚಾಯಿತಿ ಅಧ್ಯಕ್ಷ ಮುನಿರತ್ನಮ್ಮ ರಮೇಶ್ ತಿಳಿಸಿದರು.

> ಹುಸ್ಕೂರು ಗ್ರಾಮ ಪಂಚಾಯತಿಯು ಎಲೆಕ್ಟ್ರಾನಿಕ್ ಸಿಟಿ ಸಮೀಪದಲ್ಲಿದೆ. ನಗರ ಪ್ರದೇಶಕ್ಕೆ ಹೊಂದಿಕೊಂಡಿರುವುದರಿಂದ ನಗರದಲ್ಲಿ ದೊರೆಯುವ ಎಲ್ಲಾ ಸೌಲಭ್ಯ ದೊರೆಯುವಂತೆ ಮಾಡಲು ಆದ್ಯತೆ ನೀಡಲಾಗುತ್ತಿದೆ.
>
> -ಮುನಿರತ್ನಮ್ಮ ರಮೇಶ ಅಧ್ಯಕ್ಷ

## ಎಂಪೈರ್ ರೆಸ್ಟೋರೆಂಟ್‌ನ ಚಿಕನ್ ಕಬಾಬ್ ಸೇವನೆಗೆ ಯೋಗ್ಯವಲ್ಲ

• ಉದಯವಾಹಿನಿ, ಬೆಂಗಳೂರು





ಉದಯವಾಹಿನಿ ಚಿತ್ರ

ನಗರದ ಜನಪ್ರಿಯ ರೆಸ್ಟೋರೆಂಟ್ ಚೈನ್ ಎಂಪೈರ್ ಇದೀಗ ಆಹಾರ ಸುರಕ್ಷತಾ ಇಲಾಖೆ ವರದಿ ಹಿನ್ನೆಲೆಯಲ್ಲಿ ಸಂಕಷ್ಟಕ್ಕೆ ಸಿಲುಕಿದೆ. ಗಾಂಧಿನಗರದಲ್ಲಿರುವ ಪ್ರಸಿದ್ಧ ಎಂಪೈರ್ ರೆಸ್ಟೋರೆಂಟ್‌ನ ಚಿಕನ್ ಕಬಾಬ್‌ಅನ್ನು ಪರೀಕ್ಷೆಗೆ ಒಳಪಡಿಸಲಾಗಿದ್ದು, ಇದು ಮಾನವ ಬಳಕೆಗೆ ಅಸುರಕ್ಷಿತ ಎಂದು ಘೋಷಿಸಲಾಗಿದೆ. ಸಾರ್ವಜನಿಕ ಆರೋಗ್ಯ ಸಂಸ್ಥೆಯಲ್ಲಿರುವ ನೀರು ಮತ್ತು ಆಹಾರ ಪ್ರಯೋಗಾಲಯ ಈ ವಿಚಾರವನ್ನು ಘೋಷಿಸಿದ್ದು, ರೆಸ್ಟೋರೆಂಟ್ ಸಂಕಷ್ಟಕ್ಕೆ ಸಿಲುಕಿದೆ.

ಈ ಸಂಬಂಧ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಉತ್ತರ ವಲಯದ ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತವು ರೆಸ್ಟೋರೆಂಟ್‌ಗೆ ನೋಟಿಸ್ ಜಾರಿ ಮಾಡಿದೆ. ಈ ಸಂಬಂಧ ಪ್ರತಿಕ್ರಿಯೆ ನೀಡಲು ಎಂಪೈರ್ ರೆಸ್ಟೋರೆಂಟ್‌ಗೆ 30 ದಿನಗಳ ಕಾಲಾವಕಾಶ ನೀಡಲಾಗಿದೆ.

**ಆಗಿದ್ದೇನು?:** ಜೂನ್ 27 ರಂದು, ಆನಂದ ರಾವ್ ವೃತ್ತದ ಸಮೀಪವಿರುವ ಎಂಪೈರ್ ರೆಸ್ಟೋರೆಂಟ್‌ನಿಂದ ಆಹಾರ ಸುರಕ್ಷತಾ ಅಧಿಕಾರಿ ಅಂಬರೀಷ್ ಗೌಡ ಅವರು 2 ಕಿಲೋಗ್ರಾಂಗಳಷ್ಟು ಚಿಕನ್ ಕಬಾಬ್ ಮಾದರಿಗಳನ್ನು ಸಂಗ್ರಹಿಸಿದ್ದರು. 500 ಗ್ರಾಂ ಮಾದರಿಯ ಒಟ್ಟು ನಾಲ್ಕು ಪ್ಯಾಕೆಟ್ ಮಾದರಿಗಳನ್ನು ಸಂಗ್ರಹಿಸಿದ್ದ ಅವರು, ಇದನ್ನು ಪರೀಕ್ಷೆಗೆ ಕಳುಹಿಸಿದ್ದರು. ಜುಲೈ 11 ರಂದು ಇದರ ಪರೀಕ್ಷಾ ವರದಿ ಬಂದಿತ್ತು. ಇದರಲ್ಲಿ ಚಿಕನ್ ಕಬಾಬ್‌ಗಳು ಸುರಕ್ಷತಾ ಮಾನದಂಡ ಪೂರೈಸಿಲ್ಲ ಎಂದು ತಿಳಿದು ಬಂದಿದೆ. 2011ರ ಆಹಾರ ಉತ್ಪನ್ನ ಮಾನದಂಡಗಳು ಮತ್ತು ಆಹಾರ ಸೇರ್ಪಡೆಗಳ ನಿಯಮಗಳ ಅಡಿಯಲ್ಲಿ ಇದು ಅಸುರಕ್ಷಿತ ಎಂದು ತಿಳಿದು ಬಂದಿದೆ. ಹೀಗಾಗಿ 2006ರ ಆಹಾರ ಸುರಕ್ಷತೆ ಮತ್ತು ಮಾನದಂಡ ಕಾಯ್ದೆಯ ಅಡಿಯಲ್ಲಿ ಈ ಆಹಾರವನ್ನು ಅಸುರಕ್ಷಿತ ಎಂದು ಘೋಷಿಸಲಾಗಿದೆ.

ಅಲ್ಲದೆ, ನೋಟಿಸ್ ನೀಡಿರುವ ಬಿಬಿಎಂಪಿಯು ರೆಸ್ಟೋರೆಂಟ್ ಬಯಸಿದರೆ ತಮ್ಮ ಸ್ವಂತ ಖರ್ಚಿನಲ್ಲಿ ಮೈಸೂರಿನ ಕೇಂದ್ರೀಯ ಆಹಾರ ತಂತ್ರಜ್ಞಾನ ಸಂಶೋಧನಾ ಸಂಸ್ಥೆಯಲ್ಲಿ ಆಹಾರದ ಮಾದರಿಯನ್ನು ಮರುಪರೀಕ್ಷೆ ಮಾಡಿಸಬಹುದು. ಆದರೆ, ಈ ತೀರ್ಮಾನ ಸಂಸ್ಥೆಗೇ ಬಿಟ್ಟದ್ದು ಎಂದು ಹೇಳಿದೆ.

**ರೆಸ್ಟೋರೆಂಟ್ ಹೇಳೋದೇನು?:** ಈ ಸಂಬಂಧ ಎಂಪೈರ್ ರೆಸ್ಟೋರೆಂಟ್ ಸಮೂಹದ ಸಿಇಒ ಶಾಕೀರ್ ಅವರು ಎನ್‌ಡಿಟಿವಿಗೆ ಪ್ರತಿಕ್ರಿಯೆ ನೀಡಿದ್ದಾರೆ. ಇದರಲ್ಲಿ ಅವರು ನಮಗೆ ಆಹಾರ ಸುರಕ್ಷತೆ, ಗುಣಮಟ್ಟ ಪ್ರಾಧಿಕಾರದಿಂದ ನೋಟಿಸ್ ಬಂದಿರುವುನ್ನು ಖಚಿತ ಪಡಿಸಿದ್ದಾರೆ. ಈ ವಿಷಯದ ಬಗ್ಗೆ ನಾವು ಹೆಚ್ಚು ಪ್ರತಿಕ್ರಿಯಿಸುವುದಿಲ್ಲ ಎಂದಿರುವ ಅವರು ಕಬಾಬ್‌ಗಳಲ್ಲಿ ಬಣ್ಣಗಳ ಬಳಕೆಯನ್ನು ನಿಲ್ಲಿಸಿದ್ದೇವೆ ಎಂದು ತಿಳಿಸಿದ್ದಾರೆ.

## ಊಹೆಗೂ ನಿಲುಕದ ಸೈಬರ್ ವಂಚನೆ: ಇನ್‌ಸ್ಪೆಕ್ಟರ್

• ಉದಯವಾಹಿನಿ, ದೊಡ್ಡಬಳ್ಳಾಪುರ



ಉದಯವಾಹಿನಿ ಚಿತ್ರ

ಕಾಲಕ್ಕೆ ತಕ್ಕಂತೆ ಸೈಬರ್ ಅಪರಾಧವು ಬದಲಾಗುತ್ತಿದೆ. ಸೈಬರ್ ತಂತ್ರವು ಬದಲಾಗುತ್ತಿದ್ದು, ಇದರ ಬಗ್ಗೆ ಸಾರ್ವಜನಿಕರು ಎಚ್ಚರ ವಹಿಸಬೇಕೆಂದು ಮಹಿಳಾ ಪೊಲೀಸ್ ಠಾಣೆ ಇನ್‌ಸ್ಪೆಕ್ಟರ್ ಎಂ.ಬಿ.ನವೀನ್‌ಕುಮಾರ್ ಹೇಳಿದರು. ನಗರದ ಆರ್.ಎಲ್.ಜಾಲಪ್ಪ ತಾಂತ್ರಿಕ ಮಹಾವಿದ್ಯಾಲಯದ ಇಸಿಇ ಸಭಾಂಗಣದಲ್ಲಿ ನಡೆದ ಸಿಎಸ್‌ಇ ಮತ್ತು ದತ್ತಾಂಶ ವಿಜ್ಞಾನ ವಿಭಾಗದಲ್ಲಿ 'ಅಟಲ್-ವಾಣಿ ಎಐಸಿಟಿಇ ಪ್ರಾಯೋಜಿತ ಸೈಬರ್ ಭದ್ರತೆ ಮತ್ತು ಸುರಕ್ಷತಾ ವ್ಯವಸ್ಥೆ' ಕುರಿತ ಮೂರು ದಿನಗಳ ಪ್ರಾಧ್ಯಾಪಕರ ಅಭಿವೃದ್ಧಿ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

ವ್ಯಕ್ತಿಗತ ತೇಜೋವಧೆ, ಹಣ ವಂಚನೆ, ಮಾನಹಾನಿ, ಬೆದರಿಕೆ, ಸಾಮಾಜಿಕ ಭದ್ರತೆಗೆ ಧಕ್ಕೆ ತರುವ ಪ್ರಯತ್ನಗಳು, ದೊಡ್ಡ ಮಟ್ಟದ ಸಾಫ್ಟ್‌ರ್ ಹ್ಯಾಕಿಂಗ್, ಡಿಜಿಟಲ್ ಅರೆಸ್ಟ್ ಪ್ರಕರಣಗಳು ದಿನನಿತ್ಯ ವರದಿಯಾಗುತ್ತಿವೆ. ಯಾವ ಹಂತದಲ್ಲಿ ಯಾವ ರೀತಿ ಇಂತಹ ಕೃತ್ಯಗಳು ನಡೆಯುತ್ತವೆ ಎಂದು ಊಹಿಸುವುದೂ ಕಷ್ಟವಾಗುತ್ತಿದೆ. ಇಂತಹ ಪ್ರಮುಖ ವಿಚಾರವೊಂದರ ಬಗ್ಗೆ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಜಾಗೃತಿ ಮೂಡಿಸುತ್ತಿರುವ ಪ್ರಯತ್ನ ಶ್ಲಾಘನೀಯ ಎಂದರು.

ಬಹು ಆಯಾಮಗಳಲ್ಲಿ ವಂಚನೆ ಪ್ರಕರಣಗಳು ವರದಿಯಾಗುತ್ತಿವೆ. ವೈವಿಧ್ಯಮಯ ಮಾದರಿಗಳಲ್ಲಿ ಅಪರಾಧ ಕೃತ್ಯಗಳು ನಡೆಯುತ್ತಿವೆ. ತಾಂತ್ರಿಕ ಕೌಶಲ ಬೆಳೆದಂತೆ ಅಪರಾಧಗಳ ಸ್ವರೂಪವೂ ಬದಲಾಗುತ್ತಿದೆ. ಸೈಬರ್ ವಂಚಕರು ಅತ್ಯಾಧುನಿಕ ಮಾದರಿಗಳಲ್ಲಿ ಜನರನ್ನು ವಂಚಿಸುತ್ತಿದ್ದಾರೆ. ಇಂತಹ ವಂಚನೆಗಳ ಬಗ್ಗೆ ಎಲ್ಲಾ ಹಂತಗಳಲ್ಲಿ ಸಾಮಾಜಿಕ ಜಾಗೃತಿ ಅಗತ್ಯವಾಗಿದೆ. ವಿದ್ಯಾವಂತ ಸಮುದಾಯವೂ ವಂಚನೆಗಳಿಗೆ ಒಳಗಾಗುತ್ತಿರುವುದು ಆತಂಕಕಾರಿಯಾಗಿದೆ ಎಂದರು.

# ಚುನಾವಣಾ ಅಕ್ರಮ: ಕೈ ನಾಯಕರ ಆರೋಪಗಳಿಗೆ ಡಿಕೆಸು ಸಹಮತಿ

## ಕರ್ನಾಟಕಕ್ಕೆ ನೀರಾವರಿ ಯೋಜನೆಗಳಲ್ಲಿ ಕೇಂದ್ರದಿಂದ ಅನ್ಯಾಯ, ನೀರಾವರಿ ಯೋಜನೆಗೆ ಅನುಮತಿ ಕೊಡಿಸಲಾಗಲಿಲ್ಲ

• ಉದಯವಾಹಿನಿ, ಬೆಂಗಳೂರು

**ನನಗೆ ಮಾಹಿತಿ ಇಲ್ಲ**

ಲೋಕಸಭೆ ಚುನಾವಣೆ ಸಂದರ್ಭದಲ್ಲಿ ಮತದಾರರ ಪಟ್ಟಿಯಲ್ಲಿ ಸಾಕಷ್ಟು ಏರುಪೇರುಗಳಾಗಿರುವುದು ಕಂಡುಬರುತ್ತಲೇ ಇದೆ ಎಂದು ಹೇಳುವ ಮೂಲಕ ಮಾಜಿ ಸಂಸದ ಡಿ.ಕೆ. ಸುರೇಶ್ ಕಾಂಗ್ರೆಸ್‌ನ ನಾಯಕರ ಟೀಕೆಗಳಿಗೆ ಸಹಮತ ವ್ಯಕ್ತಪಡಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿರುವ ಅವರು, ನಗರ ಪ್ರದೇಶಗಳಲ್ಲಿ ಮತದಾರರ ಪಟ್ಟಿಯಲ್ಲಿ ಸಾಕಷ್ಟು ವ್ಯತ್ಯಾಸಗಳನ್ನು ಮಾಡಲಾಗಿದೆ. ಮೊದಲಿನಿಂದಲೂ ಇದು ಕಂಡುಬರುತ್ತಲೇ ಇದೆ ಎಂದರು. ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದಲ್ಲಿ ಚುನಾವಣಾ ಅಕ್ರಮಗಳಾಗಿದ್ದವು ಎಂದು ಡಿಸಿಎಂ ಡಿ.ಕೆ.ಶಿವಕುಮಾರ್‌ರವರ ಹೇಳಿಕೆ ಸೇರಿದಂತೆ ರಾಹುಲ್ ಗಾಂಧಿ, ಸಿದ್ದರಾಮಯ್ಯ ಎಲ್ಲಾ ನಾಯಕರೂ ಈಗಾಗಲೇ ಆಯೋಗದ ಕಾರ್ಯ ನಿರ್ವಹಣೆ ಬಗ್ಗೆ ಪ್ರತಿಕ್ರಿಯಿಸಿದ್ದಾರೆ. ಇದಕ್ಕೆ ನನ್ನ ಸಹಮತ ಇದೆ ಅದರ ಹೊರತಾಗಿ ಹೆಚ್ಚಿನ ಪ್ರತಿಕ್ರಿಯೆ ನೀಡಲು ಬಯಸುವುದಿಲ್ಲ ಎಂದರು.



ಪ್ರಹ್ಲಾದ್ ಜೋಷಿಗೆ ರಾಜ್ಯದ ಹಿತ ಬೇಕಾಗಿಲ್ಲ. ಅವರೇ ಅವರ ಕ್ಷೇತ್ರಕ್ಕೆ ಒಂದು ನೀರಾವರಿ ಯೋಜನೆಗೆ ಅನುಮತಿ ಕೊಡಿಸಲಾಗಲಿಲ್ಲ ಎಂದ ಮೇಲೆ ಯಾವ ಕಾರಣಕ್ಕೆ ಸಚಿವರಾಗಿದ್ದಾರೆ ಎಂದು ಪ್ರಶ್ನಿಸಿದರು. ಗೋವಾ ಸರ್ಕಾರ ಇಲ್ಲಸಲ್ಲದ ನೆಪಗಳನ್ನು ಹುಡುಕಿ ತೊಂದರೆ ನೀಡುತ್ತಲೇ ಇದೆ. ಉತ್ತರ ಕರ್ನಾಟಕ ಭಾಗದ ಜನರಿಗೂ ಕುಡಿಯುವ ನೀರಿನ ಈ ಮಹತ್ವದ ಯೋಜನೆಗೆ ಪೂರಕವಾಗಿ ಸುಪ್ರೀಂಕೋರ್ಟ್ ತೀರ್ಪು ನೀಡಿದೆ. ಆದರೆ ಗೋವಾದಲ್ಲಿರುವ ಬಿಜೆಪಿ ಸರ್ಕಾರ ಕೇಂದ್ರದಲ್ಲಿರುವ ಬಿಜೆಪಿ ಸರ್ಕಾರವನ್ನು ದುರುಪಯೋಗಪಡಿಸಿಕೊಂಡು ಯೋಜನೆಗೆ ಅಡ್ಡಿಪಡಿಸುತ್ತಿದೆ ಎಂದು ಆರೋಪಿಸಿದರು.

ಕರ್ನಾಟಕಕ್ಕೆ ನೀರಾವರಿ ಯೋಜನೆಗಳಲ್ಲಿ ಕೇಂದ್ರದಿಂದ ಅನ್ಯಾಯವಾಗುತ್ತಿದೆ. ಕುಡಿಯುವ ನೀರಿನ ಯೋಜನೆಗಳಾದ ಮೇಕೆದಾಟು, ಕಳಸಾ ಬಂಡೂರಿಗೆ ಅನುಮತಿ ನೀಡುವುದು, ಕೃಷ್ಣಾ ನದಿನೀರಿನ ನ್ಯಾಯಾಧಿಕರಣ ತೀರ್ಪಿನ ಅಧಿಸೂಚನೆಗೆ ತಕ್ಷಣವೇ ಕ್ರಮ ಕೈಗೊಳ್ಳಬೇಕು. ರಾಜ್ಯದ ಜನ ಬಿಜೆಪಿ ಹಾಗೂ ಜೆಡಿಎಸ್ ಪಕ್ಷಕ್ಕೆ 20 ಕ್ಕೂ ಹೆಚ್ಚು ಸ್ಥಾನಗಳನ್ನು ಗೆಲ್ಲಿಸಿಕೊಟ್ಟಿದ್ದಾರೆ. ಕೇಂದ್ರದಲ್ಲಿ ಬಿಜೆಪಿ ಸರ್ಕಾರ 3ನೇ ಬಾರಿಗೆ ಅಧಿಕಾರಕ್ಕೆ ಬರಲು ಕರ್ನಾಟಕದ ಕೊಡುಗೆ ಮಹತ್ವದ್ದಾಗಿದೆ. ಆದಾಗ್ಯೂ ಬಿಜೆಪಿ ಸಂಸದರು ರಾಜ್ಯದ ಪರವಾಗಿ ದನಿ ಎತ್ತುತ್ತಿಲ್ಲ ಎಂದು ಆಕ್ಷೇಪಿಸಿದರು.

ಎಲ್ಲಾ ಸಂಸದರು ಒಟ್ಟಾಗಿ ನೀರಾವರಿ ಯೋಜನೆ ಪರವಾಗಿ ದನಿಯೆತ್ತಿ ಅನುಮತಿ ಕೊಡಿಸಿದರೆ ರೈತರಿಗೆ ಅನುಕೂಲವಾಗಲಿದೆ. ಈ ನಿಟ್ಟಿನಲ್ಲಿ ಕೇಂದ್ರ ಸಚಿವರು, ಸಂಸದರು, ರಾಜ್ಯ ಸರ್ಕಾರ ಒಟ್ಟಾಗಿ ಶ್ರಮಿಸಬೇಕು ಎಂದು ಕರೆ ನೀಡಿದರು. ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೆವಾಲ ಬೆಂಗಳೂರಿನಲ್ಲಿ ಅಧಿಕಾರಿಗಳ ಜೊತೆ ಸಭೆ ನಡೆಸಿರುವ ಬಗ್ಗೆ ನನಗೆ ಮಾಹಿತಿ ಇಲ್ಲ. ಸಹಕಾರ ಸಚಿವ ಕೆ.ಎನ್.ರಾಜಣ್ಣ ಹೇಳಿದ್ದಾರೆ ಎಂದರೆ ಅವರಿಗೆ ಮಾಹಿತಿ ಇರಬಹುದು. ಅವರು ಬಹಳ ಹಿರಿಯರು. ಅಷ್ಟು ದೊಡ್ಡ ಮಂತ್ರಿಯಾದ ಮೇಲೆ ಎಲ್ಲಾ ರೀತಿಯ ಮಾಹಿತಿಗಳೂ ಅವರಿಗೆ ಇರುತ್ತದೆ. ನಾನು ಸಣ್ಣ ಕಾರ್ಯಕರ್ತ ನನಗೆ ಮಾಹಿತಿ ಇಲ್ಲ ಎಂದು ಲೇವಡಿ ಮಾಡಿದರು.


**ಯಾವ ಪುರುಷಾರ್ಥಕ್ಕೆ ಕೇಂದ್ರ ಸಚಿವ**

ಪ್ರಹ್ಲಾದ್ ಜೋಷಿ ಕೇಂದ್ರ ಸರ್ಕಾರದಲ್ಲಿ ಕಳೆದ 10 ವರ್ಷಗಳಿಂದ ಸಚಿವರಾಗಿದ್ದಾರೆ. ಅವರದೇ ಲೋಕಸಭಾ ಕ್ಷೇತ್ರ ಹುಬ್ಬಳ್ಳಿ-ಧಾರವಾಡಕ್ಕೆ ನೀರು ಕೊಡಲು ಕಳಸಾಬಂಡೂರಿ ಯೋಜನೆಯನ್ನು ರೂಪಿಸಲಾಗಿದೆ. ನಾನು ಪ್ರಹ್ಲಾದ್ ಜೋಷಿಯವರನ್ನು ಬಹಳ ಹತ್ತಿರದಿಂದ ಗಮನಿಸಿದ್ದೇನೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಹಾಗೂ ಕೇಂದ್ರ ಜಲಶಕ್ತಿ ಸಚಿವ ಸಿ.ಆರ್ .ಪಾಟೀಲರಿಗೆ ಬಹಳ ಹತ್ತಿರದವರು. ಜೋಷಿ ಮನಸ್ಸು ಮಾಡಿದರೆ ಕಳಸಾ ಬಂಡೂರಿ ಅಣೆಕಟ್ಟೆಗೆ ಅನುಮತಿ ಕೊಡಿಸುವುದು ದೊಡ್ಡ ವಿಷಯವಲ್ಲ. ಆದರೆ ಜೋಷಿಯವರಿಗೆ ಇದು ಬೇಕಾಗಿಲ್ಲ. ಆದರೂ ಜನ ಜೋಷಿಯವರನ್ನೇ ಗೆಲ್ಲಿಸಿಕೊಳ್ಳುತ್ತಾರೆ. ಇದಕ್ಕೆ ನಾವೇನೂ ಮಾಡಲಾಗುವುದಿಲ್ಲ ಎಂದರು.

# ಸಿದ್ದು 10 ವರ್ಷ ಸಿಎಂ ಆಗಿ ಬಿಟ್ಟರೆ ನಾಡದೇವತೆ ಚಾಮುಂಡಿಗಿಂತ ದೊಡ್ಡವರು ಅಂದ್ರೂ ಅಚ್ಚರಿಯಿಲ್ಲ

• ಉದಯವಹಿನಿ, ಮೈಸೂರು

ಸಿಎಂ ಸಿದ್ದರಾಮಯ್ಯ ಮೈಸೂರಿನ ಅಭಿವೃದ್ಧಿಗೆ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರಷ್ಟೇ ಅಥವಾ ಅವರಿಗಿಂತ ಹೆಚ್ಚು ಅನುದಾನ ಕೊಟ್ಟು ಅಭಿವೃದ್ಧಿ ಮಾಡಿದ್ದಾರೆ ಎಂದು ವಿಧಾನ ಪರಿಷತ್ ಸದಸ್ಯ ಯತೀಂದ್ರ ಸಿದ್ದರಾಮಯ್ಯ ಹೇಳಿಕೆಗೆ ಮಾಜಿ ಸಂಸದ ಪ್ರತಾಪ್ ಸಿಂಹ ಮೈಸೂರಿನಲ್ಲಿ ತಿರುಗೇಟು ನೀಡಿದ್ದಾರೆ. ಮಕ್ಕಳಿಗೆ ಆಸ್ತಿ ಮಾಡಿ ಕೊಡಬಹುದು, ತಲೆಯಲ್ಲಿ ಬುದ್ದಿ ತುಂಬಿಸಲು ಆಗಲ್ಲ. ಡಾ. ಯತೀಂದ್ರ ಸಿದ್ದರಾಮಯ್ಯರ ಮಾತಲ್ಲ. ಇದು ಸಿದ್ದರಾಮಯ್ಯ ಅವರ ಅಂತರಾಳದ ಭಾವನೆ ಕೂಡ ಇದು. ಮಹಾರಾಜರ ಕುಟುಂಬದ ಬಗ್ಗೆ ಸಿದ್ದರಾಮಯ್ಯಗೆ ದ್ವೇಷ, ಅಪಥ್ಯ ಭಾವನೆ ಇದೆ. ದೇವರಾಜ ಅರಸುಗಿಂತ ದೊಡ್ಡವರು ನಾನು ಅಂತಾ ಸಿದ್ದರಾಮಯ್ಯ ಹೇಳ್ತಿದ್ದರು. ಈಗ ನಾಲ್ವಡಿ ಕೃಷ್ಣರಾಜ ಮಹಾರಾಜರಿಗಿಂತಾ ದೊಡ್ಡವರಾಗಿದ್ದಾರೆ. 10 ವರ್ಷ ಸಿಎಂ ಆಗಿ ಬಿಟ್ಟರೆ ನಾಡದೇವತೆ ಚಾಮುಂಡಿ ಗಿಂತಾ ದೊಡ್ಡವರು ಆಗಿ ಬಿಡುತ್ತಾರೆ ಎಂದು ವಾಗ್ದಾಳಿ ನಡೆಸಿದರು. ಯತೀಂದ್ರ ಅವರೇ ನಿಮ್ಮಪ್ಪನ ಕೊಡುಗೆ ಏನು ಹೇಳಿ? ಕೆ.ಆರ್. ಆಸ್ಪತ್ರೆಗೆ ಸುಣ್ಣ ಹೊಡೆಸಲು ನಿಮ್ಮಪ್ಪನ ಕೈಯಲ್ಲಿ ಆಗಿಲ್ಲ. ಮೈಸೂರಿಗೆ ನಿಮ್ಮಪ್ಪನ ಕೊಡುಗೆ ಏನು ಹೇಳಿ? ನಿಮ್ಮ ಅಮ್ಮ ಅಪ್ಪ ಸೇರಿ ಮೂಡದಲ್ಲಿ ಸೈಟ್ ಹೊಡೆದರು ಅದೇನಾ ನಿಮ್ಮ ಅಪ್ಪನಾ ಕೊಡುಗೆ? ನಾಲ್ವಡಿ ಮಹಾರಾಜರು ನಾಡ ಬೆಳಗಿದರು. ಶುದ್ದ ಕುಡಿಯುವ ನೀರಿನ ಘಟಕ ಕಟ್ಟಿ ಜಲಾಶಯ ಕಟ್ಟಿದ ರೀತಿ ಪೋಸ್ ಕೊಡುವುದು ಬಿಡಿ. ವರ್ಗಾವಣೆಯಲ್ಲಿ ಒಳ್ಳೆಯ ಕಮಾಹಿ ಮಾಡಿಕೊಂಡು ಅರಾಮಾಗಿ ಇದ್ದೀರಿ. ಯತೀಂದ್ರ ಅವರೇ ನಿಮ್ಮ ಅಪ್ಪನ ಕೊಡುಗೆ ಏನು ಹೇಳಿ. ಉಡಾಫೆ ಮಾತಾಡಿಕೊಂಡು ಓಡಾಡಿದ್ದೆ ಸಿಎಂ ಸಿದ್ದರಾಮಯ್ಯ ಸಾಧನೆ ಎಂದು ಟೀಕಿಸಿದರು.



> ಅಭಿವೃದ್ಧಿ ಬಗ್ಗೆ ಚರ್ಚೆಗೆ ಸಿಎಂ ಪಂಥಾಹ್ವಾನ ವಿಚಾರವಾಗಿ, ಸಿಎಂ ಅವರೇ ವೇದಿಕೆ ಸಿದ್ಧ ಮಾಡಿ. ನಾವು ಬರ್ತೀವಿ. ಚರ್ಚೆ ಮಾಡಿಯೇ ಬಿಡೋಣ. ಕಲಘಟಗಿ ಲಾಡು, ಮರಿ ಖರ್ಗೆ, ನಿಮ್ಮ ಮಗ ಯತೀಂದ್ರ ಎಲ್ಲರನ್ನೂ ಕರೆದುಕೊಂಡು ಬನ್ನಿ.
>
> – ಪ್ರತಾಪ್ ಸಿಂಹ, ಮಾಜಿ ಸಂಸದ

# ಲಿಂಗಾಯತರನ್ನು ಒಡೆಯಲು ಹುನ್ನಾರ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಗುಬ್ಬಿ

ಬಸವಣ್ಣ ಅವರನ್ನು ಸಾಂಸ್ಕೃತಿಕ ಪ್ರತಿನಿಧಿ ಎಂದು ಘೋಷಿಸಿರುವ ಸರ್ಕಾರ ಯಾವುದೇ ಅನುದಾನ ನೀಡದೆ ತಾರತಮ್ಯ ಎಸಗುತ್ತಿದೆ. ಪ್ರತಿ ತಾಲ್ಲೂಕಿನಲ್ಲಿಯೂ ಶರಣ ಭವನ, ಬಸವ ಭವನ ನಿರ್ಮಾಣಕ್ಕೆ ಸರ್ಕಾರ ಮುಂದಾಗಬೇಕು ಒಂದು ಒತ್ತಾಯಿಸಿದರು. ಅಖಿಲ ಭಾರತ ವೀರಶೈವ- ಲಿಂಗಾಯತ ಮಹಾಸಭಾ ರಾಜ್ಯ ಕಾರ್ಯದರ್ಶಿ ಎಸ್.ಆರ್. ನಟರಾಜು ಮಾತನಾಡಿ, ವೀರಶೈವ- ಲಿಂಗಾಯತರನ್ನು ಕೇಂದ್ರದ ಹಿಂದುಳಿದ ವರ್ಗಗಳ ಪಟ್ಟಿಗೆ ಸೇರಿಸದಿರುವುದರಿಂದ ಕೇಂದ್ರ ಸರ್ಕಾರದ ಯಾವುದೇ ಉದ್ಯೋಗ ಹಾಗೂ ಶೈಕ್ಷಣಿಕ ಸಂಸ್ಥೆಗಳಲ್ಲಿ ಸಮುದಾಯದವರು ಸ್ಥಾನ ಪಡೆಯಲು ಸಾಧ್ಯವಾಗುತ್ತಿಲ್ಲ. ಮಹಾಸಭಾಕ್ಕೆ ತಾಲ್ಲೂಕಿನಲ್ಲಿ ಹೆಚ್ಚು ಸದಸ್ಯರನ್ನು ನೋಂದಣಿ ಮಾಡುವ ಮೂಲಕ ಸಂಘಟನೆಯನ್ನು ಬಲಗೊಳಿಸಬೇಕಿದೆ. ಶೈಕ್ಷಣಿಕ ಸಾಧನೆ ಮಾಡಲು ಅನುಕೂಲವಾಗುವಂತೆ ವಿದ್ಯಾರ್ಥಿಗಳನ್ನು ಉತ್ತೇಜಿಸುವ ಕಾರ್ಯಗಳಿಗೆ ಮಹಾಸಭಾ ಮುಂದಾಗಬೇಕು ಎಂದು ತಿಳಿಸಿದರು.

ಸಾವಿರಾರು ವರ್ಷಗಳ ಇತಿಹಾಸವಿರುವ ವೀರಶೈವ- ಲಿಂಗಾಯತರು ಒಂದೇ ಆಗಿದ್ದರೂ ಕೆಲವರು ಸಮುದಾಯವನ್ನು ಒಡೆಯಲು ಹುನ್ನಾರ ನಡೆಸುತ್ತಿರುವುದು ದುರಾದೃಷ್ಟಕರ ಎಂದು ಅಖಿಲ ಭಾರತ ವೀರಶೈವ-ಲಿಂಗಾಯತ ಮಹಾಸಭಾದ ಅಧ್ಯಕ್ಷ ಶಂಕರ ಮಹಾದೇವ ಬಿದರಿ ಹೇಳಿದರು. ಬಸವಾದಿ ಶರಣರ ಬಗ್ಗೆ ಬೇರೆಯವರು ಸಮುದಾಯಕ್ಕೆ ಹೇಳಿಕೊಡುವ ಅಗತ್ಯವಿಲ್ಲ. ಸಮುದಾಯದ ಸ್ವಾಮೀಜಿ ಸಮುದಾಯದಲ್ಲಿ ಒಡಕು ಮೂಡಿಸದೆ, ಒಗ್ಗಟ್ಟು ಮೂಡಿಸಬೇಕು ಎಂದು ತಿಳಿಸಿದರು. ಬಸವಾದಿ ಶರಣರ ಆಶಯದಂತೆ ಸಮುದಾಯದಲ್ಲಿರುವ ಎಲ್ಲಾ ಹುಳುಕುಗಳನ್ನು ತೆಗೆದು ಆದರ್ಶ ಸಮಾಜ ನಿರ್ಮಾಣಕ್ಕೆ ಎಲ್ಲರೂ ಮುಂದಾಗಬೇಕಿದೆ. ಗ್ರಾಮೀಣ ಭಾಗಗಳಲ್ಲಿ ವೀರಶೈವ ಲಿಂಗಾಯತ ಧರ್ಮದ ಸಿದ್ಧಾಂತಗಳನ್ನು ಪ್ರಚುರ ಪಡಿಸುವ ಮೂಲಕ ಸಮುದಾಯದವರಲ್ಲಿ ಜಾಗೃತಿ ಮೂಡಿಸಬೇಕಿದೆ ಎಂದು ಹೇಳಿದರು.

# ಕೇಂದ್ರದಿಂದ 1.50 ಲಕ್ಷ ಟನ್ ರಸಗೊಬ್ಬರದ ಕೊರತೆ

## ಟೀಕೆ ಟಿಪ್ಪಣಿಗಿಂತ ಹೆಚ್ಚಾಗಿ ರೈತರ ಸಮಸ್ಯೆ ಬಗೆಹರಿಸಬೇಕು

• ಉದಯವಾಹಿನಿ, ಬೆಂಗಳೂರು

ನಮಗೆ ಒಟ್ಟು 6 ಲಕ್ಷದ 88 ಸಾವಿರ ಟನ್ ರಸಗೊಬ್ಬರ ಸಪ್ಲೈ ಆಗಬೇಕಿತ್ತು. ಅದರಲ್ಲಿ 5 ಪಕ್ಷದ 27 ಸಾವಿರ ಟನ್ ಸಪ್ಲೈ ಆಗಿದೆ. ಉಳಿದ 1 ಲಕ್ಷದ 50 ಸಾವಿರ ಟನ್ ಬರಬೇಕಿದೆ ಎಂದು ಸಚಿವ ಎನ್.ಚಲುವರಾಯಸ್ವಾಮಿ ಹೇಳಿದರು. ಕಳೆದ ಒಂದೂವರೆ ತಿಂಗಳಿಂದ ಮಳೆ ಚೆನ್ನಾಗಿ ಆಗ್ತಿದೆ ಮುಂಗಾರು ಬೇಗ ಆರಂಭವಾಗಿದೆ ಡ್ಯಾಮ್‌ಗಳು ಬೇಗ ತುಂಬಿದ್ದರಿಂದ ಸ್ವಲ್ಪ ಸಮಸ್ಯೆ ಆಗಿದೆ. ಜೊತೆಗೆ 2 ಲಕ್ಷ ಹೆಕ್ಟೇರ್ ಜಾಸ್ತಿ ಬೇಸಾಯದ ಏರಿಯಾ ಜಾಸ್ತಿ ಆಗಿದೆ. ಈ ಕಾರಣಗಳಿಂದ ರಸಗೊಬ್ಬರಕ್ಕೆ ಬೇಡಿಕೆ ಹೆಚ್ಚಾಗಿದೆ. ಟೀಕೆ ಟಿಪ್ಪಣಿಗಿಂತ ಹೆಚ್ಚಾಗಿ ರೈತರ ಸಮಸ್ಯೆ ಬಗೆಹರಿಸಬೇಕು ಅಂತ ಮುಖ್ಯಮಂತ್ರಿಗಳಿಗೆ ನಾನೇ ಮನವಿ ಮಾಡಿದೆ ಪತ್ರ ಬರೆಯಿರಿ ಅಂತ ಹೇಳಿದೆ. ಆದರೆ ಈ ಸಂದರ್ಭವನ್ನು ಉಪಯೋಗಿಸಿಕೊಂಡು ಜೋಶಿಯವರು ಮಾತನಾಡುತ್ತಿದ್ದಾರೆ ಅಂತ ಅಸಮಾಧಾನ ಹೊರಹಾಕಿದ್ರು.



ನನಗೂ ರಾಜಕೀಯವಾಗಿ 35 ವರ್ಷ ಆಗಿದೆ. ನಾನು ಟೀಕೆ ಮಾಡಬಹುದು, ಆದ್ರೆ ನನ್ನದು ರೈತರ ಇಲಾಖೆ ಟೀಕೆ ಮುಖ್ಯ ಅಲ್ಲ ರೈತರ ಸಮಸ್ಯೆ ಬಗೆಹರಿಸಬೇಕು. ರೈತರು ಆತಂಕ ಪಡಬೇಕಿಲ್ಲ. ಯಾವ್ಯಾವಾಗ ಏನು ಬೇಕೋ ಅದನ್ನ ತಲುಪಿಸುತ್ತೇವೆ. ಎಲ್ಲರೂ ಸಮಾಧಾನದಿಂದ ಇರಿ, 2 ದಿನ ಬರುವುದು ತಡವಾದ್ರೆ, 3ನೇ ದಿನ 4ನೇ ದಿನ ತರಿಸಿಕೊಡ್ತೇವೆ. ಜೊತೆಗೆ ನ್ಯಾನೋ ಯೂರಿಯಾ ಸಹ ಇಳುವರಿಗೆ ಒಳ್ಳೆಯದು ರೈತರು ಯಾವುದೆ ಘರ್ಷಣೆ ಮಾಡಿಕೊಳ್ಳುವುದು ಬೇಡ ಅಂತ ಸಲಹೆ ನೀಡಿದರು.

### ಇರಾನ್‌ನ ಯುದ್ಧದ ಕಾರಣಕ್ಕೆ ಯೂರಿಯಾ ಸಪ್ಲೈ ಬರ್ತಿಲ್ಲ

ನಾನೇ ಜೋಶಿಯವರಿಗೆ ಪತ್ರ ಬರೆದಿದ್ದೇನೆ. ರಾಜ್ಯದ ಎಲ್ಲಾ ಸಂಸದರಿಗೂ ಹಾಗೂ ರಾಜ್ಯ ಪ್ರತಿನಿಧಿಸುವ ಸಚಿವರಿಗೆ ಪತ್ರ ಬರೆದಿದ್ದೇನೆ. ಆದ್ರೆ ಅದರ ಕಡೆ ಗಮನ ಹರಿಸದೇ ಸಿದ್ದರಾಮಯ್ಯರ ಬಗ್ಗೆ ಟೀಕೆ ಮಾಡಿದ್ದಾರೆ. ಜೋಶಿಯವರು ಕೃಷಿ ವಿಚಾರದಲ್ಲಿ ಹೀಗೆಲ್ಲಾ ರಾಜಕಾರಣ ಮಾಡ್ತಾರೆ ಅಂತ ನಾನು ಅಂದುಕೊಂಡಿರಲಿಲ್ಲ. ರಸಗೊಬ್ಬರವನ್ನ ಟೈಮ್ ಟು ಟೈಮ್ ಕೊಡ್ತಾರೆ. ನಾವು ಕಳೆದ ಬಾರಿ ಹೆಚ್ಚು ದಾಸ್ತಾನು ಮಡಿಕೊಳ್ಳುತ್ತಿದ್ದೆವು. ಆದರೆ ಕೇಂದ್ರ ಸರ್ಕಾರದಲ್ಲಿ 2-3 ಪ್ರಾಬ್ಲಂ ಇದೆ. ಇರಾನ್‌ನ ಯುದ್ಧದ ಕಾರಣಕ್ಕೆ ಯೂರಿಯಾ ಸಪ್ಲೈ ಬರ್ತಿಲ್ಲ, ಚೀನಾದಿಂದ ಸಂಪೂರ್ಣ ಸ್ಥಗಿತವಾಗಿದೆ. ರಾಷ್ಟ ಮಟ್ಟದಲ್ಲಿ ಉತ್ಪಾದನೆ ಕಡಿಮೆ ಆಗಿದೆ. ಇದೆಲ್ಲ ಕೇಂದ್ರ ಸರ್ಕಾರದವರೆ ಕೊಡಬೇಕು ಅಂತ ಹೇಳಿದರು.



> ನಾವು ಟೀಕೆ ಟಿಪ್ಪಣಿಗೆ ಹೋಗಲಿಲ್ಲ. ಹಳೇ ಬ್ಯಾಲೆನ್ಸ್ ಸೇರಿ ತಗೆದುಕೊಂಡು ರೈತರಿಗೆ ಕೊಡುವ ಪ್ರಯತ್ನ ಮಾಡುತ್ತಿದ್ದೇವೆ. ರೈತರಿಗೆ ನ್ಯಾನೋ ಯೂರಿಯಾ ಬಳಸಲು ಸಹಾ ಹೇಳಿದ್ದೇವೆ. ಅವರು ಸಹ ಹೋಗಿ ನಡ್ಡಾ ಅವರ ಜೊತೆ ಕುಳಿತು ಎಷ್ಟು ಸಾಧ್ಯವೋ ಅಷ್ಟು ಬೇಗ ಸಪ್ಲೈ ಕೊಡಿ ಅಂತ ಹೇಳೋದು ಬಿಟ್ಟು ಟೀಕೆ ಟಿಪ್ಪಣಿ ಮಾಡಿದರೆ ಹೇಗೆ?.
>
> -ಎನ್.ಚಲುವರಾಯಸ್ವಾಮಿ, ಸಚಿವ

# ರಸ್ತೆ ವಿಸ್ತರಣೆ; ಒಲೈಕೆ ರಾಜಕಾರಣ ಮಾಡುವುದಿಲ್ಲ: ಶಾಸಕ

• ಉದಯವಾಹಿನಿ, ಮಂಚೇನಹಳ್ಳಿ

ಬಜಾರ್ ರಸ್ತೆ ಮತ್ತು ಗಂಗಮ್ಮನ ಗುಡಿ ರಸ್ತೆ ವಿಸ್ತರಣೆ ಮಾಡಲಾಗುವುದು. ನಾನು ಓಲೈಕೆ ರಾಜಕಾರಣ ಮಾಡುವುದಿಲ್ಲ ಎಂದು ಶಾಸಕ ಪ್ರದೀಪ್ ಈಶ್ವರ್ ತಿಳಿಸಿದರು. ತಾಲ್ಲೂಕಿನ ವರವಣೆ ಗ್ರಾಮದಲ್ಲಿ ನಮ್ಮ ಊರಿಗೆ ನಮ್ಮ ಶಾಸಕ ಕಾರ್ಯಕ್ರಮ ನಡೆಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದರು. ಸರ್ಕಾರಿ ರಸ್ತೆಯಲ್ಲಿ ಮಳಿಗೆಗಳನ್ನು ನಿರ್ಮಿಸಿದ್ದಾರೆ. ಒತ್ತುವರಿ ತೆರವುಗೊಳಿಸಿ ಎಂದು ಹೈಕೋರ್ಟ್ ಈ ಹಿಂದೆಯೇ ಆದೇಶಿಸಿದೆ.

ಹೈಕೋರ್ಟ್ ಆದೇಶ ಜಾರಿಗೊಳಿಸುತ್ತೇವೆ. 45 ದಿನಗಳ ಕಾಲ ಕಾದು ನೋಡಲಾಗುವುದು. ಒತ್ತುವರಿದಾರರು ಅವರಾಗಿಯೇ ತೆರವುಗೊಳಿಸದಿದ್ದರೆ ಜೆಸಿಬಿ ಕೊಂಡೊಯ್ದು ತೆರವುಗೊಳಿಸುತ್ತೇವೆ ಎಂದು ಎಚ್ಚರಿಸಿದರು. ಬಜಾರ್ ರಸ್ತೆ, ಗಂಗಮ್ಮನ ಗುಡಿ ರಸ್ತೆ ವಿಸ್ತರಣೆಗೆ ಎರಡು ಬಾರಿ ಗುರುತು ಹಾಕಲಾಗಿತ್ತು. ವಿಸ್ತರಣೆಗೆ 8 ಕೋಟಿ ಅನುದಾನ ಅಗತ್ಯವಿತ್ತು. ಈಗ ಸರ್ಕಾರ ನಮಗೆ 50 ಕೋಟಿ ಅನುದಾನ ನೀಡುತ್ತಿದೆ.



ಉದಯವಾಹಿನಿ ಚಿತ್ರ

ಇದರಲ್ಲಿ 7 ಕೋಟಿಯಿಂದ 8 ಕೋಟಿಯನ್ನು ರಸ್ತೆ ವಿಸ್ತರಣೆಗೆ ಬಳಸಲಾಗುವುದು. ನಗರಸಭೆಯ ಬಳಿ ಇಷ್ಟು ಹಣ ಇಲ್ಲ ಎಂದು ಹೇಳಿದರು. 2007ರಲ್ಲಿ ಎಂ.ಜಿ ರಸ್ತೆ ವಿಸ್ತರಣೆ ಬಗ್ಗೆ ಮಾತುಗಳು ಕೇಳಿದ್ದವು. ಆದರೆ ಸಾಧ್ಯವಾಗಿರಲಿಲ್ಲ. ನಾನು ಅಧಿಕಾರಕ್ಕೆ ಬಂದೇ ವರ್ಷದಲ್ಲಿ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳ ಸಭೆ ನಡೆಸಿ ವಿಸ್ತರಣೆಗೆ ಚಾಲನೆ ನೀಡಿದ್ದೇನೆ ಎಂದು ಹೇಳಿದರು. ಈ ಹಿಂದೆ ವರವಣೆ ಗ್ರಾಮಕ್ಕೆ ಭೇಟಿ ನೀಡಿದ್ದ ವೇಳೆ ಜನರು ರಸ್ತೆ ಒತ್ತುವರಿಯ ಸಮಸ್ಯೆಯ ಬಗ್ಗೆ ತಿಳಿಸಿದ್ದರು. ನಾಲ್ಕು ಗುಂಟೆ ರಸ್ತೆ ಒತ್ತುವರಿ ತೆರವುಗೊಳಿಸಿ ಜನರಿಗೆ ಅನುಕೂಲ ಮಾಡಿಕೊಡಲಾಗಿದೆ. ಜನರ ನಂಬಿಕೆ ಉಳಿಸಿಕೊಳ್ಳುವ ಕೆಲಸ ಮಾಡುವೆ. ಸ್ಮಶಾನಕ್ಕೆ ರಸ್ತೆ, ಚರಂಡಿ ಸೌಲಭ್ಯ ಕಲ್ಪಿಸಿಕೊಡುವೆ ಎಂದು ಹೇಳಿದರು.

ಮಂಚೇನಹಳ್ಳಿ ತಾಲ್ಲೂಕಿನ 40 ಹಳ್ಳಿಗಳಿಗೆ ಈಗಾಗಲೇ ಭೇಟಿ ನೀಡಿದ್ದೇನೆ. ಹಲವು ಹಳ್ಳಿಗಳಲ್ಲಿ ರಸ್ತೆ ಮಾಡಿಸಿದ್ದೇನೆ. ವೈದ್ಯಕೀಯ ಕಾಲೇಜು, ಎರಡು ಅಂತಸ್ತಿನ ಕಟ್ಟಡಗಳನ್ನು ಕಟ್ಟುವುದೇ ಅಭಿವೃದ್ಧಿಯಲ್ಲ. ಜನರಿಗೆ ಮೂಲಸೌಕರ್ಯಗಳನ್ನು ಕಲ್ಪಿಸಬೇಕು ಎಂದರು.


> ನಗರದ ಅಭಿವೃದ್ಧಿ ದೃಷ್ಟಿಯಿಂದ ಬಜಾರ್ ರಸ್ತೆ, ಗಂಗಮ್ಮನಗುಡಿ ರಸ್ತೆ ವಿಸ್ತರಣೆ ಅಗತ್ಯ. ರಸ್ತೆ ಕಿರಿದಾದ ಕಾರಣ ಜನರಿಗೆ ಸಮಸ್ಯೆ ಆಗುತ್ತಿದೆ. ಜನರಿಗೆ ಒಳ್ಳೆಯದನ್ನು ಮಾಡಲು 20, 30 ವರ್ಷ ಬೇಕಾಗಿಲ್ಲ. ನನ್ನ ಅಧಿಕಾರ ಅವಧಿಯ ಐದು ವರ್ಷದಲ್ಲಿಯೇ ಒಳ್ಳೆಯ ಕೆಲಸ ಮಾಡುವೆ ಎಂದರು.

# ಹುಣಸನಹಳ್ಳಿ ಗ್ರಾ.ಪಂ. ಅಧ್ಯಕ್ಷಗಾದಿ ಜೆಡಿಎಸ್ ಪಾಲು

• ಉದಯವಾಹಿನಿ, ರಾಮನಗರ

ತಾಲ್ಲೂಕಿನ ಕೈ ಲಾಂಚ ಹೋಬಳಿಯ ಹುಣಸನಹಳ್ಳಿ ಗ್ರಾಮ ಪಂಚಾಯಿತಿ ನೂತನ ಅಧ್ಯಕ್ಷರಾಗಿ ಜೆಡಿಎಸ್ ಬೆಂಬಲಿತ ಕೆ.ಪಿ. ದೊಡ್ಡಿಯ ಕೆ.ವಿ. ಪ್ರಕಾಶ್ ಆಯ್ಕೆಯಾದರು. ಹಿಂದಿನ ಅಧ್ಯಕ್ಷರ ರಾಜೀನಾಮೆಯಿಂದ ತೆರವಾಗಿದ್ದ ಸ್ಥಾನಕ್ಕೆ ಪಂಚಾಯಿತಿ ಸಂಘದ ಕಚೇರಿಯಲ್ಲಿ ಚುನಾಣೆಯಿತು ನಡೆಯಿತು. ಜೆಡಿಎಸ್ ಬೆಂಬಲಿತ ಕೆ.ವಿ. ಪ್ರಕಾಶ್ ಮತ್ತು ಪುಟ್ಟಸ್ವಾಮಿ, ಕಾಂಗ್ರೆಸ್ ಬೆಂಬಲಿತ ಎಚ್.ಸಿ. ರಾಮಣ್ಣ ನಾಮಪತ್ರ ಸಲ್ಲಿಸಿದ್ದರು. ಪುಟ್ಟಸ್ವಾಮಿ ನಾಮಪತ್ರ ತಿರಸ್ಕೃತವಾದ ಕಾರಣ ಪ್ರಕಾಶ್, ರಾಮಣ್ಣ ಮಧ್ಯೆ ನೇರ ಸ್ಪರ್ಧೆ ನಡೆಯಿತು.

21 ಸದಸ್ಯ ಬಲದ ಪಂಚಾಯಿತಿಯಲ್ಲಿ 7 ಜೆಡಿಎಸ್, 14 ಕಾಂಗ್ರೆಸ್ ಬೆಂಬಲಿತ ಸದಸ್ಯರಿದ್ದಾರೆ. ಚುನಾವಣೆಯಲ್ಲಿ ಪ್ರಕಾಶ್ ಪರವಾಗಿ 11 ಮತ, ರಾಮಣ್ಣ ಪರವಾಗಿ 10 ಮತ ಚಲಾವಣೆಯಾದವು. ಅಂತಿಮವಾಗಿ ಪ್ರಕಾಶ್ ಜಯಭೇರಿ ಬಾರಿಸಿದರು. ನಾಲ್ಕೂವರೆ ವರ್ಷಗಳಿಂದ ಅಧಿಕಾರದಲ್ಲಿದ್ದ ಕಾಂಗ್ರೆಸ್ ಅಧಿಕಾರ ಕಳೆದುಕೊಂಡಿತು. ತೀವ್ರ ಪೈಪೋಟಿಯ ಚುನಾವಣೆಯಲ್ಲಿ ಎರಡೂ ಪಕ್ಷಗಳ



ಉದಯವಾಹಿನಿ ಚಿತ್ರ

ಬೆಂಬಲಿಗರು ಪಂಚಾಯಿತಿ ಬಳಿ ಹೆಚ್ಚಿನ ಸಂಖ್ಯೆಯಲ್ಲಿ ಜಮಾಯಿಸಿದ್ದರು. ತಮ್ಮ ಪಕ್ಷದ ಸದಸ್ಯರು ಅಡ್ಡಮತದಾನ ಮಾಡುವ ಅನುಮಾನ ಇದ್ದಿದ್ದರಿಂದ ಎರಡೂ ಪಕ್ಷದವರು ತಮ್ಮ ಸದಸ್ಯರನ್ನು ಬೇರೆ ಕಡೆ ಇಟ್ಟು, ಚುನಾವಣೆ ಸಮಯಕ್ಕೆ ಸರಿಯಾಗಿ ಕರೆ ತಂದಿದ್ದರು.

ಎಲ್ಲರೂ ಸ್ಥಳಕ್ಕೆ ಬಂದಾಗ ಮಾತಿನ ಚಕಮಕಿಯೂ ನಡೆಯಿತು. ಮುಂಜಾಗ್ರತಾ ಕ್ರಮವಾಗಿ ಸ್ಥಳದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿದ್ದ ಪೊಲೀಸರು ಪರಿಸ್ಥಿತಿ ನಿಯಂತ್ರಿಸಿದರು. ಚುನಾವಣಾಧಿಕಾರಿಯಾಗಿ ಕ್ಷೇತ್ರ ಶಿಕ್ಷಣಾಧಿಕಾರಿ ಬಿ.ಪಿ. ಕುಮಾರ್, ಸಹಾಯಕ ಚುನಾವಣಾಧಿಕಾರಿಯಾಗಿ ಪಿಡಿಒ ಬಿ.ಪಿ. ಕುಮಾರ್ ಕಾರ್ಯನಿರ್ವಹಿಸಿದರು.

# ಮಾಯವಾಗುತ್ತಿವೆ ಮಣ್ಣು, ಮರದ ಸಾಧನ

• ಉದಯವಾಹಿನಿ, ಕೊರಟಗೆರೆ

ಒಂದು ಕಾಲದಲ್ಲಿ ಗ್ರಾಮೀಣ ಬದುಕಿನ ಜೀವನಾಡಿಯಾಗಿದ್ದ ಮಣ್ಣು, ಮರದ ಸಾಧನಗಳು ನಿಧಾನವಾಗಿ ಇತಿಹಾಸದ ಪುಟ ಸೇರುತ್ತಿವೆ. ಮಡಿಕೆ, ಹೊನ್ನಾರು, ಕುಂಟೆ, ಹಲಗು, ಚೆಕ್ಕೆ, ನೇಗಿಲು, ಅಕ್ಕಡಿ, ಬಾಳ್ಳಿ, ಕುಳ, ಗಾಡಿ ಅಚ್ಚು, ಗೂಟ, ಮುಳ್ಳಲುವೆ ಇವೆಲ್ಲವೂ ಗ್ರಾಮೀಣ ಬದುಕಿನಿಂದ ಸಂಪೂರ್ಣವಾಗಿ ಮರೆಯಾಗಿ, ಇತಿಹಾಸ ಸೇರಿವೆ. ರೈತರು ಹೊಲ ಉಳುಮೆಗೆ ಹೊನ್ನಾರು, ನೀರು ಕುಡಿಯಲು ಮಡಿಕೆ, ಅಕ್ಕಿ ಬಡಿಸಲು ಚೆಕ್ಕೆ, ಭತ್ತ ಕುಟ್ಟಲು ಕಡಿ, ಗಂಜಿ, ಹಾಳು, ಮಜ್ಜಿಗೆ ಮೊಸರು ಇಡಲು ನಿಲುವು, ಮತ್ತು ಉಪ್ಪಿನಕಾಯಿಗೆ ಜಾಡಿ ಮರಮುಟ್ಟುಗಳನ್ನು ಕೊರೆಯಲು ಬೈರ್ಗಿ ಬಳಕೆಯಲ್ಲಿದ್ದವು. ಆದರೆ ಈಗ ಪರಿಸ್ಥಿತಿ ಬದಲಾಗಿದೆ. ಯಂತ್ರಸಾಮರ್ಥ್ಯ ಹೆಚ್ಚಾಗಿದೆ. ಪ್ಲಾಸ್ಟಿಕ್, ಸ್ಟೀಲ್ ಪರಿಕರಗಳು ಹಾಸುಹೊಕ್ಕಾಗಿವೆ. ಮಡಿಕೆ ಬದಲಿಗೆ ತಂಬಿಗೆ, ಹೊನ್ನಾರು ಬದಲಿಗೆ ಮೋಟರ್ ಪಂಪ್, ಮಡಿಕೆ ಬದಲಿಗೆ ಪ್ಲಾಸ್ಟಿಕ್ ಡಬ್ಬಿ, ಹಲಗು ಬದಲಿಗೆ ಬೇರೆ ಬೇರೆ ಸಾಧನಗಳು ಬಳಕೆಯಲ್ಲಿವೆ.

ಇಂದಿನ ಪೀಳಿಗೆಗೆ ನೊಗ, ಅಣಸು, ಕುಡ್ಲು, ಗಾಡಿ ಅಚ್ಚು, ಕಣ್ಣಿ, ಪಟ್ಟಕಣ್ಣಿ, ಕಡಾಣಿ, ಕ್ವಾಲ್ಲಿ ಪದಗಳ ಅರ್ಥವೇ ಗೊತ್ತಿಲ್ಲ. ಮನೆಗಳಲ್ಲಿ ಈ ಪರಿಕರಗಳು




ಉದಯವಾಹಿನಿ ಚಿತ್ರ

ಒಣಗಿದ ಮರದ ಬೊಂಬೆಗಳಾಗಿ ಉಳಿದಿವೆ. ಮ್ಯೂಸಿಯಮ್ ಅಥವಾ ಜಾತ್ರೆಯ ಶೋ ಕೌಂಟರ್, ಸಂತೆಗಳಲ್ಲಿ ಅಪರೂಪಕ್ಕೆ ಕಾಣಿಸುತ್ತವೆ. ಬಾಳ್ಳಿಯಲ್ಲಿ ನೇಗಿಲು ಕೆತ್ತನೆ ಸಂಭ್ರಮ, ಮೇಣಿಯಲ್ಲಿ ನೇಗಿಲ ಹೂಡುವ ನೆನಪು, ಕುಡ್ಲಿನಲ್ಲಿ ಬೆಳೆಗಳನ್ನು ಕಟಾವು ಮಾಡುವುದು. ಮೊರ, ಪುಟಿಗೆಗಳಲ್ಲಿ ವಿಂಗಡಿಸುವ ಕಡಿ, ಕಾಳು ಇವುಗಳೆಲ್ಲ ಹಳ್ಳಿ ಮನಸ್ಸಿನ ಋತುಚಕ್ರವಾಗಿತ್ತು. ಇಂದು ಇವನ್ನೆಲ್ಲ ಕೇವಲ ಹಿಂದೆ ಬಳಸಲಾಗುತ್ತಿತ್ತು ಎನಿಸುವ ವಸ್ತುಗಳಾಗಿ ನೋಡಲಾಗುತ್ತಿದೆ.

ಮನೆಯ ಬುಡಕುಟೀರದಿಂದ ಆರಂಭಿಸಿ ಶಾಲಾ ಪಠ್ಯ ಪದ್ಧತಿಯಲ್ಲಿ ಈ ಪರಿಕರಗಳ ಪರಿಚಯವಾಗಬೇಕು. ಹಳ್ಳಿಗಳಲ್ಲಿ ಹಳೆ ವಸ್ತುಗಳ ಪ್ರದರ್ಶನ, ಸಂಗ್ರಹಾಲಯ ಹಾಗೂ ಹಿರಿಯರ ನೆನಪುಗಳ ಬರಹಗಳ ಮೂಲಕ ಅವುಗಳನ್ನು ಸ್ಮರಿಸುವ ಪ್ರಯತ್ನ ಮಾಡಬಹುದು.

# ಸಿದ್ದರಾಮಯ್ಯ ಮಗ ಮನುಷ್ಯ ದ್ವೇಷಿಗಳಂತೆ ಮಾತಾಡ್ತಾರೆ?

• ಉದಯವಾಹಿನಿ, ಮೈಸೂರು



ಸಿದ್ದರಾಮಯ್ಯನವರು ನಾಲ್ವಡಿ ಕೃಷ್ಣರಾಜ ಒಡೆಯರ್ ಅವರಿಗಿಂತ ಹೆಚ್ಚು ಅಭಿವೃದ್ಧಿ ಮಾಡಿದ್ದಾರೆ ಎಂಬ ಯತೀಂದ್ರ ಹೇಳಿಕೆಗೆ ವಿಶ್ವನಾಥ್ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ನಾಲ್ವಡಿ ಕೃಷ್ಣರಾಜ ಒಡೆಯರ್ ಅವರಿಗಿಂತ ಹೆಚ್ಚು ಅಭಿವೃದ್ಧಿ ಎಂದು ಯತೀಂದ್ರ ಹೇಳಿದ್ದು, ಸಿದ್ದರಾಮಯ್ಯನವರ ದುರಹಂಕಾರದ ಪರಮಾವಧಿ. ಸಿದ್ದರಾಮಯ್ಯನವರು ಯಾವಾಗಲೂ ತಮ್ಮ ಬಗ್ಗೆಯೇ ಹೇಳಿಕೊಳ್ಳುತ್ತಾರೆ. ದೇವರಾಜ ಅರಸು ಅವರಿಗಿಂತಲೂ ಉತ್ತಮ ಆಡಳಿತ ನೀಡಿದ್ದೇನೆ ಎನ್ನುತ್ತಾರೆ. ಈ ಅಹಂಕಾರ ಅವರ ಕುಟುಂಬದಲ್ಲಿ ವಂಶಪಾರಂಪರ್ಯವಾಗಿ ಬಂದಿದೆ ಎಂದು ವಿಶ್ವನಾಥ್ ಮೈಸೂರಿನಲ್ಲಿ ಹೇಳಿಕೆ ನೀಡಿದ್ದಾರೆ.

ವಿಧಾನ ಪರಿಷತ್ ಸದಸ್ಯ ಎಚ್. ವಿಶ್ವನಾಥ್ ಅವರು ಸಿದ್ದರಾಮಯ್ಯ, ಅವರ ಕುಟುಂಬದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಸಿದ್ದರಾಮಯ್ಯನವರು ಮತ್ತು ಅವರ ಮಗ ಮನುಷ್ಯ ದ್ವೇಷಿಗಳಂತೆ ಮಾತನಾಡುತ್ತಾರೆ. ನಮ್ಮ ಕಡೆ ಈ ರೀತಿ ಮಾತಾಡುವವರಿಗೆ ಎಚ್‌ಎಂ ಎನ್ನುತ್ತಾರೆ. ಎಚ್‌ಎಂ ಅಂದರೆ ಹುಚ್ಚು ಮುಂಡೇದು ಅಂತ. ಯತೀಂದ್ರ ಸಿದ್ದರಾಮಯ್ಯ ಇನ್ನೂ ಚಿಕ್ಕ ಹುಡುಗ. ಈಗಲೇ ಇಂತಹ ದುರಹಂಕಾರದ ಮಾತುಗಳು ಸರಿಯಲ್ಲ ಎಂದು ಅವರು ಕಿವಿಮಾತು ಹೇಳಿದ್ದಾರೆ. ನಾಲ್ವಡಿಯವರ ಆಡಳಿತವಾಗಲಿ, ದೇವರಾಜ್ ಅರಸು ಅಥವಾ ಎಸ್.ಎಂ. ಕೃಷ್ಣ ಅವರ ಆಡಳಿತಕ್ಕೂ ಸಿದ್ದರಾಮಯ್ಯನವರ ಆಡಳಿತ ಸಮನಲ್ಲ ಎಂದು ವಿಶ್ವನಾಥ್ ಹೇಳಿದ್ದಾರೆ. ಸಿದ್ದರಾಮಯ್ಯ ಈ ರಾಜ್ಯಕ್ಕೆ ಏನು ಕೊಡುಗೆ ನೀಡಿದ್ದಾರೆ ಮೊದಲು ಹೇಳಲಿ ಎಂದು ಪ್ರಶ್ನಿಸಿದ್ದಾರೆ.

ಹಿಂದೆ ಸಿದ್ದರಾಮಯ್ಯನವರು, ಮಹಾರಾಜರು ಅವರ ಅಪ್ಪನ ಮನೆಯಿಂದ ಹಣ ತಂದು ಅಭಿವೃದ್ಧಿ ಮಾಡಿದ್ದಾರಾ ಎಂದು ಕೇಳಿದ್ದರು. ಈಗ ಸಿದ್ದರಾಮಯ್ಯನವರು ಅವರ ಅಪ್ಪನ ಮನೆಯಿಂದ ಹಣ ತಂದು ಅಭಿವೃದ್ಧಿ ಮಾಡುತ್ತಿದ್ದಾರಾ ಎಂದು ವಿಶ್ವನಾಥ್ ಪ್ರಶ್ನಿಸಿದ್ದಾರೆ.

**ಹೋಲಿಕೆ ಮಾಡೋದು ತಪ್ಪು:** ಸಿದ್ದರಾಮಯ್ಯನವರ ಮಗ ಈ ದೌಲತ್ ಗಿರಿಯನ್ನು ಬಿಡಬೇಕು ಎಂದು ವಿಶ್ವನಾಥ್ ಆಗ್ರಹಿಸಿದ್ದಾರೆ. ನಾಲ್ವಡಿ ಕೃಷ್ಣರಾಜ ಒಡೆಯರ್ ಅವರಿಗೆ ಹೋಲಿಕೆ ಮಾಡುವಂತಹ ರಾಜಕಾರಣಿ ಈ ದೇಶದಲ್ಲಿಯೇ ಇಲ್ಲ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ. ಸಿದ್ದರಾಮಯ್ಯನವರ ಕುಟುಂಬದ ದುರಹಂಕಾರದ ಬಗ್ಗೆ ಅವರು ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

### ಜಾತಿಗಣತಿ ಮಾಡೋ ಯೋಗ್ಯತೆ ಇಲ್ಲ

ರಾಜ್ಯ ಸರ್ಕಾರಕ್ಕೆ ಜಾತಿ ಗಣತಿ ಮಾಡುವ ಯೋಗ್ಯತೆ ಇಲ್ಲ. ಕಾಂಗ್ರೆಸ್ ಸರ್ಕಾರ ಈ ಹಿಂದೆ ಮಾಡಿದ್ದ ಕಾಂತರಾಜ್ ವರದಿಯನ್ನು ಕಡೆಗಣಿಸಿದೆ. ಈಗ ಆ ವರದಿ ಕಳೆದು ಹೋಗಿದೆ ಎಂದು ಯದುವೀರ್ ಒಡೆಯರ್ ಹೇಳಿದ್ದಾರೆ. ಕೇಂದ್ರ ಸರ್ಕಾರ ನಿಯಮ ಪ್ರಕಾರ ಜಾತಿ ಗಣತಿ ಮಾಡುತ್ತಿದೆ. ಹಾಗಾಗಿ ರಾಜ್ಯ ಸರ್ಕಾರವು ಜಾತಿ ಗಣತಿ ಮಾಡುವ ಅವಶ್ಯಕತೆ ಇಲ್ಲ. ಕೇಂದ್ರದಲ್ಲಿ ಹಲವು ವರ್ಷ ಅಧಿಕಾರದಲ್ಲಿದ್ದ ಕಾಂಗ್ರೆಸ್, ಜಾತಿ ಗಣತಿ ಮಾಡಲಿಲ್ಲ. ಈಗ ಸುಮ್ಮನೆ ರಾಜಕಾರಣ ಮಾಡುತ್ತಿದ್ದಾರೆ. ಕೇಂದ್ರವೇ ಜಾತಿ ಗಣತಿ ಮಾಡುವಾಗ ರಾಜ್ಯ ಸರ್ಕಾರ ಜಾತಿ ಗಣತಿ ಮಾಡುವ ಅವಶ್ಯಕತೆ ಇಲ್ಲ ಎಂದರು.

ಸಿದ್ದರಾಮಯ್ಯನವರು ತಮ್ಮ ಆಡಳಿತದ ಬಗ್ಗೆ ಹೇಳಿಕೊಳ್ಳುವ ಮುನ್ನ ರಾಜ್ಯಕ್ಕೆ ಅವರ ಕೊಡುಗೆ ಏನು ಎಂಬುದನ್ನು ಸ್ಪಷ್ಟಪಡಿಸಬೇಕು ಎಂದು ಒತ್ತಾಯಿಸಿದ್ದಾರೆ.

## ಕುಶಾಲನಗರ ಪುರಸಭೆ ವಿಶೇಷ ಸಾಮಾನ್ಯ ಸಭೆಯಲ್ಲಿ ಸದಸ್ಯರ ಆರೋಪ

# ಮಧ್ಯವರ್ತಿಗಳೊಂದಿಗೆ ಸಿಬ್ಬಂದಿ ಶಾಮೀಲು

• ಉದಯವಾಹಿನಿ, ಕುಶಾಲನಗರ

ಪುರಸಭೆ ಕಚೇರಿಯಲ್ಲಿ ನಿರಂತರವಾಗಿ ನಡೆಯುತ್ತಿರುವ ಮಧ್ಯವರ್ತಿಗಳ ಹಾವಳಿಗೆ ಕಡಿವಾಣ ಹಾಕಬೇಕು ಎಂದು ಸದಸ್ಯರು ನಡೆದ ವಿಶೇಷ ಸಾಮಾನ್ಯ ಸಭೆಯಲ್ಲಿ ಆಗ್ರಹಿಸಿದರು. ಇಲ್ಲಿನ ಪುರಸಭೆ ಸಭಾಂಗಣದಲ್ಲಿ ಅಧ್ಯಕ್ಷೆ ಜಯಲಕ್ಷ್ಮಿ ಚಂದ್ರು ಅಧ್ಯಕ್ಷತೆಯಲ್ಲಿ ನಡೆದ ವಿಶೇಷ ಸಾಮಾನ್ಯ ಸಭೆಯಲ್ಲಿ ಮಧ್ಯವರ್ತಿಗಳ ಹಾವಳಿ ಕುರಿತು ಕಾವೇರಿದ ಚರ್ಚೆ ನಡೆಯಿತು. ಸದಸ್ಯ ಆನಂದ್ ಕುಮಾರ್ ಮಾತನಾಡಿ, ಪುರಸಭೆಗೆ ತಮ್ಮ ಕೆಲಸ ಕಾರ್ಯಗಳಿಗೆ ಬರುವ ಸಾರ್ವಜನಿಕರ ಕಡತಗಳ ಕುರಿತು ಸಿಬ್ಬಂದಿಯೇ ಮಧ್ಯವರ್ತಿಗಳಿಗೆ ಮಾಹಿತಿ ನೀಡುತ್ತಿದ್ದಾರೆ.

ಆಗ ಮಧ್ಯವರ್ತಿಗಳು ಅವರನ್ನು ಭೇಟಿ ಮಾಡಿ ಅರ್ಜಿಗೆ ಹಣ ನಿಗದಿ ಮಾಡಿ ಕೆಲಸ ಮಾಡಿಸಿಕೊಡುವ ಕೆಲಸ ಆಗುತ್ತಿದೆ. ಈ ಕುರಿತು ಸಾರ್ವಜನಿಕರಿಂದಲೂ ದೂರುಗಳು ಬಂದಿವೆ. ಮಧ್ಯವರ್ತಿಗಳು ಬೆಳಿಗ್ಗೆಯಿಂದ ಸಂಜೆವರೆಗೂ ಏಕೆ ಪಂಚಾಯಿತಿ ಕಚೇರಿಯಲ್ಲಿ ಇರುತ್ತಾರೆ. ಅವರು ಕುಶಾಲನಗರದ ಆಸ್ತಿಯನ್ನು ಗುತ್ತಿಗೆ ಪಡೆದುಕೊಂಡಿದ್ದಾರೆಯೇ ಎಂದು ಪ್ರಶ್ನಿಸಿದರು.

ಮಧ್ಯವರ್ತಿಗಳ ಕೆಲಸ ಕಾರ್ಯಗಳಿಗೆ ಹೆಚ್ಚಿನ ಕಾಳಜಿ, ಗೌರವ ತೋರುವ ಸಿಬ್ಬಂದಿ ಸದಸ್ಯರಿಗೆ ಮಾತ್ರ ಗೌರವ ನೀಡುತ್ತಿಲ್ಲ. ಇದರ ವಿರುದ್ಧ ಮಾತನಾಡುವ ಸದಸ್ಯರ ಕೊಲೆಗೆ ಸಂಚು ರೂಪಿಸುವ ಆತಂಕ ಕೂಡ ಇದೆ. ಮುಂದೆ ಏನಾದ್ರು ಅನಾಹುತ ನಡೆದರೆ ಅದಕ್ಕೆ ಅಧ್ಯಕ್ಷೆ ಹಾಗೂ ಮುಖ್ಯಾಧಿಕಾರಿ ನೇರ ಹೊಣೆ ಆಗಬೇಕಾಗುತ್ತದೆ.



ಉದಯವಾಹಿನಿ ಚಿತ್ರ

> ಪಟ್ಟಣದಲ್ಲಿ ಟ್ರಾಫಿಕ್ ಸಮಸ್ಯೆ ಉಂಟಾಗುತ್ತಿದೆ. ಈ ವಿಚಾರ ಅಜೆಂಡಾದಲ್ಲಿ ಸೇರಿಸುವಂತೆ ಸಲಹೆ ನೀಡಿದ್ದರು ಕ್ರಮ ಕೈಗೊಂಡಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಸಮಾಜ ಕಲ್ಯಾಣ ಇಲಾಖೆ ವತಿಯಿಂದ ತಾಲ್ಲೂಕು ಬಾಬು ಜಗಜೀವನ್‌ರಾಮ್ ಭವನ ನಿರ್ಮಾಣಕ್ಕೆ ಜಾಗ ಕಾಯ್ದಿರಿಸಲು ಕೋರಿ ಬಂದಿರುವ ಪತ್ರದ ಬಗ್ಗೆ ಸದಸ್ಯ ಜೈವರ್ಧನ್ ಗಮನ ಸೆಳೆದರು. ಭವನಕ್ಕೆ 2 ಕೋಟಿ ಅನುದಾನ ನೀಡುತ್ತಿದ್ದು, ಇದನ್ನು ಸದುಪಯೋಗ ಮಾಡಿಕೊಳ್ಳಬೇಕು.
>
> -ಬಿ.ಜೈವರ್ಧನ್, ಸದಸ್ಯ

ಸಿಬ್ಬಂದಿ ವರ್ತನೆ, ಭ್ರಷ್ಟಾಚಾರ ಖಂಡಿಸಿ ನಾನು ರಾಜೀನಾಮೆ ನೀಡಲು ಸಿದ್ದ ಎಂದು ಆನಂದ್ ಕುಮಾರ್ ಹೇಳಿದರು. ಈ ಬಗ್ಗೆ ಮಾತನಾಡಿದ ಮುಖ್ಯಾಧಿಕಾರಿ ಗಿರೀಶ್, 'ಕಚೇರಿಯಲ್ಲಿ ಮಧ್ಯವರ್ತಿಗಳ ಹಾವಳಿ ನಿಯಂತ್ರಣಕ್ಕೆ ಕ್ರಮ ಕೈಗೊಳ್ಳಲಾಗಿದೆ. ಈಗಾಗಲೇ ಎಲ್ಲಾ ಸಿಬ್ಬಂದಿ ಸಭೆ ಕರೆದು ನೋಟಿಸ್ ನೀಡಿ ಎಚ್ಚರಿಕೆ ನೀಡಲಾಗಿದೆ. ನಮ್ಮ ಸೂಚನೆ ಉಲ್ಲಂಘಿಸಿ ಮಧ್ಯವರ್ತಿಗಳೊಂದಿಗೆ ಶಾಮೀಲಾಗುವ ಸಿಬ್ಬಂದಿ ವಿರುದ್ಧ ಶಿಸ್ತುಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು. ಈ ಸ್ವತ್ತು ಖಾತೆ ಮಾಡಿಕೊಡಲು ಸಿಬ್ಬಂದಿ ಅನಗತ್ಯ ವಿಳಂಬ ಮಾಡುತ್ತಿದ್ದಾರೆ ಎಂದು ಸದಸ್ಯ ಪ್ರಕಾಶ್ ದೂರಿದರು. ಸದಸ್ಯ ಪ್ರಮೋದ್ ಮುತ್ತಪ್ಪ ಮಾತನಾಡಿ, ಸಾರ್ವಜನಿಕರ ಅರ್ಜಿಗಳನ್ನು ತ್ವರಿತಗತಿಯಲ್ಲಿ ವಿಲೇವಾರಿ ಮಾಡಬೇಕು. ಅನಗತ್ಯವಾಗಿ ಅವರನ್ನು ಅಲೆದಾಡಿಸಬಾರದು ಎಂದು ಸಲಹೆ ನೀಡಿದರು.

**41 ಫೈಲುಗಳು ಬಾಕಿ**

ಈ ಬಗ್ಗೆ ಪ್ರತಿಕ್ರಿಯಿಸಿದ ಮುಖ್ಯಾಧಿಕಾರಿ ಗಿರೀಶ್, ಪ್ರಸ್ತುತ 41 ಫೈಲುಗಳು ಬಾಕಿ ಇವೆ. ಕಳೆದ ತಿಂಗಳು 70 ಹಾಗೂ ಮೇ ನಲ್ಲಿ 80 ಅರ್ಜಿಗಳನ್ನು ಪೂರ್ಣಗೊಳಿಸಲಾಗಿದೆ ಎಂದರು. ಆಡಳಿತ ಮಂಡಳಿ ಗಮನಕ್ಕೆ ಪುರಸಭಾ ವ್ಯಾಪ್ತಿಯ ರಸ್ತೆಗಳಲ್ಲಿರುವ ಗುಂಡಿಗಳನ್ನು ಮುಚ್ಚುವ 1.5ಕೋಟಿ ವೆಚ್ಚದ ಕಾಮಗಾರಿಗೆ ಅಧ್ಯಕ್ಷರು ಘಟನೋತ್ತರ ಮಂಜೂರಾತಿ ನೀಡಿದ್ದು, ಸದರಿ ಕಾಮಗಾರಿಗೆ ಅನುಮೋದನೆ ನೀಡುವ ವಿಚಾರಕ್ಕೆ ವಿಪಕ್ಷ ಸದಸ್ಯರು ಆಕ್ಷೇಪ ವ್ಯಕ್ತಪಡಿಸಿದರು.

### ಪೌರಕಾರ್ಮಿಕರಿಗೆ ಉಪಾಹಾರದ ಜೊತೆ ಮೊಟ್ಟೆ

ಪೌರಕಾರ್ಮಿಕರಿಗೆ ಬೆಳಿಗ್ಗೆ ಸಮಯದಲ್ಲಿ ನೀಡುತ್ತಿರುವ ಉಪಾಹಾರ ಸಾಕಾಗುತ್ತಿಲ್ಲ. ಪ್ರತಿನಿತ್ಯ ಒಂದೇ ತರದ ತಿಂಡಿ ನೀಡಲಾಗುತ್ತಿದೆ ಎಂದು ಸದಸ್ಯರಾದ ಪ್ರಕಾಶ್ ಶಿವಶಂಕರ್ ನವೀನ್ ಹೆಚ್ಚಿನ ಹಣ ನೀಡಲು ಕ್ರಮ ಕೈಗೊಳ್ಳಬೇಕು ಎಂದರು. ಈ ಬಗ್ಗೆ ಮಾತನಾಡಿದ ಹಿರಿಯ ಆರೋಗ್ಯ ನಿರೀಕ್ಷಕ ಉದಯಕುಮಾರ್ ಸರ್ಕಾರ 35 ಉಪಾಹಾರಕ್ಕೆ ನಿಗದಿ ಮಾಡಿದೆ. ಜೊತೆಗೆ ಮೊಟ್ಟೆಯನ್ನು ನೀಡಲಾಗುತ್ತಿದೆ ಎಂದರು. ಸದಸ್ಯ ಪ್ರಮೋದ್ ಮಾತನಾಡಿ ಪೌರಕಾರ್ಮಿಕರಿಗೆ ಉಪಹಾರ ವ್ಯವಸ್ಥೆಯನ್ನು ಇಂದಿರಾ ಕ್ಯಾಂಟಿನ್‌ಗೆ ವಹಿಸುವ ಸಲಹೆ ನೀಡಿದರು. ಮದ್ಯಪಾನ ಮಾಡಿ ಕಸದ ವಾಹನ ಚಾಲನೆ ಮಾಡಿದ ಆರೋಪ ಎದುರಿಸುತ್ತಿರುವ ಪೌರಕಾರ್ಮಿಕನ ವಿರುದ್ಧ ಕ್ರಮ ಕೈಗೊಳ್ಳಬೇಕು. ಬೀದಿ ನಾಯಿ ಹಾವಳಿಗೆ ಕಡಿವಾಣ ಹಾಕಬೇಕು ಎಂದು ಸದಸ್ಯರು ಒತ್ತಾಯಿಸಿದರು.

ಉದಯವಾಹಿನಿ

ಪ್ರಾದೇಶಿಕ

ಭಾನುವಾರ 27 ಜುಲೈ 2025 | 03

## ಮಿನಿ ನ್ಯೂಸ್

### ಕಾಡಿನಲ್ಲಿ ಜಾನುವಾರುಗಳನ್ನು ಮೇಯಿಸಲು ನಿಷೇಧ; ಆದೇಶಕ್ಕೆ ಖಂಡನೆ

• ಉದಯವಾಹಿನಿ, ಕನಕಪುರ

ಅರಣ್ಯ ಪ್ರದೇಶದಲ್ಲಿ ಜಾನುವಾರುಗಳನ್ನು ಮೇಯಿಸಲು ನಿಷೇಧ ಎಂಬ ಅರಣ್ಯ ಸಚಿವರ ಆದೇಶ ಖಂಡಿಸಿ ರೈತ ಸಂಘ, ಪ್ರಗತಿಪರ ಸಂಘಟನೆಗಳು ಅರಣ್ಯ ಕಚೇರಿ ಮುಂದೆ ಪ್ರತಿಭಟನೆ ನಡೆಸಿದರು. ಕಾಡು ಉಳಿದಿರುವುದು ರೈತರು, ಕಾಡಂಚಿನ ಜನರಿಂದ. ಜಾನುವಾರುಗಳು ಮೇಯುವುದರಿಂದ ಕಾಡು ನಾಶವಾಗುವುದಿಲ್ಲ. ಕಾಡು ಪ್ರಾಣಿಗಳಿಂದ ರೈತರ ಬೆಳೆ ನಾಶವಾಗುತ್ತಿದೆ. ಇದು ಅರಣ್ಯ ಸಚಿವರಿಗೆ ಕಾಣುತ್ತಿಲ್ಲವೇ ಎಂದು ರೈತ ಸಂಘದ ರಾಜ್ಯ ಸಂಚಾಲಕ ಚೀಲೂರು ಮುನಿರಾಜು ಪ್ರಶ್ನಿಸಿದ್ದಾರೆ. ಕಾಡು ಪ್ರಾಣಿಗಳ ದಾಳಿಯಿಂದ ಜನರು ನಿರಂತರ ಸಾವು-ನೋವು ಕಾಣುತ್ತಿದ್ದಾರೆ. ಅದನ್ನು ಇಲಾಖೆ, ಸಚಿವರು ಪರಿಗಣಿಸಿ ಕ್ರಮ ತೆಗೆದುಕೊಳ್ಳಬೇಕು. ಅದನ್ನು ಬಿಟ್ಟು ಕಾಡಿಗೆ ಜಾನುವಾರುಗಳನ್ನು ಬಿಡಬಾರದು ಎಂಬ ಅವೈಜ್ಞಾನಿಕ ಆದೇಶ ಮಾಡಿದ್ದಾರೆಂದು ಆಕ್ರೋಶ ವ್ಯಕ್ತಪಡಿಸಿದರು. ಪ್ರಗತಿಪರ ಸಂಘಟನೆಗಳ ಒಕ್ಕೂಟದ ಅಧ್ಯಕ್ಷ ಕುಮಾರಸ್ವಾಮಿ ಮಾತನಾಡಿ, ಕಾಡು ಪ್ರಾಣಿಗಳಿಗೆ ಅರಣ್ಯದಲ್ಲಿ ನೀರು, ಆಹಾರದ ವ್ಯವಸ್ಥೆ ಮಾಡಿ ಕಾಡಿನಿಂದ ಹೊರಬರದಂತೆ ಕ್ರಮ ವಹಿಸಬೇಕು. ಜೊತೆಗೆ ತಮಿಳುನಾಡಿನ ರೈತರು ಅರಣ್ಯಕ್ಕೆ ಜಾನುವಾರುಗಳನ್ನು ಬಿಡಬಾರದು, ಕರ್ನಾಟಕದವರು ಬಿಡಬಹುದು ಎಂಬ ದ್ವಂದ್ವ ನಿಲುವನ್ನು ಕೈ ಬಿಡಬೇಕು. ಕಾಡಂಚಿನ ಜನರು ಅರಣ್ಯವನ್ನೇ ಅವಲಂಬಿಸಿದ್ದಾರೆ. ಹಾಗಾಗಿ ಕೂಡಲೇ ಈ ಆದೇಶವನ್ನು ವಾಪಸ್ ಪಡೆಯಬೇಕೆಂದು ಆಗ್ರಹಿಸಿದ್ದಾರೆ. ಪ್ರತಿಭಟನೆಕಾರರು ತಮ್ಮ ಒತ್ತಾಯದ ಮನವಿ ಪತ್ರವನ್ನು ಅರಣ್ಯ ಇಲಾಖೆ ಮೂಲಕ ಅರಣ್ಯ ಸಚಿವರು ಮತ್ತು ಸರ್ಕಾರಕ್ಕೆ ಸಲ್ಲಿಸಿದರು.

### 567 ಜನರಿಗೆ ಹಕ್ಕುಪತ್ರ ವಿತರಣೆ

• ಉದಯವಾಹಿನಿ, ಮೇಲುಕೋಟೆ

ಕಂದಾಯ ಇಲಾಖೆಯ ಸೇವೆಗಳು ಜನರಿಗೆ ಸಮರ್ಪಕವಾಗಿ ನಿಗದಿತ ಸಮಯಕ್ಕೆ ಜನರ ಮನೆ ಬಾಗಿಲಿಗೆ ದೊರೆಯುವಂತೆ ಮಾಡಬೇಕು ಎಂಬ ಉದ್ದೇಶದಿಂದ ಪೌತಿ ಖಾತೆ ಆಂದೋಲನ ಹಾಗೂ ಹಕ್ಕು ಪತ್ರ ವಿತರಣೆ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಶಾಸಕ ದರ್ಶನ್ ಪುಟ್ಟಣ್ಣಯ್ಯ ಹೇಳಿದರು. ತಾಲ್ಲೂಕಿನ ರಾಗಿಮುದ್ದನಹಳ್ಳಿಯಲ್ಲಿ ಬುಧವಾರ ನಡೆದ ಕಂದಾಯ ಗ್ರಾಮದ ಪೌತಿ ಖಾತೆ ಆಂದೋಲನ ಕಾರ್ಯಕ್ರಮವನ್ನು ಸಸಿಗೆ ನೀರು ಹಾಕುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿ, ಕಂದಾಯ ಗ್ರಾಮವಾದ ರಾಗಿಮುದ್ದನಹಳ್ಳಿಯಲ್ಲಿ 567 ಹಕ್ಕು ಪತ್ರ ವಿತರಣೆ ಮಾಡಲಾಗುತ್ತಿದೆ. ಕಂದಾಯ ಇಲಾಖೆಯ ಕೆಲಸ ಕಾರ್ಯಗಳನ್ನು ಶೀಘ್ರ ಜನರಿಗೆ ತಲುಪಿಸಲು ತಿಂಗಳಿಗೊಮ್ಮೆ ಪ್ರತಿ ಗ್ರಾಮ ಪಂಚಾಯಿತಿಯಲ್ಲೂ ಕಾರ್ಯಕ್ರಮ ರೂಪಿಸಿ ಸರ್ಕಾರಿ ಕೆಲಸಗಳನ್ನು ಮನೆಮನೆಗೆ ತಲುಪಿಸುವ ಕೆಲಸ ಮಾಡಲಾಗುವುದು ಎಂದು ಹೇಳಿದರು. ಸರ್ಕಾರ ಕಾರ್ಯಕ್ರಮಗಳಿಗೆ ಜನಸ್ಪಂದನೆ ಬಹುಮುಖ್ಯ. ದಾಖಲೆಗಳ ಸಮೇತ ಸರಿಯಾದ ಸಮಯಕ್ಕೆ ಅಧಿಕಾರಿಗಳಿಗೆ ನೀಡಿ ಕೆಲಸ ಮಾಡಿಸಿಕೊಳ್ಳಬೇಕು ಎಂದು ಕರೆ ನೀಡಿದರು. ತಹಶೀಲ್ದಾರ್ ಸಂತೋಷ್ ಮಾತನಾಡಿ, ಕಂದಾಯ ಇಲಾಖೆಯಲ್ಲಿ ಹಲವು ವರ್ಷಗಳಿಂದ ಉಳಿದಿರುವ ರೈತರು, ಬಡವರ ಕೆಲಸಗಳಿಗೆ ಶೀಘ್ರ ಮುಕ್ತಿ ನೀಡುವಂತೆ ಶಾಸಕರು ಸೂಚಿಸಿದ್ದಾರೆ. ತಮ್ಮ ಮನೆಯ, ಜಮೀನಿನ ಯಾವುದೇ ಕೆಲಸ ಕಾರ್ಯಗಳಿಗೆ ಇಲಾಖೆ ಅಧಿಕಾರಿಗಳು ಸಂಪರ್ಕಿಸಿ ಎಂದರು.

### ಆರೋಗ್ಯ, ವಿದ್ಯೆ ದುಬಾರಿ

• ಉದಯವಾಹಿನಿ, ತುಮಕೂರು

ಪ್ರಸ್ತುತ ಕಾಲಘಟ್ಟದಲ್ಲಿ ಮನುಷ್ಯನಿಗೆ ಅತ್ಯಗತ್ಯವಿರುವ ಆರೋಗ್ಯ, ವಿದ್ಯೆ ದುಬಾರಿಯಾಗಿದೆ ಎಂದು ಹಿರೇಮಠ ಅಧ್ಯಕ್ಷ ಶಿವಾನಂದ ಶಿವಾಚಾರ್ಯ ಸ್ವಾಮೀಜಿ ಇಲ್ಲಿ ಆತಂಕ ವ್ಯಕ್ತಪಡಿಸಿದರು. ನಗರ ವೀರಶೈವ ಸಮಾಜ ಸೇವಾ ಸಮಿತಿ, ವೀರಶೈವ ಸಹಕಾರ ಬ್ಯಾಂಕ್, ವೀರಶೈವ ಉಚಿತ ವೈದ್ಯಕೀಯ ಸೇವಾ ಕೇಂದ್ರ, ಜಿಲ್ಲಾ ಅಂಧತ್ವ ನಿವಾರಣಾ ಕೇಂದ್ರ, ಆರೋಗ್ಯ ಇಲಾಖೆ, ಜಿಲ್ಲಾ ಆಸ್ಪತ್ರೆ ಆಶ್ರಯದಲ್ಲಿ ಉಚಿತವಾಗಿ ನೇತ್ರ ತಪಾಸಣೆ ಹಾಗೂ ನೇತ್ರ ಶಸ್ತ್ರಚಿಕಿತ್ಸಾ ಶಿಬಿರ ಉದ್ಘಾಟಿಸಿ ಮಾತನಾಡಿದರು. ಈಗ ಆರೋಗ್ಯ ಕಾಪಾಡಿಕೊಳ್ಳುವುದು ಸವಾಲಾಗಿದೆ. ದೇಹಕ್ಕೆ ವಯಸ್ಸಾದಂತೆ ಕಣ್ಣುಗಳಿಗೂ ವಯಸ್ಸಾಗಿ ಸಮಸ್ಯೆಗಳು ಕಾಣಿಸಿಕೊಳ್ಳುತ್ತವೆ. ಸಕಾಲದಲ್ಲಿ ಕಣ್ಣುಗಳ ತಪಾಸಣೆ ಮಾಡಿಸಿಕೊಂಡು ಚಿಕಿತ್ಸೆ, ಶಸ್ತ್ರಚಿಕಿತ್ಸೆ ಮೂಲಕ ದೃಷ್ಟಿದೋಷ ನಿವಾರಣೆ ಮಾಡಿಕೊಳ್ಳಬಹುದು ಎಂದು ಹೇಳಿದರು. ಸಂಪತ್ತು ದಾನ ಮಾಡುವಂತೆ ಮರಣದ ನಂತರ ನೇತ್ರ ದಾನ ಮಾಡುವ ಮೂಲಕ ಇತರರ ಬಾಳಿಗೆ ಬೆಳಕಾಗಬೇಕು ಎಂದು ಸಲಹೆ ಮಾಡಿದರು.

### ಆ.5ರಿಂದ ಅನಿರ್ದಿಷ್ಟಾವಧಿ ಮುಷ್ಕರ

• ಉದಯವಾಹಿನಿ, ಗೌರಿಬಿದನೂರು

ವಾಟದಹೊಸಹಳ್ಳಿ ಕೆರೆ ನೀರನ್ನು ನಗರಕ್ಕೆ ನೀರು ಹರಿಸಲು ಶಾಸಕರು ಕಳೆದ ವರ್ಷದಿಂದಲೂ ಪ್ರಸ್ತಾಪ ಮಾಡುತ್ತಿದ್ದಾರೆ. ಭೂಮಿ ಪೂಜೆ ನೆರವೇರಿಸಲು ಅವಕಾಶ ನೀಡುವುದಿಲ್ಲ. ಹೋರಾಟ ಮಾಡುತ್ತೇವೆ ಎಂದು ವಾಟದಹೊಸಹಳ್ಳಿ ಕೆರೆ ಅಚ್ಚುಕಟ್ಟುದಾರರ ಸಂಘದ ಅಧ್ಯಕ್ಷ ಮಾಳಪ್ಪ ತಿಳಿಸಿದರು. ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವಾಟದಹೊಸಹಳ್ಳಿ ಮತ್ತು ನಗರಗೆರೆ ಹೋಬಳಿ ಜನರು ಕೃಷಿ ಮತ್ತು ಹೈನುಗಾರಿಕೆಯಿಂದ ಜೀವನ ನಡೆಸುತ್ತಿದ್ದಾರೆ. ಶಾಸಕರು ಎಲ್ಲವನ್ನು ಹಣದಿಂದ ನೋಡುತ್ತಾರೆ. ಎತ್ತಿನ ಹೊಳೆ ನೀರು ಕಾಮಗಾರಿ ಮುಗಿದು ಎರಡು ವರ್ಷ ಕಳೆದಿದೆ. ಆದರೆ ನೀರು ಈವರೆಗೆ ಬಂದಿಲ್ಲ. ಜು.26 ರಂದು ಗುದ್ದಲಿ ಪೂಜೆ ಮಾಡುವುದಾಗಿ ತಿಳಿಸಿದ್ದಾರೆ.

ನಾವು ಹೋರಾಟ ಮಾಡಲು ಸಿದ್ಧತೆ ಮಾಡಿಕೊಂಡಿದ್ದೇವೆ ಎಂದರು. ವಾಟದಹೊಸಹಳ್ಳಿ ಕೆರೆ ನೀರಿನ ಸಂಗ್ರಹಣೆ ಸಾಮರ್ಥ್ಯ ಕಳೆದುಕೊಂಡಿದೆ. ಈ ಬಗ್ಗೆ ಸಣ್ಣ ನೀರಾವರಿ ಇಲಾಖೆಯವರು ತಿಳಿಸಿದ್ದಾರೆ. ಶಂಕು ಸ್ಥಾಪನೆ ದಿನದಂದು ಕಪ್ಪುಪಟ್ಟಿ ಧರಿಸಿ ಪ್ರತಿಭಟನೆ ನಡೆಸಲಾಗುವುದು. ಆ.5ರಂದು ವಾಟದಹೊಸಹಳ್ಳಿಯಿಂದ ನಗರಕ್ಕೆ ಪಾದಯಾತ್ರೆ ಕೈಗೊಂಡು ಅನಿರ್ದಿಷ್ಟಾವಧಿ ಮುಷ್ಕರ ಕೈಗೊಳ್ಳಲಾಗುವುದು ಎಂದರು.

### ನಕಲಿ ಚಿನ್ನ ಅಡವಿಟ್ಟು ಸಾಲ: ವಂಚನೆ

• ಉದಯವಾಹಿನಿ, ಕನಕಪುರ

ಫೈನಾನ್ಸ್ ಕಂಪನಿಯಲ್ಲಿ ನಕಲಿ ಚಿನ್ನಾಭರಣ ಅಡಮಾನವಿಟ್ಟು 5.17 ಲಕ್ಷ ಸಾಲ ಪಡೆದು ವಂಚಿಸಿರುವ ಘಟನೆ ನಗರದಲ್ಲಿ ನಡೆದಿದ್ದು, ಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ನಗರದ ಮಣಪುರಂ ಗೋಲ್ಡ್ ಫೈನಾನ್ಸ್ ಕಂಪನಿಯಲ್ಲಿ ನಕಲಿ ಚಿನ್ನ ಅಡವಿಟ್ಟಿದ್ದು, ಆಡಿಟ್ ವೇಳೆ ಬೆಳಕಿಗೆ ಬಂದಿದೆ. ನಗರದ ಲಕ್ಷ್ಮೀಪುರ ವಾಸಿ ಶ್ವೇತ ಅವರು ಜುಲೈ 7 ರಂದು 51.7 ಗ್ರಾಂ ತೂಕದ ಕತ್ತಿನ ಚೈನ್ ಹಾಗೂ 31.2 ಗ್ರಾಂ ತೂಕದ ಓಲೆ ಜುಮುಕಿ ಮಾಟಿಯನ್ನು ಅಡಮಾನವಿಟ್ಟು 5.17 ಲಕ್ಷ ಹಣ ಸಾಲ ಪಡೆದಿದ್ದರು. ಜುಲೈ 11 ರಂದು ಕಂಪನಿಯ ಆಡಿಟ್ ವೇಳೆ ಚಿನ್ನಾಭರಣ ಪರಿಶೀಲಿಸಿದಾಗ ನಕಲಿ ಚಿನ್ನ ಎಂದು ತಿಳಿದಿದೆ. ಈ ಸಂಬಂಧ ಕಂಪನಿಯ ಹನೂರ್ ಕುಮಾರ್ ಪುರ ಪೊಲೀಸ್ ಠಾಣೆ ದೂರು ನೀಡಿದ್ದು, ಪ್ರಕರಣ ದಾಖಲಾಗಿದೆ.

ಅಂತರಾಳದಿಂದ.. EDITORIAL

# ಸಣ್ಣ ವರ್ತಕರಿಗೆ ಜಿಎಸ್‌ಟಿ ಮನ್ನಾ: ಪಾರದರ್ಶಕ ನೀತಿಯೂ ಅಗತ್ಯ

ರಾಜ್ಯ ವಾಣಿಜ್ಯ ತೆರಿಗೆಗಳ ಇಲಾಖೆಯು ನೋಟಿಸ್ ನೀಡಿದ್ದ 9,000 ಸಣ್ಣ ವರ್ತಕರು ಇಲ್ಲಿಯವರೆಗೂ ಪಾವತಿಸಬೇಕಾಗಿದ್ದ ಜಿಎಸ್‌ಟಿ ಮನ್ನಾ ಮಾಡಲು ರಾಜ್ಯ ಸರ್ಕಾರ ತೀರ್ಮಾನಿಸಿದೆ. ತೆರಿಗೆ ಸಂಗ್ರಹದಲ್ಲಿ ಸರ್ಕಾರ ಪಾರದರ್ಶಕವಾಗಿದ್ದು, ಯಾರಿಗೂ ತೊಂದರೆ ಆಗುವುದಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದ್ದಾರೆ. ವರ್ತಕರ ಅನುಕೂಲಕ್ಕೆ ಸಹಾಯವಾಣಿ ಸಂಖ್ಯೆಗಳನ್ನು ಬಿಡುಗಡೆ ಮಾಡಲಾಗಿದೆ. ಈ ಮೂಲಕ, ಜಿಎಸ್‌ಟಿ ಪಾವತಿಗೆ ಸಂಬಂಧಿಸಿದಂತೆ ಕಳೆದ ಕೆಲವು ದಿನಗಳಿಂದ ಸಣ್ಣ ವ್ಯಾಪಾರಿಗಳು ಮತ್ತು ವರ್ತಕ ಸಮೂಹದಲ್ಲಿ ಉಂಟಾಗಿದ್ದ ಗೊಂದಲ ಹಾಗೂ ಆತಂಕವನ್ನು ಬಗೆಹರಿಸಲು ಅಗತ್ಯವಾಗಿದ್ದ ಕ್ರಮಗಳನ್ನು ಸರ್ಕಾರ ಕೈಗೊಂಡಂತಾಗಿದೆ. ಯುಪಿಐ ಮೂಲಕ ವಾರ್ಷಿಕ 40 ಲಕ್ಷಕ್ಕಿಂತ ಹೆಚ್ಚಿನ ವಹಿವಾಟು ನಡೆಸಿದ್ದ ಬೇಕರಿ, ಹೋಟೆಲ್, ಬೀಡಾ ಅಂಗಡಿ ಮತ್ತು ಟೀ ಅಂಗಡಿ ಮಾಲೀಕರಿಗೆ ವಾಣಿಜ್ಯ ತೆರಿಗೆ ಇಲಾಖೆ ಅಧಿಕಾರಿಗಳು ನೋಟಿಸ್ ನೀಡಿದ್ದರು; ಜಿಎಸ್‌ಟಿ ನೋಂದಣಿ ಮಾಡಿಸಿ ಮತ್ತು ತೆರಿಗೆ ಪಾವತಿಸಿ ಎಂದು ಸೂಚಿಸಿದ್ದರು.




ತೆರಿಗೆ ಇಲಾಖೆಯ ಕ್ರಮವನ್ನು ವಿರೋಧಿಸಿ ವರ್ತಕರು ಪ್ರತಿಭಟನೆ ನಡೆಸಿದ್ದರು. ಕೆಲವು ವರ್ತಕರು ಯುಪಿಐ ವಹಿವಾಟಿನಿಂದ ಹಿಂದೆ ಸರಿದು, ನಗದು ವ್ಯಾಪಾರಕ್ಕೆ ಮುಂದಾಗಿದ್ದರಿಂದ ಗ್ರಾಹಕರೂ ತೊಂದರೆ ಅನುಭವಿಸುವಂತಾಯಿತು. ನಗದು ರಹಿತ ವ್ಯವಹಾರ ಈಗ ಜನಪ್ರಿಯವಾಗಿದ್ದು, ಯುಪಿಐ ಪಾವತಿ ಪದ್ಧತಿಗೆ ಜನಸಾಮಾನ್ಯರೂ ಒಗ್ಗಿಕೊಂಡಿದ್ದಾರೆ. ಮೊಬೈಲ್ ಫೋನ್‌ಗಳ ವ್ಯಾಪಕ ಬಳಕೆಯಿಂದಾಗಿ ಯುಪಿಐ ಮೂಲಕ ಹಣದ ಸರಳ ವಹಿವಾಟು ಸಾಧ್ಯವಾಗಿದೆ. ಆ ಅಭ್ಯಾಸ ಮುಂದುವರಿಯುವುದರಲ್ಲಿ ಗ್ರಾಹಕರಿಗೆ ಹೆಚ್ಚಿನ ಅನುಕೂಲವಿದೆ, ಪಾರದರ್ಶಕ ವಹಿವಾಟಿಗೂ ಯುಪಿಐ ಪದ್ಧತಿ ಪೂರಕವಾಗಿದೆ.

**ವ್ಯಾಪಾರಿಗಳು, ಸಣ್ಣ ವರ್ತಕರು, ಗ್ರಾಹಕರ ನಡುವೆ ಉಂಟಾಗಿದ್ದ ಗೊಂದಲವನ್ನು ಪರಿಹರಿಸಬೇಕಾದ ಆಡಳಿತ ಮತ್ತು ಪ್ರತಿ ಪಕ್ಷಗಳ ಮುಖಂಡರು, ತಮ್ಮ ಹೊಣೆಗಾರಿಕೆಯನ್ನು ಮರೆತು ಪರಸ್ಪರ ದೂಷಣೆಯಲ್ಲಿ ತೊಡಗಿಕೊಂಡಿದ್ದುದು ದುರದೃಷ್ಟಕರ. ವರ್ತಕರ ಸಮಸ್ಯೆಗಳನ್ನು ಆಲಿಸುವ ಬದಲು, ಜಿಎಸ್‌ಟಿ ಕೇಂದ್ರ ಸರ್ಕಾರಕ್ಕೆ ಸಂಬಂಧಿಸಿದ್ದು ಎಂದು ಕಾಂಗ್ರೆಸ್ ನಾಯಕರು ಹಾಗೂ ಕರ್ನಾಟಕದಲ್ಲಿ ಮಾತ್ರ ಈ ರೀತಿ ತೆರಿಗೆ ವಸೂಲಿ ಮಾಡಲಾಗುತ್ತಿದೆ ಎಂದು ಬಿಜೆಪಿ ನಾಯಕರು ಪರಸ್ಪರ ದೂರಿಕೊಂಡರು.**

ಮೆಟ್ರೊ ರೈಲು ಪ್ರಯಾಣ ದರ ಹೆಚ್ಚಳದ ಸಂದರ್ಭದಲ್ಲೂ ಹೀಗೆಯೇ ಪರಸ್ಪರ ದೂಷಣೆಯ ರಾಜಕೀಯ ವಾಗ್ವಾದ ನಡೆದಿತ್ತು, ಪ್ರಯಾಣಿಕರ ಹಿತಾಸಕ್ತಿ ರಕ್ಷಿಸುವ ಉತ್ತರದಾಯಿತ್ವವನ್ನು ಯಾರೊಬ್ಬರೂ ನಿರ್ವಹಿಸಿರಲಿಲ್ಲ. ಪ್ರಸ್ತುತ, ಸಣ್ಣ ವರ್ತಕರಿಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ತಡವಾಗಿಯಾದರೂ ಎಚ್ಚೆತ್ತು ಜವಾಬ್ದಾರಿಯಿಂದ ವರ್ತಿಸಿರುವುದು ಸಮಾಧಾನದ ಸಂಗತಿ. ಜಿಎಸ್‌ಟಿ ಸಂಗ್ರಹದ ಹಣದಲ್ಲಿ ರಾಜ್ಯ ಮತ್ತು ಕೇಂದ್ರ ಸರ್ಕಾರ ಸಮ ಪಾಲು ಹೊಂದಿರುವುದರಿಂದ, ಸಣ್ಣ ವರ್ತಕರ ಸಮಸ್ಯೆಯನ್ನು ಪರಿಹರಿಸಬೇಕಾದ ಹೊಣೆ ರಾಜ್ಯ ಸರ್ಕಾರದ್ದೇ ಆಗಿತ್ತು. ಸರಕುಗಳ ವಾರ್ಷಿಕ ವಹಿವಾಟು ಮಿತಿಯನ್ನು 40 ಲಕ್ಷಕ್ಕೆ, ಸೇವಾ ವಹಿವಾಟು ಮಿತಿಯನ್ನು 20 ಲಕ್ಷಕ್ಕೆ ಸರ್ಕಾರ ನಿಗದಿಪಡಿಸಿದೆ. ಈ ಮಿತಿ ದಾಟಿದವರು ಜಿಎಸ್‌ಟಿ ನೋಂದಣಿ ಮಾಡಿಸುವುದು ಹಾಗೂ ನಿಯಮದಂತೆ ತೆರಿಗೆ ಪಾವತಿಸುವುದು ಕಡ್ಡಾಯ. ಹಾಲು, ಹಣ್ಣು, ತರಕಾರಿ, ಮಾಂಸ, ಇತ್ಯಾದಿಗೆ ಜಿಎಸ್‌ಟಿಯಿಂದ ವಿನಾಯಿತಿ ನೀಡಲಾಗಿದೆ, ಪ್ರತಿ ವರ್ತಕರಿಗೂ ವೈಯಕ್ತಿಕ ಅಹವಾಲು ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಜಿಎಸ್‌ಟಿ ಪಾವತಿಗೆ ಸಂಬಂಧಿಸಿದಂತೆ ಸರ್ಕಾರದ ಈ ನಿಲುವು ಸದ್ಯದ ಗೊಂದಲಗಳಿಗೆ ಉತ್ತರ ನೀಡುವಂತಿದೆ. ದೊಡ್ಡ ಮೊತ್ತದ ವಹಿವಾಟು ನಡೆಸುವವರು ನ್ಯಾಯಯುತ ತೆರಿಗೆ ಪಾವತಿಸಲೇಬೇಕು ಎಂದು ಹೇಳಿರುವುದೂ ಸರಿಯಾಗಿದೆ. ವ್ಯಾಪಾರಿಗಳಿಗೆ ಹಾಗೂ ಸಣ್ಣ ವರ್ತಕರಿಗೆ ಇರುವ ಗೊಂದಲಗಳನ್ನು ನಿವಾರಿಸಿ, ಜಿಎಸ್‌ಟಿ ನೋಂದಣಿ ಮತ್ತು ಪಾವತಿಯ ಬಗ್ಗೆ ಅರಿವು ಮೂಡಿಸುವ ನಿಟ್ಟಿನಲ್ಲಿ ತೆರಿಗೆ ಇಲಾಖೆಯು ವ್ಯಾಪಕ ಪ್ರಯತ್ನಗಳನ್ನು ನಡೆಸಬೇಕಾಗಿದೆ.

# ರಾಮಾಯಣ



## ಭರತನು ಶ್ರೀರಾಮನನ್ನು ಪಟಾಭಿಷೇಕ ಮಾಡಿಕೊಳ್ಳಲು ಪ್ರಾರ್ಥಿಸಿದ್ದು

• ಹಿಂದಿನ ಸಂಚಿಕೆಯಿಂದ **78ನೆಯ ಅಧ್ಯಾಯ**

ನಿನ್ನಂಥ ಕೃತ್ಯಾಕೃತ್ಯವಿಚಾರದಲ್ಲಿ ಸರ್ವಗುಣಸಂಪನ್ನನಾದ ಬುದ್ಧಿವಂತನು ಒಬ್ಬನೂ ಇಲ್ಲ. ಅಂಥ ನೀನು ಸಹಿಸಲು ಶಕ್ಯವಲ್ಲದ ದುಃಖವನ್ನನುಭವಿಸುವುದು ಉಚಿತವಲ್ಲ. ಸ್ವಾಮಿಯೆ, ಕ್ಷುದ್ರಬುದ್ಧಿಯುಳ್ಳ ನನ್ನ ತಾಯಿಯಾದ ಕೈಕೇಯಾದೇವಿಯು ನನ್ನ ನಿಮಿತ್ತವಾಗಿ ಬಹುದ್ರೋಹವನ್ನು ಮಾಡಿ ನಿನ್ನನ್ನು ರಾಜ್ಯಭ್ರಷ್ಟನನ್ನಾಗಿ ಮಾಡಿ ಹೊರಡಿಸಿದಳು. ಆ ಪಾಪವು ನನಗೆ ಸಂಭವಿಸಿತು. ನೀನು ನನ್ನ ಮೇಲಣ ಕೃಪೆಯಿಂದ ನನಗೆ ಪ್ರಸನ್ನನಾಗಿ ನನ್ನ ಪಾಪವನ್ನು ಪರಿಹರಿಸು. ನಾನು ಧರ್ಮ ಮಾರ್ಗವನ್ನೇ ಅನುಸರಿಸಿಕೊಂಡಿದ್ದೇನೆ. ನನ್ನ ತಾಯಿಗೆ ಅತ್ಯಂತ ಭಯಂಕರವಾದ ಆಜ್ಞೆಯನ್ನು ಮಾಡಲೆಣಿಸಿದ್ದೆನು. ಆದರೆ ಲೋಕದಲ್ಲಿ ದಶರಥರಾಯನ ಕುಮಾರನು ಮಾತೃವಧೆಯನ್ನು ಮಾಡಿದನೆಂಬ ಅಪಕೀರ್ತಿಯು ಬರುವುದೆಂದು ಸುಮ್ಮನಿದ್ದೆನು. ಅಪಕೀರ್ತಿಬರುವ ಕ್ಷುದ್ರಕರ್ಮವನ್ನು ನಾನು ಹೇಗೆ ಮಾಡಲಿ ನಮ್ಮ ತಂದೆಯು ಕೈಕೇಯಾದೇವಿಯ ಮಾತನ್ನು ಕೇಳಿ ಆಕೆಯ ಮೇಲೆ ವ್ಯಾಮೋಹದಿಂದ ಇಂಥ ಆ ಕೃತ್ಯವನ್ನು ಮಾಡಿದನೆಂದು ನಿಂದಿಸಬಾರದು. ದಶರಥರಾಯನು ನಮ್ಮ ತಂದೆ: ಅನೇಕ ಯಾಗಗಳನ್ನು ಮಾಡಿದವನು, ವೃದ್ಧನು, ಮಹಾತ್ಮನು. ಇಷ್ಟರಮೇಲೆ ಸ್ವರ್ಗಸ್ಥನಾದವನು. ಅಂಥ ರಾಜನನ್ನು ನಿಂದಿಸಬಾರದು. ಮನುಷ್ಯರಿಗೆ ಅಂತ್ಯಕಾಲಕ್ಕೆ ಮರವೆ ಹುಟ್ಟುವುದೆಂಬುದನ್ನು ದಶರಥರಾಯನಲ್ಲಿ ಪ್ರತ್ಯಕ್ಷವಾಗಿ ಕಂಡೆನು. ಆತನು ಅಜ್ಞಾನದಿಂದ ಸಾಹಸಮಾಡಿ ಕೋಪಾತಿಶಯದಿಂದ ಕೈಕೇಯಾದೇವಿಗೆ ಕೊಟ್ಟ ಮಾತನ್ನು ಮೀರಬಾರದೆಂದೂ ನಿನ್ನನ್ನು ದೇಶತ್ಯಾಗಮಾಡಿ ಹೊರಡಿಸುವುದೇ ಕಾರ್ಯವೆಂದೂ ತಿಳಿದು ಅಪಕೀರ್ತಿಗೊಳಗಾದನು. ಆತನಿಗೆ ಬಂದ ಅಪಕೀರ್ತಿಯನ್ನು ನೀನೇ ಪರಿಹರಿಸಬೇಕು. ತಂದೆಯ ಅಪಕೀರ್ತಿಯನ್ನು ಪರಿಹರಿಸಿ ಕೀರ್ತಿಯನ್ನುಂಟುಮಾಡುವವನೇ ಸತ್ಪುತ್ರನು. ಅಲ್ಲದಿದ್ದರೆ ಸತ್ಪುತ್ರನೆನಿಸಿಕೊಳ್ಳನು.

ನೀನು ಸತ್ಪುತ್ರನಾದ ಕಾರಣ ಆತನ ಅಪಕೀರ್ತಿಯನ್ನು ಪರಿಹರಿಸು. ದಶರಥರಾಯನು ಮಾಡಿದ ಕೃತ್ಯವು ನನಗೂ ನನ್ನ ತಾಯಿಯಾದ ಕೈಕೇಯಾದೇವಿಗೂ ಅಪಕೀರ್ತಿಯನ್ನು ತರುತ್ತಿದೆ. ನೀನು ನಮ್ಮಿಬ್ಬರ ಅಪಕೀರ್ತಿಯನ್ನೂ ಪರಿಹರಿಸಿ ನಮ್ಮನ್ನೂ ನಿನ್ನ ಸ್ನೇಹಿತರನ್ನೂ ಬಂಧುಗಳನ್ನೂ ಪರಜನರನ್ನೂ ಕೃಪೆಯಿಂದ ನೋಡಿ ಪರಿಪಾಲಿಸು. ನೀಮ ನಮ್ಮೆಲ್ಲರಿಗೂ ರಕ್ಷಕನು. ಕ್ಷತ್ರಿಯಧರ್ಮವೆತ್ತಣದು? ಅರಣ್ಯವಾಸವೆತ್ತಣದು ರಾಜ್ಯಪರಿಪಾಲನ ವೆತ್ತಣದು ಜಡೆಗಳನ್ನು ಧರಿಸುವುದೆತ್ತಣದು ಇಂಥ ವಿಷಮಕಾರ್ಯ ನಿನಗುಚಿತವಲ್ಲ. ಪ್ರಜಾಪರಿಪಾಲನವನ್ನು ಮಾಡುವುದಕ್ಕೆ ಸಮರ್ಥನಾದ ಕ್ಷತ್ರಿಯನಿಗೆ ಪಟಾಭಿಷೇಕವಾಗಬೇಕೆಂಬ ಧರ್ಮಶಾಸ್ತ್ರವುಂಟು. ಪ್ರತ್ಯಕ್ಷವಾಗಿ ಪ್ರಜಾಪರಿಪಾಲನಮಾಡುವುದಕ್ಕೆ ಸಮರ್ಥನೂ ಧರ್ಮ ಪರಿಪಾಲಕನೂ ದಕ್ಷನೂ ಪಟ್ಟಾಭಿಷೇಕಕ್ಕೆ ಯೋಗ್ಯನೂ ಆದ ಪುರುಷನನ್ನು ಬಿಟ್ಟು ಕಾರ್ಯಾಂತರ ವನ್ನೆಣಿಸಿ ಅಧಮನಿಗೆ ರಾಜ್ಯಾಧಿಪತ್ಯವನ್ನು ಮಾಡಲೆಣಿಸುವ ಅರಸನು ಕ್ಷತ್ರಿಯಾಧಮನೆನಿಸಿ ಕೊಳ್ಳುವನು. ಶರೀರದಂಡನೆಯಿಂದ ಧರ್ಮವನ್ನು ಸಂಪಾದಿಸಬೇಕೆಂದು ಏಕೆ ಪ್ರಯಾಸಪಡುತ್ತೀಯೆ ಪ್ರಯಾಸವಿಲ್ಲದೆ ಬ್ರಹ್ಮ ಕ್ಷತ್ರಿಯ ವೈಶ್ಯ ಶೂದ್ರರೆಂಬ ನಾಲ್ಕುಜಾತಿಯವರು ತಮ್ಮ ತಮ್ಮ ಜಾತಿಧರ್ಮಗಳಲ್ಲಿ ನಡೆಯುವಂತೆಯೂ ಬಹ್ಮಚಾರಿ ಗೃಹಸ್ತ ವಾನಪ್ರಸ್ಥ ಯತಿಗಳೆಂಬ ನಾಲ್ಕಾಶ್ರಮದವರು ತಮ್ಮ ತಮ್ಮ ಆಶ್ರಮದ ಸತ್ಕರ್ಮಗಳನ್ನು ಮಾಡಿಕೊಂಡಿರುವಂತೆಯೂ ಕಟ್ಟುಮಾಡಿ ರಾಜ್ಯಪರಿಪಾಲನಮಾಡಿಕೊಂಡು ಧರ್ಮಮಾರ್ಗಪ್ರವರ್ತಕನಾಗಿರುವುದನ್ನು ಬಿಟ್ಟು ಕಾಯಕ್ಲೇಶಗಳಿಂದಿರುವುದು ನಿನಗೆ ಧರ್ಮವಲ್ಲ. ಎಲೈ ಸ್ವಾಮಿಯ, ಜ್ಯೇಷ್ಠಭ್ರಾತೃವಾಗಿ ಸರ್ವಜ್ಞನಾಗಿ ಪುರುಷೋತ್ತಮನಾಗಿ ನಾನಾ ಶಾಸ್ತ್ರಪ್ರವೀಣನಾದ ನೀನು ಒಪ್ಪದಿದ್ದರೆ ಅಜ್ಞಾನಿಯಾಗಿ ಅಲ್ಪಶಾಸ್ತ್ರಬುದ್ಧಿಯುಳ್ಳ ನಾನು ರಾಜ್ಯಪರಿಪಾಲನವನ್ನು ಹೇಗೆ ಮಾಡುವೆನು. ನೀನಿಲ್ಲದ ರಾಜ್ಯದಲ್ಲಿ ಬುದ್ಧಿಹೀನನಾಗಿ ಸದ್ಗುಣಹೀನನಾಗಿ ಬಾಲಕನಾದ ನಾನು ಇರುವುದಕ್ಕೆ ಹೇಗೆ ಸಮರ್ಥನಾದೇನು ಶ್ರೀರಾಮ, ವಸಿಷ್ಠಮುನಿಗಳು ಮತ್ತು ಅನೇಕ ಮಂತ್ರಾರ್ಥಕುಶಲರಾದ ಬ್ರಾಹ್ಮಣರು ಪ್ರಧಾನರು ಮೊದಲಾದವರೆಲ್ಲರೂ ಇಲ್ಲಿಗೆ ಬಂದಿದ್ದಾರೆ. ನಿನ್ನ ತಮ್ಮಂದಿರಾದ ನಾವೆಬರೂ ಇದ್ದೇವೆ. ನೀನು ಇಲ್ಲಿ ಪಟ್ಟಾಭಿಷೇಕವನ್ನು ಕೈಗೊಂಡು ಅಯೋಧ್ಯಾಪಟ್ಟಣಕ್ಕೆ ಬಂದು ರಾಜ್ಯಪರಿಪಾಲನವನ್ನು ಮಾಡು. ದೇವೇಂದ್ರನು ಸಮಸ್ತ ದೇವತೆಗಳನ್ನೂ ಕೂಡಿಕೊಂಡು ಅಸುರರನ್ನು ಸಂಹರಿಸಿ ಅಮರಾವತೀಪಟ್ಟಣಕ್ಕೆ ಹೋಗಿ ಸುಖವಾಗಿರುವಂತೆ ನೀನು ಸಮಸ್ತ ಪ್ರಧಾನರನ್ನೂ ಕೂಡಿಕೊಂಡು ಋಷಿಗಳ ಋಣ ದೇವತೆಗಳ ಋಣ, ಪಿತೃಗಳ ಋಣ-ಎಂಬ ಋಣತ್ರಯವನ್ನು ತೀರಿಸಿ ನಿನ್ನ ಮಿತ್ರರನ್ನು ಪರಿಪಾಲಿಸಿಕೊಂಡು ನಿನ್ನ ಸ್ನೇಹಿತರಿಗೆ ಬೇಕಾದ ವಸ್ತುಗಳನ್ನು ಕೊಡುತ್ತ ನಮ್ಮೆಲ್ಲರನ್ನೂ ರಕ್ಷಿಸು.

**ಮುಂದುವರಿಯುವುದು...**




**ಕಲಾ ಸಾಹಿತ್ಯ**
**ಕೃಷ್ಣಪ್ಪ**
**ಲೇಖಕರು**
**ಪ್ರಗತಿ ಪರ ಚಿಂತಕ ಹಾಗೂ ವಿಮರ್ಶಕರು**

# ಭಾರತದ ಮಾಜಿ ರಾಷ್ಟ್ರಪತಿ, ಭಾರತರತ್ನ ಡಾ.ಎಪಿಜೆ ಅಬ್ದುಲ್ ಕಲಾಂರವರ 10ನೇ ಪುಣ್ಯಸ್ಮರಣೆ

• **ಉದಯವಾಹಿನಿ, ವಿಶೇಸ**

ಡಾಕ್ಟರ್ ಎಪಿಜೆ ಅಬ್ದುಲ್ ಕಲಾಂರವರು 1931 ಅಕ್ಟೋಬರ್ 15ರಂದು ತಮಿಳುನಾಡಿನ ರಾಮೇಶ್ವರಂನಲ್ಲಿ ಅತ್ಯಂತ ತೀರ ಬಡತನದ ಕುಟುಂಬದಲ್ಲಿ ಜನಿಸಿದರು. ಇವರು ದಿನನಿತ್ಯ ವೃತ್ತಪತ್ರಿಕೆಗಳನ್ನು ಮನೆಮನೆಗೆ ಬೆಳಿಗ್ಗೆ ಸಮಯ ವಿತರಿಸಿ ಬಡತನದಲ್ಲಿಯೇ ಹಂತಹಂತವಾಗಿ ಬಹಳ ಕಷ್ಟಪಟ್ಟು ವಿದ್ಯಾಭ್ಯಾಸ ಮಾಡಿ ವಿಜ್ಞಾನ ಮತ್ತು ಏರೋನಾಟಿಕಲ್ ಎಂಜಿನಿಯರಿಂಗ್ ನಲ್ಲಿ ಪದವಿಗಳಿಸಿದರು. 1958ರಲ್ಲಿ ಡಿ.ಆರ್.ಡಿ.ಒ.ಗೆ ಸೇರಿದರು. ಮೂರು ವರ್ಷಗಳು ಕಳೆದ ಬಳಿಕ ಎಡಿಎಗೆ ಸೇರಿ ಕೊಂಡರು. ದೇಶದ ರಕ್ಷಣಾಪಡೆಗಳಿಗಾಗಿ ದೇಶಿಯ ಹೋವರ್ ಕ್ರಾಫ್ಟ್‌ಗಳು ನಿರ್ಮಾಣಕಾರ್ಯವನ್ನು ಕಲಾಂ ನೇತೃತ್ವದ ತಂಡಕ್ಕೆ ವಹಿಸಲಾಯಿತು. ಕಲಮ್ ಅವರ ತಂಡ ಈ ಕಾರ್ಯವನ್ನು ಸವಾಲಾಗಿ ಸ್ವೀಕರಿಸಿ ಹಗಲಿರುಳು ಪರಿಶ್ರಮಪಟ್ಟು ನಂದಿ ಹೋವರ್ ಕ್ರಾಫ್ಟ್ ನಿರ್ಮಿಸಿಕೊಟ್ಟರು. ನಾಸಾ ಈ ಸಂಸ್ಥೆಯ ಹಲವಾರು ಕೇಂದ್ರಗಳಲ್ಲಿ ತರಬೇತಿ ಪಡೆದ ಕಲಂರವರು ರಾಕೆಟ್‌ನ್ನು ಅಣಿಗೊಳಿಸಿ ಅದರ ಸುರಕ್ಷತೆಯ ಜವಾಬ್ದಾರಿಯನ್ನು ಹೊತ್ತು ಯಶಸ್ವಿಯಾಗಿ ಆಕಾಶಕ್ಕೆ ಚಿಮ್ಮಿಸಿದರು. DRDO ಪ್ರತಿಯೊಬ್ಬರೂ ಆತ್ಮವಿಶ್ವಾಸ, ನಿಷ್ಠೆ, ಕಾರ್ಯತತ್ಪರತೆಯಿಂದ ಕೆಲಸ ಮಾಡುವಂತೆ ಕಲಾಂ ಅವರು ಸ್ಫೂರ್ತಿ ನೀಡಿದರು.

ಅವರು ಯುವ ವಿಜ್ಞಾನಿಗಳಲ್ಲಿ ಕಾರ್ಯ ಸಂಸ್ಕೃತಿಯನ್ನು ಬೆಳೆಸಿದರು. 1985 ಸೆಪ್ಟೆಂಬರ್ 16ರಂದು ತ್ರಿಶೂಲ್ ಕ್ಷಿಪಣಿ ಶ್ರೀಹರಿಕೋಟಾದಿಂದ ಯಶಸ್ವಿಯಾಗಿ ಆಕಾಶಕ್ಕೆ ಹಾರಿತು. 1988 ಫೆಬ್ರವರಿ 25 ರಂದು ಪೃಥ್ವಿ ಯಶಸ್ವಿಯಾಗಿ ನಭಕ್ಕೆ ಚಿಮ್ಮಿತು. 1989 ಮೇ 22 ರಂದು ಕಲಮ್ ಅವರ ಬಹುದೊಡ್ಡ ಸಾಧನೆ ಫಲಕಾರಿಯಾಯಿತು. ಅಗ್ನಿ ಕ್ಷಿಪಣಿ ಯಶಸ್ವಿಯಾಗಿ ಬಾನಿಗೇರಿತು.ರಾಷ್ಟ್ರ ಕಲಾಂ ಅವರನ್ನು ಭಾರತದ ಕ್ಷಿಪಣಿ ಮಾನವ, ಕ್ಷಿಪಣಿ ತಂತ್ರಜ್ಞಾನದ ಜನಕ ಎಂದು ಕರೆಯಲಾಯಿತು. 1990ರಲ್ಲಿ ಕಲಾಂರವರಿಗೆ ಪದ್ಮವಿಭೂಷಣ ಪ್ರಶಸ್ತಿ ದೊರಕಿತು. 1998-1999ರಲ್ಲಿ ರಕ್ಷಣಾ ಸಚಿವರ, ಪ್ರಧಾನ ಮಂತ್ರಿಗಳ ವೈಜ್ಞಾನಿಕ ಸಲಹೆಗಾರರಾಗಿ ನೇಮಕಗೊಂಡರು. ಅವರು 1998ರಲ್ಲಿ ಪೋಕ್ರಾನ್ ಅಣ್ವಸ್ತ್ರ ಪರೀಕ್ಷೆಯ ಮೂಲಕ ಭಾರತವನ್ನು ಅಣ್ವಸ್ತ್ರ ರಾಷ್ಟ್ರಗಳ ಗುಂಪಿಗೆ ಸೇರಿಸಿದರು. 1997ರಲ್ಲಿ ಭಾರತ ಸರ್ಕಾರ ರಾಷ್ಟ್ರದ ಅತ್ಯುನ್ನತ ನಾಗರೀಕ ಪ್ರಶಸ್ತಿಯಾದ ಭಾರತರತ್ನ ಪ್ರಶಸ್ತಿ ನೀಡಿ ಗೌರವಿಸಲಾಯಿತು.



ಡಾ. ಎಪಿಜೆ ಅಬ್ದುಲ್ ಕಲಾಂರವರಿಗೆ ಸಂದ ಪ್ರಶಸ್ತಿಗಳು ಹಲವಾರು ಎಚ್.ಕೆ.ಫಿರೋಧಿಯ ಪ್ರಶಸ್ತಿ, ಇಂಜಿನಿಯರಿಂಗ್ ಕ್ಷೇತ್ರದ ಜೀವಮಾನ ಸಾಧನೆ ಪ್ರಶಸ್ತಿ, ಓಂಪ್ರಕಾಶ್ ಬಾ ನೆಸ್ ಪ್ರಶಸ್ತಿ, ನ್ಯಾಷನಲ್ ನೆಹರು ಪ್ರಶಸ್ತಿ, ಆರ್ಯಭಟ ಪ್ರಶಸ್ತಿ ಇತ್ಯಾದಿ, ಅಣ್ಣಾ ವಿಶ್ವವಿದ್ಯಾಲಯ ಡಿ.ಎಸ್ಸಿ ಪದವಿ ನೀಡಿದರೆ, ಬಾಂಬೆ ಐಐಟಿ ಗೌರವ ಡಾಕ್ಟರೇಟ್ ನೀಡಿತ್ತು. ದೇಶ-ವಿದೇಶಗಳ ಸುಮಾರು 30 ವಿಶ್ವವಿದ್ಯಾಲಯಗಳು ಕಲಂ ಅವರಿಗೆ ಗೌರವ ಡಾಕ್ಟರೇಟ್ ನೀಡಿ ಗೌರವಿಸಿದವು. 2002 ಜುಲೈ 15ರಂದು ನಡೆದ ರಾಷ್ಟ್ರಪತಿ ಚುನಾವಣೆಯಲ್ಲಿ ದೇಶದ ನಿರೀಕ್ಷೆಯಂತೆ ಕಲಾಂರವರು ಭಾರತದ 11ನೇ ರಾಷ್ಟ್ರಪತಿಗಳಾದರು. ಅಬ್ದುಲ್ ಕಲಾಂ ಅವರು ಶ್ರೇಷ್ಠ ಲೇಖಕರಾಗಿದ್ದು ವಿಂಗ್ಸ್ ಆಫ್ ಫೈಯರ್, ಇಂಡಿಯಾ 2020, ಮೈ ಜರ್ನಿ, ಇಗ್ನೈಟೆಡ್ ಮೈಂಡ್ಸ್ ಮೊದಲಾದ ಕೃತಿಗಳನ್ನು ರಚಿಸಿದ್ದಾರೆ. ಅಬ್ದುಲ್ ಕಲಾಂ ಅವರು ತೋರುವ ಜೀವನೋತ್ಸಾಹ ವಿಸ್ಮಯ ಹುಟ್ಟಿಸುತ್ತದೆ. ಮಕ್ಕಳು, ಯುವಕರು- ಯುವತಿಯರು ಎಂದರೆ ಅವರಿಗೆ ಬಹು ಪ್ರೀತಿ. ಸಮಯ ದೊರೆತಾಗಲೆಲ್ಲಾ ಅವರೊಡನೆ ಸಂವಾದ ನಡೆಸುತ್ತಿದ್ದರು. ಜೀವನದಲ್ಲಿ ದೊಡ್ಡ ದೊಡ್ಡ ಕನಸುಗಳನ್ನ ಕಾಣಬೇಕೆಂದು ಹೇಳುವುದರ ಜೊತೆಗೆ ಅವುಗಳು ನನಸಾಗಲು ಪ್ರಮಾಣಿಕ ಪ್ರಯತ್ನ ನಡೆಸಬೇಕೆಂದು ಪ್ರೋತ್ಸಾಹಿಸುತ್ತಿದ್ದರು. ಭಾರತ ಅಭಿವೃದ್ಧಿ ಶೀಲ ರಾಷ್ಟ್ರವಾಗಿ ಕಂಗೊಳಿಸಬೇಕೆಂಬುದೇ ಅವರ ಮನದ ಹಾರೈಕೆ ಆಗಿತ್ತು. 2015 ಜುಲೈ 27 ರಂದು (ಮೇಘಾಲಯ) ಶಿಮ್ಲಾದಲ್ಲಿರುವ ಇಂಜಿನಿಯರಿಂಗ್ ಕಾಲೇಜಿನಲ್ಲಿ ವಿದ್ಯಾರ್ಥಿಗಳಿಗೆ ಪಾಠ ಮಾಡುತ್ತಿರುವ ಸಮಯದಲ್ಲಿ ಹಠಾತ್ ಹೃದಯಾಘಾತವಾಗಿ ತೀರಿಕೊಂಡರು. ಇಂದು 10ನೇ ವರ್ಷದ ಪುಣ್ಯಸ್ಮರಣೆ ದಿನದಂದು ಭಾರತೀಯರಾದ ನಾವೆಲ್ಲರೂ ಅವರನ್ನು ಸ್ಮರಿಸಿ ನೆನೆಯುತ್ತಾ ಅವರ ಆದರ್ಶಗಳನ್ನ, ಸಾಧನೆಗಳನ್ನ, ಪ್ರಾಮಾಣಿಕ ವ್ಯಕ್ತಿತ್ವಮಾನವೀಯ ಗುಣಗಳನ್ನು, ಅವರ ತತ್ವಸಿದ್ಧಾಂತಗಳನ್ನ ಪಾಲಿಸುವ ಸಂಕಲ್ಪ ಮಾಡೋಣ.

### ಡಾ:ಕಲಾಂರವರ ಸಪ್ತ ಸೂತ್ರಗಳು

**ಜೀವನದಲ್ಲಿ ಗುರಿ ಇರಲಿ, ಶಿಸ್ತು ಇರಲಿ, ಸಾಧನೆ ಇರಲಿ, ಜ್ಞಾನವನ್ನು ಗಳಿಸಿಕೊಳ್ಳಿ, ಕಠಿಣ ಪರಿಶ್ರಮ ಇರಲಿ, ನಿರಂತರ ಯತ್ನ ಮಾಡುತ್ತಿರಿ, ಸಾಧ್ಯವಿಲ್ಲ ಎಂಬುವವರಿಂದ ದೂರವಿರಿ ಇವೇ ಅವರ ಸಪ್ತ ಸೂತ್ರಗಳು.**

# ರಾತ್ರಿ ಮಲಗುವ ಮುನ್ನ ಎದೆಗೆ ಹಸುವಿನ ತುಪ್ಪವನ್ನು ಹಚ್ಚೋದು ಒಳ್ಳೆಯದು ಯಾಕೆ ಗೊತ್ತಾ?



ಆಯುರ್ವೇದದಲ್ಲಿ ಹಸುವಿನ ತುಪ್ಪಕ್ಕೆ ಮಹತ್ವವಿದೆ. ಹಸುವಿನ ಹಾಲಿನಿಂದ ತಯಾರಿಸಿದ ಸ್ಪಷ್ಟೀಕರಿಸಿದ ಬೆಣ್ಣೆ ಶತಮಾನಗಳಿಂದ ಅಮೂಲ್ಯವಾದ ಮನೆಮದ್ದಾಗಿದೆ. ಇದನ್ನು ಅಡುಗೆ ಮತ್ತು ಆಚರಣೆಗಳಲ್ಲಿ ವ್ಯಾಪಕವಾಗಿ ಬಳಸಲಾಗುತ್ತಿದ್ದರೂ, ಅನೇಕರು ಈಗ ಹಸುವಿನ ತುಪ್ಪದ ಶಕ್ತಿಯುತ ಬಾಹ್ಯ ಪ್ರಯೋಜನಗಳ ಬಗ್ಗೆ ತಿಳಿದಿಲ್ಲ. ಹಸುವಿನ ತುಪ್ಪವನ್ನು ಎದೆಯ ಮೇಲೆ ಉಜ್ಜುವ ಪ್ರಯೋಜನಗಳು. ನೀವು ಮಲಗುವ ಮೊದಲು ನಿಮ್ಮ ಎದೆಯ ಮೇಲೆ ಹಸುವಿನ ತುಪ್ಪವನ್ನು ಉಜ್ಜುವ ಕೆಲವು ವೈಜ್ಞಾನಿಕ ಬೆಂಬಲಿತ, ಆಯುರ್ವೇದ ಪ್ರಯೋಜನಗಳ ಬಗ್ಗೆ ತಿಳಿಯೋಣ.

**ನಿದ್ರೆಯ ಗುಣಮಟ್ಟವನ್ನು ಹೆಚ್ಚಿಸುತ್ತದೆ:** ಎದೆಯ ಮೇಲೆ ಬೆಚ್ಚಗಿನ ಹಸುವಿನ ತುಪ್ಪವನ್ನು ಹಚ್ಚುವುದು ನರಮಂಡಲವನ್ನು ಶಾಂತಗೊಳಿಸಲು ಸಹಾಯ ಮಾಡುತ್ತದೆ. ಆಯುರ್ವೇದದ ಪ್ರಕಾರ, ತುಪ್ಪವು ನಿದ್ರೆಯನ್ನು ನಿಯಂತ್ರಿಸುವ ದೇಹದ ವಾತ ದೋಷದ ಮೇಲೆ ಪರಿಣಾಮವನ್ನು ಬೀರುತ್ತದೆ. ತುಪ್ಪದಲ್ಲಿರುವ ಉಷ್ಣತೆ, ಕೊಬ್ಬಿನಾಮ್ಲಗಳು ವಿಶ್ರಾಂತಿಯನ್ನು ಉತ್ತೇಜಿಸುತ್ತದೆ, ನಿದ್ರಾಹೀನತೆ, ಚಡಪಡಿಕೆಯನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ. ಒಟ್ಟಾರೆಯಾಗಿ ನಿದ್ದೆಯ ಗುಣಮಟ್ಟವನ್ನು ಉತ್ತಮವಾಗಿಸುತ್ತದೆ.

**ದಟ್ಟಣೆಯನ್ನು ತೆರವುಗೊಳಿಸುತ್ತದೆ:** ಹಸುವಿನ ತುಪ್ಪವು ನೈಸರ್ಗಿಕ ಡಿಕೊಂಜೆಸ್ಟೆಂಟ್ ಆಗಿ ಕಾರ್ಯನಿರ್ವಹಿಸುತ್ತದೆ. ಎದೆಯ ಮೇಲೆ ಮಸಾಜ್ ಮಾಡುವುದರಿಂದ ಎದೆಯಲ್ಲಿರುವ ಕಫವನ್ನು ಸಡಿಲಗೊಳಿಸಲು, ಕಟ್ಟಿರುವ ಮೂಗಿನ ಮತ್ತು ಶ್ವಾಸನಾಳದ ಮಾರ್ಗಗಳನ್ನು ತೆರೆಯಲು ಸಹಾಯ ಮಾಡುತ್ತದೆ. ಅನೇಕ ಆಯುರ್ವೇದ ವೈದ್ಯರು ಶೀತ, ಕೆಮ್ಮು ಮತ್ತು ಸೌಮ್ಯ ಆಸ್ತಮಾ ಲಕ್ಷಣಗಳಿಂದ ಪರಿಹಾರವನ್ನು ನೀಡುತ್ತದೆ.

**ಆಳವಾದ ಉಸಿರಾಟವನ್ನು ಉತ್ತೇಜಿಸುತ್ತದೆ:** ಹಸುವಿನ ತುಪ್ಪದಿಂದ ಎದೆಯ ಮೇಲೆ ಮಸಾಜ್ ಮಾಡುವುದರಿಂದ ರಕ್ತ ಪರಿಚಲನೆಯನ್ನು ಉತ್ತೇಜಿಸುತ್ತದೆ ಮತ್ತು ಎದೆಯ ಪ್ರದೇಶವನ್ನು ಬೆಚ್ಚಗಾಗಿಸುತ್ತದೆ, ಸ್ನಾಯುಗಳ ಬಿಗಿತವನ್ನು ಕಡಿಮೆ ಮಾಡುತ್ತದೆ. ಇದು ಉಸಿರಾಟವನ್ನು ಸುಲಭಗೊಳಿಸುತ್ತದೆ. ವಿಶೇಷವಾಗಿ ನಿದ್ರೆಯ ಸಮಯದಲ್ಲಿ ಉಸಿರಾಟದ ಸಮಸ್ಯೆಯನ್ನು ಎದುರಿಸುತ್ತಿರುವವರಿಗೆ ಪ್ರಯೋಜನಕಾರಿಯಾಗಲಿದೆ.



**ನಿರ್ವಿಶೀಕರಣಗೊಳಿಸಿ ದೋಷಗಳನ್ನು ಸಮತೋಲನಗೊಳಿಸುತ್ತದೆ:** ತುಪ್ಪವು ಅದರ ನಿರ್ವಿಶೀಕರಣ ಗುಣಲಕ್ಷಣಗಳಿಗೆ ಹೆಸರುವಾಸಿಯಾಗಿದೆ. ನಿಯಮಿತವಾಗಿ ಹಚ್ಚುವುದರಿಂದ ದೇಹದಿಂದ ವಿಷವನ್ನು ಹೊರಹಾಕಲು ಸಹಾಯ ಮಾಡುತ್ತದೆ. ಇದು ಕಫ, ವಾತ ದೋಷಗಳನ್ನು ಸಮತೋಲನಗೊಳಿಸುತ್ತದೆ.

**ಚರ್ಮವನ್ನು ತೇವಗೊಳಿಸುತ್ತದೆ:** ಒಣ ಚರ್ಮವು ತುರಿಕೆ ಮತ್ತು ಕಿರಿಕಿರಿಯನ್ನು ಉಂಟುಮಾಡಬಹುದು. ಇದು ನಿದ್ರೆಗೆ ಅಡ್ಡಿಯಾಗಬಹುದು. ತುಪ್ಪವನ್ನು ಹಚ್ಚೋದರಿಂದ ಚರ್ಮವನ್ನು ಆಳವಾಗಿ ತೇವಗೊಳಿಸುತ್ತದೆ.

ಜಲಸಂಚಯನವನ್ನು ಲಾಕ್ ಮಾಡುವ ರಕ್ಷಣಾತ್ಮಕ ಪದರವನ್ನು ಸೃಷ್ಟಿಸುತ್ತದೆ, ಒಣ, ಬಿರುಕು ಬಿಟ್ಟ ಚರ್ಮವನ್ನು ಶಮನಗೊಳಿಸಲು ಸಹಾಯ ಮಾಡುತ್ತದೆ.

# ನೀರಿನ ಫಿಲ್ಟರ್‌ನಲ್ಲಿ ಸಂಗ್ರಹವಾಗಿರುವ ಕೊಳೆಯನ್ನು ಸ್ವಚ್ಛಗೊಳಿಸಲು ಟಿಪ್ಸ್

ಇತ್ತೀಚಿನ ದಿನಗಳಲ್ಲಿ ನೀವು ಪ್ರತಿಯೊಂದು ಮನೆಯಲ್ಲೂ ನೀರಿನ ಫಿಲ್ಟರ್ ಇದೆ. ನೀರನ್ನು ಶುದ್ಧವಾಗಿಸಲು ನೀರಿನ ಫಿಲ್ಟರ್ ಬಹಳಷ್ಟು ಸಹಾಯ ಮಾಡುತ್ತದೆ. ಆದರೆ ನೀರಿನ ಫಿಲ್ಟರ್‌ನ್ನು ಕ್ಲೀನ್ ಮಾಡಿಸುವುದು ನಿಮಗೆ ಸ್ವಲ್ಪ ಕಷ್ಟವೆನಿಸಬಹುದು. ನೀವೂ ಕೂಡಾ ನಿಮ್ಮ ಮನೆಯಲ್ಲಿ ನೀರಿನ ಫಿಲ್ಟರ್ ಅನ್ನು ಹಾಕಿಸಿದ್ದರೆ ನೀರಿನ ಫಿಲ್ಟರ್‌ಗೆ ಸಂಬಂಧಿಸಿದ ಹಲವು ವಿಷಯಗಳು ನಿಮಗಾಗಿ.

**ನೀರಿನ ಫಿಲ್ಟರ್‌ನಲ್ಲಿ ಸಂಗ್ರಹವಾಗಿರುವ ಕೊಳೆಯನ್ನು ಸ್ವಚ್ಛಗೊಳಿಸಿ:** ನಾವು ಹೆಚ್ಚಾಗಿ ಮನೆಯಲ್ಲಿ ಸ್ಥಾಪಿಸಲಾದ ನೀರಿನ ಫಿಲ್ಟರ್‌ನತ್ತ ದೀರ್ಘಕಾಲದವರೆಗೆ ಗಮನ ಕೊಡುವುದಿಲ್ಲ. ಫಿಲ್ಟರ್ ನೀರನ್ನು ಶುದ್ಧಗೊಳಿಸೋದರಿಂದ ಅದರಲ್ಲಿ ಕೊಳಕು ಸಂಗ್ರಹವಾಗಲು ಪ್ರಾರಂಭಿಸುತ್ತದೆ.




ಇದರಿಂದಾಗಿಮನೆಯ ಸದಸ್ಯರು ಅನೇಕ ರೋಗಗಳನ್ನು ಎದುರಿಸಬೇಕಾಗುತ್ತದೆ. ಇದರಿಂದಾಗಿ ಶುದ್ಧ ನೀರು ಅಶುದ್ಧವಾಗಲಾರಂಭಿಸುತ್ತದೆ. ಆದ್ದರಿಂದ ನೀವು ನಿಯಮಿತವಾಗಿ ನೀರಿನ ಫಿಲ್ಟರ್ ಅನ್ನು ಸ್ವಚ್ಛಗೊಳಿಸುವುದು ಮುಖ್ಯ.

**ಕೈಪಿಡಿಯನ್ನು ಬಳಸಿ:** ನೀವು ನೀರಿನ ಫಿಲ್ಟರ್ ಅನ್ನು ಸ್ವಚ್ಛಗೊಳಿಸಬಹುದಾದ ಕೆಲವು ಸಲಹೆಗಳ ಬಗ್ಗೆ ಸಾಮಾನ್ಯವಾಗಿ ಫಿಲ್ಟರ್ ಖರೀದಿಸುವಾಗ ಪ್ರತೀ ಫಿಲ್ಟರ್ ಜೊತೆಗೆ ಒಂದು ಕೈಪಿಡಿ ದೊರೆಯುತ್ತದೆ. ನೀರಿನ ಫಿಲ್ಟರ್ ಅನ್ನು ಸ್ವಚ್ಛಗೊಳಿಸುವ ಮೊದಲು ಸ್ವಚ್ಛಗೊಳಿಸುವ ಬಗ್ಗೆ ಎಲ್ಲಾ ಮಾಹಿತಿಯನ್ನು ತಿಳಿಯಿರಿ. ಇದಕ್ಕಾಗಿ, ಕೈಪಿಡಿಯನ್ನು ಎಚ್ಚರಿಕೆಯಿಂದ ಓದಿ ಮತ್ತು ಅದಕ್ಕೆ ಅನುಗುಣವಾಗಿ ಸ್ವಚ್ಛಗೊಳಿಸಿ.

**ನೀರಿನ ಫಿಲ್ಟರ್‌ನಲ್ಲಿರುವ ಕೊಳೆಯಿದೆ ಎಂದು ಕಂಡುಹಿಡಿಯುವುದು ಹೇಗೆ?** ನಿಮ್ಮ ನೀರಿನ ಫಿಲ್ಟರ್ ಕೊಳೆಯಿಂದ ತುಂಬಿದೆಯೇ ಅಥವಾ ಇಲ್ಲವೇ ಎಂಬುದನ್ನು ನೀವು ಕಂಡುಹಿಡಿಯಲು ಬಯಸಿದರೆ, ನೀರಿನ ಫಿಲ್ಟರ್‌ನಿಂದ ನೀರಿನ ರುಚಿ ಬದಲಾಗಿದೆ ಅಥವಾ ನೀರಿನ ಪರಿಣಾಮ ಕಡಿಮೆಯಾಗಿದೆ ಎಂದು ನೀವು ಭಾವಿಸಿದರೆ, ಇದರರ್ಥ ಈಗ ನೀವು ಫಿಲ್ಟರ್ ಅನ್ನು ಸ್ವಚ್ಛಗೊಳಿಸಬೇಕು, ಇಲ್ಲದಿದ್ದರೆ ಮನೆಯ ಸದಸ್ಯರು ಅನಾರೋಗ್ಯಕ್ಕೆ ಒಳಗಾಗಬಹುದು.

**ಮೊಂಡುತನದ ಕಲೆಗಳನ್ನು ಸ್ವಚ್ಛಗೊಳಿಸಿ:** ನೀವು ಸಂಪೂರ್ಣ ಫಿಲ್ಟರ್ ಅನ್ನು ನೀರಿನಿಂದ ಚೆನ್ನಾಗಿ ತೊಳೆದಾಗ, ಅದನ್ನು ಮತ್ತೆ ಸ್ವಚ್ಛವಾದ ಬಟ್ಟೆಯಿಂದ ಸ್ವಚ್ಛಗೊಳಿಸಿ ಮತ್ತು ಆಗಲೂ ಮೊಂಡುತನದ ಕಲೆಗಳು ಉಳಿದಿದ್ದರೆ, ನೀವು ಅದನ್ನು ಮತ್ತೆ ಅಡಿಗೆ ಸೋಡಾ ಅಥವಾ ವಿನೆಗರ್ ಬಳಸಿ ಸ್ವಚ್ಛಗೊಳಿಸಬಹುದು. ಇತ್ತೀಚಿನ ದಿನಗಳಲ್ಲಿ ನೀರಿನ ಫಿಲ್ಟರ್‌ಗಳನ್ನು ಸ್ವಚ್ಛಗೊಳಿಸಲು ಮಾರುಕಟ್ಟೆಯಲ್ಲಿ ಅನೇಕ ಉತ್ಪನ್ನಗಳು ಲಭ್ಯವಿದೆ. ನೀವು ಅವುಗಳನ್ನೂ ಬಳಸಬಹುದು.

# ಯಾವ ತಪ್ಪುಗಳು ಗರ್ಭಿಣಿಯರಲ್ಲಿ ಥೈರಾಯ್ಡ್ ಸಮಸ್ಯೆಗಳನ್ನು ಉಂಟುಮಾಡುತ್ತವೆ?



ಗರ್ಭಾವಸ್ಥೆಯು ಮಹಿಳೆಯ ಜೀವನದ ಅತ್ಯಂತ ಸೂಕ್ಷ್ಮ ಸಮಯವಾಗಿದೆ. ಈ ಸಮಯದಲ್ಲಿ ದೇಹದಲ್ಲಿ ಅನೇಕ ಹಾರ್ಮೋನುಗಳ ಬದಲಾವಣೆಗಳು ಸಂಭವಿಸುತ್ತವೆ, ಇದರಲ್ಲಿ ಥೈರಾಯ್ಡ್ ಹಾರ್ಮೋನುಗಳ ಸಮತೋಲನವು ಅತ್ಯಂತ ಪ್ರಮುಖ ಪಾತ್ರ ವಹಿಸುತ್ತದೆ.

ಗರ್ಭಾವಸ್ಥೆಯಲ್ಲಿ ಥೈರಾಯ್ಡ್ ಗ್ರಂಥಿಯು ಸರಿಯಾಗಿ ಕಾರ್ಯನಿರ್ವಹಿಸದಿದ್ದರೆ ಅದು ತಾಯಿ ಮತ್ತು ಮಗುವಿನ ಆರೋಗ್ಯಕ್ಕೆ ಹಾನಿ ಮಾಡುತ್ತದೆ. ಮಹಿಳೆಯರು ತಮಗರಿವಿಲ್ಲದೆ ಮಾಡುವ ಕೆಲವು ಸಾಮಾನ್ಯ ತಪ್ಪುಗಳಿಂದಾಗಿ ಗರ್ಭಾವಸ್ಥೆಯಲ್ಲಿ ಥೈರಾಯ್ಡ್‌ನಂತಹ ಕಾಯಿಲೆಗೆ ಕಾರಣವಾಗುತ್ತವೆ. ಗರ್ಭಾವಸ್ಥೆಯಲ್ಲಿ ಮಹಿಳೆಯರಲ್ಲಿ ಥೈರಾಯ್ಡ್ ಸಮಸ್ಯೆಗೆ ಕಾರಣವಾಗುವ ತಪ್ಪುಗಳು ಯಾವುವು ತಿಳಿಯೋಣ.

**ಥೈರಾಯ್ಡ್ ಎಂದರೇನು ಮತ್ತು ಅದು ಏಕೆ ಮುಖ್ಯ?:** ಮೇಯೊ ಕ್ಲಿನಿಕ್ ವರದಿಯ ಪ್ರಕಾರ, ಥೈರಾಯ್ಡ್ ಗಂಟಲಿನ ಕೆಳಭಾಗದಲ್ಲಿರುವ ಸಣ್ಣ ಚಿಟ್ಟೆ ಆಕಾರದ ಗ್ರಂಥಿಯಾಗಿದೆ. ಇದು ದೇಹದ ಚಯಾಪಚಯ ಕ್ರಿಯೆಯನ್ನು ನಿಯಂತ್ರಿಸುವ ಥೈರಾಕ್ಸಿನ್ ಮತ್ತು ಟ್ರಯೋಡೋಥೈರೋನಿನ್ ಎಂಬ ಹಾರ್ಮೋನುಗಳನ್ನು ಉತ್ಪಾದಿಸುತ್ತದೆ.

**ಗರ್ಭಾವಸ್ಥೆಯಲ್ಲಿ ಎರಡು ಪ್ರಮುಖ ರೀತಿಯ ಥೈರಾಯ್ಡ್ ಸಮಸ್ಯೆಗಳಿವೆ** ಗರ್ಭಾವಸ್ಥೆಯಲ್ಲಿನ ಹಾರ್ಮೋನುಗಳ ಬದಲಾವಣೆಗಳನ್ನು ಸರಿಯಾಗಿ ನಿರ್ವಹಿಸದಿದ್ದರೆ, ಎರಡು ರೀತಿಯ ಥೈರಾಯ್ಡ್ ಮಹಿಳೆಯರ ಮೇಲೆ ಪರಿಣಾಮ ಬೀರುತ್ತದೆ.

- **ಹೈಪೋಥೈರಾಯ್ಡಿಸಮ್: ಥೈರಾಯ್ಡ್ ಹಾರ್ಮೋನ್ ಪ್ರಮಾಣ ಕಡಿಮೆಯಾದಾಗ.**
- **ಹೈಪರ್ ಥೈರಾಯ್ಡಿಸಮ್: ಥೈರಾಯ್ಡ್ ಹಾರ್ಮೋನ್ ಅಧಿಕವಾಗಿ ಉತ್ಪತ್ತಿಯಾಗಲು ಪ್ರಾರಂಭಿಸಿದಾಗ.**

**ಥೈರಾಯ್ಡ್ ಪರೀಕ್ಷೆಗೆ ಒಳಗಾಗದಿರುವುದು:** ಗರ್ಭಿಣಿ ಮಹಿಳೆಯರ ದೊಡ್ಡ ತಪ್ಪು ಎಂದರೆ ಗರ್ಭಧಾರಣೆಯನ್ನು ಯೋಜಿಸುವಾಗ ಅಥವಾ ಆರಂಭಿಕ ತಿಂಗಳುಗಳಲ್ಲಿ ಅವರು ಥೈರಾಯ್ಡ್ ಪರೀಕ್ಷೆಗೆ ಒಳಗಾಗದಿರುವುದು. ಈಗಾಗಲೇ ಥೈರಾಯ್ಡ್ ಸಮಸ್ಯೆ ಇದ್ದರೆ ಮತ್ತು ಅದಕ್ಕೆ ಚಿಕಿತ್ಸೆ ನೀಡದಿದ್ದರೆ, ಅದು ತಾಯಿ ಮತ್ತು ಮಗುವಿಗೆ ಅಪಾಯಕಾರಿಯಾಗಬಲ್ಲದು. ಗರ್ಭಧಾರಣೆಯ ಮೊದಲು ಮತ್ತು ಗರ್ಭಧಾರಣೆಯಾದ ತಕ್ಷಣ ಥೈರಾಯ್ಡ್ ಪ್ರೊಫೈಲ್ ಪರೀಕ್ಷೆ ಮಾಡಬೇಕೆಂದು ವೈದ್ಯರು ಸಲಹೆ ನೀಡುತ್ತಾರೆ.

**ಕಬ್ಬಿಣ ಮತ್ತು ಕ್ಯಾಲ್ಸಿಯಂ ಪೂರಕಗಳನ್ನು ಒಟ್ಟಿಗೆ ತೆಗೆದುಕೊಳ್ಳುವುದು** ಗರ್ಭಿಣಿ ಮಹಿಳೆಯರಿಗೆ ಕಬ್ಬಿಣಾಂಶ ಮತ್ತು ಕ್ಯಾಲ್ಸಿಯಂ ಎರಡೂ ಅಗತ್ಯವಿದೆ. ಆದರೆ ಈ ಎರಡು ಪೂರಕಗಳನ್ನು ಒಟ್ಟಿಗೆ ತೆಗೆದುಕೊಳ್ಳುವುದರಿಂದ ಥೈರಾಯ್ಡ್ ಔಷಧದ ಪರಿಣಾಮ ಕಡಿಮೆಯಾಗುತ್ತದೆ.

ಗರ್ಭಿಣಿಯರು ಕನಿಷ್ಠ 4ಗಂಟೆಗಳ ಅಂತರದಲ್ಲಿ ಕಬ್ಬಿಣ ಮತ್ತು ಕ್ಯಾಲ್ಸಿಯಂ ಪೂರಕಗಳನ್ನು ತೆಗೆದುಕೊಳ್ಳಬೇಕು.

**ಅಯೋಡಿನ್ ಕೊರತೆ:** ಗರ್ಭಾವಸ್ಥೆಯಲ್ಲಿ ದೇಹಕ್ಕೆ ಹೆಚ್ಚಿನ ಅಯೋಡಿನ್ ಅಗತ್ಯವಿರುತ್ತದೆ ಏಕೆಂದರೆ ಇದು ಥೈರಾಯ್ಡ್ ಹಾರ್ಮೋನ್ ಉತ್ಪಾದನೆಯಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಆದರೆ ಅನೇಕ ಮಹಿಳೆಯರು ಅಯೋಡಿಕರಿಸಿದ ಉಪ್ಪು ಅಥವಾ ಅಯೋಡಿನ್-ಭರಿತ ಆಹಾರವನ್ನು ತೆಗೆದುಕೊಳ್ಳುವುದಿಲ್ಲ, ಇದು ಹೈಪೋಥೈರಾಯ್ಡಿಸಮ್ ಸಾಧ್ಯತೆಗಳನ್ನು ಹಲವು ಪಟ್ಟು ಹೆಚ್ಚಿಸುತ್ತದೆ. ಆದ್ದರಿಂದ, ಗರ್ಭಧಾರಣೆಯನ್ನು ಯೋಜಿಸುವಾಗ ಅಯೋಡಿಕರಿಸಿದ ಉಪ್ಪನ್ನು ಸೇವಿಸಿ.

**ಗರ್ಭಾವಸ್ಥೆಯಲ್ಲಿ ಥೈರಾಯ್ಡ್‌ನ ಲಕ್ಷಣಗಳು ಯಾವುವು?:** ತೀವ್ರ ದೈಹಿಕ ಆಯಾಸ, ಮಲಬದ್ಧತೆ, ತೂಕ ಹೆಚ್ಚಾಗುವುದು, ತೂಕ ಕಡಿಮೆಯಾಗುವುದು, ಕೂದಲು ಉದುರುವಿಕೆ,,ತ್ವರಿತ ಹೃದಯ ಬಡಿತ, ಶೀತ, ದೇಹ ಊತ, ಕೇಂದ್ರೀಕರಿಸುವಲ್ಲಿ ತೊಂದರೆ, ಯಾವುದೇ ಕಾರಣವಿಲ್ಲದೆ ಬೆವರುವುದು, ಕಿರಿಕಿರಿ, ಹೆಚ್ಚಿದ ಹಸಿವು, ಕೈ ನಡುಕ

**ಅತಿಯಾದ ಮಾನಸಿಕ ಒತ್ತಡ ಮತ್ತು ನಿದ್ರೆಯ ಕೊರತೆ:** ಒತ್ತಡ, ನಿದ್ರೆಯ ಕೊರತೆಯು ದೇಹದಲ್ಲಿ ಕಾರ್ಟಿಸೋಲ್ ಹಾರ್ಮೋನ್ ಮಟ್ಟವನ್ನು ಹೆಚ್ಚಿಸುತ್ತದೆ, ಇದು ಥೈರಾಯ್ಡ್ ಕಾರ್ಯವನ್ನು ಅಡ್ಡಿಪಡಿಸುತ್ತದೆ. ಇದು ಗರ್ಭಿಣಿ



ಮಹಿಳೆಯರಲ್ಲಿ, ವಿಶೇಷವಾಗಿ ಮೊದಲ, ಮೂರನೇ ತ್ರೈಮಾಸಿಕಗಳಲ್ಲಿ ಸಾಮಾನ್ಯ ಸ್ಥಿತಿಯಾಗಿದೆ. ಮಾನಸಿಕ ಒತ್ತಡವು ಥೈರಾಯ್ಡ್ ಬರುವ ಸಾಧ್ಯತೆಗಳನ್ನು ಹಲವು ಪಟ್ಟು ಹೆಚ್ಚಿಸುತ್ತದೆ. ಮೂರನೇ ತ್ರೈಮಾಸಿಕದಲ್ಲಿ ಮಾನಸಿಕ ಒತ್ತಡವನ್ನು ಕಡಿಮೆ ಮಾಡಲು, ಯೋಗ, ಪ್ರಾಣಾಯಾಮ ಮಾಡಿ.

**ವೈದ್ಯರನ್ನು ಸಂಪರ್ಕಿಸದೆ ಔಷಧಿಯನ್ನು ನಿಲ್ಲಿಸುವುದು:** ಹಲವು ಬಾರಿ ಥೈರಾಯ್ಡ್ ಇರುವ ಮಹಿಳೆಯರು ಗರ್ಭಿಣಿಯಾದ ನಂತರ ಔಷಧಿಯನ್ನು ತೆಗೆದುಕೊಳ್ಳುವುದನ್ನು ನಿಲ್ಲಿಸುತ್ತಾರೆ ಅಥವಾ ವೈದ್ಯರನ್ನು ಸಂಪರ್ಕಿಸದೆ ಡೋಸೇಜ್ ಅನ್ನು ಕಡಿಮೆ ಮಾಡುತ್ತಾರೆ, ಇದು ಸಮಸ್ಯೆಯನ್ನು ಇನ್ನಷ್ಟು ಉಲ್ಬಣಗೊಳಿಸುತ್ತದೆ. ನಿಮಗೆ ಥೈರಾಯ್ಡ್ ಕಾಯಿಲೆ ಇದ್ದರೆ ಮತ್ತು ನೀವು ಗರ್ಭಿಣಿಯಾಗಿದ್ದರೆ, ಖಂಡಿತವಾಗಿಯೂ ಥೈರಾಯ್ಡ್ ಔಷಧಿಯನ್ನು ತೆಗೆದುಕೊಂಡು ಅದರ ಬಗ್ಗೆ ವೈದ್ಯರೊಂದಿಗೆ ಮಾತನಾಡಿ.

**ಗರ್ಭಾವಸ್ಥೆಯಲ್ಲಿ ಥೈರಾಯ್ಡ್ ಮಗುವಿನ ಮೇಲೆ ಯಾವ ಪರಿಣಾಮ ಬೀರುತ್ತದೆ:** ಗರ್ಭಾವಸ್ಥೆಯಲ್ಲಿ ಥೈರಾಯ್ಡ್ ಇರುವುದು ಭ್ರೂಣದ ಬೆಳವಣಿಗೆಗೆ ಅಡ್ಡಿಯಾಗುತ್ತದೆ . ಕೆಲವು ಸಂದರ್ಭಗಳಲ್ಲಿ, ಥೈರಾಯ್ಡ್ ಅಕಾಲಿಕ ಹೆರಿಗೆ, ಗರ್ಭಪಾತದ ಅಪಾಯ, ಕಡಿಮೆ ಜನನ ತೂಕ ಮತ್ತು ಜನನದ ನಂತರ ಮಗುವಿನ ಮಾನಸಿಕ ಬೆಳವಣಿಗೆಯನ್ನು ಕಡಿಮೆ ಮಾಡುತ್ತದೆ.

**ಥೈರಾಯ್ಡ್ ತಡೆಗಟ್ಟಲು ಏನು ಮಾಡಬೇಕು?:** ಗರ್ಭಧಾರಣೆಯನ್ನು ಯೋಜಿಸುವಾಗ ಮತ್ತು ನೀವು ಗರ್ಭಿಣಿಯಾದ ತಕ್ಷಣ, ನಿಮ್ಮ ಥೈರಾಯ್ಡ್ ಅನ್ನು ತಕ್ಷಣವೇ ಪರೀಕ್ಷಿಸಿ. ಪ್ರತಿದಿನ ಬೆಳಿಗ್ಗೆ ಖಾಲಿ ಹೊಟ್ಟೆಯಲ್ಲಿ ವೈದ್ಯರು ಸೂಚಿಸಿದ ಥೈರಾಯ್ಡ್ ಔಷಧಿಯನ್ನು ತೆಗೆದುಕೊಳ್ಳಿ. ನಿಮ್ಮ ಆಹಾರದಲ್ಲಿ ಅಯೋಡಿನ್, ಸೆಲೆನಿಯಮ್, ಸತು, ವಿಟಮಿನ್ ಬಿ 12 ಸಮೃದ್ಧವಾಗಿರುವ ಆಹಾರವನ್ನು ಸೇರಿಸಿ. ಗರ್ಭಾವಸ್ಥೆಯಲ್ಲಿ ಮಾನಸಿಕ ಒತ್ತಡವನ್ನು ಕಡಿಮೆ ಮಾಡಲು, ಯೋಗ, ಧ್ಯಾನ ಮತ್ತು ನಡಿಗೆಯಂತಹ ಚಟುವಟಿಕೆಗಳನ್ನು ಅಳವಡಿಸಿಕೊಳ್ಳಿ. ಮಾರುಕಟ್ಟೆಯಲ್ಲಿ ಲಭ್ಯವಿರುವ ಕೀಟನಾಶಕಗಳಿಂದ ತುಂಬಿದ ತರಕಾರಿಗಳು, ಪ್ಲಾಸ್ಟಿಕ್ ಪಾತ್ರೆಗಳು ಮತ್ತು ರಾಸಾಯನಿಕಗಳಿಂದ ದೂರವಿರಿ.

• ದೇಶದಲ್ಲಿ, ರಾಜ್ಯದಲ್ಲಿ ಸಾಮಾಜಿಕ ನ್ಯಾಯದ ಕಾರ್ಯಗಳನ್ನು ಜಾರಿ ಮಾಡುವುದು ನಮ್ಮ ಪಕ್ಷ ಮಾತ್ರ

# ರಾಜ್ಯದ ತಲಾ ಆದಾಯವನ್ನು ಹೆಚ್ಚಿಸುವಲ್ಲಿ ದೇಶದಲ್ಲೇ ಪ್ರಥಮ: ಸಿದ್ದರಾಮಯ್ಯ

• ಉಮೇಶ್ ಬಾಣಾವರ
• ಉದಯವಾಹಿನಿ ಅರಸೀಕೆರೆ

ಕರ್ನಾಟಕ ರಾಜ್ಯ ತಲಾ ಆದಾಯದಲ್ಲಿ ಇಡೀ ದೇಶದಲ್ಲಿ ಪ್ರಥಮ ಸ್ಥಾನ ಪಡೆದಿದ್ದು ಇದಕ್ಕೆ ಪ್ರಮುಖ ಕಾರಣ ಜನರ ಕೊಳ್ಳುವ ಶಕ್ತಿ ಹೆಚ್ಚಾಗಿದೆ ಇದಕ್ಕೆ ಗ್ಯಾರಂಟಿ ಯೋಜನೆಗಳು ಪ್ರಮುಖ ಕಾರಣ ಬಿಜೆಪಿಯವರಿಗೆ ಆರ್ಥಿಕತೆ ಅರ್ಥ ಆಗುವುದಿಲ್ಲ ಅದಕ್ಕೆ ರಾಜ್ಯ ಸರ್ಕಾರದ ಬಳಿ ಅಭಿವೃದ್ಧಿಗೆ ಹಣ ಇಲ್ಲ ಎಂದು ಸುಳ್ಳು ಅಪಪ್ರಚಾರ ಮಾಡುತ್ತಿದ್ದಾರೆ ರಾಜಕೀಯ ಪ್ರೇರಿತ ಸುಳ್ಳುಗಳನ್ನು ಹೇಳಿ ರಾಜ್ಯದ ಜನರ ದಾರಿ ತಪ್ಪಿಸುವ ಯತ್ನ ಮಾಡಿದರು ರಾಜ್ಯ ಜನತೆ ನಂಬುವುದಿಲ್ಲ ಎಂದರು.

ಸರ್ಕಾರದ ಸಾಧನಾ ಸಮಾವೇಶದಲ್ಲಿ ಲಕ್ಷ ಲಕ್ಷ ಜನ ಫಲಾನುಭವಿಗಳು ಸೇರಿ ಸರ್ಕಾರಕ್ಕೆ ಅಭಿನಂದನೆ ಸಲ್ಲಿಸುತ್ತಿದ್ದಾರೆ ಇದು ನುಡಿದಂತೆ ನಡೆದ ಸರ್ಕಾರದ ಸಾಧನೆ ನಾವು ಅಭಿವೃದ್ಧಿಗೆ 1.20 ಲಕ್ಷ ಕೋಟಿ ಖರ್ಚು ಮಾಡುವುದರ ಜೊತೆಗೆ ಗ್ಯಾರಂಟಿ ಯೋಜನೆಗಳಿಗೆ 56 ಸಾವಿರ ಕೋಟಿ ಖರ್ಚು ಮಾಡಿ ಜನರ ಮನೆ ಬಾಗಿಲಿಗೆ ಅಭಿವೃದ್ಧಿ ಕಾರ್ಯಗಳನ್ನು ತಲುಪಿಸಿದ್ದೇವೆ.

ದೆಹಲಿಯಲ್ಲಿ ನಡೆದ ಹಿಂದುಳಿದ ವರ್ಗಗಳ ನಾಯಕರ ಸಮ್ಮೇಳನದಲ್ಲಿ ರಾಹುಲ್ ಗಾಂಧಿಯವರು ಹಿಂದುಳಿದವರ ಸಮುದಾಯಗಳ ಬಗ್ಗೆ ತಮ್ಮ ಗ್ರಹಿಕೆಯನ್ನು ಸ್ಪಷ್ಟಪಡಿಸಿದ್ದಾರೆ ಹಿಂದುಳಿದ ವರ್ಗಗಳು ಮಹಿಳೆಯರು ದಲಿತರು ಶೋಷಿತರು ಎಲ್ಲಾ ಜಾತಿಯರ ಬಡವರ ಬದುಕಿಗೆ ಬೇಕಾದ ಕಾರ್ಯಕ್ರಮಗಳನ್ನು ನಮ್ಮ ಸರ್ಕಾರ ರೂಪಿಸಿದೆ

ನಮ್ಮದು ಸಾಮಾಜಿಕ ನ್ಯಾಯ ಮತ್ತು ಬಡವರ ಪ್ರಗತಿಗಾಗಿ ಸಂವಿಧಾನದ ಮೌಲ್ಯಗಳ ಈಡೇರಿಕಾಗಿ ಕಾರ್ಯಕ್ರಮ ರೂಪಿಸಿ ಜಾರಿ ಮಾಡುವ ಏಕೈಕ ಪಕ್ಷ ದೇಶದಲ್ಲಿ ರಾಜ್ಯದಲ್ಲಿ ಸಾಮಾಜಿಕ ನ್ಯಾಯದ ಕಾರ್ಯಗಳನ್ನು ಜಾರಿ ಮಾಡುವುದು ನಮ್ಮ ಪಕ್ಷ ಮಾತ್ರ ಮುಖ್ಯಮಂತ್ರಿ ಸಿದ್ದರಾಮಯ್ಯ ಎಂದರು. ಅರಸೀಕೆರೆ ಕ್ಷೇತ್ರದ ಜನರುಮುಖ್ಯಮಂತ್ರಿಗಳ ಭಾಷಣದ ವೇಳೆಯಲ್ಲಿ ಶಿವಲಿಂಗೇಗೌಡರಿಗೆ ಮಂತ್ರಿ ಸ್ಥಾನ ನೀಡಬೇಕೆಂದು ಒತ್ತಾಯಿಸಿದಾಗ ಮುಂದಿನ ದಿನಗಳಲ್ಲಿ ಶಿವಲಿಂಗೇಗೌಡರಿಗೆ ಉತ್ತಮ ರಾಜಕೀಯ ಭವಿಷ್ಯವಿದೆ ಇದರಲ್ಲಿ ಯಾವುದೇ ಅನುಮಾನ ಇಲ್ಲ ಅವರ ರಾಜಕೀಯ ಮತ್ತು ಅರಸೀಕೆರೆ ಕ್ಷೇತ್ರದ ಅಭಿವೃದ್ಧಿ ಕೆಲಸ ಮೆಚ್ಚಿ ನೀವು ನಾಲ್ಕು ಬಾರಿ ಅವರನ್ನು ಚುನಾಯಿಸಿದ್ದೀರಿ ಮುಂದಿನ ದಿನಗಳಲ್ಲಿಯೂ ಸಹ ಅವರ ಗೆಲುವು ಶತಸಿದ್ಧ ಎಂದರು.



ಉದಯವಾಹಿನಿ ಚಿತ್ರ

> ಮಹಾಭಾರತದಲ್ಲಿ ಭೀಷ್ಮ ಧರ್ಮರಾಯನಿಗೆ ಒಂದು ಮಾತು ಹೇಳುತ್ತಾನೆ ತಂದೆ ತಾಯಿ ಋಣ ದೇವರ ಋಣ ಗುರುವಿನ ಋಣ ಸಮಾಜದ ಋಣ ಈ ಋಣಗಳನ್ನು ಧರ್ಮದಿಂದ ತೀರಿಸಬೇಕು ಎಂದು ಹೇಳುತ್ತಾನೆ ಜನಪರ ಕಾರ್ಯಗಳನ್ನು ಮಾಡುತ್ತ ಶಿವಲಿಂಗೇಗೌಡರು ಸಮಾಜದ ಋಣವನ್ನು ತೀರಿಸುವ ಕೆಲಸ ಮಾಡಿದ್ದಾರೆ ಮರಕ್ಕೆ ಬೇರು ಎಷ್ಟು ಮುಖ್ಯವೋ ಮನುಷ್ಯನಿಗೆ ನಂಬಿಕೆ ಕೂಡ ಅಷ್ಟೇ ಮುಖ್ಯ ಮುಂದಿನ ವಿಧಾನಸಭಾ ಚುನಾವಣೆಯಲ್ಲಿ ಹಾಸನ ಜಿಲ್ಲೆಯಲ್ಲಿ ಏಳಕ್ಕೆ ಏಳು ಸ್ಥಾನಗಳನ್ನು ಗೆಲ್ಲುತ್ತೇವೆ ಎಂಬ ವಿಶ್ವಾಸ ಇದೆ. **-ಡಿ ಕೆ ಶಿವಕುಮಾರ್, ಡಿಸಿಎಂ**

**ಕ್ಷೇತ್ರದ ಅಭಿವೃದ್ಧಿಗಾಗಿ ಕೆಲಸ**

ಕಾರ್ಯಕ್ರಮಕ್ಕೆ ಉದ್ಘಾಟನೆಗೆ ಮುನ್ನ ಅರಸೀಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ವಿವಿಧ ಕಾಮಗಾರಿಗಳ ಶಂಕುಸ್ಥಾಪನ ಉದ್ಘಾಟನಾ ಸಮಾವೇಶದಲ್ಲಿ ಪಾಲ್ಗೊಂಡರು.

ಹಾಸನ ಜಿಲ್ಲೆಯ ಜನತೆ ಶಿವಲಿಂಗೇಗೌಡ ಮತ್ತು ಶ್ರೇಯಸ್ ಪಟೇಲ್‌ರನ್ನು ಗೆಲ್ಲಿಸಿ ರಾಜ್ಯಕ್ಕೆ ಎರಡು ಕಣ್ಣುಗಳ ಶಕ್ತಿ ಕೊಟ್ಟಿದ್ದಾರೆ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್. ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಅತಿ ಹೆಚ್ಚು ಸ್ಥಾನಗಳನ್ನು ಗೆದ್ದಾಗ ಅರಸೀಕೆರೆ ಕ್ಷೇತ್ರದ ಕೆ ಎಂ ಶಿವಲಿಂಗೇಗೌಡ ಮತ್ತು ಹಾಸನ ಲೋಕಸಭಾ ಚುನಾವಣೆಯಲ್ಲಿ ಶ್ರೇಯಸ್ ಪಟೇಲ್ ಅವರನ್ನು ಗೆಲ್ಲಿಸಿ ರಾಜ್ಯಕ್ಕೆ ಎರಡು ಕಣ್ಣುಗಳಾಗಿ ಹಾಸನದ ಜನತೆ ನಮಗೆ ಶಕ್ತಿ ಕೊಟ್ಟಿದ್ದೀರಿ ಅರಸೀಕೆರೆ ತಾಲ್ಲೂಕಿಗೆ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಮೊರಾರ್ಜಿ ದೇಸಾಯಿ ಶಾಲೆಗಳನ್ನು ನಿರ್ಮಿಸಿ ಶೈಕ್ಷಣಿಕ ಕ್ಷೇತ್ರಕ್ಕೆ ಶಕ್ತಿ ನೀಡುತ್ತ ಅರಸೀಕೆರೆ ಕ್ಷೇತ್ರದ ಅಭಿವೃದ್ಧಿಗಾಗಿ ವಿವಿಧ ಕೆಲಸಗಳುಸಗಳನ್ನು ಶಿವಲಿಂಗೇಗೌಡ ಅವರು ಮಾಡಿದ್ದಾರೆ.

ಸಮಾರಂಭದಲ್ಲಿ ಸಹಕಾರ ಸಚಿವರು ಮತ್ತು ಹಾಸನ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ ಏನ್ ರಾಜಣ್ಣ ವಸತಿ ಸಚಿವರಾದ ಜಮೀರ್ ಅಹ್ಮದ್ ಖಾನ್ ಹಾಸನ್ ಲೋಕಸಭಾ ಸದಸ್ಯರಾದ ಶ್ರೇಯಸ್ ಪಟೇಲ್. ಮಾತನಾಡಿದರು. ಹಾಸನ ಜಿಲ್ಲಾಧಿಕಾರಿಗಳಾದ ಲತಾ ಕುಮಾರಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಣ ಅಧಿಕಾರಿಗಳು. ಜಿಲ್ಲಾ ಪೊಲೀಸ್ ವರಿಷ್ಠ ಅಧಿಕಾರಿಗಳು ಸೇರಿದಂತೆ ರಾಜ್ಯಮಟ್ಟದ ಹಲವಾರು ಅಧಿಕಾರಿಗಳು ತರೀಕೆರೆ ಕ್ಷೇತ್ರದ ಶಾಸಕ ಸುರೇಶ್ ನಗರಸಭೆ ಅಧ್ಯಕ್ಷರಾದ ಸಮೀವುಲ್ಲಾ ಗ್ಯಾರಂಟಿ ಯೋಜನೆಗಳ ಅಧ್ಯಕ್ಷರಾದ ಧರ್ಮ ಶೇಖರ್ ನಗರಸಭೆ ಉಪಾಧ್ಯಕ್ಷರಾದ ಮನೋಹರ್ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ನಗರಸಭೆ ವತಿಯಿಂದ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಹಾಸನ ಜಿಲ್ಲಾ ಉಸ್ತುವಾರಿ ಹಾಗೂ ಸಹಕಾರ ಸಚಿವರಾದ ಕೆಎನ್ ರಾಜಣ್ಣ, ವಸತಿ ಸಚಿವ ಜಮೀರ್ ಅಹ್ಮದ್ ಖಾನ್ ಮತ್ತು ಶಾಸಕ ಶಿವಲಿಂಗೇಗೌಡರಿಗೆ ನಗರ ಸಭೆ ಅಧ್ಯಕ್ಷರಾದ ಎಮ್ ಸಮೀವುಲ್ಲಾ. ಆಯುಕ್ತಾರಾದ ಕೃಷ್ಣಮೂರ್ತಿ ಅರಸೀಕೆರೆ ತಾಲೂಕ್ ತಹಶೀಲ್ದಾರ್ ಸಂತೋಷ್ ಕುಮಾರ್. ಪೌರ ಸನ್ಮಾನ ಮಾಡಿದರು.

### ಶಿವಲಿಂಗೇಗೌಡರಿಗೆ ಸಚಿವ ಸ್ಥಾನ ನೀಡುವಂತೆ ಸಚಿವ ಜಮೀರ್ ಅಹ್ಮದ್ ಖಾನ್ ಮನವಿ

ಕಾಂಗ್ರೆಸ್ ಸರ್ಕಾರದ ಆಡಳಿತ ಅವಧಿಯಲ್ಲಿ ಆರ್ಥಿಕವಾಗಿ ದಿವಾಳಿಯಾಗಿದೆ ಎಂಬ ವಿರೋಧ ಪಕ್ಷಗಳ ಆಪಾದನೆಗೆ ಉತ್ತರಿಸಿ ಮಾತನಾಡಿದ ವಸತಿ ಸಚಿವ ಜಮೀರ್ ಅಹ್ಮದ್ ಖಾನ್ ರವರು ಕಾಂಗ್ರೆಸ್ ಆಡಳಿತ ಅವಧಿಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ರಾಜ್ಯದ ಬಡವರಿಗೆ ಅತಿ ಹೆಚ್ಚು ಮನೆಗಳನ್ನು ನೀಡಿದ್ದಾರೆ ಇದರಿಂದ ಮುಖ್ಯಮಂತ್ರಿಗಳ ಬಡವರ ಕಾಳಜಿ ತೋರಿಸುತ್ತಿದೆ ಅರಸೀಕೆರೆ ಕ್ಷೇತ್ರದಲ್ಲಿ ಜಿಲ್ಲಾಮಟ್ಟದಲ್ಲಿ ನಡೆಯುವಂತೆ ಕಾರ್ಯಕ್ರಮವನ್ನು ಶಿವಲಿಂಗೇಗೌಡರು ಆಯೋಜಿಸಿದ್ದಾರೆ ಇವರ ಜನಪ್ರಿಯತೆ ಮತ್ತು ಕಾಂಗ್ರೆಸ್ ಪಕ್ಷದ ಗ್ಯಾರಂಟಿ ಯೋಜನೆಗಳ ಅಭಿಮಾನವಾಗಿ ಇಷ್ಟೊಂದು ಜನತೆ ಸಮೋರಾಪಾದಿಯಲ್ಲಿ ಸೇರಿದೆ ಇದರಿಂದ ಬರುವ ದಿನಗಳಲ್ಲಿ ಶಿವಲಿಂಗೇಗೌಡರಿಗೆ ಸಚಿವ ಸ್ಥಾನ ನೀಡಬೇಕಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಮತ್ತು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರಲ್ಲಿ ಸಚಿವ ಜಮೀರ್ ಅಹ್ಮದ್ ಖಾನ್ ಮನವಿ ಮಾಡಿದರು.

## ಕಾರ್ಗಿಲ್ ವಿಜಯೋತ್ಸವ; ಸೈನಿಕರ ತ್ಯಾಗ ಬಲಿದಾನ ಮರೆಯಲಾಗದು

• ಉದಯವಾಹಿನಿ ಮುದ್ದೇಬಿಹಾಳ

ಈ ದೇಶವನ್ನು ಕಾಪಾಡಲು ಗಡಿಯಲ್ಲಿ ನಿಂತು ಜೀವವನ್ನೇ ತ್ಯಾಗಮಾಡಿದ ಹುತಾತ್ಮರ ಪಾಠವನ್ನು ಮರೆಯಬಾರದು. ಪ್ರತಿ ಮನೆಯೊಳಗೊಂದು ಶಕ್ತಿ, ಪ್ರತಿಯೊಬ್ಬ ಮಗನು ದೇಶಕ್ಕಾಗಿ ಸಜ್ಜಾಗುವ ಮನಸ್ಥಿತಿಯ ಶಕ್ತಿ ಬೆಳೆಬೇಕು ಎಂದು ಸಿದ್ದಾರ್ಥ ಪಬ್ಲಿಕ್ ಸ್ಕೂಲ್‌ನ ಕಾರ್ಯದರ್ಶಿ ರಾಮಣ್ಣ ಖಾನಾಪುರ ಹೇಳಿದರು. ಕಾರ್ಗಿಲ್ ವಿಜಯೋತ್ಸವದ 26ನೇ ವಾರ್ಷಿಕೋತ್ಸವದ ಅಂಗವಾಗಿ ಶನಿವಾರ ಸಿದ್ದಾರ್ಥ ಪಬ್ಲಿಕ್ ಸ್ಕೂಲ್‌ನಲ್ಲಿ ಆಯೋಜಿಸಲಾಗಿದ್ದ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ರಾಮಣ್ಣ ಖಾನಾಪುರ,

ಇಂದಿನ ಸಮಾಜದಲ್ಲಿ ವೈದ್ಯ, ಇಂಜಿನಿಯರ್ ಆಗಲು ಮಕ್ಕಳಿಗೆ ಪ್ರೇರಣೆ ನೀಡಲಾಗುತ್ತಿದೆ. ಆದರೆ, ದೇಶವನ್ನೇ ಉಳಿಸುವ ಯೋಧನ ನೈತಿಕತೆ, ಶೌರ್ಯ ಸಾಹಸ, ಶಿಸ್ತಿಗೆ ಮಾತ್ರವೇ ನಿಜವಾದ ಗೌರವವೆಂಬ ಮಾತು ಮನೆಮಾತಾಗಬೇಕೆಂದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಮಾಜಿ ಸೈನಿಕ ಬಸವರಾಜ ನಾಗರಾಳ, ತಮ್ಮ ಅನುಭವದ ಮೂಲಕ ಕಾರ್ಗಿಲ್ ಯುದ್ಧದ ಘೋರ ಸತ್ಯಗಳನ್ನು ವಿದ್ಯಾರ್ಥಿಗಳ ಮುಂದೆ ಮಂಡಿಸಿದರು. ಅಪಾರ ಹಿಮದಲ್ಲಿ ನಿಲ್ಲುವ ಸೇನೆಯ ಜೀವನ ಪಾಠದಂತಿದೆ. ಪಾಕಿಸ್ತಾನ ಎಂಬ ಶತ್ರು ರಾಷ್ಟ್ರ ಯಾವತ್ತೂ ನಂಬಿಕೆಗಾಗಿ ಅರ್ಹವಲ್ಲ. ಗಡಿಯಲ್ಲಿ ಪ್ರತಿದಿನ ಯುದ್ಧದ ಆತಂಕ, ಮರಣದ ನೆರಳು, ಆದರೆ ಮನಸ್ಸಿನಲ್ಲಿ ಮಾತ್ರ ತಾಯಿ ಭಾರತ ಮಾತೆಯ ರಕ್ಷಣಾ ಮಂತ್ರವಿರುತ್ತದೆ ಎಂದು ಹೇಳಿದರು. ಕಾರ್ಯಕ್ರಮದ ಪ್ರಮುಖ ಆಕರ್ಷಣೆಯಾಗಿ, ಶಾಲೆಯ ಪುಟಾಣಿ ಮಕ್ಕಳು ವೀರ ಸೈನಿಕರ ವೇಷದಲ್ಲಿ ರಾಷ್ಟ್ರಭಕ್ತಿಯ ನೃತ್ಯ, ರೂಪಕ ಹಾಗೂ ಹಾಡುಗಳ ಮೂಲಕ ಪ್ರೇಕ್ಷಕರ ಕಣ್ಣು ತುಂಬಿಸಿದರು. ವೇದಿಕೆಯಲ್ಲಿ ಶಾಲಾ ಸಂಸ್ಥೆಯ ಅಧ್ಯಕ್ಷೆ ಶ್ರೀಮತಿ ಸರಸ್ವತಿ ಖಾನಾಪುರ, ಅಧ್ಯಯನ ಕೇಂದ್ರದ ಪ್ರತಿನಿಧಿ ಸಂಧೀಪ್, ಗುರುಬಳಗ, ಪಾಲಕರು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಕಾರ್ಗಿಲ್ ಯುದ್ಧದಲ್ಲಿ ವೀರಗತಿಹೊಂದಿದ ಸೈನಿಕರಿಗೆ ಮೌನಾಚರಣೆ ಶ್ರದ್ಧಾಂಜಲಿ ಸಲ್ಲಿಸಲಾಯಿತು.


ಉದಯವಾಹಿನಿ ಚಿತ್ರ

> ದೇಶವಿಲ್ಲದೆ ಯಾವುದೇ ವ್ಯಕ್ತಿಯ ಗುರುತು ಸಾಧ್ಯವಿಲ್ಲ. ಮಕ್ಕಳಲ್ಲಿ ರಾಷ್ಟ್ರಪ್ರೇಮ ಬೆಳೆಸುವುದು ಎಲ್ಲರ ನೈತಿಕ ಜವಾಬ್ದಾರಿ. ದೇಶ ಮೊದಲು ಧರ್ಮ, ಜಾತಿ ನಂತರ. **-ಮಾರುತಿ ರುದ್ರಾಪೂರ, ಶಾಲೆಯ ಪ್ರಾಂಶುಪಾಲ**

> ಹುತಾತ್ಮ ಸೈನಿಕರು ತೋರಿಸಿದ ಶೌರ್ಯ ಕೇವಲ ಇತಿಹಾಸವಲ್ಲ, ಪ್ರತಿ ಪಾಠಶಾಲೆಯಲ್ಲಿ ಕಲಿಸಬೇಕಾದ ಜೀವನ ಪಾಠವಾಗಿದೆ. **-ಸಿದ್ದಾರ್ಥ ಖಾನಾಪುರ, ಆಡಳಿತಾಧಿಕಾರಿ**

## ಸಮಾಜದ ಸ್ವಾಸ್ಥ್ಯ ಕಾಪಾಡುವ ಹಾಗೂ ಜನತೆಗೆ ನಿಜ ತಿಳಿಸುವ ಕೆಲಸ ಪತ್ರಿಕೆಗಳು ಮಾಡಬೇಕು: ಶಿವಾನಂದ

• ಉದಯವಾಹಿನಿ ಕಾರವಾರ

ಸಮಾಜದಲ್ಲಿ ಪತ್ರಿಕೆಗಳ ಪಾತ್ರ ದೊಡ್ಡದು. ಸಮಾಜದ ಸ್ವಾಸ್ಥ್ಯ ಕಾಪಾಡುವ ಹಾಗೂ ಜನತೆಗೆ ಸಮಾಜದಲ್ಲಿ ನಡೆಯುವ ವಿದ್ಯಮಾನಗಳ ಕುರಿತು ಸತ್ಯವನ್ನು ತಿಳಿಸುವ ಕೆಲಸ ಪತ್ರಿಕೆಗಳು ಮಾಡಬೇಕು. ಈ ಜವಾಬ್ದಾರಿಯನ್ನು ಪತ್ರಕರ್ತರಾದವರು ಸಮರ್ಥವಾಗಿ ನಿರ್ವಹಿಸುವಂತಾಗಬೇಕು ಎಂದು ಡಿ.ವೈ.ಎಸ್.ಪಿ. ಶಿವಾನಂದ ಮದರಖಂಡಿ ನುಡಿದರು.

ಅವರು ದಾಂಡೇಲಿಯ ಬ್ರಹ್ಮಕುಮಾರಿಸ್ ಈಶ್ವರೀಯ ವಿಶ್ವವಿದ್ಯಾಲಯದಲ್ಲಿ ಆಯೋಜಿಸಿದ ಪತ್ರಿಕಾ ದಿನಾಚರಣೆ ಕಾರ್ಯಕ್ರಮವನ್ನು ಜ್ಯೋತಿ ಬೆಳಗಿಸಿ ಉದ್ಘಾಟಿಸಿ ಮಾತನಾಡಿದರು.

ಮುಖ್ಯ ಅತಿಥಿಯಾಗಿದ್ದ ಮೌಂಟ್ ಅಬು ಮೀಡಿಯಾ ವಿಭಾಗದ ಸಂಯೋಜಕರಾದ ವಿಶ್ವಾಸ ಅವರು ಮಾತನಾಡಿ, ಸಮಾಜದ ಕುಂದುಕೊರತೆಗಳನ್ನು ಸರಿಯಾದ ಸಾಕ್ಷಿಗಳ ಮೂಲಕ ಮುನ್ನಲೆಗೆ ತಂದು ಅವುಗಳನ್ನು ಸರಿಪಡಿಸುವಲ್ಲಿ ಮುಖ್ಯ ಪಾತ್ರ ವಹಿಸುವ ಪತ್ರಕರ್ತರ ಸೇವೆ ಶ್ಲಾಘನೀಯವೆಂದು ನುಡಿದರು. ಪ್ರಜಾಪಿತ ಬ್ರಹ್ಮಕುಮಾರಿಸ್ ಈಶ್ವರಿ ವಿಶ್ವವಿದ್ಯಾಲಯ ಮೌಂಟ್ ಅಬುವಿನಲ್ಲಿ ಅಖಿಲ ಭಾರತ ಪತ್ರಕರ್ತರ ಸಮ್ಮೇಳನವನ್ನು ಆಯೋಜಿಸಿದ್ದು, ಆಸಕ್ತ ಪತ್ರಕರ್ತರು ನೋಂದಣಿಗಾಗಿ ಸ್ಥಳೀಯ ಘಟಕಗಳನ್ನು ಸಂಪರ್ಕಿಸಿ ಮಾಹಿತಿ ಪಡೆಯುವಂತೆ ಮನವಿ ಮಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ರಾಜಯೋಗಿನಿ ಡಾ.ಪದ್ಮಕ್ಕ ಅವರು, ಪತ್ರಿಕಾ ಮಾಧ್ಯಮ ಬಹಳಷ್ಟು ದೊಡ್ಡದಾಗಿ ಬೆಳೆದಿದ್ದು, ಸಾಮಾಜಿಕ ಬದಲಾವಣೆಯಲ್ಲಿ ಮಹತ್ವದ ಪಾತ್ರ ಹೊಂದಿದೆ. ಪತ್ರಿಕೆಗಳು ನಿಷ್ಪಕ್ಷವಾಗಿ ಕಾರ್ಯನಿರ್ವಹಿಸಿದಾಗ ಮಾತ್ರ ಸಮಾಜ ಸರಿಯಾದ ದಿಕ್ಕಿನಲ್ಲಿ ನಡೆಯಲು ಸಾಧ್ಯ. ಸುದ್ದಿಯ ಸತ್ಯಾಸತ್ಯತೆ ಅರಿಯುವುದು ಇಂದಿನ ದಿನಗಳಲ್ಲಿ ಸವಾಲಾಗುತ್ತಿದೆ. ಕೆಲ ಅಹಿತಕರ ವಾರ್ತೆಗಳು ಸಮಾಜದ ಸ್ವಾಸ್ಥ್ಯಕ್ಕೆ ಧಕ್ಕೆ ತರುವುದನ್ನು ಪತ್ರಕರ್ತರು ಜವಾಬ್ದಾರಿಯಿಂದ ಅಂಕು ಡೊಂಕುಗಳನ್ನು ತಿದ್ದಿ ತೀಡುವ ಕೆಲಸ ಮಾಡಬೇಕೆಂದರು.


ಉದಯವಾಹಿನಿ ಚಿತ್ರ

## ಅರಸೀಕೆರೆ ಕೋಡಿಮಠಕ್ಕೆ ಭೇಟಿ ನೀಡಿದ ಡಿಕೆಶಿ

• ಉದಯವಾಹಿನಿ ಅರಸೀಕೆರೆ

ಅರಸೀಕೆರೆಗೆ ವಿವಿಧ ಇಲಾಖೆಗಳ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ಲೋಕಾರ್ಪಣೆ ಕಾರ್ಯಕ್ರಮಕ್ಕೆ ಮುಖ್ಯಮಂತ್ರಿಗಳೊಂದಿಗೆ ಆಗಮಿಸಿದ್ದ ಉಪಮುಖ್ಯಮಂತ್ರಿಯ ಡಿಕೆ ಶಿವಕುಮಾರ್ ಅರಸೀಕೆರೆ ತಾಲ್ಲೂಕಿನ ಪ್ರಖ್ಯಾತ ಧಾರ್ಮಿಕ ಕ್ಷೇತ್ರ ಶ್ರೀ ಜೇನುಕಲ್ಲು ಸಿದ್ದೇಶ್ವರ ಸ್ವಾಮಿಯವರ ದೇವಾಲಯಕ್ಕೆ ಕಾರ್ಯಕ್ರಮಕ್ಕೆ ಮುನ್ನ ಆಗಮಿಸಿದ ಉಪಮುಖ್ಯಮಂತ್ರಿಯ ಡಿ ಕೆ ಶಿವಕುಮಾರ್ ಕಾರ್ಯಕ್ರಮದ ನಂತರ ಮುಖ್ಯಮಂತ್ರಿಗಳು ತೆರಳಿದ ನಂತರ ರಾಜ್ಯ ಮತ್ತು ರಾಷ್ಟ್ರಮಟ್ಟದಲ್ಲಿ ಹೆಸರುವಾಸಿಯಾಗಿರುವ ಕೋಡಿಮಠಕ್ಕೆ ಭೇಟಿ ನೀಡಿ ಶ್ರೀ ಶ್ರೀ ಶಿವಾನಂದ ಶಿವಯೋಗಿ ರಾಜೇಂದ್ರ ಮಹಾ ಸ್ವಾಮೀಜಿಗಳ ಬಳಿ ಗುಪ್ತವಾಗಿ ಒಂದು ಗಂಟೆಗೂ ಹೆಚ್ಚು ಕಾಲ ತಮ್ಮ ರಾಜಕೀಯದ ಭವಿಷ್ಯದ ಬಗ್ಗೆ ಕೇಳಿದ್ದಾರೆಂದು ತಿಳಿದು ಬಂದಿದೆ .

ಉಪಮುಖ್ಯಮಂತ್ರಿಗಳೊಂದಿಗೆ ಹಾಸನ ಲೋಕಸಭಾ ಸದಸ್ಯ ಶ್ರೇಯಸ್ ಪಟೇಲ್ ಹಾಗೂ ಮಾಜಿ ಸಚಿವ ಬಿ. ಶಿವರಾಮು ಸೇರಿದಂತೆ ಹಲವಾರು ಕಾಂಗ್ರೆಸ್ ಮುಖಂಡರು ಕಾರ್ಯಕರ್ತರು ಇದ್ದರೂ ಎನ್ನಲಾಗಿದೆ ಆದರೂ ಶ್ರೀಗಳೊಂದಿಗೆ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಒಬ್ಬರೇ ಚರ್ಚೆ ನಡೆಸಿರುವುದು ಎಲ್ಲರಿಗೂ ಕುತೂಹಲ ಮೂಡಿಸಿದಂತಿದೆ.


ಉದಯವಾಹಿನಿ ಚಿತ್ರ

## ಪ್ರತಿಯೊಬ್ಬ ಪ್ರಜೆ ಪತ್ರಕರ್ತನ ಮನೋಭಾವ ಬೆಳೆಸಿಕೊಳ್ಳಲಿ

• ಉದಯವಾಹಿನಿ ಮುದ್ದೇಬಿಹಾಳ

ಸಮಾಜದ ಓರೆಕೋರೆ ತಿದ್ದುವ ಕಾರ್ಯ ಪತ್ರಕರ್ತರಿಂದ ಸಾಧ್ಯ. ಪ್ರಸ್ತುತ ಕಾಲದಲ್ಲಿ ಪ್ರತಿಯೊಬ್ಬರೂ ಪತ್ರಕರ್ತನ ಮನೋಭಾವ ಬೆಳೆಸಿಕೊಳ್ಳಬೇಕಾದ ಅವಶ್ಯಕತೆ ಇದೆ. ಸಾಮಾಜಿಕ ಜಾಲತಾಣದ ಸರಿಯಾದ ಬಳಕೆಯ ಮೂಲಕ ಯುವಜನತೆ ಮಾಧ್ಯಮ ಕ್ಷೇತ್ರದಲ್ಲಿ ಶ್ರೇಷ್ಠತೆಯನ್ನು ಸಾಧಿಸಬಹುದು ಎಂದು ಬಿಜೆಪಿ ರೈತ ಮೋರ್ಚಾ ರಾಜ್ಯಾಧ್ಯಕ್ಷ ಹಾಗೂ ಮಾಜಿ ಶಾಸಕ ಎ.ಎಸ್.ಪಾಟೀಲ ನಡಹಳ್ಳಿ ಹೇಳಿದರು.

ಅವರು ಮುದ್ದೇಬಿಹಾಳ ಅರಿಹಂತ ಸಮೂಹ ಶಿಕ್ಷಣ ಸಂಸ್ಥೆಯಲ್ಲಿ ಕೆಯುಡಬ್ಲುಜೆ ಘಟಕ ಆಯೋಜಿಸಿದ್ದ ಪತ್ರಿಕಾ ದಿನಾಚರಣೆ, ಪ್ರಶಸ್ತಿ ಪ್ರದಾನ, ಪ್ರತಿಭಾ ಪುರಸ್ಕಾರ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು. ಮಾಧ್ಯಮ ಕ್ಷೇತ್ರವನ್ನು ಶಕ್ತಿಶಾಲಿಯಾಗಿ ರೂಪಿಸುವಲ್ಲಿ ಯುವಜನತೆ ತಂತ್ರಜ್ಞಾನಸದುಪಯೋಗಪಡಿಸಿಕೊಳ್ಳಬೇಕು. ಪ್ರಜಾಪ್ರಭುತ್ವದಲ್ಲಿ ಮಾಧ್ಯಮವು ಮುಖ್ಯವಾದ ಸ್ತಂಭವಾಗಿದೆ ಎಂದು ಅವರು ಹೇಳಿದರು.

ಪತ್ರಕರ್ತನ ಬರವಣಿಗೆಯು ಅವನ ವ್ಯಕ್ತಿತ್ವವನ್ನೂ ತೋರಿಸುತ್ತದೆ. ಬರವಣಿಗೆಯ ಪ್ರೌಢಿಮೆ ಹಾಗೂ ಭಾಷಾ ಸಾಮರ್ಥ್ಯವಿರುವವನೇ ನಿಜವಾದ ಪತ್ರಕರ್ತ ಎನ್ನುವುದಾಗಿ ಅವರು ವಿವರಿಸಿದರು.ಪತ್ರಕರ್ತರಾದ ರಿಯಾಜ್ ಅಹ್ಮದ್ ಮುಲ್ಲಾ, ಹಣಮಂತ ಬೀರಗೊಂಡ, ಈಶ್ವರ ಈಳಗೇರ, ಹಣಮಂತ ಟಕ್ಕಳಕಿ, ಕೃಷ್ಣಾ ಕುಂಬಾರ ಇವರಿಗೆ ಅತ್ಯುತ್ತಮ ಪತ್ರಕರ್ತ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಭಾಗ್ಯಶ್ರೀ ಬಸವರಾಜ ಕುಂಬಾರ ವಿದ್ಯಾರ್ಥಿನಿಯನ್ನೂ ಪುರಸ್ಕರಿಸಲಾಯಿತು. ಸಂಘದ ಜಿಲ್ಲಾಧ್ಯಕ್ಷ ಪ್ರಕಾಶ ಬೆಣ್ಣೂರ ಕಾಲೇಜು ಪ್ರಾಂಶುಪಾಲ ವಿಪುಲ್ ಸಗರಿ,ಬಿಜೆಪಿ ಮಂಡಲ ಅಧ್ಯಕ್ಷ ಜಗದೀಶ್ ಪಂಪಣ್ಣನವರ ಸಂಘದ ತಾಲ್ಲೂಕ ಅಧ್ಯಕ್ಷ ಮುತ್ತು ವಡವಡಗಿ ಅಧ್ಯಕ್ಷತೆ ವಹಿಸಿದ್ದರು.


ಉದಯವಾಹಿನಿ ಚಿತ್ರ

> ಪತ್ರಿಕೋದ್ಯಮದಲ್ಲಿ ನೈತಿಕ ಬಲ ಹಾಗೂ ಸತ್ಯದ ನಿಲುವುಗಳನ್ನು ಸಾರಿದರು. ಮಹಾವೀರ ಸಗರಿ, ಡಿ.ಬಿ. ವಡವಡಗಿ ಮತ್ತಿತರರು ತಮ್ಮ ಭಾಷಣದಲ್ಲಿ ಪತ್ರಕರ್ತರ ಸೇವೆಯು ಸಮಾಜದ ಉತ್ಥಾನಕ್ಕೆ ನೆರವಾಗುತ್ತಿದೆ. **-ಪ್ರೊ. ರಾಜನಾರಾಯಣ ನಲವಡೆ**


## ಕೆರೆಗಳ ಅಭಿವೃದ್ಧಿಗೆ ಕ್ರಮ: ಜಿಲ್ಲಾಧಿಕಾರಿ ಸಂಗಪ್ಪ

• ಉದಯವಾಹಿನಿ ಬಾಗಲಕೋಟೆ

ಜಿಲ್ಲೆಯ ಗ್ರಾಮೀಣ ಮತ್ತು ನಗರ ವ್ಯಾಪ್ತಿಯಲ್ಲಿ ಬರುವ ಕೆರೆಗಳಿಗೆ ಪುನರುಜ್ಜೀವನ ಕಾಮಗಾರಿಗಳನ್ನು ಕೈಗೊಂಡು ಅಭಿವೃದ್ಧಿ ಪಡಿಸಬೇಕೆಂದು ಜಿಲ್ಲಾಧಿಕಾರಿ ಸಂಗಪ್ಪ ಅಧಿಕಾರಿಗಳಿಗೆ ಸೂಚನೆ ನೀಡಿದರು. ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರ, ಯೋಜನಾ ಪ್ರಾಧಿಕಾರ, ಪುರಸಭಾ ಯೋಜನಾ ಪ್ರಾಧಿಕಾರಗಳ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆಯಡಿ ಕೆರೆಗಳ ಪುನರುಜ್ಜೀವನ ಶುಲ್ಕ ವಿನಿಯೋಗ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಕೆರೆಗಳ ಪುನರುಜ್ಜೀವನ ಕಾಮಗಾರಿಗಳನ್ನು ತ್ವರಿತವಾಗಿ ಹಾಗೂ ಸುಗಮವಾಗಿ ಕೈಗೆತ್ತಿಕೊಳ್ಳಲು ಜಿಲ್ಲಾ ಮಟ್ಟದಲ್ಲಿ ಏಕ ಗವಾಕ್ಷಿ ಸಮಿತಿಯನ್ನು ರಚಿಸಲಾಗಿದೆ ಎಂದರು.

**ಕೆರೆಗಳಿಗೆ ಪುನರುಜ್ಜೀವನ ಕಾಮಗಾರಿ**

ಜಿಲ್ಲೆಯಲ್ಲಿ ಒಟ್ಟು ಸ268 ಕೆರೆಗಳು ಇದ್ದು, ಅದರಲ್ಲಿ 148 ಕೆರೆಗಳು ಗ್ರಾಮೀಣ ವ್ಯಾಪ್ತಿಯಲ್ಲಿ 68 ಕೆರೆಗಳು ಸಣ್ಣ ನೀರಾವರಿ ಇಲಾಖೆ ವ್ಯಾಪ್ತಿಯಲ್ಲಿ ಹಾಗೂ 9 ಕೆರೆಗಳು ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಬರುತ್ತವೆ. ಮುಖ್ಯವಾಗಿ ಮುಚಖಂಡಿ, ಮಲ್ಲಾಪೂರ ಅಭಿವೃದ್ಧಿ ಪಡಿಸಿದಲ್ಲಿ ಹೆಚ್ಚಿನ ಪ್ರವಾಸಿಗರನ್ನು ಆಕರ್ಷಿಸಲು ಸಾಧ್ಯವಾಗುತ್ತದೆ. ಈ ನಿಟ್ಟಿನಲ್ಲಿ ಬರುವ ಜುಲೈ 27 ರಂದು ಸ್ವತಃ ಭೇಟಿ ನೀಡಿ ಪರಿಶೀಲನೆ ನಡೆಸುವುದಾಗಿ ಜಿಲ್ಲಾಧಿಕಾರಿಗಳು ತಿಳಿಸಿದರು. ತಡೆ ಬೇಲಿ ನಿರ್ಮಾಣ, ಕೆರೆ ಹೂಳು ತೆಗೆಯುವುದು ಮತ್ತು ಕೆರೆಯ ನೀರಿನ ಸಂಗ್ರಹಣೆ ಹೆಚ್ಚಿಸುವ ನಿಟ್ಟಿನಲ್ಲಿ ಅಂತರ್ ಜಲವನ್ನು ಮರು ಪೂರ್ಣಗೊಳಿಸುವುದು, ಕೆರೆ ಒತ್ತುವರಿ ತಡೆಯಲು ಅಗತ್ಯ ಗಿಡ ಮರಗಳನ್ನು ಕೆರೆಯ ದಂಡೆಗಳಲ್ಲಿ ಬೆಳೆಸುವುದು, ಕೆರೆ ನೀರಿನ ಶುದ್ದೀಕರಣ, ನೀರಿನ ಗುಣಮಟ್ಟವನ್ನು ಸುಧಾರಿಸುವ, ಕೊಳಚೆ ನೀರು ಕೆರೆಗೆ ಸೇರದಂತೆ ತಡೆಯುವ ಕಾಮಗಾರಿ, ವಾಯು ವಿಹಾರಕ್ಕೆ ಅಗತ್ಯವಿರುವ ಪದಚಾರಿ ಮಾರ್ಗ, ಪ್ರವಾಸೋದ್ಯಮ ಉತ್ತೇಜಿಸುವ ಕಾಮಗಾರಿಗಳು ಸೇರಿದಂತೆ ಇತರೆ ಕಾಮಗಾರಿಗಳನ್ನು ಕೈಗೊಳ್ಳಲು ವಿವಿಧ ಸ್ಥಳೀಯ ಸಂಸ್ಥೆ, ಪ್ರಾಧಿಕಾರಗಳಿಗೆ ತಿಳಿಸಿದರು. ಬಾದಾಮಿ ಅಗಸ್ತ್ಯ ತೀರ್ಥ ಹೊಂದಲ್ಲಿರುವ ಭೂತನಾಥ ದೇವಸ್ಥಾನಕ್ಕೆ ತೆರಳಲು ಒಂದು ಕಡೆ ಮಾತ್ರ ದಾರಿ ಇದ್ದು, ಇನ್ನೊಂದು ಕಡೆಯಲ್ಲಿ ಪ್ರವಾಸಿಗರು ತೆರಳಲು ಅನುಕೂಲವಾಗುವ ನಿಟ್ಟಿನಲ್ಲಿ ರಸ್ತೆ ನಿರ್ಮಾಣ ಕಾಮಗಾರಿ ಕೈಗೆತ್ತಿಕೊಳ್ಳಲಾಗಿದೆ ಎಂದು ತಿಳಿಸಿದರು.


ಉದಯವಾಹಿನಿ ಚಿತ್ರ

# ಮಕ್ಕಳ ಹಕ್ಕುಗಳ ರಕ್ಷಣೆಗೆ ಮುಂದಾಗಿ: ಕೆ.ನಾಗಣ್ಣಗೌಡ ಸೂಚನೆ

### ಜಿಲ್ಲೆಯ ಎಲ್ಲಾ ಶಾಲೆಗಳಲ್ಲಿ ಮಕ್ಕಳ ಸಹಾಯವಾಣಿ ಸಂಖ್ಯೆ-1098 ಎದ್ದು ಕಾಣುವಂತೆ ಮಾಹಿತಿ ಫಲಕ ಅಳವಡಿಸಬೇಕು

• ಉದಯವಾಹಿನಿ ವಿಜಯಪುರ

ಮಕ್ಕಳ ರಕ್ಷಣೆ ಮತ್ತು ಅವರ ಉಜ್ವಲ ಭವಿಷ್ಯಕ್ಕಾಗಿ ಸರ್ಕಾರ ವಿವಿಧ ಇಲಾಖೆಗಳ ಮೂಲಕ ಹಲವು ಯೋಜನೆಗಳನ್ನು ಜಾರಿಗೊಳಿಸಿದ್ದು, ಈ ಯೋಜನೆಗಳನ್ನು ಅಧಿಕಾರಿಗಳು ಸಮರ್ಪಕವಾಗಿ ಅನುಷ್ಠಾನಗೊಳಿಸುವ ಮೂಲಕ ಮಕ್ಕಳ ರಕ್ಷಣೆಗೆ ಮುಂದಾಗಬೇಕು ಎಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಕೆ.ನಾಗಣ್ಣಗೌಡ ಅವರು ಹೇಳಿದರು.

ಮಕ್ಕಳ ನಿರ್ದೇಶನಾಲಯ ಬೆಂಗಳೂರು, ವಿಜಯಪುರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಹಾಗೂ ವಿವಿಧ ಭಾಗಿದಾರ ಇಲಾಖೆಗಳು, ಸ್ವಯಂ ಸೇವಾ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ನಗರದ ಮಹಾನಗರ ಪಾಲಿಕೆ ಸಭಾಂಗಣದಲ್ಲಿ ನಡೆದ ಆರ್‌ಟಿಇ-2009 ಪೋಕ್ಸೋ-2012 ಹಾಗೂ ಬಾಲ ನ್ಯಾಯ ಕಾಯ್ದೆ 2015 ಅನುಷ್ಠಾನ ಹಾಗೂ ಮಕ್ಕಳಿಗೆ ಸಂಬಂಧಿಸಿದ ಕಾರ್ಯಕ್ರಮ-ಯೋಜನೆಗಳ ಕುರಿತು ನಡೆದ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಮಕ್ಕಳ ಹಕ್ಕುಗಳ ರಕ್ಷಣೆಗಾಗಿ ಇರುವ ಕಾಯ್ದೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲು ಸಂಬಂಧಿಸಿದ ಇಲಾಖೆ ಅಧಿಕಾರಿಗಳು ಸಮನ್ವಯತೆಯಿಂದ ಕಾರ್ಯ ನಿರ್ವಹಿಸಬೇಕು. ಜಿಲ್ಲೆಯ ಎಲ್ಲಾ ಶಾಲೆಗಳಲ್ಲಿ ಮಕ್ಕಳ ಸಹಾಯವಾಣಿ ಸಂಖ್ಯೆ-1098 ಎದ್ದು ಕಾಣುವಂತೆ ಮಾಹಿತಿ ಫಲಕ ಅಳವಡಿಸಬೇಕು. ಗ್ರಾಮ ಪಂಚಾಯತ್ ಮಟ್ಟದಲ್ಲಿ ಮಕ್ಕಳ ಸಭೆ ನಡೆಸಿ ನಡಾವಳಿಯನ್ನು ನಿರ್ವಹಿಸಬೇಕು. ಬಾಲ್ಯವಿವಾಹ, ಅಪೌಷ್ಠಿಕತೆ, ಬಾಲಕಾರ್ಮಿಕ ಪದ್ಧತಿ ಇಂತಹ ವಿಷಯಗಳಲ್ಲಿ ಮಕ್ಕಳಿಗೆ ಮತ್ತು ಪಾಲಕರಿಗೆ ಜಾಗೃತಿ ಮೂಡಿಸಬೇಕು.

ಮಹಿಳೆಯರ ಮತ್ತು ಮಕ್ಕಳ ಕಾವಲು ಸಮಿತಿ ಕಾಲಕಾಲಕ್ಕೆ ಗ್ರಾಮ ಪಂಚಾಯತ್ ಮಟ್ಟದಲ್ಲಿ ಸಭೆ ನಡೆಸುವಂತೆ ಅವರು ಸೂಚನೆ ನೀಡಿದರು.

ಬಾಲ್ಯ ವಿವಾಹಗಳು ಜಿಲ್ಲೆಯಲ್ಲಿ ನಡೆಯದಂತೆ ತಡೆಯಲು ಗ್ರಾಮ ಮಟ್ಟದಲ್ಲಿನ ಅಂಗನವಾಡಿ, ಆಶಾ ಕಾರ್ಯಕರ್ತೆಯರು, ಗ್ರಾಪಂ ಅಭಿವೃದ್ಧಿ ಅಧಿಕಾರಿಗಳು, ಸಂಬಂಧಿಸಿದ ಇಲಾಖೆಗಳು, ಸಾರ್ವಜನಿಕರ ಸಹಭಾಗಿತ್ವದಲ್ಲಿ ಇಂತಹ ಪ್ರಕರಣಗಳನ್ನು ಪತ್ತೆ ಹಚ್ಚಿ ಬಾಲ್ಯವಿವಾಹಗಳು ನಡೆಯದಂತೆ ಅಗತ್ಯ ಕ್ರಮ ವಹಿಸಲು ಅವರು ಸೂಚನೆ ನೀಡಿದರು. ತಾಲ್ಲೂಕಾ ಮಟ್ಟದಲ್ಲಿ ತಾಲ್ಲೂಕಾ ಪಂಚಾಯತ್ ಕಾರ್ಯ ನಿರ್ವಾಹಕ ಅಧಿಕಾರಿಗಳು ಮತ್ತು ತಹಶೀಲ್ದಾರಗಳ ಜವಾಬ್ದಾರಿ ಅತ್ಯಂತ ಮಹತ್ವದ್ದಾಗಿದ್ದು, ಕಾಲಕಾಲಕ್ಕೆ ಸಭೆ ನಡೆಸಿ ಬಾಲ್ಯ ವಿವಾಹ ತಡೆಗೆ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಸಂಬಂಧಿಸಿದ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಬೇಕು. ಒಂದು ವಾರಕ್ಕಿಂತ ಹೆಚ್ಚಿನ ಅವಧಿಗೆ ಶಾಲೆಯಿಂದ ಹೊರಗುಳಿದ ಮಕ್ಕಳ ಮಾಹಿತಿ ಕಲೆ ಹಾಕಿ ಈ ಕುರಿತು ಪಾಲಕರಿಗೆ ತಿಳುವಳಿಕೆ ನೀಡಿ ಮರಳಿ ಮಕ್ಕಳಿಗೆ ಶಾಲೆಗೆ ಕರೆತರಲು ಕ್ರಮ ವಹಿಸುವಂತೆ ಅವರು ಸೂಚನೆ ನೀಡಿದರು. ಮಕ್ಕಳ ರಕ್ಷಣಾ ನೀತಿ-2016ಯನ್ವಯ ಕ್ರಮ ವಹಿಸಿ ಮಕ್ಕಳಿಗಿರುವ ಹಕ್ಕನ್ನು ರಕ್ಷಿಸಿ ಮಕ್ಕಳ ಭವಿಷ್ಯ ರೂಪಿಸುವ ಜವಾಬ್ದಾರಿ ಸಂಬಂಧಿಸಿದ ಇಲಾಖೆ ಅಧಿಕಾರಿಗಳ ಜವಾಬ್ದಾರಿಯಾಗಿದೆ ಎಂದು ಹೇಳಿದರು.


ಉದಯವಾಹಿನಿ ಚಿತ್ರ

**ಬಾಲ್ಯ ವಿವಾಹ ಶಿಕ್ಷಾರ್ಹ ಅಪರಾಧ**

> ಬಾಲ್ಯ ವಿವಾಹ ಶಿಕ್ಷಾರ್ಹ ಅಪರಾಧ ಎಂಬುದು ಪತ್ರ ವ್ಯವಹಾರದಲ್ಲಿ ಅಳವಡಿಸಿಕೊಳ್ಳುವ ಮೂಲಕ ಬಾಲ್ಯ ವಿವಾಹ ಕುರಿತು ಜಾಗೃತಿ ಮೂಡಿಸಬೇಕು. ವಿಶೇಷವಾಗಿ ವೈದ್ಯಕೀಯ ಚೀಟಿಯಲ್ಲಿ ಬಾಲ್ಯ ವಿವಾಹ ಶಿಕ್ಷಾರ್ಹ ಅಪರಾಧ ಕುರಿತು ಬಳಸುವಂತೆ ಒತ್ತು ನೀಡಬೇಕು. ಅನಿಮಿಯಾ ಮುಕ್ತ ಜಿಲ್ಲೆಯನ್ನಾಗಿಸಲು ಈಗಾಗಲೇ ಕಾರ್ಯಕ್ರಮ ಅನುಷ್ಠಾನಗೊಳಿಸಲಾಗುತ್ತಿದ್ದು, ಈ ಕುರಿತು ವ್ಯಾಪಕವಾಗಿ ಮಕ್ಕಳಲ್ಲಿ ಜಾಗೃತಿ ಮೂಡಿಸಬೇಕು. ಅಪೌಷ್ಠಿಕತೆ, ತಾಯಿ-ಮಕ್ಕಳ ಮರಣ ಪ್ರಮಾಣ, ಪ್ರಸವಪೂರ್ವ ಭ್ರೂಣ ಪತ್ತೆ ನಿಷೇಧ ಕಾಯ್ದೆಯನ್ನು ಜಿಲ್ಲೆಯಲ್ಲಿ ಅತ್ಯಂತ ಕಟ್ಟುನಿಟ್ಟಾಗಿ ಜಾರಿಗೊಳಿಸಬೇಕು. ಕಾಲಕಾಲಕ್ಕೆ ಸ್ಕ್ಯಾನಿಂಗ್ ಸೆಂಟರ್‌ಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸುವಂತೆ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು. **-ಕೆ.ನಾಗಣ್ಣಗೌಡ**

### ಸುರಕ್ಷತೆಗೆ ಆದ್ಯತೆ ನೀಡಬೇಕು

ಜಿಲ್ಲೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಂಗನವಾಡಿಗಳ ಕೇಂದ್ರಗಳ ಕುರಿತು ಮೆಚ್ಚುಗೆ ವ್ಯಕ್ತಪಡಿಸಿದ ಅವರು, ಜಿಲ್ಲೆಯ ಪಟ್ಟಣ ಪಂಚಾಯತಿ, ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಂಗನವಾಡಿ ಕೇಂದ್ರಗಳಲ್ಲಿ ಅವಶ್ಯ ಇರುವ ಕಡೆ ಮೂಲಭೂತ ಸೌಲಭ್ಯ, ಕಂಪೌಂಡ್ ಗೋಡೆ, ಶೌಚಾಲಯ ನಿರ್ಮಾಣಕ್ಕೆ ಕ್ರಮವಹಿಸಿ, ಮಕ್ಕಳ ಸುರಕ್ಷತೆಗೆ ಆದ್ಯತೆ ನೀಡಬೇಕು ಎಂದು ಸೂಚನೆ ನೀಡಿದರು.

## ಮಿನಿ ನ್ಯೂಸ್

### ಜಿಲ್ಲೆಯ ಅಭಿವೃದ್ಧಿಗೆ ಪಕ್ಷಾತೀತವಾಗಿ ಒತ್ತು: ಜಿಲ್ಲಾ ಉಸ್ತುವಾರಿ ಸಚಿವ

• ಉದಯವಾಹಿನಿ ಮಂಗಳೂರು

ಅಭಿವೃದ್ಧಿ ಕಾಮಗಾರಿಗಳ ಅನುಷ್ಠಾನದಲ್ಲಿ ಜಿಲ್ಲೆಯಲ್ಲಿ ಯಾವುದೇ ಪಕ್ಷ ಭೇದವಿಲ್ಲದೆ ಸಮಾನವಾಗಿ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ.

ಅವರು ಶುಕ್ರವಾರ ಉರ್ವಸ್ಟೋರ್ ಡಿ ದೇವರಾಜ ಅರಸು ಭವನ ನೂತನ ಕಟ್ಟಡ ಮತ್ತು ಇಂದಿರಾ ಗಾಂಧಿ ಮಹಿಳಾ ನಸಿರ್‌ಂಜಗ್ ವಿದ್ಯಾರ್ಥಿ ನಿಲಯ ನೂತನ ಕಟ್ಟಡ ಉದ್ಘಾಟಿಸಿ, ಡಿ ದೇವರಾಜ ಅರಸು ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿ ನಿಲಯ ಶಿಲಾನ್ಯಾಸ, ಮಾದರಿ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿ ನಿಲಯದ ಶಿಲಾನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದರು.

ವಿವಿಧ ಯೋಜನೆ ಮತ್ತು ಕಾಮಗಾರಿಗಳನ್ನು ಜಾರಿಗೊಳಿಸುವಾಗ ಜಿಲ್ಲೆಯ ಎಲ್ಲಾ ಪ್ರದೇಶಗಳನ್ನು ಸಮಾನವಾಗಿ ಪರಿಗಣಿಸಲಾಗುವುದು. ಜನರ ಏಳಿಗೆ ಅಂತಿಮ ಗುರಿಯಾಗಿದ್ದು, ಈ ನಿಟ್ಟಿನಲ್ಲಿ ಎಲ್ಲರ ವಿಶ್ವಾಸ ತೆಗೆದುಕೊಂಡು ಮುನ್ನಡೆಸಲಾಗುವುದು ಎಂದು ಸಚಿವರು ಹೇಳಿದರು.

### ಎಬಿವಿಪಿ ಬೃಹತ್ ಪ್ರತಿಭಟನೆ

• ಉದಯವಾಹಿನಿ ಗುಳೇದಗುಡ್ಡ

ರಾಜ್ಯ ಸರ್ಕಾರದ ವಿದ್ಯಾರ್ಥಿ ವಿರೋಧಿ ನೀತಿ ಖಂಡಿಸಿ ಹಾಗೂ ವಿದ್ಯಾರ್ಥಿ ವೇತನ ಬಿಡುಗಡೆ, ವಸತಿ ನಿಲಯದಲ್ಲಿ ಮೂಲಭೂತ ಸೌಲಭ್ಯಕ್ಕೆ ಆಗ್ರಹಿಸಿ ಪಟ್ಟಣದ ಬದಾಮಿನಾಕದಲ್ಲಿ ಮಾನವ ಸರಪಳಿ ನಿರ್ಮಿಸಿ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ವತಿಯಿಂದ ಬೃಹತ್ ಪ್ರತಿಭಟನೆ ನಡೆಯಿಸಿ, ಬಳಿಕ ತಹಶೀಲ್ದಾರ್ ಎಸ್.ಎಫ್. ಬೊಮ್ಮಣ್ಣವರ ಮೂಲಕ ಸರಕಾರಕ್ಕೆ ಎಬಿವಿಪಿ ಕಾರ್ಯಕರ್ತರು ಮನವಿ ಸಲ್ಲಿಸಿದರು.

ಶಿಕ್ಷಣಕ್ಕೆ ಬೇಕಾಗಿರುವ ಮೂಲಭೂತ ಸೌಲಭ್ಯಗಳನ್ನು ಒದಗಿಸುವುದು ಸರಕಾರದ ಆದ್ಯ ಕರ್ತವ್ಯ ಗ್ರಾಮೀಣ ಭಾಗದ ಪ್ರತಿಭಾವಂತ ವಿದ್ಯಾರ್ಥಿಗಳು ಶಿಕ್ಷಣದಿಂದ ವಂಚಿತರಾಗಬಾರದು ಎನ್ನುವ ಕಾರಣಕ್ಕೆ ಹಲವಾರು ಯೋಜನೆಗಳನ್ನು ಜಾರಿಗೆ ತರಲಾಗುತ್ತಿದೆ. ಆದರೆ ಅವುಗಳ ಸಮರ್ಪಕ ಅನುಷ್ಠಾನವಾಗದೆ ವಿದ್ಯಾರ್ಥಿಗಳು ತೊಂದರೆ ಅನುಭವಿಸುವಂತಾಗಿದೆ.

ರಾಜ್ಯ ಸರ್ಕಾರ ವಿದ್ಯಾರ್ಥಿಗಳಿಗೆ ಸರಿಯಾದ ವಸತಿ ನಿಲಯ ವ್ಯವಸ್ಥೆ ಹಾಗೂ ವಿದ್ಯಾರ್ಥಿ ವೇತನವನ್ನು ನೀಡದೆ ಬಡ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಅನ್ಯಾಯ ಮಾಡುತ್ತಿದೆ. ರಾಜ್ಯದಲ್ಲಿ ಲಕ್ಷಾಂತರ ಬಡ ಪ್ರತಿಭಾವಂತ ವಿದ್ಯಾರ್ಥಿಗಳು ವಿದ್ಯಾರ್ಥಿ ವೇತನ ನಂಬಿ ಶಿಕ್ಷಣ ಪಡೆಯುತ್ತಿದ್ದಾರೆ ಆದರೆ ರಾಜ್ಯ ಸರಕಾರ ವಿದ್ಯಾರ್ಥಿ ವೇತನ ಬಿಡುಗಡೆ ಮಾಡುತ್ತಿಲ್ಲ. ವಸತಿ ನಿಲಯಗಳಲ್ಲಿ ಮೂಲಭೂತ ಸೌಲಭ್ಯದ ಕೊರತೆ ಎದ್ದು ಕಾಣುತ್ತಿದೆ, ಸರ್ಕಾರ ಇದರ ಬಗ್ಗೆ ಗಮನಹರಿಸುತ್ತಿಲ್ಲ ಎಂದು ವಿಭಾಗ ಸಂಚಾಲಕ' ಪ್ರಥಮೇಶ ವಾಗಮೋಡೆ ಸರಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

### ಹಡಪದ ಅಪ್ಪಣ್ಣ ಜಯಂತಿ ಆಚರಣೆ

• ಉದಯವಾಹಿನಿ ಬಾದಾಮಿ,

ಹಡಪದ ಅಪ್ಪಣ್ಣನವರು ನಮ್ಮ ನಾಡಿನ ಆಸ್ತಿ, ಬಸವಾದಿ ಶರಣರ ಕಾಲದ ಎಲ್ಲಾ ಶರಣರು ಸಮ ಸಮಾಜವನ್ನು ನಿರ್ಮಿಸುವಲ್ಲಿ ಬಹಳಷ್ಟು ಶ್ರಮಿಸಿದ್ದಾರೆ ಎಂದು ಶಾಸಕ ಭೀಮಸೇನ ಚಿಮ್ಮನಕಟ್ಟಿ ಹೇಳಿದರು

ಪಟ್ಟಣದ ಹೊರವಲಯದ ರಂಗನಾಥ ನಗರದ ಹಡಪದ ಸಮುದಾಯದ ಆವರಣದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ತಾಲ್ಲೂಕಾಡಳಿತ ಹಾಗೂ ತಾ.ಪಂ. ಇವರ ಸಂಯುಕ್ತಾಶ್ರಯದಲ್ಲಿ ನಡೆದ ಹಡಪದ ಅಪ್ಪಣ್ಣ ಸಮುದಾಯ ಭವನದ ಭೂಮಿ ಪೂಜೆ ಹಾಗೂ ಹಡಪದ ಅಪ್ಪಣ್ಣ ಸಜಯಂತೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಹಡಪದ ಅಪ್ಪಣ್ಣ ಸೇವಾ ಸಮಿತಿ ಅಧ್ಯಕ್ಷ ಡಾ.ವಿ.ಸಿ.ಹಡಪದ ಮಾತನಾಡಿ ಶರಣರ ತತ್ವಾದರ್ಶ, ಅವರ ವಚನಗಳ ಸಾರ ಮುಂದಿನ ಪೀಳಿಗೆಗೆ ತಿಳಿಸಬೇಕು. ಶರಣರು ತೋರಿಸಿದ ಜ್ಞಾನ ಪಥದಲ್ಲಿ ನಡೆದು ಜೀವನ ಸಾರ್ಥಕ ಪಡಿಸಿಕೊಳ್ಳಬೇಕು ನಮ್ಮ ಸಮಾಜದ ಮಕ್ಕಳನ್ನು ಶಿಕ್ಷಣವಂತರಾಗಿ ಮಾಡಿ ಎಂದು ಹೇಳಿದರು.

### ಯುವನಿಧಿ ಪೋಸ್ಟರ್ ಬಿಡುಗಡೆ


ಉದಯವಾಹಿನಿ ಚಿತ್ರ

• ಉದಯವಾಹಿನಿ ಗದಗ

ಯುವನಿಧಿ ಯೋಜನೆಯ ನೋಂದಣಿ ಪ್ರಕ್ರಿಯೆ ಆರಂಭವಾದ ಹಿನ್ನೆಲೆಯಲ್ಲಿ ಸಚಿವ ಡಾ.ಎಚ್.ಕೆ.ಪಾಟೀಲ ಅವರು ಜಿಲ್ಲಾಧಿಕಾರಿಗಳ ಕಚೇರಿ ಸಭಾಭವನದಲ್ಲಿ ಯುವನಿಧಿ ಪೋಸ್ಟರ್ ಬಿಡುಗಡೆ ಮಾಡಿದರು.

### ತಾಳಿಕೋಟೆಯಲ್ಲಿ ಕಳ್ಳರ ಚಡ್ಡಿ ಗ್ಯಾಂಗ್ ಸಿಸಿ ಕ್ಯಾಮೆರಾದಲ್ಲಿ ಸೆರೆ: ಜನರಲ್ಲಿ ಆತಂಕ

• ಉದಯವಾಹಿನಿ ವಿಜಯಪುರ

ವಿಜಯಪುರ ಜಿಲ್ಲೆಯಲ್ಲಿ ಮತ್ತೆ ಚಡ್ಡಿ ಗ್ಯಾಂಗ್ ಕಾಣಿಸಿಕೊಂಡು ಜನರಲ್ಲಿ ಭಯದ ವಾತಾವರಣ ಮೂಡಿಸಿದೆ. ಈ ಹಿಂದೆ ವಿಜಯಪುರ ಜಿಲ್ಲೆಯಲ್ಲಿ ಚಡ್ಡಿ ಗ್ಯಾಂಗ್ ಜನರ ನಿದ್ರೆಗೆಡಿಸಿ ಭಯದ ವಾತಾವರಣ ಮೂಡಿಸಿತ್ತು. ಕೆಲವು ತಿಂಗಳುಗಳಿಂದ ಚಡ್ಡಿ ಗ್ಯಾಂಗ್ ಉಪಟಳ ಇಲ್ಲವಾಗಿ ಜನರು ನೆಮ್ಮದಿಯ ನಿಟ್ಟುಸಿರು ಬಿಟ್ಟಿದ್ದರು. ಆದರೆ ಈಗ ಮತ್ತೆ ಜಿಲ್ಲೆಯ ತಾಳಿಕೋಟೆ ಪಟ್ಟಣದ ಗಣೇಶನಗರದಲ್ಲಿ

ಚಡ್ಡಿ ಗ್ಯಾಂಗ್ ಕದೀಮರು ಬಾಲ ಬಿಚ್ಚಿದ್ದಾರೆ. ಈ ಕದೀಮರ ಚಲನವಲನ ಸಿಸಿ ಕೆಮೆರಾದಲ್ಲಿ ಸೆರೆಯಾಗಿದೆ.

ಆರು ಜನರು ಇರುವ ಕಳ್ಳರ ಚಡ್ಡಿ ಗ್ಯಾಂಗ್ ಮುಖಕ್ಕೆ ಮಾಸ್ಕ್, ಬನಿಯನ್ ಹಾಗೂ ಚಡ್ಡಿ ಧರಿಸಿ ಕೈಯಲ್ಲಿ ಮಾರಕಾಸ್ತ್ರ, ದೊಣ್ಣೆ, ರಾಡ್ ಹಿಡಿದುಕೊಂಡು ತಾಳಿಕೋಟೆ ಪಟ್ಟಣದ ಗಣೇಶ ನಗರದ ಮನೆಯೊಂದರ ಕಳ್ಳತನ ಮಾಡುವ ಯತ್ನ ಮಾಡಿರುವುದು ಸಿಸಿ ಕ್ಯಾಮೆರಾದಲ್ಲಿ ಸೆರೆಯಾಗಿದೆ. ಈ ವೇಳೆ ನಾಯಿಗಳು ಬೊಗಳಿದ್ದರಿಂದ ಜನರು ಎಚ್ಚರಗೊಂಡಿದ್ದಾರೆ. ಆಗ ಕಳ್ಳರು ಕಾಲ್ಕಿತ್ತಿದ್ದಾರೆ.


ಉದಯವಾಹಿನಿ ಚಿತ್ರ

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಸಾಯಂಕಾಲ | 04:30 ರಿಂದ 06:00 |
| ಗುಳಿಕ ಕಾಲ | ಮಧ್ಯಾಹ್ನ | 03:00 ರಿಂದ 04:30 |
| ಯಮಗಂಡ ಕಾಲ | ಮಧ್ಯಾಹ್ನ | 12:00 ರಿಂದ 01:30 |

**ಮೇಷ**: ನಿಮ್ಮನ್ನು ಶಾಂತವಾಗಿರಿಸುವ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಿ. ವಿದೇಶದಲ್ಲಿ ಮಲಗಿರುವ ಭೂಮಿಯನ್ನು ಇಂದು ಉತ್ತಮ ಬೆಲೆಗೆ ಮಾರಾಟ ಮಾಡಬಹುದು, ಅದು ನಿಮಗೆ ಲಾಭದಾಯಕವಾಗಲಿದೆ.

**ವೃಷಭ**: ಹೆಚ್ಚಿನ ಕ್ಯಾಲೊರಿ ಆಹಾರವನ್ನು ತಪ್ಪಿಸಿ, ವ್ಯಾಯಾಮವನ್ನು ಕೈಬಿಡಬೇಡಿ. ಹಣಕಾಸಿನಲ್ಲಿ ಸುಧಾರಣೆ ನಿಶ್ಚಿತ. ಕೌಟುಂಬಿಕ ಜವಾಬ್ದಾರಿಗಳು ಹೆಚ್ಚಾಗುತ್ತವೆ ಇವು ನಿಮ್ಮ ಮನಸ್ಸಿನ ಮೇಲೆ ಒತ್ತಡ ತರುತ್ತವೆ.

**ಮಿಥುನ**: ನಿಮ್ಮ ಮನಸ್ಸಿನಲ್ಲಿ ಸಕಾರಾತ್ಮಕ ಆಲೋಚನೆಗಳನ್ನು ತನ್ನಿ. ಇಂದು ಅನಗತ್ಯವಾಗಿ ಹಣವನ್ನು ಖರ್ಚು ಮಾಡುವುದನ್ನು ನಿಲ್ಲಿಸಬೇಕು, ಇಲ್ಲದಿದ್ದರೆ ಅಗತ್ಯವಾದ ಸಮಯದಲ್ಲಿ ಹತ್ತಿರ ಹಣದ ಕೊರತೆ ಇರಬಹುದು.

**ಕರ್ಕಾಟಕ**: ಮನರಂಜನೆಗಾಗಿ ನಿಮ್ಮ ಕಚೇರಿಯಿಂದ ಬೇಗನೇ ಹೊರಬರಲು ಪ್ರಯತ್ನಿಸಿ. ಯಾವುದೇ ಹೂಡಿಕೆಯ ಯೋಜನೆಯ ಬಗ್ಗೆ ಹೆಚ್ಚು ಕಂಡುಹಿಡಿಯಲು ಮೇಲ್ಮೈಗಿಂತ ಕೆಳಗೆ ಆಳವಾಗಿ ಕೆದಕಿ.

**ಸಿಂಹ**: ಅಪರಿಚಿತರೂ ಪರಿಚಿತರಂತೆ ತೋರುವ ಒಂದು ದಿನ. ಹಣಕಾಸಿನಲ್ಲಿ ಸುಧಾರಣೆ ನಿಶ್ಚಿತ. ಜೀವನ ಮತ್ತು ಕೆಲಸದೆಡೆಗೆ ಪ್ರತಿಭಾಶಾಲಿಗಳೂ ಮತ್ತು ಪರಿಪೂರ್ಣರೂ ಆಗಿರಿ.

**ಕನ್ಯಾ**: ಸಾಮಾಜಿಕ ಕಾರ್ಯಕ್ರಮಗಳು ಆರಾಮ, ಸಂತೋಷ ತರುತ್ತದೆ. ಹಣ ಖರ್ಚಾಗುತ್ತಿದೆ ಎಂಬುದರ ಮೇಲೆ ನಿಗಾ ಇರಿಸುವ ಅಗತ್ಯವಿದೆ ಇಲ್ಲದಿದ್ದರೆ ಮುಂಬರುವ ಸಮಯದಲ್ಲಿ ನೀವು ತೊಂದರೆಗೊಳಗಾಗಬಹುದು.

**ತುಲಾ**: ನಿಮ್ಮ ಅನಾರೋಗ್ಯ ಗುಣಪಡಿಸಲು ನಗುವಿನ ಚಿಕಿತ್ಸೆ ಬಳಸಿ. ಆರ್ಥಿಕ ಜೀವನದ ಸ್ಥಿತಿ ಉತ್ತಮವಾಗಿದೆ ಎಂದು ಹೇಳಲಾಗುವುದಿಲ್ಲ, ಇಂದು ನಿಮ್ಮನ್ನು ಉಳಿಸಲು ನಿಮಗೆ ಕಷ್ಟವಾಗಬಹುದು.

**ವೃಶ್ಚಿಕ**: ಇಂದು ನೀವು ಒತ್ತಡ, ಸಂದಿಗ್ಧತೆಯನ್ನು ಬಯಸುವುದಿಲ್ಲ. ಇಂದಿನ ದಿನ, ನಿಮ್ಮ ಬಳಿ ಸಾಲವನ್ನು ಕೇಳುವ ಮತ್ತು ಅದನ್ನು ಹಿಂತಿರುಗಿಸದೆ ಇರುವಂತಹ ಸ್ನೇಹಿತರಿಂದ ನೀವು ನಿಮ್ಮನ್ನು ತಪ್ಪಿಸುವ ಅಗತ್ಯವಿದೆ.

**ಧನಸ್ಸು**: ನಿಮ್ಮ ಆರೋಗ್ಯವು ಆರೋಗ್ಯಕರವಾಗಿರುತ್ತದೆ ಎಂದು ನಿರೀಕ್ಷಿಸಲಾಗಿದೆ. ಹಣ ನಿಮ್ಮ ಕೈಯಲ್ಲಿ ಉಳಿಯುದಿಲ್ಲ. ಇಂದು ನೀವು ಹಣವನ್ನು ಉಳಿಸುವಲ್ಲಿ ಅನೇಕ ತೊಂದರೆಗಳನ್ನು ಎದುರಿಸಬೇಕಾಗುತ್ತದೆ.

**ಮಕರ**: ನೀವು ಸಂದಿಗ್ಧ ಪರಿಸ್ಥಿತಿಯನ್ನು ಎದುರಿಸಿದಲ್ಲಿ ಖಿನ್ನತೆಗೊಳಗಾಗಬೇಡಿ. ಆಹಾರದ ಸ್ವಾದಕ್ಕೆ ಉಪ್ಪು ಬೇಕಾದ ಹಾಗೆ ಅತೃಪ್ತಿಯಿಂದ ಮಾತ್ರ ನೀವು ಸಂತೋಷದ ಮೌಲ್ಯವನ್ನು ಅರ್ಥ ಮಾಡಿಕೊಳ್ಳುತ್ತೀರಿ.

**ಕುಂಭ**: ವಿಶ್ರಾಂತಿ ತೆಗೆದುಕೊಳ್ಳಿ. ನೀವು ವಿಪರೀತವಾಗಿ ಖರ್ಚು ಮಾಡುವುದನ್ನು ನಿಲ್ಲಿಸಿದಾಗ ಮಾತ್ರ ನಿಮ್ಮ ಹಣವು ನಿಮ್ಮ ಕೆಲಸಕ್ಕೆ ಬರುತ್ತದೆ, ಈ ವಿಷಯವನ್ನು ಚೆನ್ನಾಗಿ ಅರ್ಥಮಾಡಿಕೊಳ್ಳಬಹುದು.

**ಮೀನ**: ಸಂತೋಷದಿಂದ ತುಂಬಿದ ಒಳ್ಳೆಯ ದಿನ. ಸಾಲಗಾರನು ನಿಮಗೆ ಹೇಳದೆ ನಿಮ್ಮ ಖಾತೆಗೆ ಹಣವನ್ನು ಸೇರಿಸಬಹುದು. ಇದರ ಬಗ್ಗೆ ತಿಳಿದು ನೀವು ಆಶ್ಚರ್ಯಚಕಿತರಾಗಬಹುದು ಮತ್ತು ಸಂತೋಷವು ಪಡೆಯಬಹುದು.

---

● ಬಿಜೆಪಿ ಹಾಗೂ ಜೆಡಿಎಸ್ ಪಕ್ಷಗಳು ಅಧಿವೇಶನದಲ್ಲಿ ಒಳಮೀಸಲಾತಿ ಈಡೇರಿಕೆಗಾಗಿ ತಮ್ಮ ಬದ್ಧತೆ ಪ್ರಕಟಿಸಲಿ

# ಅಧಿವೇಶನಕ್ಕೂ ಮುನ್ನ ಒಳ ಮೀಸಲಾತಿ ಜಾರಿ ಮಾಡದಿದ್ದಲ್ಲಿ ಉಗ್ರ ಹೋರಾಟ

• ಉದಯವಾಹಿನಿ ಬೀದರ್

ರಾಜ್ಯ ಸರ್ಕಾರ ಮುಂಗಾರು ಅಧಿವೇಶನಕ್ಕೂ ಮುನ್ನ ಒಳ ಮೀಸಲಾತಿ ಜಾರಿ ಮಾಡದಿದ್ದಲ್ಲಿ ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದೆಂದು ಕರ್ನಾಟಕ ರಾಜ್ಯ ಆದಿ ಜಾಂಬವ ಸಂಘಟನೆ ಜಿಲ್ಲಾ ಗೌರವಾಧ್ಯಕ್ಷ ಝೂಪಟರಾಜ ಕಡ್ಯಾಳ ಎಚ್ಚರಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ಉದ್ದೇಸಿಸಿ ಮಾತನಾಡಿರುವ ಅವರು, ನ್ಯಾ.ಹೆಚ್. ಎನ್.ನಾಗಮೋಹನ್‌ದಾಸ್‌ರವರ ಸಮೀಕ್ಷಾ ವರದಿ ಜುಲೈ 30ರೊಳಗೆ ಸಲ್ಲಿಕೆಯಾಗಲಿ, ಬಿಜೆಪಿ ಹಾಗೂ ಜೆಡಿಎಸ್ ಪಕ್ಷಗಳು ಅಧಿವೇಶನದಲ್ಲಿ ಒಳಮೀಸಲಾತಿ ಈಡೇರಿಕೆಗಾಗಿ ತಮ್ಮ ಬದ್ಧತೆ ಪ್ರಕಟಿಸಲಿ ಎಂದರು.

ಮಳೆಗಾಲ ಅಧಿವೇಶನದಲ್ಲಿ ಒಳಮೀಸಲಾತಿ ಅಂಗೀಕರಿಸಲು ಆಗ್ರಹಿಸಿ ಆಗಸ್ಟ್ 11 ರಿಂದ ಬೆಂಗಳೂರಿನ ಫ್ರಿಡಮ್ ಪಾರ್ಕ್‌ನಲ್ಲಿ ಅನಿರ್ಧಿಷ್ಟ ಅಹೋರಾತ್ರಿ ಸತ್ಯಾಗ್ರಹ ಆರಂಭಿಸಲಾಗುವುದೆಂದರು. ಆಗಸ್ಟ್ 1 2024 ರಂದು ಸರ್ವೋಚ್ಚ ನ್ಯಾಯಾಲಯವು ಪರಿಶಿಷ್ಟರ ಬಹು ದಿನಗಳ ಬೇಡಿಕೆಯನ್ನು ರಾಜ್ಯ ಸರ್ಕಾರಗಳು ಆದ್ಯತೆಯ ಮೇರೆಗೆ ಜಾರಿಗೊಳಿಸಬಹುದು ಎಂಬ ಐತಿಹಾಸಿಕ ತೀರ್ಪನ್ನು ನೀಡಿ ಒಂದು ವರ್ಷ ಗತಿಸುತ್ತಿದೆ. ಎರಡೇ ತಿಂಗಳಲ್ಲಿ ಪರಿಶಿಷ್ಟ ಜಾತಿ ಸಮುದಾಯಗಳ ಜನಸಂಖ್ಯಾ ಸಮೀಕ್ಷೆ ಪೂರ್ಣಗೊಳಿಸಿ. ತಮ್ಮ ನೈತಿಕ ಜವಾಬ್ದಾರಿ ಪೂರೈಸಿದ್ದರೆ 30 ವರ್ಷಗಳ ಒಳ ಮೀಸಲಾತಿ ಹೋರಾಟವು ಮತ್ತೊಂದು ಸುತ್ತಿನ ಹೋರಾಟವಾಗಿ ಪರಿವರ್ತನೆಯಾಗುವ ಅಗತ್ಯವಿರಲಿಲ್ಲ. ಈಗಲಾದರೂ ಇಂತಹ ನಿರ್ಲಕ್ಷ್ಯ ಧೋರಣೆ ಮುಂದುವರೆಸದೇ, ಆಡಳಿತರೂಢ ಕಾಂಗ್ರೆಸ್ ಸರ್ಕಾರವು ಪ್ರಸಕ್ತ ಅಧಿವೇಶನದಲ್ಲಿ ಒಳಮೀಸಲಾತಿ ಜಾರಿಗೊಳಿಸುವ ಮೂಲಕ ತಮ್ಮ ಬದ್ಧತೆ ಪ್ರಕಟಿಸಬೇಕಾಗಿದೆ. ಏಕೆಂದರೆ, ಜಸ್ಟಿಸ್ ನಾಗಮೋಹನ್ ದಾಸ್‌ರವರ ನೇತೃತ್ವದಲ್ಲಿ ನೇಮಕವಾದ ಏಕಸದಸ್ಯ ಆಯೋಗವು ಪರಿಶಿಷ್ಟ ಜಾತಿಗಳ ಸಮಗ್ರ ಸಮೀಕ್ಷೆ ಕೈಗೊಂಡು ವೈಜ್ಞಾನಿಕ ಹಾಗೂ ವಸ್ತುನಿಷ್ಠ ವರದಿಯನ್ನು ಜುಲೈ 30ರೊಳಗಡೆ ಸರ್ಕಾರಕ್ಕೆ ಸಲ್ಲಿಸಬೇಕಾಗಿದೆ. ಸಂಘಟನೆಯ ಕಲ್ಯಾಣ ಕರ್ನಾಟಕ ವಿಭಾಗೀಯ ಯುವ ಘಟಕದ ಅಧ್ಯಕ್ಷ ಮಲ್ಲಿಕ ಮಡಿಗೆ, ಕಾರ್ಯಾಧ್ಯಕ್ಷ ಯುವರಾಜ ಭೇಂಡೆ ಇದ್ದರು.



ಉದಯವಾಹಿನಿ ಚಿತ್ರ

> ಸಂಘಟನೆ ಜಿಲ್ಲಾಧ್ಯಕ್ಷ ಸಂಜೀವಕುಮಾರ ಬೇಂದ್ರೆ ಮಾತನಾಡಿ, ಕಳೆದ 30 ವರ್ಷಗಳಲ್ಲಿ ಆಯೋಗ ನೇಮಕವಾಗಲು, ನೇಮಕವಾದ ಆಯೋಗಕ್ಕೆ ಅನುದಾನ ನೀಡಲು, ಸರ್ಕಾರಕ್ಕೆ ಒಪ್ಪಿಸಿದ ವರದಿ ಅನುಷ್ಠಾನಗೊಳಿಸಲು 3 ದಶಕಗಳ ವಿಳಂಬ ಮುಂದುವರೆದಿರುವುದರಿಂದ ನೊಂದ ಸಮುದಾಯಗಳು ಯಾವುದೇ ಸರ್ಕಾರಗಳನ್ನು ನಂಬುವ ಸ್ಥಿತಿಯಲ್ಲಿಲ್ಲ. ಈ ಎಲ್ಲಾ ಕಹಿ ಅನುಭವಗಳು ಮುಂದುವರೆಯದಂತೆ ಸರ್ಕಾರವು ಆಗಸ್ಟ್ 11 ರಿಂದ ಆರಂಭವಾಗಲಿರುವ ಮಳೆಗಾಲ ಅಧಿವೇಶನದಲ್ಲಿ ಒಳಮೀಸಲಾತಿ ಜಾರಿಗೊಳಿಸುವ ತೀರ್ಮಾನ ಕೈಗೊಳ್ಳುವ ಮೂಲಕ ನುಡಿದಂತೆ ನಡೆಯಲು ಆಗ್ರಹಿಸಿ ದಿನಾಂಕ: 11-08-2025 ರಿಂದ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಅನಿರ್ಧಿಷ್ಟ ಅಹೋರಾತ್ರಿ ಸತ್ಯಾಗ್ರಹ ಹಮ್ಮಿಕೊಳ್ಳಲಾಗಿದೆ. ಆದ್ದರಿಂದ ಎಲ್ಲಾ ಸಂಘ ಸಂಸ್ಥೆಗಳ ಮುಖಂಡರುಗಳು ಹಾಗೂ ರಾಜಕೀಯ ಪಕ್ಷಗಳ ಮುಖಂಡರು ಪಕ್ಷಾತೀತವಾಗಿ ಈ ಹೋರಾಟದಲ್ಲಿ ಭಾಗವಹಿಸಬೇಕು.
> 
> -ಸಂಜೀವಕುಮಾರ ಬೇಂದ್ರೆ, ಸಂಘಟನೆ ಜಿಲ್ಲಾಧ್ಯಕ್ಷ

**30 ಸಾವಿರ ಹುದ್ದೆಗಳು**

ವರದಿಯನ್ನು ಆದಷ್ಟು ಬೇಗ ಪಡೆದು ಆಗಸ್ಟ್ 11ರಿಂದ ಆರಂಭವಾಗಲಿರುವ ಒಳಮೀಸಲಾತಿ ಅನುಮೋದನೆಯೊಂದಿಗೆ ಬೇಡಿಕೆಯನ್ನು ಅಧಿವೇಶನದಲ್ಲಿ ಸರ್ವಪಕ್ಷಗಳ ಅಂಗೀಕರಿಸಿದರೆ, ನೇಮಕಾತಿ ಆಗಬೇಕಾದ 30 ಸಾವಿರಕ್ಕೂ ಅಧಿಕ ಹುದ್ದೆಗಳು ವಂಚಿತ ನಿರುದ್ಯೋಗಿ ಯುವಕ, ಯುವತಿಯರು ಪಡೆಯಬಹುದಾಗಿದೆ ಎಂದರು.

**ನುಡಿದಂತೆ ನಡೆಯಲು ಆಗ್ರಹ**

---

## ಶ್ರೀ ಗುರು ಚಿಕ್ಕಯ್ಯಪ್ಪಸ್ವಾಮಿಯ 18ನೇ ವರ್ಷದ ಜಾತ್ರಾ ಮಹೊತ್ಸವ

• ಉದಯವಾಹಿನಿ ಕಾರಟಗಿ

ಪಟ್ಟಣದ ಬಸವೇಶ್ವರ ನಗರದ ಶ್ರೀ ಚಿಕ್ಕಯ್ಯಪ್ಪ ಸ್ವಾಮಿಯ 18ನೇ ವರ್ಷದ ಜಾತ್ರಾ ಮಹೋತ್ಸವ ಹಾಗೂ 13ನೇ ವರ್ಷದ ಉಚ್ಚಾಯ ಕಾರ್ಯಕ್ರಮ ಸಂಭ್ರಮ ಸಡಗರ ದಿಂದ ಜರುಗಿತು.

ಚಿಕ್ಕಯ್ಯಪ್ಪ ಸ್ವಾಮಿಗೆ ಸಂಜೆ ಹೋಮ ನವಗ್ರಹ ಶಾಂತಿ ಮೃತ್ಯಂಜಯ ಹೋಮದ ನಂತರ ಮಹಾಮಂಗಳಾರತಿ ಜರುಗಿತು. ಬಳಿಕ ಶನಿವಾರ ಬೆಳಗ್ಗೆ ಬ್ರಾಹ್ಮೀ ಮಹೂರ್ತದಲ್ಲಿ ರುದ್ರಾಭಿಷೇಕ, ಪಂಚಾಮೃತ ಕಾರ್ಯಕ್ರಮ ಜರುಗಿತು.

ಶ್ರೀ ಮಹಾದೇಶ್ವರ ದೇವಸ್ಥಾನದಿಂದ ಗಂಗಾ ಪೂಜೆ ನಂತರ ಕುಂಭ ಕಳಸ ಹೊತ್ತ ಮಹಿಳೆಯರು ಈ ಚಿಕ್ಕಯ್ಯಪ್ಪ ಸ್ವಾಮಿಯ ಭಾವಚಿತ್ರದೊಂದಿಗೆ ಅದ್ದೂರಿ ಮೆರವಣಿಗೆಯ ಮೂಲಕ ಡೊಳ್ಳು ಕುಣಿತ, ಬಾಜಾ ಭಜಂತ್ರಿ ವಿವಿಧ ವಾದ್ಯಗಳೊಂದಿಗೆ ಯುವಕರು ಹೆಜ್ಜೆ ಹಾಕುತ್ತ ಬಸವೇಶ್ವರನಗರದ ದೇವಸ್ಥಾನಕ್ಕೆ ಆಗಮಿಸಿದರು.



ಉದಯವಾಹಿನಿ ಚಿತ್ರ

**ಚಿಕ್ಕಯ್ಯಪ್ಪ ಸ್ವಾಮಿಯ ಅದ್ದೂರಿ ಮೆರವಣಿಗೆ**

ನಂತರ ಭಕ್ತಾದಿಗಳು ಶ್ರೀ ಚಿಕ್ಕಯ್ಯಪ್ಪ ಸ್ವಾಮಿಗೆ ಕಾಯಿ ಕರ್ಪೂರ, ಮಹಾಮಂಗಳಾರತಿ ನಂತರ ನೈವೇದ್ಯ ಸಮರ್ಪಿಸಿದರು ನಂತರ ಮಹಾ ಅನ್ನ ಪ್ರಸಾದ ಕಾರ್ಯಕ್ರಮ ಜರುಗಿತು, ನಂತರ ಸಂಜೆ 05:00ಕ್ಕೆ ಶ್ರೀ ಗುರು ಚಿಕ್ಕಅಯ್ಯಪ್ಪ ಸ್ವಾಮಿಯ 13 ನೇ ವರ್ಷದ ಉಚ್ಚಾಯಕ್ಕೆ ಹಸಿರು ತೋರಣಗಳಿಂದ ವಿವಿಧ ಹೂ ಗಳಿಂದ ಅಲಂಕರಿಸಿ ಉಚ್ಚಾಯಕ್ಕೆ ಕಾಯಿ ಕರ್ಪೂರ ಸಮರ್ಪಿಸಿ ಪ್ರಧಾನ ಅರ್ಚಕರು ಮತ್ತು ಸ್ವಾಮಿಗಳಿಂದ ಮಂಗಳಾರತಿಯೊಂದಿಗೆ ಗುರು ಹಿರಿಯರು ಚಾಲನೆ ನೀಡಿದರು. ಉಚ್ಚಾಯ ಮುಂದೆ ಸಾಗುತ್ತಿದ್ದಂತೆಯೇ ಭಕ್ತಾದಿಗಳು ತಮ್ಮ ಇಷ್ಟಾರ್ಥಗಳನ್ನು ನೆರವೇರಿಸಿಕೊಳ್ಳಲು ಉಚ್ಚಾಯಕ್ಕೆ ಹಣ್ಣು ಉತ್ತತ್ತಿ ಸಮರ್ಪಿಸಿದರು.

ಈ ಸಂದರ್ಭದಲ್ಲಿ ಬಸವೇಶ್ವರನಗರದ ಗುರು ಹಿರಿಯರು ದೇವಸ್ಥಾನ ಸಮಿತಿಯ ಪದಾಧಿಕಾರಿಗಳು ಯುವಕರು ಮಹಿಳೆಯರು ಭಕ್ತಾದಿಗಳು ಭಾಗವಹಿಸಿದ್ದರು.

---

## ನ್ಯಾನೋ ಯುರಿಯಾ ಪರಿಣಾಮಕಾರಿ: ಪವಾರ

• ಉದಯವಾಹಿನಿ ಇಂಡಿ

ತಾಲ್ಲೂಕಿನಲ್ಲಿ ಅಧಿಕ ಪ್ರಮಾಣದಲ್ಲಿ ನ್ಯಾನೋ ಗೊಬ್ಬರ ಯೂರಿಯಾ ಲಭ್ಯವಿದ್ದು ಇದು ಸಹ ಪರಿಣಾಮಕಾರಿ ಮತ್ತು ಲಾಭದಾಯಕ ಎಂಬುದು ಕೃಷಿ ಇಲಾಖೆ, ಕೃಷಿ ವಿವಿಗಳು, ರೈತರು ನಡೆಸಿದ ಪ್ರಯೋಗಗಳಿಂದ ಸಾಬಿತಾಗಿದೆ. ಭವಿಷ್ಯದ ದೃಷ್ಟಿಯಿಂದ ರಸಗೊಬ್ಬರಗಳ ಬಳಕೆ ಪ್ರಮಾಣಕ್ಕಿಂತ ಹಸಿರು ಗೊಬ್ಬರ ಜೈವಿಕ ಗೊಬ್ಬರಗಳ ಬಳಕೆ ಹೆಚ್ಚಿಸಬೇಕಾದ ಅಗತ್ಯವಿದೆ. ಈ ಬಗ್ಗೆಯೂ ರೈತರಿಗೆ ಮನವರಿಕೆ ಮಾಡಿಕೊಡಲಾಗುತ್ತಿದೆ ಎಂದು ಕೃಷಿ ಉಪ ನಿರ್ದೇಶಕ ಚಂದ್ರಕಾಂತ ಪವಾರ ಹೇಳಿದರು.

ತಾಲ್ಲೂಕಿನ ಹಲವಾರು ಕೃಷಿ ದಾಸ್ತಾನು ಮಳಿಗೆ ಗಳಿಗೆ ಭೇಟಿ ನೀಡಿ ರೈತರಿಗೆ ಮಾಹಿತಿ ನೀಡಿ ಮಾತನಾಡಿದರು. ಪ್ರಸಕ್ತ ನ್ಯಾನೋ ಗೊಬ್ಬರ ಬಳಕೆಯಿಂದ ಪರಿಸರಕ್ಕೆ ಹಾನಿಯಾಗದೇ ಬೆಳೆಗಳಿಗೆ ಸಾರಜನಕ ಪೂರೈಸಲಿದೆ. ಗೊಬ್ಬರವನ್ನು ಎಲೆಗಳ ಮೇಲೆ ಸಿಂಪರಣೆ ಮಾಡಿದರೆ ಪೋಷಕಾಂಶದ ಸದ್ಬಳಕೆಯಾಗಲಿದೆ ಎಂದರು.



ಉದಯವಾಹಿನಿ ಚಿತ್ರ

ಕೃಷಿ ಸಹಾಯಕ ನಿರ್ದೇಶಕ ಮಹಾದೇವಪ್ಪ ಏವೂರ ಮಾತನಾಡಿ ನ್ಯಾನೋ ಯೂರಿಯಾ ಶೇ 20 ರಷ್ಟು ಸಾರಜನಕ ಹೊಂದಿದೆ. ನ್ಯಾನೋ ಡಿ.ಎ.ಪಿ ಶೇ 8 ಸಾರಜನಕ ಮತ್ತು ಶೇ 16 ರಂಜಕ ಹೊಂದಿದೆ. ಹೀಗಾಗಿ ಬೆಳೆಗಳ ಬೆಳವಣಿಗೆಗೆ ಮತ್ತು ಅಭಿವೃದ್ಧಿಗೆ ಪೋಷಕಾಂಶ ಒದಗಿಸಿ ಇಳುವರಿ ಹೆಚ್ಚಿಸುವಲ್ಲಿ ಪ್ರಮುಖ ಪಾತ್ರ ವಹಿಸಲಿದೆ ಎಂದರು. ಡ್ರೋನ್ ಮೂಲಕ ಸಿಂಪಡಿಸಿದರೆ ಶೇ 80 ರಷ್ಟು ಬೆಳೆಗಳಿಗೆ ತಲುಪಲಿದ್ದು ಕಡಿಮೆ ಖರ್ಚು ಕಡಿಮೆ ಶ್ರಮದ ಮೂಲಕ ಹೆಚ್ಚು ಬೆಳೆಗಳಿಗೆ ತಲುಪಲಿದೆ.

---

## ಶಸಾಪ ವತಿಯಿಂದ ದತ್ತಿ ಉಪನ್ಯಾಸ

### ಯುವಕರು ಶರಣರ ವಚನಗಳನ್ನು ಅಳವಡಿಸಿಕೊಳ್ಳುವಂತೆ ಕರೆ

• ಉದಯವಾಹಿನಿ, ಬಸವನಬಾಗೇವಾಡಿ

ಇಂದಿನ ಯುವಕರು ಶರಣರ ತತ್ವಾದರ್ಶನಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವುದು ಅತ್ಯವಶ್ಯಕವಾಗಿದೆ ಎಂದು ನಿವೃತ್ತ ಪ್ರಾಧ್ಯಾಪಕರಾದ ಪಿ ಎಲ್ ಹಿರೇಮಠ ಅಭಿಪ್ರಾಯಪಟ್ಟರು. ತಾಲ್ಲೂಕಿನ ಕುದುರೆಸಾಲವಾಡಗಿ ಗ್ರಾಮದ ಸರಕಾರಿ ಪ್ರೌಢಶಾಲೆಯಲ್ಲಿ ಶನಿವಾರ ತಾಲ್ಲೂಕಾ ಶರಣ ಸಾಹಿತ್ಯ ಪರಿಷತ್ ಆಯೋಜಿಸಿದ್ದ ಲಿಂ. ಸೋಮಪ್ಪ ಶಿವಪ್ಪ ಹೆಬ್ಬಾಳ, ಸಿದ್ದರಾಮಪ್ಪ ನಾಗಪ್ಪ ಕನ್ನೂರ, ಚಂದ್ರಶೇಖರ ಮಲಕಾಜಪ್ಪ ಪಟ್ಟಣಶೆಟ್ಟಿ ಸ್ಮರಣಾರ್ಥ ಏರ್ಪಡಿಸಿದ್ದ ದತ್ತಿ ಉಪನ್ಯಾಸದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಯುವಕರು ಶಿಕ್ಷಣದ ಕಡೆ ಗಮನ ಕೊಡುವುದರ ಮೂಲಕ ತಮ್ಮ ಜೀವನವನ್ನು ಸಾರ್ಥಕ ಮಾಡಿಕೊಳ್ಳಬೇಕು ಎಂದರು. ಶರಣ ಸಾಹಿತ್ಯ ಪರಿಷತ್ತಿನ ತಾಲ್ಲೂಕಾಧ್ಯಕ್ಷ ವೀರಣ್ಣ. ಬಿ. ಮರ್ತುರ ಮಾತನಾಡಿ, ವಿದ್ಯಾರ್ಥಿಗಳು ಜೀವನದಲ್ಲಿ ಸಮಯ ಪ್ರಜ್ಞೆ, ಶಿಸ್ತು ಅಳವಡಿಸಿಕೊಂಡು ವಚನಗಳ ಪಾಲನೆಯ ಮೂಲಕ ಕಲಿತ ಶಾಲೆಗೆ ಕಲಿಸಿದ ಗುರುಗಳಿಗೆ ಹಾಗೂ ತಂದೆ-ತಾಯಿಗಳಿಗೆ ಗೌರವ ತಂದುಕೊಡುವ ಸಾಮರ್ಥ್ಯ ವಿದ್ಯಾರ್ಥಿಗಳು ಬಳಸಿಕೊಳ್ಳಬೇಕೆಂದರು. ಆರ್ ಜಿ ಅಳ್ಳಗಿ ಶರಣ ಸಾಹಿತ್ಯ ಪರಿಷತ್ ಕುರಿತಾಗಿ ಮಾತನಾಡಿದರು.



ಉದಯವಾಹಿನಿ ಚಿತ್ರ

> 12ನೇ ಶತಮಾನದ ಶರಣರ ವಚನಗಳಲ್ಲಿ ಜೀವನದ ಮಾನವೀಯ ಮೌಲ್ಯಗಳು ಅಡಗಿವೆ. ಅವುಗಳನ್ನ ಇಂದಿನ ಯುವಕರು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. 12ನೇ ಶತಮಾನದ ಶರಣರ ಮಾತುಗಳೇ ವಚನಗಳಾಗಿ ಮಾರ್ಪಟ್ಟು ಪ್ರತಿಯೊಂದು ವಚನಗಳಲ್ಲಿ ಅಂದರೆ ನುಡಿದರೆ ಮುತ್ತಿನ ಹಾರದಂತಿರಬೇಕು, ಕಳಬೇಡ ಕೊಲಬೇಡ, ದಯವೇ ಧರ್ಮದ ಮೂಲವಯ್ಯ ಅನ್ನುವ ಹಲವಾರು ವಚನಗಳಲ್ಲಿ ಜೀವನದ ಮಾನವೀಯ ಮೌಲ್ಯಗಳು ಅಡಗಿವೆ. -ಸುಭಾಷ್ ಬಸವರೆಡ್ಡಿಮ, ಕಸಾಪ ಅಧ್ಯಕ್ಷ

---

## ಕಾರ್ಗಿಲ್ ವಿಜಯೋತ್ಸವ ಆಚರಣೆ



ಉದಯವಾಹಿನಿ ಚಿತ್ರ

• ಉದಯವಾಹಿನಿ ಗದಗ

ಸೊರಟೂರ ಗ್ರಾಮದ ಬಸ್ ನಿಲ್ದಾಣ ವೃತ್ತದಲ್ಲಿ ಕಾರ್ಗಿಲ್ ವಿಜಯೋತ್ಸವ ಆಚರಿಸಲಾಯಿತು. ಭಾರತ ದೇಶದ ಸೈನಿಕರ ಶೌರ್ಯ ಸಾಹಸ ಧೈರ್ಯ ತ್ಯಾಗದ ಪ್ರತೀಕವಾಗಿ ಕಾರ್ಗಿಲ್ ವಿಜಯೋತ್ಸವವನ್ನು ಆಚರಿಸಿದರು.

ಈ ಸಂದರ್ಭದಲ್ಲಿ ಭಗತ್‌ಸಿಂಗ್ ಸಂಘಟನೆಯ ಅಧ್ಯಕ್ಷರಾದ ಮಂಜುನಾಥ ಮಿರಗಾಣಿ. ಮಾಜಿ ಸೈನಿಕರಾದ ಮಹಾವೀರ ಹೋಳಗಿ. ಮುತ್ತು ಮಲ್ಲಾರಿ. ಶರಣಪ್ಪ ಕಲಗುಡಿ . ಇಮಾಮ್ ಸಾಬ್ ಮಜೂರ. ಪ್ರಕಾಶ್ ಮುಳಗುಂದ. ಉಮೇಶ್ ಹಳ್ಳಿ. ಮಂಜು ಗದಗಿನ. ಸಂಪತ್ ಕುಮಾರ್ ಸಾತಪ್ಪನವರ. ಹಾಗೂ ಗ್ರಾಮದ ಯುವಕರು ಹಿರಿಯರು ಭಾಗಿಯಾಗಿದ್ದರು.

---

## ಬಲ್ಲೋಟಾ ಕಂಪನಿ ಗೂಂಡಾಗಳು ಕುರಿಗಾಹಿ ದನಗಾಹಿ ಮೇಲೆ ದೌರ್ಜನ್ಯ: ಖಂಡನೆ

• ಉದಯವಾಹಿನಿ ಸಿಂಧನೂರು

ಕೊಪ್ಪಳ ನಗರದಿಂದ 3 ಕಿ.ಮೀ ಅಂತರದಲ್ಲಿರುವ ಬಸಾಪುರ ಕೆರೆಯನ್ನು ಜನ, ಜಾನುವಾರುಗಳಿಗೆ ಮುಕ್ತಗೊಳಿಸಬೇಕೆಂದು ಹೇಳಿದರು. ನಗರದ ಮಹಾತ್ಮ ಗಾಂಧಿ ಸರ್ಕಲ್ ನಲ್ಲಿ ಪ್ರೊಟೆಸ್ಟ್ ಮಾಡಿ ನಂತರ ಮಾತನಾಡಿದ ಬಿ ಎನ್ ಯರದಿಹಾಳ ಅವರು ಬಲ್ಲೋಟಾ (BSPL) ಹೈಕೋರ್ಟ್ ಆದೇಶ ಮಾಡಿದೆ ಆದರೆ, MSPL ಬಲ್ಲೋಟಾ (BSP) ಕಂಪನಿಯವರು ಕೆರೆ ಸುತ್ತಲೂ ಕೋಟೆ ಆಕಾರದ ಎತ್ತರದ ಗೋಡೆಯನ್ನು ಕೊಟ್ಟಿದ್ದಾರೆ ಎಂದು ಆಕ್ರೋಶವನ್ನು ವ್ಯಕ್ತಪಡಿಸಿದರು

ಈ ಕಾರಣದಿಂದ ಸುತ್ತಲೂ ಹಳ್ಳಿಗಳ ಕುರಿ, ಜಾನುವಾರುಗಳಿಗೆ ನೀರು ಕುಡಿಯಲು ಅವಕಾಶ ಇಲ್ಲದಂತಾಗಿದೆ. ಕಂಪನಿಯ ಈ ಕಾನೂನು ವಿರೋಧಿ ಕಾರ್ಯವನ್ನು ತಡೆಗಟ್ಟಲು ಒತ್ತಾಯಿಸಿ, ಈಗಾಗಲೇ ಎರಡು ಹೋರಾಟ ನಡೆಸಲಾಗಿದೆ. ದಿನಾಂಕ: 25-05-2025ರಂದು ಬಸಾಪುರ, ಹಾಲವರ್ತಿ ಇತರೆ ಗ್ರಾಮಗಳ ರೈತರು ತಮ್ಮ ಕುರಿ, ಹಾಗೂ ದನಕರುಗಳಿಗೆ ನೀರು ಕುಡಿಸಲು ಕೆರೆ ಹತ್ತಿರ ಹೋಗಿದ್ದಾರೆ. ಕೆರೆಗೆ ಹೋಗುವುದನ್ನು ತಡೆದು ನಿಲ್ಲಿಸಿದ BSP ಕಂಪನಿಯ ಗೂಂಡಾಗಳು ಕುರಿಗಾಹಿ ಮತ್ತು ದನಗಾಹಿ ರೈತರ ಮೇಲೆ ದೌರ್ಜನ್ಯ ನಡೆಸಿದ್ದಾರೆ. ಮುಖ್ಯವಾಗಿ ದೇವಪ್ಪ ಹಾಲಳ್ಳಿ ಹಾಗೂ ಮಹಿಳೆಯರ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿದ್ದಾರೆ. ಕಂಪನಿಯ ಕಾನೂನು ವಿರೋಧಿ ಕೃತ್ಯವನ್ನು CPI (ML) ಮಾಸ್ ಲೈನ್ ತೀವ್ರವಾಗಿ ಖಂಡಿಸುತ್ತದೆ. ಮತ್ತು ಸರ್ಕಾರ ಈ ಘಟನೆಯನ್ನು ಗಂಭೀರವಾಗಿ ಪರಿಗಣಿಸಲು ಒತ್ತಾಯಿಸುತ್ತದೆ. ಕೆರೆಯನ್ನು ಜನ, ಜಾನುವಾರುಗಳಿಗೆ ಮುಕ್ತವಾಗಿಡಬೇಕೆಂದು ಉಚ್ಚನ್ಯಾಯಾಲಯದ ಸೂಚನೆಯನ್ನು ಕಂಪನಿ ಸಂಪೂರ್ಣವಾಗಿ ಉಲ್ಲಂಘಿಸಿದೆ. ಕಳೆದ ಎರಡು ದಿನಗಳಿಂದ ಕೊಪ್ಪಳ ಜಿಲ್ಲಾ ಬಚಾವೋ ಆಂದೋಲನ ಸಮಿತಿ ಹಾಗೂ ಪರಿಸರ ಹಿತರಕ್ಷಣಾ ವೇದಿಕೆ ನೇತೃತ್ವದಲ್ಲಿ ಕೊಪ್ಪಳ ಜಿಲ್ಲಾಧಿಕಾರಿ ಕಛೇರಿ ಮುಂದೆ ರೈತರು, ಜಾನುವಾರುಗಳೊಂದಿಗೆ ಹೋರಾಟ ನಡೆಸಿದ್ದರು. ಈ ಸಂದರ್ಭದಲ್ಲಿ ಕುರಿ, ದನ-ಕರುಗಳನ್ನು ಕೆರೆಯ ನೀರು ಕುಡಿಸಲು ಹೋದ ಸಂದರ್ಭದಲ್ಲಿ MSPL ಕಂಪನಿಯವರು ಬಡಿಗೆಗಳನ್ನು ಹಿಡಿದುಕೊಂಡು ರೈತರ ಮೇಲೆ ಮಾರಣಾಂತಿಕವಾಗಿ ದೌರ್ಜನ್ಯ ನಡೆಸಿರುತ್ತಾರೆ. ರಮೇಶ್ ಪಾಟೀಲ್. ಚಿಟ್ಟಿ ಬಾಬು. ಯಲ್ಲಪ್ಪ. ಶ್ಯಾಮಿದ ಸಾಬ್ ಮಹಮದ್ ಸೇರಿದಂತೆ ಇತರರು ಇದ್ದರು.




ಉದಯವಾಹಿನಿ ಚಿತ್ರ

> 43 ಎಕರೆ ಕೆರೆಯ ಪೈಕಿ, 15 ಎಕರೆಯಷ್ಟು ಕೆರೆಯನ್ನು ಮುಚ್ಚಿ, ರಸ್ತೆ ಮಾಡಿ ಕೊಂಡಿರುವ ಕಂಪನಿ ಯವರ ಮೇಲೆ ಕಾನೂನು ಕ್ರಮ ಜರುಗಿಸಬೇಕೆಂದು ಕಳೆದ ಎರಡು ವರ್ಷಗಳಿಂದ ಬಸಾಪುರ, ಹಾಲವರ್ತಿ ಇತರೆ ಗ್ರಾಮಗಳ ರೈತರು, ಜಿಲ್ಲಾಧಿಕಾರಿಗಳಿಗೆ ಮನವಿ ಕೊಟ್ಟು ವಿನಂತಿಸಿದ್ದರೂ ಪ್ರಯೋಜನವಾಗಿಲ್ಲ. ಕೋಪ್ಪಳ ಜಿಲ್ಲಾ ಬಚಾವೋ ಆಂದೋಲನ ಸಮಿತಿಯು 2009 ರಂದು ಹೈಕೋರ್ಟ್‌ನಲ್ಲಿ ದಾವೆ ಹೂಡಿ ನಿರಂತರವಾಗಿ ಹೋರಾಡುತ್ತದೆ ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ಕಂಪನಿ ಮಾಲೀಕರಿಗೆ ಮತ್ತು ಗೂಂಡಾಗಳು ಮೇಲೆ ಕ್ರಿಮಿನಲ್ ಮೊಕದ್ದಮೆ ದಾಖಲಿಸಿ ಬಂಧಿಸಬೇಕು
> 
> - ಕರ್ನಾಟಕ ರಾಜ್ಯ ರೈತ ಸಂಘ

---

## ಶಿಥಿಲ ಕೊಠಡಿಯಲ್ಲಿ ವಿದ್ಯಾರ್ಥಿಗಳನ್ನು ಕೂರಿಸದಂತೆ ಲೋಕಾಯುಕ್ತ ಸೂಚನೆ

• ಉದಯವಾಹಿನಿ ಕಂಪ್ಲಿ

ಪಟ್ಟಣದ ಷಾ.ಮಿಯಾಚಂದ್ ಸರ್ಕಾರಿ ಪ್ರೌಢ ಶಾಲೆ ಕೊಠಡಿಗಳು ಶಿಥಿಲ ಮತ್ತು ಚಾವಣಿ ದುರಸ್ತಿಯಲ್ಲಿದ್ದು, ಮುನ್ನೆಚ್ಚರಿಕೆಯಾಗಿ ವಿದ್ಯಾರ್ಥಿಗಳನ್ನು ಕುಳ್ಳಿರಿಸದಂತೆ ಲೋಕಾಯುಕ್ತ ನಿರೀಕ್ಷಕ ನಾಗರೆಡ್ಡಿ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು. ಇಲ್ಲಿಯ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ನಡೆದ ಸಾರ್ವಜನಿಕ ಕುಂದುಕೊರತೆ ಸಭೆಯಲ್ಲಿ ಮಾತನಾಡಿ, ಮಳೆಗಾಲ ಆಗಿರುವುದರಿಂದ ತ್ವರಿತವಾಗಿ ಕೊಠಡಿಗಳ ದುರಸ್ತಿಗೆ ಶಿಕ್ಷಣ ಇಲಾಖೆ ಗಮನಹರಿಸಬೇಕು. ಮಂಜೂರಾದ ನೂತನ ಕೊಠಡಿಗಳ ಕಾಮಗಾರಿಯನ್ನೂ ಆರಂಭಿಸುವಂತೆ ತಿಳಿಸಿದರು.

ಪಟ್ಟಣದ ವಿವಿಧೆಡೆ ನಿಂತ ನೀರಿನಲ್ಲಿ ಸೊಳ್ಳೆಗಳು ಕಾಣಿಸಿಕೊಳ್ಳುವುದು, ಸಾಂಕ್ರಾಮಿಕ ರೋಗ ಹರಡದಂತೆ ಫಾಗಿಂಗ್ ಸಿಂಪರಣೆಗೆ ಪುರಸಭೆ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು. ವಸತಿ ನಿಲಯಗಳ ನಿಲಯ ಪಾಲಕರು ಗುಣಮಟ್ಟದ ಪಡಿತರ, ಮೊಟ್ಟೆ ಖರೀದಿಸಬೇಕು ಎಂದು ತಿಳಿಸಿದರು.



ಉದಯವಾಹಿನಿ ಚಿತ್ರ

---

## ನಾಗರಾಳ ಜಲಾಶಯ ಭರ್ತಿ ಸಾರ್ವಜನಿಕರು ಎಚ್ಚರಿಕೆ ವಹಿಸಿ ನದಿಯ ದಂಡೆಗೆ ಹೋಗಬೇಡಿ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಚಿಂಚೋಳಿ

ತಾಲ್ಲೂಕಿನ ಕೆಳದಂಡೆ ಮುಲ್ಲಾಮಾರಿಯ ನಾಗರಾಳ ಜಲಾಶಯವು ಸಂಪೂರ್ಣವಾಗಿ ಭರ್ತಿಯಾಗಿದ್ದು ದಿನಾಲೂ 800 ಮತ್ತು 1200 ಕ್ಯೂಸೆಕ್ ನೀರು ಮುಲ್ಲಾಮಾರಿ ನದಿಗೆ ನೀರು ಹರಿ ಬೀಡಲಾಗುತ್ತಿದೆ ನದಿಯ ದಂಡೆಯ ಗ್ರಾಮಗಳ ಸಾರ್ವಜನಿಕರು ಏಚ್ಚೆರಗೊಂಡು ನದಿಯ ದಂಡೆಯ ಕಡೆ ಹೋಗಬಾರದು ಎಂದು ಜಲಾಶಯ ಎಇಇ ಅಮೃತ ಪವ್ಹಾರ ತಿಳಿಸಿದ್ದಾರೆ.

ಈಗಾಗಲೇ ಒಳಹರಿವು 370ಕ್ಯೂಸೇಕ್ ಇತ್ತು,870ಕ್ಯೂಸೇಕ್ ನೀರು ಮುಲ್ಲಾಮಾರಿ ನದಿಗೆ ಹರಿ ಬಿಡಲಾಗಿತ್ತು, 650ಕ್ಯೂಸೇಕ್ ನೀರು ಒಳಹರಿವುಯಿದೆ ಸುಮಾರು 1200ಕ್ಯೂಸೇಕ್ ನೀರು ನದಿಗೆ ಹರಿಬೀಡಲಾಗುವುದು, ಜಲಾಶಯದಲ್ಲಿ ಒಟ್ಟಾರೆ ನೀರಿನ ಸಂಗ್ರಹಣೆ ಶೇ. 78 ಪ್ರತಿಶತಃ ದಷ್ಟುಯಿದೆ, 1.5ಮೀಟರ್ ಇರುವಾಗಲೇ ನೀರು ಬೀಡಲಾಗುತ್ತದೆ ಎಂದು ತಿಳಿಸಿದ್ದಾರೆ.

---

## ಜೂಜಾಟ: 6 ಜನರ ಬಂಧನ

• ಉದಯವಾಹಿನಿ, ಕಲಬುರಗಿ

ನಗರದ ಆಳಂದ ಚೆಕ್‌ಪೋಸ್ಟ್ ಹತ್ತಿರವಿರುವ ಶಿವಲಿಂಗ ನಗರ ಕಾಲೋನಿಯ ಗಾರ್ಡ್‌ನಲ್ಲಿರುವ ಅಂಗನವಾಡಿ ಹತ್ತಿರದ ಖುಲ್ಲಾ ಜಾಗದಲ್ಲಿ ಜೂಜಾಟವಾಡಲಾಗುತ್ತಿದೆ ಎಂಬ ಮಾಹಿತಿ ಮೇಲೆ ಸಿಸಿಬಿ ಘಟಕದ ಪಿಐ ದಿಲೀಪಕುಮಾರ ಬಿ.ಸಾಗರ, ಸಿಬ್ಬಂದಿಗಳಾದ ಅಶೋಕ, ರಾಜಕುಮಾರ, ನಾಗರಾಜ, ಸುನೀಲಕುಮಾರ ಅವರು ದಾಳಿ ನಡೆಸಿ 6 ಜನರನ್ನು ಬಂಧಿಸಿದ್ದಾರೆ. ಆರ್.ಜಿ.ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

---

## ಅಪಘಾತಕ್ಕೀಡಾದ ಟ್ಯಾಂಕರ್‌ನಿಂದ ಅನಿಲ ಸೋರಿಕೆ: ಸ್ಥಳೀಯ ನಿವಾಸಿಗಳ ಸ್ಥಳಾಂತರ

• ಉದಯವಾಹಿನಿ, ಕಾಸರಗೋಡು

ರಾಷ್ಟ್ರೀಯ ಹೆದ್ದಾರಿಯ ಕಾಂಗಾಡ್ ಸೌತ್‌ನಲ್ಲಿ ಅಪಘಾತಕ್ಕೀಡಾದ ಟ್ಯಾಂಕರ್ ನಿಂದ ಅನಿಲ ಸೋರಿಕೆ ಕಂಡುಬಂದಿದೆ. ಈ ಹಿನ್ನೆಲೆ ಪರಿಸರದಲ್ಲಿ ಮುಂಜಾಗ್ರತಾ ಕ್ರಮ ತೆಗೆದುಕೊಳ್ಳಲಾಗಿದ್ದು ಸ್ಥಳೀಯ ನಿವಾಸಿಗಳನ್ನು ಸ್ಥಳಾಂತರಿಸಲಾಗಿದೆ. ಸುಮಾರು ಅರ್ಧ ಕಿಲೋ ಮೀಟರ್ ವ್ಯಾಪ್ತಿಯಲ್ಲಿ ಮುನ್ನೆಚ್ಚರಿಕೆ ನೀಡಲಾಗಿದೆ. ಮಂಗಳೂರಿನಿಂದ ಸ್ಥಳಕ್ಕೆ ಆಗಮಿಸಿದ ತಜ್ಞರ ತಂಡವು ಸೋರಿಕೆ ತಡೆಗಟ್ಟಲು ಕ್ರಮ ತೆಗೆದುಕೊಂಡಿದೆ. ಸಂಪೂರ್ಣವಾಗಿ ಸೋರಿಕೆ ತಡೆಗಟ್ಟದ ಬಳಿಕ ಇನ್ನೊಂದು ಟ್ಯಾಂಕರ್‌ಗೆ ಅನಿಲ ವರ್ಗಾಯಿಸಲಾಗುವುದು. ಈ ಟ್ಯಾಂಕರ್ ಬೆಂಗಳೂರಿನಿಂದ ಕೊಯಮುತ್ತೂರಿಗೆ ಅನಿಲ ಸಾಗಾಟ ಮಾಡುತ್ತಿತ್ತು. ಬಸ್ಸಿಗೆ ಸೈಡ್ ನೀಡುತ್ತಿದ್ದಾಗ ಚಾಲಕನ ನಿಯಂತ್ರಣ ತಪ್ಪಿ ಟ್ಯಾಂಕರ್ ಮಗುಚಿ ಬಿದ್ದಿತ್ತು. ಅಪಘಾತದಲ್ಲಿ ಚಾಲಕ ತಮಿಳುನಾಡಿನ ಸುರೇಶ್ ಗಾಯಗೊಂಡಿದ್ದರು. ಟ್ಯಾಂಕರ್‌ನ್ನು ಮೇಲಕ್ಕೆತ್ತಲು ಯತ್ನಿಸುತ್ತಿದ್ದಾಗ ಸೋರಿಕೆ ಕಂಡುಬಂದಿದೆ. ಸೋರಿಕೆ ಕಂಡು ಬಂದ ಹಿನ್ನಲೆಯಲ್ಲಿ ಅಗ್ನಿ ಶಾಮಕ ದಳದ ಸಿಬ್ಬಂದಿಗಳು, ಪೊಲೀಸರು ಕ್ರಮ ತೆಗೆದುಕೊಂಡರೂ ವಿಫಲ ಗೊಂಡಿತ್ತು. ನೀರು ಹಾಯಿಸಿ ಹೆಚ್ಚಿನ ಅನಾಹುತ ತಪ್ಪಿಸಲಾಯಿತು.

ಕಾಂಗಾಡ್ ನೀಲೇಶ್ವರ ದಾರಿಯಾಗಿ ವಾಹನ ಸಂಚಾರಕ್ಕೆ ಬದಲಿ ವ್ಯವಸ್ಥೆ ಮಾಡಲಾಯಿತು. ಮುಂಜಾಗ್ರತಾ ಕ್ರಮವಾಗಿ ಕಾಂಗಾಡ್ ಸೌತ್‌ನಿಂದ ಐಂಗೋತ್ ತನಕ ಶಾಲೆಗಳು ಹಾಗೂ ಸರಕಾರಿ ಸಂಸ್ಥೆ ಗಳಿಗೆ ರಜೆ ನೀಡಲಾಗಿತ್ತು. ವಿದ್ಯುತ್ ಸಂಪರ್ಕ ಕಡಿತ ಗೊಳಿಸಲಾಗಿದೆ.

---

# ದ್ರವ ರೂಪದ ನ್ಯಾನೋ ಯೂರಿಯಾ ಬಳಕೆಯತ್ತ ರೈತರ ಚಿತ್ತ

### ನ್ಯಾನೋ ಯೂರಿಯಾ ಸಿಂಪಡಣೆಗೆ ಕೃಷಿ ಕೂಲಿಕಾರರ ಜೊತೆಜೊತೆಗೇ ಡ್ರೋನ್‌ಗಳನ್ನೂ ಬಳಸಿಕೊಳ್ಳಲಾಗುತ್ತಿದೆ

• ಉದಯವಾಹಿನಿ, ದಾವಣಗೆರೆ

ಹರಳು ರೂಪದ ಯೂರಿಯಾ ರಸಗೊಬ್ಬರಕ್ಕೆ ಪರ್ಯಾಯವಾಗಿ ದ್ರವ ರೂಪದ ನ್ಯಾನೋ ಯೂರಿಯಾ ಮಾರುಕಟ್ಟೆಯಲ್ಲಿ ಲಭ್ಯವಿದೆ. ಆದರೆ, ರೈತರಿಂದ ಹರಳು ರೂಪದ ಗೊಬ್ಬರಕ್ಕೇ ಬೇಡಿಕೆ ಇರುವುದರಿಂದ ಕೊರತೆ ಕಂಡುಬರುತ್ತಿದೆ. ಅಂತೆಯೇ ಕೃಷಿ ಇಲಾಖೆ ದ್ರವ ರೂಪದ ಯೂರಿಯಾ ಬಳಸುವಂತೆ ಜಾಗೃತಿ ಮೂಡಿಸುತ್ತಿದೆ.

ಜಿಲ್ಲೆಯಲ್ಲಿ ದಿನದಿಂದ ದಿನಕ್ಕೆ ನ್ಯಾನೋ ಯೂರಿಯಾ ಬಳಕೆಯ ಪ್ರಮಾಣ ಕ್ರಮೇಣ ಹೆಚ್ಚುತ್ತಿದೆ. ಪ್ರಸಕ್ತ ವರ್ಷ ಈಗಾಗಲೇ ತಲಾ 500 ಮಿ.ಲೀ.ನ 20,000 ಬಾಟಲುಗಳಷ್ಟು ನ್ಯಾನೋ ಯೂರಿಯಾವನ್ನು, ಅಂದಾಜು 10,000 ಎಕರೆ ಮೆಕ್ಕೆಜೋಳ ಬೆಳೆಗೆ ರೈತರು ಸಿಂಪಡಿಸಿದ್ದಾರೆ.

ನ್ಯಾನೋ ಯೂರಿಯಾ ಸಿಂಪಡಣೆಗೆ ಕೃಷಿ ಕೂಲಿಕಾರರ ಜೊತೆಜೊತೆಗೇ ಡ್ರೋನ್‌ಗಳನ್ನೂ ಬಳಸಿಕೊಳ್ಳಲಾಗುತ್ತಿದೆ. ದಾವಣಗೆರೆ ತಾಲ್ಲೂಕಿನ ಮಾಯಕೊಂಡ, ಆನಗೋಡು ಹಾಗೂ ಕಸಬಾ ಹೋಬಳಿಯಲ್ಲಿ ನಿತ್ಯವೂ 400ರಿಂದ 500 ಎಕರೆಯಲ್ಲಿ ಡ್ರೋನ್ ಮೂಲಕ ನ್ಯಾನೋ ಯೂರಿಯಾ ದ್ರಾವಣವನ್ನು ಸಿಂಪಡಿಸಲಾಗುತ್ತಿದೆ.






ಉದಯವಾಹಿನಿ ಚಿತ್ರ

**ಹರಳು ರೂಪದ ಗೊಬ್ಬರಕ್ಕೆ ಬೇಡಿಕೆ**

**ವೆಚ್ಚ ಕಡಿಮೆ:** ಇಫ್ಕೋ ಕಂಪನಿಯ 500 ಮಿ.ಲೀ. ಸಾಮರ್ಥ್ಯದ ದ್ರವ ರೂಪದ ನ್ಯಾನೋ ಯೂರಿಯಾ ಬೆಲೆ 225 ಇದೆ. ಒಂದು ಎಕರೆಗೆ ಒಂದು ಬಾಟಲು ಸಾಕಾಗುತ್ತದೆ. ಎಕರೆ ಬೆಳೆಗೆ ನ್ಯಾನೋ ದ್ರಾವಣ ಸಿಂಪಡಣೆಗೆ ಇದೇ ಕಂಪನಿಯವರು ಡ್ರೋನ್ ಪೂರೈಸಲು 400ರಿಂದ 450 ದರ ನಿಗದಿಪಡಿಸಿದ್ದಾರೆ. ಒಟ್ಟಾರೆ 650 ರಿಂದ 700 ವೆಚ್ಚದಲ್ಲಿ ಒಂದು ಎಕರೆ ಬೆಳೆಗೆ ಯೂರಿಯಾ ದ್ರಾವಣ ಸಿಂಪಡಣೆ ಕಾರ್ಯ ಪೂರ್ಣಗೊಳ್ಳುತ್ತದೆ.

45 ಕೆ.ಜಿ. ತೂಕದ ಹರಳು ರೂಪದ ಯೂರಿಯಾ ಚೀಲದ ದರ 268 ಇದೆ. ಕೊರತೆ ಸಂದರ್ಭ ಈ ದರ ಮಾರಾಟಗಾರರಿಂದಲೇ ದ್ವಿಗುಣಗೊಳ್ಳುವ ಸಾಧ್ಯತೆಯೂ ಇದೆ. ಮತ್ತೂ ಸಾಗಣೆ ವೆಚ್ಚವೂ ಪ್ರತ್ಯೇಕ. ಬೆಳೆಗಳಿಗೆ ಗೊಬ್ಬರ ಇಡಲು 400 ರಿಂದ 500ರಂತೆ ಇಬ್ಬರಿಗಾದರೂ ಕೂಲಿ ನೀಡಬೇಕು. ಇದರ ಒಟ್ಟಾರೆ ಖರ್ಚು 1,000ಕ್ಕೂ ಅಧಿಕ. ಹೀಗಾಗಿ ನ್ಯಾನೋ ಯೂರಿಯಾ ಸಿಂಪಡಣೆಯು ರೈತರಿಗೆ ಆರ್ಥಿಕವಾಗಿ ವರದಾನವಾಗಿದೆ. ಡ್ರೋನ್ ಮೂಲಕ ಕಾರ್ಯ ನಿರ್ವಹಿಸುವುದರಿಂದ ಸಮಯವೂ ಉಳಿತಾಯವಾಗುತ್ತದೆ.

ಮಣ್ಣಿನ ಆರೋಗ್ಯವೂ ಹೆಚ್ಚುತ್ತದೆ. ಜಿಲ್ಲೆಯಲ್ಲಿ ನ್ಯಾನೋ ಯೂರಿಯಾ ಸಾಕಷ್ಟು ಪ್ರಮಾಣದಲ್ಲಿ ದಾಸ್ತಾನು ಇದೆ ಎನ್ನುತ್ತಾರೆ ಕೃಷಿ ಇಲಾಖೆ ಅಧಿಕಾರಿಗಳು. 8 ದಿನಗಳ ಹಿಂದೆ 12 ಎಕರೆ ಮೆಕ್ಕೆಜೋಳ ಬೆಳೆಗೆ ಡೋನ್ ಬಳಸಿ ನ್ಯಾನೋ ದ್ರಾವಣವನ್ನು ಸಿಂಪಡಿಸಿದ್ದೆವು. ಇಫ್ಕೋ ಕಂಪನಿಯವರು ಎಕರೆಗೆ 400 ದರ ಪಡೆದಿದ್ದರು.

ಬೆಳೆಯಲ್ಲಿ ಬದಲಾವಣೆ ಕಂಡುಬಂದಿದ್ದು, ಉತ್ತಮ ಫಸಲನ್ನು ನಿರೀಕ್ಷಿಸಿದ್ದೇವೆ. ಹರಳು ಯೂರಿಯಾ ಭೂಮಿಗೆ ಬಿದ್ದು ವ್ಯರ್ಥವಾಗುತ್ತಿತ್ತು. ಆದರೆ, ಡೋನ್ ಬಳಸಿದ್ದರಿಂದ ಸ್ವಲ್ಪವೂ ವ್ಯರ್ಥವಾಗಿಲ್ಲ' ಎನ್ನುತ್ತಾರೆ ಮಾಯಕೊಂಡದ ರೈತ ಶಶಿ ಪೂಜಾರ್.

ಆನಗೋಡು ಹೋಬಳಿ ವ್ಯಾಪ್ತಿಯ ಹೆಬ್ಬಾಳು ಮಠದ ಮಹಾಂತರುದ್ರ ಸ್ವಾಮೀಜಿ ಅವರು ಮಠಕ್ಕೆ ಸೇರಿದ 14 ಎಕರೆ ಮೆಕ್ಕೆಜೋಳ ಬೆಳೆಗೆ ನ್ಯಾನೋ ಯೂರಿಯಾ ದ್ರಾವಣವನ್ನು ಡೋನ್ ಮೂಲಕ ಸಿಂಪಡಿಸಿದ್ದಾರೆ. ರೈತರು ನ್ಯಾನೋ ಯೂರಿಯಾ ಬಳಸುವುದರಿಂದ ಉತ್ತಮ ಫಸಲು ಪಡೆಯಬಹುದು. ಇದಕ್ಕಾಗಿ ಸರ್ಕಾರ ಪ್ರತೀ ಗ್ರಾಮ ಪಂಚಾಯಿತಿಗೂ ಡೋನ್‌ಗಳನ್ನು ಪೂರೈಸಬೇಕು' ಎಂದು ಸ್ವಾಮೀಜಿ ಮನವಿ ಮಾಡಿದರು.


> ಹರಳು ರೂಪದ ಯೂರಿಯಾದಲ್ಲಿ ಶೇ 46ರಷ್ಟು ಸಾರಜನಕ ಇರುತ್ತದೆ. ಆದರೆ, ಅದು ಭೂಮಿಗೆ ಸೇರಿ ನಂತರ ಗಿಡಕ್ಕೆ ಬರುತ್ತದೆ. ಆದರೆ, ನ್ಯಾನೋ ಯೂರಿಯಾದಲ್ಲಿ ಶೇ 4ರಷ್ಟು ಸಾರಜನಕ ಇದ್ದರೂ, ಅದು ನೇರವಾಗಿ ಗಿಡಗಳಿಗೆ ಸೇರುತ್ತದೆ. ಎಲೆಗಳಿಗೆ ನೇರವಾಗಿ ಸಾರಜನಕ ದೊರೆಯುವುದರಿಂದ ಉತ್ತಮ ಫಸಲು ನಿರೀಕ್ಷಿಸಬಹುದು
> 
> -ಶ್ರೀಧರಮೂರ್ತಿ, ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ

# ಭಾರತ-ಅಮೆರಿಕ ಒಪ್ಪಂದದಿಂದ ಹೂಡಿಕೆದಾರರಿಗೆ ಭಾರಿ ಅವಕಾಶ : ಅರವಿಂದ್

**ನ್ಯೂಯಾರ್ಕ್:** ಪ್ರಸ್ತಾವಿತ ಭಾರತ-ಅಮೆರಿಕ ವ್ಯಾಪಾರ ಒಪ್ಪಂದವು ಒಂದು ದೊಡ್ಡ ಅವಕಾಶವಾಗಿದ್ದು, ಭಾರತವನ್ನು ಹೂಡಿಕೆದಾರರಿಗೆ ಅತ್ಯಂತ ಆಕರ್ಷಕ ಸ್ಥಳವನ್ನಾಗಿ ಮಾಡುತ್ತದೆ ಮತ್ತು ದೇಶದಿಂದ ಸಾಕಷ್ಟು ಉದಾರೀಕರಣಕ್ಕೆ ಕಾರಣವಾಗುತ್ತದೆ ಎಂದು 16 ನೇ ಹಣಕಾಸು ಆಯೋಗದ ಅಧ್ಯಕ್ಷ ಅರವಿಂದ್ ಪನಗರಿಯಾ ಹೇಳಿದ್ದಾರೆ. ಪ್ರಸ್ತುತ ನಡೆಯುತ್ತಿರುವ ಬಹಳಷ್ಟು ವಿಷಯಗಳು ಬಹಳ ರೋಮಾಂಚಕಾರಿಯಾಗಿವೆ ಎಂದು ಪನಗರಿಯಾ ಈ ವಾರ ನ್ಯೂಯಾರ್ಕ್ ಭಾರತದ ಕಾನ್ಸುಲೇಟ್ ಜನರಲ್‌ನಲ್ಲಿ ಆಯೋಜಿಸಲಾದ ಸಂವಾದದ ಸಂದರ್ಭದಲ್ಲಿ ಹೇಳಿದರು. ನಿರ್ದಿಷ್ಟವಾಗಿ, ಮಾತುಕತೆ ನಡೆಸುತ್ತಿರುವ ಯುಎಸ್-ಭಾರತ ವ್ಯಾಪಾರ ಒಪ್ಪಂದವನ್ನು ನಾನು ಉಲ್ಲೇಖಿಸಲು ಬಯಸುತ್ತೇನೆ. ಅಲ್ಲದೆ, ಭಾರತ-ಯುರೋಪಿಯನ್ ಯೂನಿಯನ್ ಒಪ್ಪಂದ ಎಂದು ಖ್ಯಾತ ಅರ್ಥಶಾಸ್ತ್ರಜ್ಞರು ಹೇಳಿದರು. ಭಾರತ-ಅಮೆರಿಕ ವ್ಯಾಪಾರ ಒಪ್ಪಂದವು ತೋಳಿನಲ್ಲಿ ದೊಡ್ಡ ಅವಕಾಶ ಎಂದು ಅವರು ಹೇಳಿದರು.

**ಒಪ್ಪಂದದಿಂದ ದೊಡ್ಡ ಅವಕಾಶ**

ಭಾರತ-ಅಮೆರಿಕ ವ್ಯಾಪಾರ ಒಪ್ಪಂದವು ಸಂಭವಿಸಿದ ನಂತರ, ಯುರೋಪಿಯನ್ ಒಕ್ಕೂಟದೊಂದಿಗಿನ ಒಪ್ಪಂದವು ಸಹ ಸಂಭವಿಸುತ್ತದೆ ಮತ್ತು ಆ ಬಾಗಿಲು ತುಂಬಾ ಅನುಕೂಲಕರವಾಗಿ ತೆರೆಯುತ್ತದೆ ಎಂದು ಅವರು ಹೇಳಿದರು. ಈ ಎರಡು ವ್ಯಾಪಾರ ಒಪ್ಪಂದಗಳೊಂದಿಗೆ, ಭಾರತವು ಯುರೋಪಿಯನ್ ಒಕ್ಕೂಟದೊಂದಿಗೆ, ಯುನೈಟೆಡ್ ಸ್ಟೇಟ್ಸ್‌ನೊಂದಿಗೆ ಮುಕ್ತ ಮಾರುಕಟ್ಟೆಯನ್ನು ಹೊಂದಿರುತ್ತದೆ. ಇವು ಎರಡು ದೊಡ್ಡ ಮಾರುಕಟ್ಟೆಗಳಾಗಿವೆ. ಯಾವುದೇ ಭವಿಷ್ಯದ ಹೂಡಿಕೆದಾರರಿಗೆ, ಇದು ಭಾರತವನ್ನು ಬಹಳ ಆಕರ್ಷಕ ಸ್ಥಳವನ್ನಾಗಿ ಮಾಡುತ್ತದೆ.



ಏಕೆಂದರೆ ಪರಿಣಾಮಕಾರಿಯಾಗಿ, ಗಡಿಯಲ್ಲಿ ಇರುವ ಘರ್ಷಣೆ ಕರಗುತ್ತದೆ ಮತ್ತು ಅದು ಸಂಪೂರ್ಣ ಗೇಮ್ ಚೇಂಜರ್ ಆಗಲಿದೆ ಎಂದು ಪನಗರಿಯಾ ಹೇಳಿದರು. ಭಾರತ-ಯುಎಸ್ ವ್ಯಾಪಾರ ಒಪ್ಪಂದ ಮತ್ತು ಸುಂಕಗಳ ಕುರಿತು ಪಿಟಿಐ ಕೇಳಿದ ಪ್ರಶ್ನೆಗೆ ಉತ್ತರಿಸಿದ ಪನಗರಿಯಾ, ಭಾರತಕ್ಕೆ ಸಂಬಂಧಿಸಿದಂತೆ, ಸಂಭಾವ್ಯವಾಗಿ. ಇದರಿಂದ ಬಹಳಷ್ಟು ಒಳ್ಳೆಯದು ಹೊರಬರಬಹುದು ಎಂದು ನಾನು ಭಾವಿಸುತ್ತೇನೆ, ಏಕೆಂದರೆ ಒಪ್ಪಂದವನ್ನು ಯುನೈಟೆಡ್ ಸ್ಟೇಟ್ಸ್‌ನೊಂದಿಗೆ ಸಹಿ ಹಾಕಬೇಕಾದಾಗ, ಭಾರತವು ತನ್ನ ಸುಂಕಗಳನ್ನು ಕಡಿಮೆ ಮಾಡುತ್ತದೆ ಎಂದು ಹೇಳಿದರು. ಇದು ಭಾರತಕ್ಕೆ ಒಂದು ಅದ್ಭುತ ಅವಕಾಶವಾಗಿದೆ, ಮತ್ತು ಅದು ಯುನೈಟೆಡ್ ಸ್ಟೇಟ್ಸ್‌ನೊಂದಿಗೆ ಒಪ್ಪಂದದ ಬಗ್ಗೆ ಬಹಳ ಗಂಭೀರವಾಗಿ ಮಾತುಕತೆ ನಡೆಸುತ್ತಿದೆ. ಆದ್ದರಿಂದ ನಾನು ಒಳ್ಳೆಯ ಸುದ್ದಿಯನ್ನು ಕೇಳಲು ಆಶಿಸುತ್ತಿದ್ದೇನೆ ಎಂದು ಅವರು ಹೇಳಿದರು. ಅತ್ಯಂತ ಮುಖ್ಯವಾದ ವಿಷಯವೆಂದರೆ ಇದು ಭಾರತದಿಂದಲೇ ಬಹಳಷ್ಟು ಉದಾರೀಕರಣಕ್ಕೆ ಕಾರಣವಾಗುತ್ತದೆ ಮತ್ತು ಅದು ಕಥೆಯ ಒಂದು ದೊಡ್ಡ ಭಾಗವಾಗಿದೆ ಎಂದು ನಾನು ಭಾವಿಸುತ್ತೇನೆ. ಎಂದು ಪನಗರಿಯಾ ಹೇಳಿದರು.

## ಮುಂಬೈ ವಿಮಾನ ನಿಲ್ದಾಣ ಸ್ಫೋಟ ಬೆದರಿಕೆ: ಭದ್ರತೆ ಹೆಚ್ಚಳ

**ಮುಂಬೈ:** ಛತ್ರಪತಿ ಶಿವಾಜಿ ಮಹಾರಾಜ್ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಬಾಂಬ್ ಸ್ಫೋಟದ ಬೆದರಿಕೆ ಬಂದಿದ್ದು ಶೋಧ ಕಾರ್ಯಾಚರಣೆ ಕೈಗೊಂಡು ಭದ್ರತಾ ಕ್ರಮಗಳನ್ನು ಹೆಚ್ಚಿಸಲಾಗಿದೆ. ಮೂರು ವಿಭಿನ್ನ ಸಂಖ್ಯೆಗಳಿಂದ ಕರೆಗಳನ್ನು ಮಾಡಲಾಗಿದೆ, ಆದರೆ ಗಂಟೆಗಳ ಕಾಲ ನಡೆಸಿದ ಶೋಧದಲ್ಲಿ ಅನುಮಾನಾಸ್ಪದವಾಗಿ ಏನೂ ಕಂಡುಬಂದಿಲ್ಲ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ವಿಮಾನ ನಿಲ್ದಾಣದ ಟರ್ಮಿನಲ್ 2 ರಲ್ಲಿ ಬಾಂಬ್ ಇರಿಸಲಾಗಿದೆ ಮತ್ತು ಶೀಘ್ರದಲ್ಲೇ ಸ್ಫೋಟಗೊಳ್ಳಲಿದೆ ಎಂದು ಪೊಲೀಸ್ ನಿಯಂತ್ರಣ ಕೊಠಡಿಗೆ ಬಂದ ಕರೆಗಳು ತಿಳಿಸಿವೆ. ಪೊಲೀಸರು ತಕ್ಷಣ ಸಿಬ್ಬಂದಿ ಮತ್ತು ಬಾಂಬ್ ಸ್ಕ್ವಾಡ್ ಅನ್ನು ಸ್ಥಳಕ್ಕೆ ರವಾನಿಸಿದರು. ವ್ಯಾಪಕ ಶೋಧ ನಡೆಸಲಾಯಿತು, ಆದರೆ ಯಾವುದೇ ಅನುಮಾನಾಸ್ಪದ ವಸ್ತುಗಳು ಕಂಡುಬಂದಿಲ್ಲ.

ಅಸ್ಸಾಂ-ಪಶ್ಚಿಮ ಬಂಗಾಳ ಗಡಿಯ ಬಳಿ ಸಕ್ರಿಯವಾಗಿರುವ ಮೊಬೈಲ್ ಸಂಖ್ಯೆಗಳಿಂದ ಕರೆಗಳನ್ನು ಮಾಡಲಾಗಿದೆ ಎಂದು ಪ್ರಾಥಮಿಕ ತನಿಖೆಯಿಂದ ತಿಳಿದುಬಂದಿದೆ. ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ತನಿಖೆ ಆರಂಭಿಸಿದ್ದಾರೆ.

## ದೇಶದ ಹಲವೆಡೆ ಮುಂಗಾರು ಅಬ್ಬರ, ಜನಜೀವನ ಅಸ್ತವ್ಯಸ್ತ

**ನವದೆಹಲಿ:** ದೇಶದ ವಿವಿಧ ಭಾಗಗಳಲ್ಲಿ ಮುಂಗಾರು ಸಕ್ರಿಯವಾಗಿದ್ದು, ಹಲವು ಪ್ರದೇಶಗಳಲ್ಲಿ ಭಾರೀ ಮಳೆಯಾಗುತ್ತಿದೆ, ಅನೇಕ ನಗರಗಳಲ್ಲಿ ನೀರು ನಿಲ್ಲುವಿಕೆ, ಸಂಚಾರ ದಟ್ಟಣೆಯೂ ಸಮಸ್ಯೆಗಳನ್ನು ಹೆಚ್ಚಿಸಿದೆ.

ವಿಶೇಷವಾಗಿ ಉತ್ತರ ಪ್ರದೇಶ ಮತ್ತು ದೆಹಲಿಯಲ್ಲಿ, ನಿನ್ನೆ ರಾತ್ರಿಯಿಂದ ನಿರಂತರವಾಗಿ ಮಳೆಯಾಗುತ್ತಿದ್ದು, ಇದರಿಂದಾಗಿ ರಸ್ತೆಗಳು ಮತ್ತು ಮನೆಗಳು ಜಲಾವೃತಗೊಂಡಿವೆ. ಹವಾಮಾನ ಇಲಾಖೆಯ ಪ್ರಕಾರ, ಮುಂಬರುವ ದಿನಗಳಲ್ಲಿ ದೆಹಲಿಯಲ್ಲಿ ಇದೇ ರೀತಿಯ ಹವಾಮಾನ ಮುಂದುವರಿಯಲಿದೆ.

**ಯಾವ ರಾಜ್ಯಗಳಲ್ಲಿ ಮಳೆಯಾಗುತ್ತಿದೆ:** ಕಳೆದ 24 ಗಂಟೆಗಳಲ್ಲಿ ಕರಾವಳಿ ಕರ್ನಾಟಕ, ಕೇರಳ ಮತ್ತು ವಿದರ್ಭದಲ್ಲಿ ಭಾರಿ ಮಳೆಯಾಗಿದೆ. ಇದಲ್ಲದೆ, ಒಡಿಶಾ, ಜಾರ್ಖಂಡ್, ಛತ್ತೀಸ್‌ಗಢ, ಮಧ್ಯಪ್ರದೇಶ, ಕೊಂಕಣ, ಗೋವಾ ಮತ್ತು ಗಂಗಾನದಿಯ ಪಶ್ಚಿಮ ಬಂಗಾಳದಲ್ಲಿಯೂ ಮಧ್ಯಮದಿಂದ ಭಾರೀ ಮಳೆಯಾಗಿದೆ.

ಅದೇ ಸಮಯದಲ್ಲಿ, ದೆಹಲಿ, ಹರಿಯಾಣ, ಉತ್ತರ ಪ್ರದೇಶ, ಪಶ್ಚಿಮ ಮಧ್ಯಪ್ರದೇಶ, ತಮಿಳುನಾಡು, ಜಮ್ಮು ಮತ್ತು ಕಾಶ್ಮೀರ ಮತ್ತು ಕರ್ನಾಟಕದ ಒಳನಾಡಿನಲ್ಲಿ ಲಘು ಮಳೆಯಾಗಿದೆ.

## ಹಸುಗಳ ಮೇಲೆ ಆಸಿಡ್ ಎರಚಿದ ಕಿರಾತಕ

**ಗಂಜಾಂ:** ಒಡಿಶಾದ ಗಂಜಾಂ ಜಿಲ್ಲೆಯಲ್ಲಿ ವ್ಯಕ್ತಿಯೊಬ್ಬ ತನ್ನ ಮನೆಯ ಹೊರಗೆ ಮೇಯುತ್ತಿದ್ದ ನಾಲ್ಕು ಹಸುಗಳ ಮೇಲೆ ಆಸಿಡ್ ಎರಚಿದ ಆಘಾತಕಾರಿ ಘಟನೆ ಬೆಳಕಿಗೆ ಬಂದಿದೆ. ಗಾಂಧಿ ನಗರ ಪ್ರದೇಶದಲ್ಲಿ ಈ ಘಟನೆ ನಡೆದಿದ್ದು, ಪೊಲೀಸರು ಈ ಪ್ರಕರಣದಲ್ಲಿ ಆರೋಪಿಗಳ ವಿರುದ್ಧ ಪ್ರಕರಣ ದಾಖಲಿಸಿದ್ದಾರೆ.

ಆಸಿಡ್ ದಾಳಿಯಲ್ಲಿ 4 ಹಸುಗಳು ತೀವ್ರವಾಗಿ ಸುಟ್ಟುಹೋಗಿದ್ದು, ಅವುಗಳನ್ನು ತಕ್ಷಣ ಸ್ಥಳೀಯ ಪಶುವೈದ್ಯಕೀಯ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಚಿಕಿತ್ಸೆ ನೀಡಲಾಗುತ್ತಿದೆ. ಹಸುಗಳ ಸ್ಥಿತಿ ಸ್ಥಿರವಾಗಿದೆ ಎಂದು ಹೇಳಲಾಗುತ್ತದೆ, ಆದರೆ ಗಾಯಗಳು ತುಂಬಾ ಗಂಭೀರವಾಗಿವೆ ಹಸುಗಳು ಮೋಕ ವೇದನೆ ಅನುಭವಿಸುತ್ತಿವೆ.

ಆರೋಪಿಯು ತನ್ನ ಮನೆಯ ಸುತ್ತಲು ಬೆಳೆಸಿದ ಹಸಿರು ಸಸ್ಯಗಳಿಗೆ ಹಸುಗಳು ಹಾನಿ ಮಾಡುತ್ತಿದ್ದರಿಂದ ಪ್ರಾಣಿಗಳನ್ನು ಬಿಡಬೇಡಿ ಎಂದು ಈ ಹಿಂದೆ ಬೆದರಿಕೆ ಹಾಕಿದ್ದ ಎಂದು ಹಸುಗಳ ಮಾಲೀಕರು ಆರೋಪಿಸಿದ್ದಾರೆ. ಆದರೆ, ಹಸುಗಳು ಅವನ ಮನೆಯ ಮುಂದೆ ಬೆಳೆದು ಗಿಡಗಳನ್ನು ಮೇಯಲು ಬಂದಾಗ, ಅವನು ಅವುಗಳ ಮೇಲೆ ಆಸಿಡ್ ಎರಚಿದ್ದಾನೆ. ಈ ಘಟನೆಯ ಬಗ್ಗೆ ಸ್ಥಳೀಯ ಜನರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದು, ಆರೋಪಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸುತ್ತಿದ್ದಾರೆ.

## ಕಾಲನ್ನೇ ಕತ್ತರಿಸಿಕೊಂಡ ವೈದ್ಯ

**ಲಂಡನ್:** ಬ್ರಿಟನ್‌ನಲ್ಲಿ ಒಬ್ಬ ಶಸ್ತ್ರಚಿಕಿತ್ಸಕ ವಿಮಾ ಕಂಪನಿಯಿಂದ 5.4 ಕೋಟಿ ರೂ. ಪಡೆಯಲು ತನ್ನ ಎರಡೂ ಕಾಲುಗಳನ್ನು ಕತ್ತರಿಸಿಕೊಂಡಿದ್ದಾನೆ. ಬ್ರಿಟಿಷ್ ಶಸ್ತ್ರಚಿಕಿತ್ಸಕ ನೀಲ್ ಹಾಪರ್ ವಿಮಾ ಕಂಪನಿಗಳಿಂದ ಸುಮಾರು 5.4 ಕೋಟಿ ರೂ.ಗಳನ್ನು ಪಡೆಯಲು ತಮ್ಮ ಎರಡೂ ಕಾಲುಗಳನ್ನು ಕತ್ತರಿಸಿಕೊಂಡ ಆರೋಪ ಹೊರಿಸಲಾಗಿದೆ. ಇದಕ್ಕೆ ಪ್ರತಿಕ್ರಿಯೆಯಾಗಿ, ಹಾಪರ್ ಸೆಪ್ಸಿಸ್ ಕಾರಣ ತಮ್ಮ ಕಾಲುಗಳನ್ನು ಕತ್ತರಿಸಬೇಕಾಯಿತು ಎಂದು ಹೇಳಿದ್ದಾರೆ, ಆದರೆ ಪೊಲೀಸರು ಇದನ್ನು ಉದ್ದೇಶಪೂರ್ವಕವಾಗಿ ಸ್ವಯಂ ಮಾಡಿಕೊಂಡ ಗಾಯ ಎಂದ ಆರೋಪಿಸಿದ್ದಾರೆ.

ನೀಲ್ ವಿರುದ್ಧ ಸುಮಾರು 2.5 ಕೋಟಿ ರೂ. ಮೌಲ್ಯದ ಎರಡು ವಂಚನೆ ಪ್ರಕರಣಗಳು ದಾಖಲಾಗಿವೆ. ಹಾಪರ್ 2020 ರಲ್ಲಿ ಯುಕೆ ಟಿವಿ ಕಾರ್ಯಕ್ರಮ ದಿಸ್ ಮಾರ್ನಿಂಗ್ ನಲ್ಲಿ ತಮ್ಮ ಕಥೆಯನ್ನು ಹಂಚಿಕೊಂಡಿದ್ದಾರೆ. ಈ ಸಂದರ್ಭದಲ್ಲಿ, ಕುಟುಂಬ ಕ್ಯಾಂಪಿಂಗ್ ಪ್ರವಾಸದ ಸಮಯದಲ್ಲಿ, ಸೆಪ್ಸಿಸ್ ಕಾರಣ ಅವರ ಎರಡೂ ಕಾಲುಗಳನ್ನು ಕತ್ತರಿಸಬೇಕಾಯಿತು ಎಂದು ಅವರು ಹೇಳಿದ್ದಾರೆ.

## ಮ. ಪ್ರದೇಶದಲ್ಲಿ ದೇಶ ಮೊದಲ ಹಿಂದಿ ಮಾಧ್ಯಮ ಕಾಲೇಜು

**ಜಬಲ್ಪುರ:** ಮಧ್ಯಪ್ರದೇಶ ವೈದ್ಯಕೀಯ ವಿಶ್ವವಿದ್ಯಾಲಯವು ಈಗ ಜಬಲ್ಪುರದಲ್ಲಿ ದೇಶದ ಮೊದಲ ಹಿಂದಿ ಮಾಧ್ಯಮ ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸಲಿದೆ. ಈ ಕಾಲೇಜಿನಲ್ಲಿ, ಎಂಬಿಬಿಎಸ್ ಅಧ್ಯಯನದಿಂದ ಪರೀಕ್ಷೆಗಳವರೆಗೆ ಸಂಪೂರ್ಣ ಪ್ರಕ್ರಿಯೆಯು ಹಿಂದಿ ಭಾಷೆಯಲ್ಲಿರುತ್ತದೆ. ಇಂಗ್ಲಿಷ್‌ನಲ್ಲಿ ಅಧ್ಯಯನ ಮಾಡಲು ಅನಾನುಕೂಲತೆಯನ್ನು ಅನುಭವಿಸುವ ವಿದ್ಯಾರ್ಥಿಗಳಿಗೆ ಈ ಉಪಕ್ರಮವು ದೊಡ್ಡ ಅವಕಾಶವಾಗಲಿದೆ. 2027-28 ರಲ್ಲಿ ಸಾಲಿನಲ್ಲಿ ಇದನ್ನು ಆರಂಭಿಸಲಾಗುತ್ತದೆ.

ವಿಶ್ವವಿದ್ಯಾಲಯದ ಕಾರ್ಯಕಾರಿ ಮಂಡಳಿಯ ಸಭೆಯಲ್ಲಿ ಈ ಪ್ರಸ್ತಾವನೆಗೆ ಅನುಮೋದನೆ ನೀಡಲಾಗಿದೆ. ಈಗ ವಿವರವಾದ ಯೋಜನಾ ವರದಿ ಸಿದ್ಧಪಡಿಸಿ ರಾಜ್ಯ ಸರ್ಕಾರಕ್ಕೆ ಕಳುಹಿಸಲಾಗುವುದು. ಸರ್ಕಾರದ ಅನುಮೋದನೆಯ ನಂತರ, ಕಾಲೇಜು ನಡೆಸಲು ರಾಷ್ಟ್ರೀಯ ವೈದ್ಯಕೀಯ ಆಯೋಗದಿಂದ ಅನುಮತಿ ಪಡೆಯಲಾಗುವುದು. ಈ ಕಾಲೇಜಿನಲ್ಲಿ 50 ಆರಂಭಿಕ ಎಂಬಿಬಿಎಸ್ ಸೀಟುಗಳು ಇರಲಿದ್ದು, 2027 ,28ನೇ ಸಾಲಿನಿಂದ ಇದನ್ನು ಪ್ರಾರಂಭಿಸಲು ಯೋಜಿಸಲಾಗಿದೆ.

### ● ಭಾರತದ ಮಿಲಟರಿ ಶಕ್ತಿ ಏನು ಎಂಬುದನ್ನು ಜಗತ್ತು ಅರಿಯಲು ಪಾಕಿಸ್ತಾನ ಅವಕಾಶ ಮಾಡಿಕೊಡುತ್ತದೆ

# ಯುದ್ಧ ಆರಂಭಿಸುವುದು ಪಾಕಿಸ್ತಾನವಾದರೆ ಅದನ್ನು ಮುಗಿಸುವುದು ಭಾರತ

**ಲಖನೌ:** ಭಾರತ-ಪಾಕಿಸ್ತಾನದ ಮಿಲಿಟಿ ಇತಿಹಾಸವನ್ನು ನೋಡಿದಾಗ, ಯಾವಾಗಲೂ ಪಾಕಿಸ್ತಾನ ಮೊದಲು ಯುದ್ಧ ಆರಂಭಿಸುತ್ತದೆ, ಆದರೆ ಭಾರತ ಆ ಯುದ್ಧವನ್ನು ಕೊನೆಗೊಳಿಸುತ್ತದೆ ಎಂದು ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಮಾರ್ಮಿಕವಾಗಿ ಹೇಳಿದ್ದಾರೆ. ಉತ್ತರ ಪ್ರದೇಶ ರಾಜಧಾನಿ ಲಖನೌನಲ್ಲಿ ಆಯೋಜಿಸಲಾಗಿದ್ದ ಕಾರ್ಗಿಲ್ ವಿಜಯ ದಿವಸ 2025 ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಸಿಎಂ ಯೋಗಿ ಆದಿತ್ಯನಾಥ್, ಪಾಕಿಸ್ತಾನ ಆರಂಭಿಸಿದ್ದ ಕಾರ್ಗಿಲ್ ಯುದ್ಧವನ್ನು ಭಾರತ ಗೆಲುವಿನಿಂದಿಗೆ ಅಂತ್ಯಗೊಳಿಸಿತು ಎಂದು ಹೇಳಿದರು. ಕಾರ್ಗಿಲ್ ಹುತಾತ್ಮರಿಗೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದ ಯೋಗಿ ಆದಿತ್ಯನಾಥ್, ಭಾರತದ ಮಿಲಟರಿ ಶಕ್ತಿ ಏನು ಎಂಬುದನ್ನು ಜಗತ್ತು ಅರಿಯಲು ಪಾಕಿಸ್ತಾನ ಅವಕಾಶ ಮಾಡಿಕೊಡುತ್ತದೆ ಎಂದು ನೆರೆ ರಾಷ್ಟ್ರದ ಕಾಲೆಳೆದರು. ಕಾರ್ಗಿಲ್ ಯುದ್ಧವನ್ನು ಪಾಕಿಸ್ತಾನ ಹೇರಿತು. ಆಪರೇಷನ್ ವಿಜಯ್ ಅಡಿಯಲ್ಲಿ ಭಾರತವು ಶತ್ರುಗಳಿಗೆ ಸೂಕ್ತ ಉತ್ತರ ನೀಡಿತು. ಕಾರ್ಗಿಲ್ ಒಂದು ಸವಾಲಿನ ಸ್ಥಳವಾಗಿತ್ತು. ಅಲ್ಲಿ ಹಗಲಿನಲ್ಲಿಯೂ ತಾಪಮಾನ ಮೈನಸ್ 50 ಡಿಗ್ರಿ ಸೆಲ್ಸಿಯಸ್ ಇರುತ್ತದೆ. ಆದರೆ ಪಾಕಿಸ್ತಾನದ ಹೇಡಿಗಳು ಭಾರತೀಯ ಸೇನೆಯ ಶಕ್ತಿಯ ಮುಂದೆ ನಿಲ್ಲಲು ಸಾಧ್ಯವಾಗಲಿಲ್ಲ. ಎಂದು ಕಾರ್ಗಿಲ್ ಯುದ್ಧದ ಇತಿಹಾಸವನ್ನು ಸ್ಮರಿಸಿದರು. ಆಪರೇಷನ್ ಸಿಂಧೂರ ಸೇನಾ ಕಾರ್ಯಾಚರಣೆ ವೇಳೆಯೂ, ಜಗತ್ತಿಗೆ ಭಾರತದ ಮಿಲಿಟರಿ ಪರಾಕ್ರಮದ ಪರಿಚಯವಾಗಿದೆ. ಪಾಕಿಸ್ತಾನಕ್ಕೆ ಪಾಠ ಕಲಿಸಲು ಮತ್ತು ಪಾಕಿಸ್ತಾನದ ಎಲ್ಲಾ ಭಯೋತ್ಪಾದಕ ಶಿಬಿರಗಳನ್ನು ನಾಶಮಾಡಲು, ಭಾರತೀಯ ಸೇನೆಯ ಧೈರ್ಯಶಾಲಿ ಸೈನಿಕರಿಗೆ ಕೇವಲ 22 ನಿಮಿಷಗಳು ಮಾತ್ರ ಬೇಕಾಯಿತು. ಪಾಕಿಸ್ತಾನಕ್ಕೆ ಚೀನಾ, ಟರ್ಕಿ ಸೇರಿದಂತೆ ಹಲವು ದೇಶಗಳು ಪ್ರತ್ಯಕ್ಷ ಮತ್ತು ಪರೋಕ್ಷ ನೆರುವ ಒದಗಿಸುತ್ತಿದ್ದವು. ಆದರೆ ಭಾರತದ ಧೈರ್ಯಶಾಲಿ ಸೈನ್ಯದ ಮುಂದೆ ಪಾಕಿಸ್ತಾನ ಏನನ್ನೂ ಮಾಡಲು ಸಾಧ್ಯವಾಗಲಿಲ್ಲ, ಅಂತಿಮವಾಗಿ ಪಾಕಿಸ್ತಾನ ಮತ್ತೊಮ್ಮೆ ಭಾರತದ ಮುಂದೆ ಶರಣಾಯಿತು ಎಂದು ಯುಪಿ ಸಿಎಂ ಹೆಮ್ಮೆ ವ್ಯಕ್ತಪಡಿಸಿದರು.

ನಾವು ಅಭಿವೃದ್ಧಿ ಹೊಂದಿದ ಭಾರತದ ಕನಸನ್ನು ನನಸಾಗಿಸಬೇಕಾದರೆ, ಜಾತಿ, ಪ್ರದೇಶ, ಭಾಷೆಯ ಹೆಸರಿನಲ್ಲಿ ನಮ್ಮನ್ನು ವಿಭಜಿಸಲು ಮುಂದಾಗಿರುವ ದುಷ್ಟ ಶಕ್ತಿಗಳ ಬಗ್ಗೆ ಜಾಗರೂಕರಾಗಿರಬೇಕು. ಇತಿಹಾಸದ ಯಾವುದೇ ಅವಧಿಯಲ್ಲಿ ಭಾರತ ಶಕ್ತಿ, ಬುದ್ಧಿವಂತಿಕೆ ಮತ್ತು ಶಿಕ್ಷಣದಲ್ಲಿ ಎಂದಿಗೂ ದುರ್ಬಲವಾಗಿಲ್ಲ. ಆದರೆ ಅಭಿವೃದ್ಧಿ ಹೊಂದಿದ ಸಮರ್ಥ ಮತ್ತು ಬಲವಾದ ಭಾರತವನ್ನು ಬಯಸದವರು, ಜಾತಿ, ಪ್ರದೇಶ, ಭಾಷೆಯ ಹೆಸರಿನಲ್ಲಿ ಭಾರತವನ್ನು ವಿಭಜಿಸಲು ಹವಣಿಸುತ್ತಿದ್ದಾರೆ. ನಾವು ಇಂತಹ ದುಷ್ಟ ಶಕ್ತಿಗಳ ಬಗ್ಗೆ ಎಚ್ಚರಿಕೆಯಿಂದ ಇರಬೇಕು ಎಂದು ಯೋಗಿ ಆದತ್ಯನಾಥ್ ಸೂಚ್ಯವಾಗಿ ಹೇಳಿದರು.

**ಮುಷರಫ್ ಅಮೆರಿಕಕ್ಕೆ ಓಡಿ ಹೋದರು**

**ಖಚಿತವಾಗುತ್ತಿದ್ದಂತೇ ಆಗಿನ ಪಾಕಿಸ್ತಾನ ಸೇನಾಧ್ಯಕ್ಷ ಪರ್ವೇಜ್ ಮುಷರಫ್ ಅಮೆರಿಕಕ್ಕೆ ಓಡಿ ಹೋದರು. ಅಮೆರಿಕ ಯುದ್ಧವನ್ನು ನಿಲ್ಲಸುವಂತೆ ಭಾರತದ ಮೇಲೆ ಒತ್ತಡ ಹೇರಿತು. ಆದರೆ ಭಾರತದ ಆಗಿನ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರು ಅಮೆರಿಕವೂ ಸೇರಿದಂತೆ ವಿಶ್ವದ ಯಾವುದೇ ಶಕ್ತಿಯ ಮುಂದೆ ಭಾರತ ತಲೆಬಾಗುವುದಿಲ್ಲ ಎಂದು ಸ್ಪಷ್ಟವಾಗಿ ಹೇಳಿದ್ದರು ಎಂದು ಯೋಗಿ ಆದಿತ್ಯನಾಥ್ ಹೇಳಿದರು.**



- **ಕಾರ್ಗಿಲ್ ವಿಜಯ ದಿವಸ 2025 ಕಾರ್ಯಕ್ರಮದಲ್ಲಿ ಮಾತನಾಡಿದ ಯೋಗಿ ಆದಿತ್ಯನಾಥ್.**
- **ಯುದ್ಧ ಬಯಸಿ ಬರುವ ಪಾಕಿಸ್ತಾನಕ್ಕೆ ಸದಾ ಹೊಡೆತ ಕೊಡುತ್ತೇವೆ ಎಂದ ಉತ್ತರ ಪ್ರದೇಶ ಮುಖ್ಯಮಂತ್ರಿ.**
- **ಆಪರೇಷನ್ ಸಿಂಧೂರ ಸೇನಾ ಕಾರ್ಯಾಚರಣೆ ವೇಳೆ ಭಾರತೀಯ ಸೇನೆಯ ಪರಾಕ್ರಮ ಮೆಚ್ಚಿದ ಯೋಗಿ.**

**ಅಗ್ನಿವೀರರಿಗೆ ಶೇ.20ರಷ್ಟು ಮೀಸಲಾತಿ:**

**ಅಗ್ನಿವೀರ್ ಆಗಿ ದೇಶ ಸೇವೆ ಮಾಡುತ್ತಿರುವ ಸೈನಿಕರು ನಿವೃತ್ತರಾದ ಮೇಲೆ, ಉ.ಪ್ರದೇಶದ ಪೊಲೀಸ್ ನೇಮಕಾತಿಯಲ್ಲಿ ಶೇ. 20 ಮೀಸಲಾತಿ ಕಲ್ಪಿಸಲಾಗುವುದು ಎಂದು ಇದೇ ವೇಳೆ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಘೋಷಿಸಿದರು.**

## ಗುಪ್ತಚರ ಅಧಿಕಾರಿಗಳಿಗೆ ಇಸ್ಲಾಂ ಮತ್ತು ಅರೇಬಿಕ್ ಭಾಷಾ ಅಧ್ಯಯನ ಕಡ್ಡಾಯ

**ಜೆರುಸಲೇಂ:** ಇಸ್ರೇಲಿ ರಕ್ಷಣಾ ಪಡೆಗಳು ಗುಪ್ತಚರ ವಿಭಾಗದಲ್ಲಿರುವ ಎಲ್ಲಾ ಸೈನಿಕರು ಮತ್ತು ಅಧಿಕಾರಿಗಳು ಅರೇಬಿಕ್ ಭಾಷೆ ಮತ್ತು ಇಸ್ಲಾಮಿಕ್ ಅಧ್ಯಯನದಲ್ಲಿ ತರಬೇತಿ ಪಡೆಯುವುದನ್ನು ಕಡ್ಡಾಯಗೊಳಿಸಿವೆ. ಜೆರುಸಲೆಮ್ ಪೋಸ್ಟ್ ಪ್ರಕಾರ, ಅಕ್ಟೋಬರ್ 7, 2023ರ ಹಮಾಸ್ ದಾಳಿಗೆ ಗುಪ್ತಚರ ವೈಫಲ್ಯ ಕಾರಣವಾಗಿದ್ದು, ಇಸ್ಲಾಂ ಮತ್ತು ಅರೇಬಿಕ್ ಭಾಷಾ ಅಧ್ಯಯನದ ಮೂಲಕ, ಗುಪ್ತಚರ ಅಧಿಕಾರಿಗಳ ಸಂವಹನ ಕೌಶಲ್ಯ ವೃದ್ಧಿಸುವುದು ಈ ನಿರ್ಧಾರದ ಹಿಂದಿನ ಉದ್ದೇಶವಾಗಿದೆ.

ಇಸ್ರೇಲ್ ಇದೀಗ ತನ್ನ ಗುಪ್ತಚರ ಅಧಿಕಾರಿಗಳ ತರಬೇತಿ ಪಟ್ಟಿಯಲ್ಲಿ ಇಸ್ಲಾಂ ಮತ್ತು ಅರೇಬಿಕ್ ಭಾಷೆಯನ್ನು ಸೇರಿಸಿದ್ದು, ಇದು ಗುಪ್ತಚರ ಸಿಬ್ಬಂದಿಯ ವಿಶ್ಲೇಷಣಾತ್ಮಕ ಸಾಮರ್ಥ್ಯಗಳನ್ನು ಬಲಪಡಿಸುವ ಗುರಿಯನ್ನು ಹೊಂದಿದೆ. ಮುಖ್ಯಸ್ಥ ಮೇಜರ್ ಜನರಲ್ ಶ್ಲೋಮಿ ಬೈಂಡರ್ ಈ ಆದೇಶ ಹೊರಡಿಸಿದ್ದು, ಕೂಡಲೇ ಇಸ್ಲಾಂ ಮತ್ತು ಅರೇಬಿಕ್ ಭಾಷಾ ಕಲಿಕೆಯನ್ನು ಗುಪ್ತಚರ ಅಧಿಕಾರಿಗಳ ತರಬೇತಿ ಪಟ್ಟಿಯಲ್ಲಿ ಸೇರಿಸಲಾಗುವುದು.

**ಏನು ಕಾರಣ?:** ಇಸ್ರೇಲ್ ಗುಪ್ತಚರ ಸಿಬ್ಬಂದಿ ಹೌತಿ ಸಂವಹನಗಳನ್ನು ಅರ್ಥೈಸಿಕೊಳ್ಳುವಲ್ಲಿ ತೊಂದರೆ ಎದುರಿಸುತ್ತಿರುವುದರಿಂದ, ಈ ಕಾರ್ಯಕ್ರಮವು ಹೌತಿ ಮತ್ತು ಇರಾಕಿ ಉಪಭಾಷೆಗಳಲ್ಲಿ ಅಧಿಕಾರಿಗಳಿಗೆ ವಿಶೇಷ ತರಬೇತಿ ನೀಡುವುದರ ಮೇಲೆ ಕೇಂದ್ರೀಕೃತವಾಗಿರಲಿದೆ.



**ಇಸ್ರೇಲ್ ದೂರದ ಆಲೋಚನೆ**

ಇಲ್ಲಿಯವರೆಗೆ ನಾವು ಇಸ್ಲಾಮಿಕ್ ಸಂಸ್ಕೃತಿ ಮತ್ತು ಭಾಷೆಯನ್ನು ಅರ್ಥೈಸಿಕೊಳ್ಳುವಲ್ಲಿ ಹಿಂದೇಟು ಹಾಕಿದ್ದೇವೆ. ಆದರೆ ಈಗಿನ ಪರಿಸ್ಥಿತಿಗಳು ನಾವು ಈ ಕ್ಷೇತ್ರಗಳಲ್ಲಿ ಸುಧಾರಿಸಬೇಕು ಎಂಬುದನ್ನು ಒತ್ತಿ ಹೇಳುತ್ತಿವೆ. ನಮ್ಮ ಗುಪ್ತಚರ ಅಧಿಕಾರಿಗಳು ಮತ್ತು ಸೈನಿಕರನ್ನು ಹಳ್ಳಿಯಲ್ಲಿ ಬೆಳೆದ ಅರಬ್ ಮಕ್ಕಳನ್ನಾಗಿ ನಾವು ಪರಿವರ್ತಿಸುವುದಿಲ್ಲ. ಆದರೆ ಭಾಷೆ ಮತ್ತು ಸಾಂಸ್ಕೃತಿಕ ಅಧ್ಯಯನಗಳ ಮೂಲಕ, ನಾವು ಗುಪ್ತಚರ ವಿಭಾಗದಲ್ಲಿ ಪರಿಣಾಮಕಾರಿ ಬದಲಾವಣೆಗಳನ್ನು ತರುತ್ತೇವೆ. ಅರೇಬಿಕ್ ಮತ್ತು ಇಸ್ಲಾಮಿಕ್ ಶಿಕ್ಷಣಕ್ಕೆ ಮೀಸಲಾಗಿರುವ ಹೊಸ ಇಲಾಖೆಯನ್ನು ನಾವು ತೆರೆಯುತ್ತೇವೆ ಎಂದು ಇಸ್ರೇಲ್ ಆರ್ಮಿ ರೇಡಿಯೊದ ಮಿಲಿಟರಿ ವರದಿಗಾರ ಡೊರೊನ್ ಕಡೋಶ್ ಹೇಳಿದ್ದಾರೆ.

ಇಷ್ಟೇ ಅಲ್ಲದೇ ಇಸ್ರೇಲ್‌ನ ಮಧ್ಯಮ ಮತ್ತು ಪ್ರೌಢಶಾಲೆಗಳಲ್ಲಿ ಅರೇಬಿಕ್ ಮತ್ತು ಮಧ್ಯಪ್ರಾಚ್ಯ ಅಧ್ಯಯನಗಳನ್ನು ಉತ್ತೇಜಿಸಲು ಮೀಸಲಾಗಿರುವ ಇಲಾಖೆಯನ್ನು ಮತ್ತೆ ತೆರೆಯಲು ಯೋಜಿಸಿದೆ. ಇದಕ್ಕೂ ಮೊದಲು, ಬಜೆಟ್ ನಿರ್ಬಂಧಗಳಿಂದಾಗಿ ಇಲಾಖೆಯನ್ನು ಮುಚ್ಚಲಾಗಿತ್ತು ಮತ್ತು ಇದರ ಪರಿಣಾಮವಾಗಿ, ದೇಶವು ಅರೇಬಿಕ್ ಭಾಷೆಯನ್ನು ಕಲಿಯುವ ಸಿಬ್ಬಂದಿಗಳ ಸಂಖ್ಯೆಯಲ್ಲಿ ತೀವ್ರ ಕುಸಿತ ಕಂಡಿತ್ತು. ಮಧ್ಯಪ್ರಾಚ್ಯದಲ್ಲಿ ಸದಾ ಸಂಘರ್ಷದಲ್ಲಿ ನಿರತವಾಗಿರುವ ಇಸ್ರೇಲ್, ಶತ್ರು ದೇಶಗಳ ಭಾಷೆ ಮತ್ತು ಸಂಸ್ಕೃತಿಯನ್ನು ಅರಿಯುವ ಮೂಲಕ ಅದರ ವಿರುದ್ಧ ಪರಿಣಾಮಕಾರಿ ಹೋರಾಟವನ್ನು ಸಂಘಟಿಸುವ ಪ್ರಯತ್ನ ಆರಂಭಿಸಿರುವುದು ಇದೀಗ ಜಾಗತಿಕ ಮಟ್ಟದಲ್ಲಿ ಗಮನ ಸೆಳೆದಿದೆ.

## ದಲಿತರ ಬಗ್ಗೆ ಕಾಂಗ್ರೆಸ್ ದೀರ್ಘಕಾಲದ ನಿರ್ಲಕ್ಷ್ಯ

**ಲಕ್ನೋ:** ಬಹುಜನ ಸಮಾಜ ಪಕ್ಷದ ಮುಖ್ಯಸ್ಥೆ ಮಾಯಾವತಿ ಅವರು ಕಾಂಗ್ರೆಸ್ ಪಕ್ಷವು ದಲಿತರು ಮತ್ತು ಬುಡಕಟ್ಟು ಜನಾಂಗದವರ ಬಗ್ಗೆ ದೀರ್ಘಕಾಲದ ನಿರ್ಲಕ್ಷ್ಯವನ್ನು ತೋರಿಸಿದೆ ಎಂದು ಆರೋಪಿಸಿದ್ದಾರೆ. ರಾಹುಲ್ ಗಾಂಧಿಯವರು ಈ ಜನರ ರಾಜಕೀಯ, ಆರ್ಥಿಕ ಮತ್ತು ಮೀಸಲಾತಿಗೆ ಸಂಬಂಧಿಸಿದ ಆಕಾಂಕ್ಷೆಗಳನ್ನು ಈಡೇರಿಸುವಲ್ಲಿ ಕಾಂಗ್ರೆಸ್ ವಿಫಲವಾಗಿದೆ ಎಂದು ಒಪ್ಪಿಕೊಂಡಿರುವುದನ್ನು ಹೊಸದಲ್ಲ ಎಂದು ಅವರು ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.

ದೇಶದ ಅತ್ಯಂತ ಹಳೆಯ ಭಾಗದ ಈ ನಡವಳಿಕೆಯೇ ಈ ಸಮುದಾಯಗಳನ್ನು ತಮ್ಮದೇ ಆದ ಪಕ್ಷವನ್ನು ರಚಿಸುವಂತೆ ಒತ್ತಾಯಿಸಿತು ಎಂದು ದಲಿತ ನಾಯಕಿ ಹೇಳಿದರು.

ಉತ್ತರ ಪ್ರದೇಶ ಸೇರಿದಂತೆ ಪ್ರಮುಖ ರಾಜ್ಯಗಳಲ್ಲಿ ಕಾಂಗ್ರೆಸ್ ಪಕ್ಷವು ನಿರಂತರವಾಗಿ ಅಧಿಕಾರದಿಂದ ಹೊರಗುಳಿದಿದೆ. ಈಗ, ಅಧಿಕಾರ ಕಳೆದುಕೊಂಡ ನಂತರ, ಅವರು ಇದ್ದಕ್ಕಿದ್ದಂತೆ ಈ ಸಮುದಾಯಗಳನ್ನು



ನೆನಪಿಸಿಕೊಳ್ಳುತ್ತಿದ್ದಾರೆ. ಇದನ್ನು ಅವರ ಶಾಶ್ವತ ಮೋಸದ ಉದ್ದೇಶಗಳು ಮತ್ತು ನೀತಿಗಳನ್ನು ನೋಡಿದರೆ ಮೊಸಳೆ ಕಣ್ಣೀರು ಎಂದು ಮಾತ್ರ ವಿವರಿಸಬಹುದು. ಬಿಜೆಪಿ ನೇತೃತ್ವದ ರಾಷ್ಟ್ರೀಯ ಪ್ರಜಾಸತ್ತಾತ್ಮಕ ಒಕ್ಕೂಟಕ್ಕೆ ಅವರು ತಮ್ಮ ಟೀಕೆಯನ್ನು ವಿಸ್ತರಿಸಿದರು, ಇದು ಬೂಟಾಟಿಕೆ ಎಂದು ಸಹ ಆರೋಪಿಸಿದರು.

ಸ್ವಾತಂತ್ರ್ಯದ ನಂತರ ಸುಮಾರು 40 ವರ್ಷಗಳ ಕಾಲ ಕಾಂಗ್ರೆಸ್ ಪಕ್ಷವು ಮೀಸಲಾತಿಯ ಸಂಪೂರ್ಣ ಪ್ರಯೋಜನಗಳನ್ನು ತಡೆಹಿಡಿದಿತ್ತು. ಡಾ. ಬಿ. ಆರ್. ಅಂಬೇಡ್ಕರ್ ಅವರನ್ನು ಭಾರತ ರತ್ನದೊಂದಿಗೆ ಗೌರವಿಸಲು ವಿಫಲವಾಯಿತು ಎಂದು ಬಿಎಸ್ಪಿ ಮುಖ್ಯಸ್ಥೆ ಹೇಳಿದರು.

## ಎನ್‌ಕೌಂಟರ್‌ನಲ್ಲಿ ಮೂವರು ನಕ್ಸಲರ ಹತ್ಯೆ

**ನವದೆಹಲಿ:** ಜಾರ್ಖಂಡ್‌ನ ಗುಮ್ಲಾ ಜಿಲ್ಲೆಯಲ್ಲಿ ನಡೆದ ಎನ್‌ಕೌಂಟರ್ ಕಾರ್ಯಾಚರಣೆಯಲ್ಲಿ ಭದ್ರತಾ ಪಡೆಗಳು ನಡೆಸಿದ ಗುಂಡಿನ ಚಕಮಕಿಯಲ್ಲಿ ಮೂವರು ನಕ್ಸಲರು ಹತರಾಗಿದ್ದಾರೆ. ನಕ್ಸಲರ ಚಟುವಟಿಕೆಯ ಕೇಂದ್ರವಾದ ಘಾಗ್ರಾ ಪ್ರದೇಶದಲ್ಲಿ ಈ ಎನ್‌ಕೌಂಟರ್ ನಡೆದಿದೆ. ಹತ್ಯೆಗೀಡಾದ ದಂಗೆಕೋರರು ನಿಷೇಧಿತ ಸಿಪಿಐ (ಮಾವೋವಾದಿ) ಸಂಘಟನೆಯ ವಿಭಜನೆಯಾದ ಜಾರ್ಖಂಡ್ ಜನ ಮುಕ್ತಿ ಪರಿಷತ್ ಸದಸ್ಯರಾಗಿದ್ದರು. ಜಾರ್ಖಂಡ್ ಪೊಲೀಸ್ ಇನ್ಸ್‌ಪೆಕ್ಟರ್ ಜನರಲ್ ಮೈಕೆಲ್ ಎಸ್.ರಾಜ್, ಕಾರ್ಯಾಚರಣೆಯ ನಡೆಯುತ್ತಿರುವ ಸ್ವರೂಪವನ್ನು ದೃಢಪಡಿಸಿದ್ದಾರೆ.

ಈ ಪ್ರದೇಶದಲ್ಲಿ ಸಶಸ್ತ್ರ ಬಂಡುಕೋರರ ಚಲನವಲನದ ಬಗ್ಗೆ ಗುಪ್ತಚರ ಮಾಹಿತಿಯ ಆಧಾರದ ಮೇಲೆ ಜಾರ್ಖಂಡ್ ಪೊಲೀಸರು ಮತ್ತು ಸಿಆರ್‌ಪಿಎಫ್ ಸಿಬ್ಬಂದಿ ಸೇರಿದಂತೆ ಭದ್ರತಾ ಪಡೆಗಳು ಜಂಟಿ ಕಾರ್ಯಾಚರಣೆ ನಡೆಸಿವೆ.

ಭದ್ರತಾ ಪಡೆಯ ತಂಡವು ಹತ್ತಿರ ಬರುತ್ತಿದ್ದಂತೆ, ನಕ್ಸಲರು ಗುಂಡು ಹಾರಿಸಿದ್ದರಿಂದ ದೀರ್ಘ ಗುಂಡಿನ ಚಕಮಕಿಗೆ ಕಾರಣವಾಯಿತು. ಭದ್ರತಾ ಪಡೆಗಳ ಕಡೆಯಿಂದ ಯಾವುದೇ ಸಾವು-ನೋವುಗಳು ವರದಿಯಾಗಿಲ್ಲ ಎಂದು ಪೊಲೀಸರು ತಿಳಿಸಿದ್ದಾರೆ.

ಬೊಕಾರೊ ಜಿಲ್ಲೆಯಲ್ಲಿ ಮತ್ತೊಂದು ಮಾರಕ ಗುಂಡಿನ ಚಕಮಕಿ ನಡೆದ ಕೇವಲ 10 ದಿನಗಳ ನಂತರ ಎನ್‌ಕೌಂಟರ್ ನಡೆದಿದೆ.



ಜುಲೈ 16ರಂದು, ಗೋಮಿಯಾ ಪೊಲೀಸ್ ಠಾಣೆ ವ್ಯಾಪ್ತಿಯ ಬಿರ್ಹೋರ್ಡೆರಾ ಅರಣ್ಯದಲ್ಲಿ ನಡೆದ ಕಾರ್ಯಾಚರಣೆಯಲ್ಲಿ, ತಲೆಗೆ 5 ಲಕ್ಷ ಬಹುಮಾನ ಘೋಷಿಸಲಾಗಿದ್ದ ಮಾವೋವಾದಿ ಮತ್ತು ಸಿಆರ್‌ಪಿಎಫ್ ಜವಾನ್‌ನೊಬ್ಬ ಸಾವನ್ನಪ್ಪಿದ್ದರು.

ದುರಂತವೆಂದರೆ ಆರಂಭದಲ್ಲಿ ಮಾವೋವಾದಿ ಎಂದು ತಪ್ಪಾಗಿ ಭಾವಿಸಿದ್ದ ನಾಗರಿಕನೊಬ್ಬ ಕೂಡ ಗುಂಡಿನ ಚಕಮಕಿಯಲ್ಲಿ ಸಾವನ್ನಪ್ಪಿದ್ದ.

ಬೊಕಾರೊ ಎನ್‌ಕೌಂಟರ್ ಜಾರ್ಖಂಡ್‌ನಲ್ಲಿ ನಕ್ಸಲ್ ಹಿಂಸಾಚಾರದಿಂದ ಉಂಟಾಗುವ ನಿರಂತರ ಅಪಾಯಗಳನ್ನು ಎತ್ತಿ ತೋರಿಸಿದೆ. ಇದು ಎಡಪಂಥೀಯ ಉಗ್ರವಾದ (ಎಇ) ದಿಂದ ಹೆಚ್ಚು ಪ್ರಭಾವಿತವಾಗಿರುವ ರಾಜ್ಯಗಳಲ್ಲಿ ಒಂದಾಗಿದೆ.

ಬೊಕಾರೊ ಕಾರ್ಯಾಚರಣೆಯಲ್ಲಿ ಕೊಲ್ಲಲ್ಪಟ್ಟ ಮಾವೋವಾದಿಯನ್ನು ಹಿರಿಯ ಕೇಡರ್ ಎಂದು ಗುರುತಿಸಲಾಗಿದ್ದು, ಅವರ ಸಾವು ಈ ಪ್ರದೇಶದಲ್ಲಿ ಕಾರ್ಯನಿರ್ವಹಿಸುತ್ತಿರುವ ಬಂಡಾಯ ಸಂಘಟನೆಗೆ ಹಿನ್ನಡೆಯಾಗಿದೆ ಎಂದು ಪರಿಗಣಿಸಲಾಗಿದೆ.

## ಥೈಲ್ಯಾಂಡ್- ಕಾಂಬೋಡಿಯಾ ನಡುವೆ ಕದನ ವಿರಾಮ

**ವಿಶ್ವಸಂಸ್ಥೆ:** ಥೈಲ್ಯಾಂಡ್ ಜೊತೆ ನಡೆಯುತ್ತಿದ್ದ ಸಂಘರ್ಷದ ಕದನ ವಿರಾಮಕ್ಕೆ ಕಾಂಬೋಡಿಯಾ ಒಪ್ಪಿಗೆ ಸೂಚಿಸಿದೆ ಎಂದು ವಿಶ್ವಸಂಸ್ಥೆಯ ಕಾಂಬೋಡಿಯಾ ರಾಯಭಾರಿ ಹೇಳಿದ್ದಾರೆ. ನೆರೆಹೊರೆಯ ರಾಷ್ಟ್ರಗಳ ನಡುವಿನ ಎರಡು ದಿನಗಳ ಪರಸ್ಪರ ದಾಳಿಯ ಬಳಿಕ ಬ್ಯಾಂಕಾಕ್ ಕೂಡ ಮಾತು ಕತೆಗೆ ಸಹಮತ ವ್ಯಕ್ತಪಡಿಸಿದೆ. ದೀರ್ಘಕಾಲದ ಗಡಿ ವಿವಾದದ ಹಿನ್ನೆಲೆಯಲ್ಲಿ ಜೆಟ್‌ಗಳು, ಟ್ಯಾಂಕರ್ ಮತ್ತು ಭೂ ಸೇನಾಪಡೆಗಳೊಂದಿಗೆ ಕಾಂಬೋಡಿಯಾ-ಥೈಲ್ಯಾಂಡ್ ದೇಶಗಳು ತೀವ್ರ ದಾಳಿ ಆರಂಭಿಸಿದ್ದವು. ಈ ಹಿನ್ನೆಲೆಯಲ್ಲಿ ವಿಶ್ವಸಂಸ್ಥೆಯ ಭದ್ರತಾ ಮಂಡಳಿ ತುರ್ತು ಸಭೆ ನಡೆಸಿತ್ತು. ಕಾಂಬೋಡಿಯಾ ಬೇಷರತ್ತಾಗಿ ತಕ್ಷಣದ ಕದನ ವಿರಾಮಕ್ಕೆ ಆಗ್ರಹಿಸಿದೆ. ನಾವು ಸಮಸ್ಯೆಗೆ ಶಾಂತಿಯುತ ಪರಿಹಾರ ಕಂಡುಕೊಳ್ಳುವಂತೆ ಕರೆ ನೀಡುತ್ತೇವೆ ಎಂದು ಕೌನ್ಸಿಲ್‌ನ ರಹಸ್ಯ ಸಭೆ ಬಳಿಕ ವಿಶ್ವಸಂಸ್ಥೆಯ ರಾಯಭಾರಿ ಛಿಯಾ-ಕಿಯಾ ಹೇಳಿದರು.

ಈ ಸಭೆಯಲ್ಲಿ ಕಾಂಬೋಡಿಯಾ-ಥೈಲಾಂಡ್‌ನ



ಪ್ರತಿನಿಗಳು ಭಾಗವಹಿಸಿದ್ದರು.

ನಿನ್ನೆ ಕೂಡ ಎರಡು ದೇಶಗಳ ಗಡಿಯಲ್ಲಿ ಫಿರಂಗಿ ದಾಳಿಯ ಸದ್ದು ಕೇಳಿ ಬಂದಿತು. ವೃದ್ಧರೊಬ್ಬರು ಸಾವನ್ನಪ್ಪಿ, ಐವರು ಗಾಯಗೊಂಡಿದ್ದರು. ಯುದ್ಧ ಭೀತಿಯ ಹಿನ್ನೆಲೆಯಲ್ಲಿ ಥೈಲ್ಯಾಂಡ್ ಗಡಿ ಪ್ರದೇಶದಲ್ಲಿ 1,38,000ಕ್ಕೂ ಹೆಚ್ಚು ಜನರನ್ನು ಸ್ಥಳಾಂತರಿಸಲಾಗಿದೆ ಎಂದು ಆರೋಗ್ಯ ಸಚಿವಾಲಯ ತಿಳಿಸಿದೆ. ಥೈಲ್ಯಾಂಡ್‌ನಲ್ಲಿ 14 ನಾಗರಿಕರು, ಒಬ್ಬ ಸೈನಿಕ ಸೇರಿದಂತೆ 15 ಮಂದಿ ಸಾವನ್ನಪ್ಪಿದ್ದಾರೆ. ನಿನ್ನೆ ಬೆಳಗಿನ ಜಾವ ಹಲವು ಕಡೆಗಳಲ್ಲಿ ಮತ್ತೆ ಹೋರಾಟ ಆರಂಭವಾಗಿತ್ತು. ಪ್ರಸ್ತುತ ಕದನ ವಿರಾಮಕ್ಕೆ ಕಾಂಬೋಡಿಯಾ ಒಪ್ಪಿಗೆ ಸೂಚಿಸಿದೆ.

**ಭಾರತೀಯರಿಗೆ ಎಚ್ಚರಿಕೆ**

**ಉಭಯ ದೇಶಗಳ ಸೈನಿಕರ ನಡುವಿನ ಸಂಘರ್ಷದ ಹಿನ್ನೆಲೆಯಲ್ಲಿ ಭಾರತ ಥೈಲ್ಯಾಂಡ್‌ನಲ್ಲಿರುವ ತನ್ನನಾಗರಿಕರಿಗೆ ಎಚ್ಚರಿಕೆ ನೀಡಿ, 7 ಪ್ರಾಂತ್ಯಗಳಿಗೆ ಪ್ರಯಾಣಿಸುವುದನ್ನು ತಪ್ಪಿಸುವಂತೆ ಸೂಚಿಸಿದೆ. ಥಾಯ್ ರಾಜಧಾನಿಯಲ್ಲಿರುವ ಭಾರತೀಯ ರಾಯಭಾರ ಕಚೇರಿಯೂ ಎಲ್ಲಾ ಭಾರತೀಯ ಪ್ರಯಾಣಿಕರು ತೊಂದರೆಗೊಳಗಾದ ಪ್ರದೇಶಗಳಲ್ಲಿನ ಪ್ರವಾಸಿ ಸ್ಥಳಗಳಿಗೆ ಭೇಟಿ ನೀಡುವ ಮುನ್ನ ದೇಶದ ಅಕಾರಿಗಳಿಂದ ಮಾಹಿತಿ ಪಡೆಯುವಂತೆ ಸೂಚಿಸಿದೆ.**

## ಬುರ್ಜ್ ಖಲೀಫಾದಲ್ಲಿ ಪ್ಲಾಟ್‌ಗಳ ಖರೀದಿ

**ನವದೆಹಲಿ:** ವಿಶ್ವದ ಅತಿ ಎತ್ತರದ ಕಟ್ಟಡ ಬುರ್ಜ್ ಖಲೀಫಾ. ದುಬೈಗೆ ಭೇಟಿ ನೀಡುವ ಪ್ರವಾಸಿಗರು ನೋಡಲೇಬೇಕು. ಇದು ಕೇವಲ ಗೋಪುರವಲ್ಲ,ಗಗನಚುಂಬಿ ಕಟ್ಟಡವನ್ನು ನಿವಾಸವಾಗಿ ವಿನ್ಯಾಸಗೊಳಿಸಲಾಗಿದೆ. ಗಗನಚುಂಬಿ ಕಟ್ಟಡವನ್ನು ವಸತಿ ಉದ್ದೇಶಗಳಿಗಾಗಿ ಅಳವಡಿಸಲಾಗಿದೆ. ಇದನ್ನು ಅತ್ಯಂತ ಐಷಾರಾಮಿ ನಿವಾಸಗಳಿಗೆ ಮನೆಯನ್ನಾಗಿ ಮಾಡಲಾಗಿದೆ. ಐಷಾರಾಮಿ ಜೀವನಶೈಲಿಯ ಗುರುತಾಗಿ ಬುರ್ಜ್ ಖಲೀಫಾ ಬಹಳ ಪ್ರಸಿದ್ಧವಾಗಿದೆ. ಈ ಗೋಪುರದಲ್ಲಿ ಎಷ್ಟು ಸೆಲೆಬ್ರಿಟಿಗಳು ತಮ್ಮದೇ ಆದ ಪ್ಲಾಟ್‌ಗಳನ್ನು ಹೊಂದಿದ್ದಾರೆ.

ಅಂದರೆ, ಕೇವಲ ಎರಡು ಹೆಸರುಗಳು ಮುನ್ನೆಲೆಗೆ ಬಂದಿವೆ. ಅವರು ಮಾಲಿವುಡ್ ಸ್ಟಾರ್ ಮೋಹನ್ ಲಾಲ್. ಬಾಲಿವುಡ್ ನಟಿ ಶಿಲ್ಪಾ ಶೆಟ್ಟಿ. ಈ ಇಬ್ಬರಿಗೆ ಮಾತ್ರ ತಮ್ಮದೇ ಆದ ಪ್ಲಾಟ್‌ಗಳಿವೆ. ಶಿಲ್ಪಾ ಶೆಟ್ಟಿಗೆ ಉಡುಗೊರೆಯಾಗಿ ಒಂದು ನಿವೇಶನ ಸಿಕ್ಕಿತು. ಶಿಲ್ಪಾ ಶೆಟ್ಟಿ ಅವರ ಪತಿ ರಾಜ್ ಕುಂದ್ರಾ ಅವರ ವಿವಾಹ ವಾರ್ಷಿಕೋತ್ಸವದ ಸಂದರ್ಭದಲ್ಲಿ ಅವರ ಪತ್ನಿಯ ಹೆಸರಿನಲ್ಲಿ ಒಂದು ಐಷಾರಾಮಿ ನಿವೇಶನವನ್ನು ಖರೀದಿಸಿದರು.

# ವಲಸೆ ನಿಮ್ಮನ್ನು ಹೊಸಕಿ ಹಾಕಲಿದೆ; ಯುರೋಪ್‌ಗೆ ಟ್ರಂಪ್ ಎಚ್ಚರಿಕೆ

### ● ವಲಸೆ ವಿರುದ್ಧ ಸಿಡಿದೇಳುವಂತೆ ಯುರೋಪ್ ರಾಷ್ಟ್ರಗಳಿಗೆ ಕರೆ ನೀಡಿದ ಅಮೆರಿಕ ಅಧ್ಯಕ್ಷ

**ಎಡಿನ್‌ಬರ್ಗ್:** ವಲಸೆ ಯುರೋಪ್ ಅನ್ನು ಕೊಲ್ಲುತ್ತಿದೆ ಇದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಪಾಶ್ಚಿಮಾತ್ಯ ರಾಷ್ಟ್ರಗಳಿಗೆ ನೀಡಿರುವ ಗಂಭೀರ ಎಚ್ಚರಿಕೆ.


ಹೌದು, ಸ್ಕಾಟ್‌ಲ್ಯಾಂಡ್ ಪ್ರವಾಸದಲ್ಲಿರುವ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ವಲಸೆ ಇಡೀ ಯುರೋಪ್‌ನ ಸರ್ವನಾಶಕ್ಕೆ ನಾಂದಿ ಹಾಡಲಿದೆ ಎಂದು ಎಚ್ಚರಿಸಿದ್ದಾರೆ. ಅಲ್ಲದೇ ಈ ವಿಚಾರದಲ್ಲಿ ಅಮೆರಿಕ ತೆಗೆದುಕೊಳ್ಳುತ್ತಿರುವ ಕಠಿಣ ಕ್ರಮವನ್ನು ಯುರೋಪ್ ಪಾಲಿಸಬೇಕು ಎಂದೂ ಟ್ರಂಪ್ ಸಲಹೆ ನೀಡಿದ್ದಾರೆ.

ಹಲವು ಯುರೋಪಿಯನ್ ರಾಷ್ಟ್ರಗಳು ವಲಸೆಯ ಭಯಾನಕ ಆಕ್ರಮಣವನ್ನು ಎದುರಿಸುತ್ತಿವೆ. ಇದನ್ನು ನಿಲ್ಲಿಸಲು ಈ ರಾಷ್ಟ್ರಗಳು ಅಮೆರಿಕದ ಕ್ರಮಗಳನ್ನು ಪಾಲಿಸಬೇಕು. ವಲಸೆ ವಿಚಾರದಲ್ಲಿ ನಾವು ಒಟ್ಟಾಗಿ ಇರದಿದ್ದರೆ, ಇಡೀ ಯುರೋಪ್ ಸರ್ವನಾಶವಾಗಲಿದೆ ಎಂದು ಡೊನಾಲ್ಡ್ ಟ್ರಂಪ್ ಎಚ್ಚರಿಸಿದರು.

ನಾನು ಈಗಲೇ ವಲಸೆಯನ್ನು ಬೆಂಬಲಿಸುವವರ ಹೆಸರುಗಳನ್ನು ಹೇಳಬಲ್ಲೆ. ಆದರೆ ನನಗೆ ಅವರೊಂದಿಗೆ ಜಗಳವಾಡುವುದಕ್ಕಿಂತ ಯುರೋಪ್‌ನ್ನು ರಕ್ಷಿಸುವುದು ಮುಖ್ಯವಾಗಿದೆ. ಈ ವಲಸೆ ಯುರೋಪನ್ನು ಕೊಲ್ಲುತ್ತಿದೆ ಎಂದು ಡೊನಾಲ್ಡ್ ಟ್ರಂಪ್ ಸೂಚ್ಯವಾಗಿ ಹೇಳಿದರು. ವಿಶ್ವಸಂಸ್ಥೆಯ 2020ರ ವರದಿಯಂತೆ ಸುಮಾರು 87 ಮಿಲಿಯನ್ ಅಂತಾರಾಷ್ಟ್ರೀಯ ವಲಸಿಗರು ಯುರೋಪಿನಲ್ಲಿ ವಾಸಿಸುತ್ತಿದ್ದಾರೆ. ತಮ್ಮ ಆಡಳಿತ ಅಮೆರಿಕ-ಮೆಕ್ಸಿಕೋ ಗಡಿಯಲ್ಲಿ ಕಠಿಣ ಕ್ರಮ ಕೈಗೊಳ್ಳುತ್ತಿರುವ ಬಗ್ಗೆ ಹೆಮ್ಮೆ ವ್ಯಕ್ತಪಡಿಸಿದ ಡೊನಾಲ್ಡ್ ಟ್ರಂಪ್, ನಿಮಗೆ ತಿಳಿದಿರುವಂತೆ ಕಳೆದ ತಿಂಗಳು ನಮ್ಮ ದೇಶಕ್ಕೆ ಯಾರೂ ಅಕ್ರಮವಾಗಿ ಪ್ರವೇಶಿಸಲಿಲ್ಲ. ದೇಶದೊಳಗೆ ನುಸುಳಿದ್ದ ಬಹಳಷ್ಟು ಕೆಟ್ಟ ಜನರನ್ನು ನಾವು ಈಗಾಗಲೇ ಹೊರಹಾಕಿದ್ದೇವೆ ಎಂದು ಹೇಳಿದರು. ಜನವರಿಯಲ್ಲಿ ಶ್ವೇತಭವನಕ್ಕೆ ಮರಳಿದಾಗಿನಿಂದ ಡೊನಾಲ್ಡ್ ಟ್ರಂಪ್ ಕಠಿಣ ವಲಸೆ ವಿರೋಧಿ ನೀತಿಯನ್ನು ಅನುಸರಿಸಿದ್ದಾರೆ. ಅವರು ಅಮೆರಿಕದ ಇತಿಹಾಸದಲ್ಲಿಯೇ ಅತಿದೊಡ್ಡ ವಲಸೆ ಗಡಿಪಾರು ಕಾರ್ಯಕ್ರಮವನ್ನು ಮುನ್ನಡೆಸುವುದಾಗಿ ಪ್ರತಿಜ್ಞೆ ಮಾಡಿದ್ದಾರೆ ಮತ್ತು ಇಲ್ಲಿಯವರೆಗೆ ಸಾವಿರಾರು ವಿದೇಶಿಯರನ್ನು ಗಡಿಪಾರು ಮಾಡಿದ್ದಾರೆ. ಆದಾಗ್ಯೂ, ಅವರ ಕಠಿಣ ವಲಸೆ ನೀತಿಯು ವಿಶ್ವದ ಅತಿ ಹೆಚ್ಚು ವಲಸೆ ಜನಸಂಖ್ಯೆಯನ್ನು ಹೊಂದಿರುವ ಅಮೆರಿಕದಲ್ಲಿ ವ್ಯಾಪಕ ವಲಸೆ ವಿರೋಧಿ ಪ್ರತಿಭಟನೆಗಳನ್ನು ಹುಟ್ಟುಹಾಕಿದೆ. ಕೀರ್ ಸ್ಟಾರ್ಮರ್ ಅವರೊಂದಿಗಿನ ತಮ್ಮ ಭೇಟಿಯ ಸಂದರ್ಭದಲ್ಲಿ, ಅಮೆರಿಕ ಮತ್ತು ಯುಕೆ ಈಗಾಗಲೇ ತಲುಪಿರುವ ವ್ಯಾಪಾರ ಒಪ್ಪಂದದ ಅಧಿಕೃತ ಘೋಷಣೆ ಮಾಡುವುದಾಗಿಯೂ ಡೊನಾಲ್ಡ್ ಟ್ರಂಪ್ ತಿಳಿಸಿದ್ದಾರೆ. ಡೊನಾಲ್ಡ್ ಟ್ರಂಪ್ ಈ ವಾರಾಂತ್ಯದಲ್ಲಿ ಸ್ಕಾಟ್ಲೆಂಡ್‌ನ ಪಶ್ಚಿಮ ಕರಾವಳಿಯಲ್ಲಿರುವ ತಮ್ಮ ಟರ್ನ್‌ಬೆರಿ ಬಂಗಲೆಯಲ್ಲಿ ತಂಗಲಿದ್ದಾರೆ. ಸ್ಕಾಟಿಷ್ ದ್ವೀಪದಲ್ಲಿ ಹುಟ್ಟಿ ಬೆಳೆದ ತಮ್ಮ ತಾಯಿಯ ಗೌರವಾರ್ಥವಾಗಿ ಹೆಸರಿಸಲಾದ ಎರಡನೇ ಗಾಲ್ಫ್ ಕೋರ್ಸ್‌ನ್ನು ಅಮೆರಿಕ ಅಧ್ಯಕ್ಷರು ಉದ್ಘಾಟಿಸಲಿದ್ದಾರೆ.

- **ವಲಸೆ ಯುರೋಪ್‌ನ ಸರ್ವನಾಶಕ್ಕೆ ಮುನ್ನುಡಿ ಬರೆಯಲಿದೆ ಎಂದ ಡೊನಾಲ್ಡ್ ಟ್ರಂಪ್.**
- **ವಲಸೆ ವಿರುದ್ಧ ಸಿಡಿದೇಳುವಂತೆ ಯುರೋಪ್ ರಾಷ್ಟ್ರಗಳಿಗೆ ಕರೆ ನೀಡಿದ ಅಮೆರಿಕ ಅಧ್ಯಕ್ಷ.**
- **ತಮ್ಮ ಸ್ಕಾಟಿಷ್ ತಾಯಿಯ ಸ್ಮರಣಾರ್ಥ ಗಾಲ್ಫ್ ಕೋರ್ಸ್ ಉದ್ಘಾಟಿಸಿದ ಡೊನಾಲ್ಡ್ ಟ್ರಂಪ್.**

**ಪಾಶ್ಚಿಮಾತ್ಯ ರಾಷ್ಟ್ರಗಳಿಗೆ ಎಚ್ಚರಿಕೆ**



**ಯುರೋಪ್ ನಾಯಕರ ಮೇಲೆ ಕಿಡಿ**

**ಇದೇ ವೇಳೆ ವಲಸೆಯನ್ನು ಬೆಂಬಲಿಸುವ ಕೆಲವು ಯುರೋಪಿಯನ್ ನಾಯಕರ ವಿರುದ್ಧ ತೀವ್ರ ವಾಗ್ದಾಳಿ ನಡೆಸಿರುವ ಡೊನಾಲ್ಡ್ ಟ್ರಂಪ್, ಯುರೋಪ್ ಸರ್ವನಾಶಕ್ಕೆ ಮುನ್ನುಡಿ ಬರೆಯುತ್ತಿರುವ ಈ ನಾಯಕರಿಂದ ದೂರ ಇರುವಂತೆ ಯುರೋಪಿಯನ್ ಜನತೆಗೆ ಸಲಹೆ ನೀಡಿದ್ದಾರೆ. ಡೊನಾಲ್ಡ್ ಟ್ರಂಪ್ ಅವರ ತಂದೆ ಫ್ರೆಡ್ ಮತ್ತು ತಾಯಿ ಮೇರಿ ಆನ್ ಮ್ಯಾಕ್ ಲಿಯೋಡ್ ಕೂಡ ಯುರೋಪ್‌ನಿಂದ ಅಮೆರಿಕಕ್ಕೆ ವಲಸೆ ಬಂದವರಾಗಿದ್ದಾರೆ.**


# ಪ್ರಥಮ್‌ಗೆ ಜೀವ ಬೆದರಿಕೆ

**ಬಾಸ್ ಬಗ್ಗೆ ಮಾತಾಡ್ತೀಯಾ ಅಂತ ಅವಾಜ್**

ನಟ ಪ್ರಥಮ್‌ಗೆ ಕಿಡಿಗೇಡಿಗಳಿಂದ ಜೀವ ಬೆದರಿಕೆ ಬಂದಿದೆ. ಸಿನಿ ಚಿತ್ರೀಕರಣವೊಂದಕ್ಕೆ ತೆರಳೋದಕ್ಕೂ ಮುನ್ನ ದೊಡ್ಡಬಳ್ಳಾಪುರ ದೇವಸ್ಥಾನಕ್ಕೆ ಹೋಗಿದ್ದ ವೇಳೆ ದುಷ್ಕರ್ಮಿಗಳ ಗುಂಪೊಂದು ಪ್ರಥಮ್‌ಗೆ ಜೀವ ಬೆದರಿಕೆ ಒಡ್ಡಿರುವುದಾಗಿ ತಿಳಿದುಬಂದಿದೆ.

ಈ ಕುರಿತು ವ್ಯಕ್ತಿಯೊಬ್ಬರೊಂದಿಗೆ ಪ್ರಥಮ್ ಮಾತನಾಡಿರುವ ಆಡಿಯೋ ಕೂಡ ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗಿದೆ. ದೊಡ್ಡಬಳ್ಳಾಪುರ ದೇವಸ್ಥಾನಕ್ಕೆ ಹೋಗಿದ್ದ ವೇಳೆ ದುಷ್ಕರ್ಮಿಗಳು ಡ್ಯಾಗ್ರರ್ ತೋರಿಸಿ ನಟನಿಗೆ ಜೀವಬೆದರಿಕೆ ಹಾಕಿದ್ದಾರೆ. ಪೂಜೆ ಮುಗಿಸಿ ಹೊರಟ ವೇಳೆ ಕಾರಿಗೆ ಅಡ್ಡಬಂದ ಕೆಲವರು ಪ್ರಥಮ್‌ನನ್ನ ಬಲವಂತವಾಗಿ ಕರೆದೊಯ್ದು, ನಮ್ ಬಾಸ್ ಬಗ್ಗೆ ಮಾತಾಡ್ತಿಯ ಅಂತ ಹಲ್ಲೆಗೆ ಯತ್ನಿಸಿ ಅವಾಚ್ಯವಾಗಿ ನಿಂದಿಸಿ ಬೆದರಿಸಿದ್ದಾರೆ. ಕೊನೆಗೆ ಅಲ್ಲಿಂದ ತಪ್ಪಿಸಿಕೊಂಡ ಬಂದ ಪ್ರಥಮ್ ಬೆಂಗಳೂರು ಗ್ರಾಮಾಂತರ ಎಸಿ ಸಿಕೆ ಬಾಬಾ ಅವರನ್ನ ಭೇಟಿಯಾಗಿ ಘಟನೆ ವಿವರಿಸಿದ್ದಾರೆ. ಬಳಿಕ ಎಸ್ಪಿ ಸಂಬಂಧಪಟ್ಟ ಠಾಣೆಗೆ ದೂರು ನೀಡುವಂತೆ ಸಲಹೆ ನೀಡಿದ್ದಾರೆ. ಈ ಕುರಿತು ಮಾಧ್ಯಮಗಳೊಂದಿಗೆ ಮಾತನಾಡಿರುವ ಎಸ್ಪಿ ಸಿಕೆ ಬಾಬಾ, ನಟ ಪ್ರಥಮ್ ಮೇಲೆ ಹಲ್ಲೆಗೆ ಯತ್ನಿಸಿ, ಜೀವ ಬೆದರಿಕೆ ಆರೋಪ ಕೇಳಿಬಂದಿದೆ. ದೇವಸ್ಥಾನಕ್ಕೆ ಹೋಗಿದ್ದಾಗ ಘಟನೆ ನಡೆದಿದೆ. ಅವರನ್ನ ಈಗಾಗಲೇ ಕರೆದು ಮಾತನಾಡಿದ್ದೀನಿ. ಅವರಿಗೆ ದೂರು ಕೊಡೋಕೆ ಹೇಳಿದ್ದೀನಿ. ಇಲ್ಲಿವರೆಗೂ ಯಾವುದೇ ದೂರು ನೀಡಿಲ್ಲ.





# ಒಂದೇ ದಿನಕ್ಕೆ ಮೂರು ಪಟ್ಟಾಯ್ತು 'ಸು ಫ್ರಮ್ ಸೋ' ಶೋ ಸಂಖ್ಯೆ

'ಸು ಫ್ರಮ್ ಸೋ' ಕನ್ನಡ ಚಿತ್ರದ ನಿರ್ಮಾಪಕ ರಾಜ್ ಬಿ ಶೆಟ್ಟಿ ಅವರು ಸಾಂಪ್ರದಾಯಿಕ ಪ್ರಚಾರದಿಂದ ದೂರ ಉಳಿದಿದ್ದಾರೆ. ಚಿತ್ರವನ್ನು ಮುಂಚಿತವಾಗಿ ಪ್ರೇಕ್ಷಕರಿಗೆ ತೋರಿಸುವ ಮೂಲಕ ಅಭೂತಪೂರ್ವ ಯಶಸ್ಸು ಕಂಡಿದ್ದಾರೆ. ಚಿತ್ರದ ಬಾಯಿ ಮಾತಿನ ಪ್ರಚಾರವೇ ಟಿಕೆಟ್ ಮಾರಾಟ ಹೆಚ್ಚಳಕ್ಕೆ ಕಾರಣ. ಪವನ್ ಕಲ್ಯಾಣ್ ಅವರ 'ಹರಿ ಹರ ವೀರ ಮಲ್ಲು' ಚಿತ್ರದ ಜೊತೆ ಬಿಡುಗಡೆಯಾದರೂ, 'ಸು ಫ್ರಮ್ ಸೋ' ಚಿತ್ರಕ್ಕೆ ಬೇಡಿಕೆ ಹೆಚ್ಚಾಗಿದೆ. ಸಾಮಾನ್ಯವಾಗಿ ಸಿನಿಮಾ ರಿಲೀಸ್ ಬಂತು ಎಂದರೆ ಚಿತ್ರ ತಂಡದವರು ಸಂದರ್ಶನ ನೀಡಿತ್ತಾರೆ. ಸಿನಿಮಾ ಪೋಸ್ಟರ್‌ಗಳನ್ನು ರಸ್ತೆಗಳ ಬದಿಯಲ್ಲಿರೋ ಗೋಡೆಗೆ ಅಂಟಿಸುವ ಕೆಲಸ ಮಾಡುತ್ತಾರೆ. ಸಿನಿಮಾ ಜನರ ತಲುಪಲು ಏನೆಲ್ಲ ಬೇಕೋ ಅದೆಲ್ಲ ಪ್ರಯತ್ನವನ್ನು ಮಾಡುತ್ತಾರೆ. ಇದು ಮೊದಲಿನಿಂದಲೂ ನಡೆದುಕೊಂಡ ಪದ್ಧತಿ. ಹಾಗಂತ ಇದು ತಪ್ಪು ಕೂಡ ಅಲ್ಲ. 'ಸು ಫ್ರಮ್ ಸೋ' ಚಿತ್ರದ ನಿರ್ಮಾಪಕ ರಾಜ್ ಬಿ ಶೆಟ್ಟಿ ಒಂದು ಹೊಸ ಪ್ರಯತ್ನ ಮಾಡಿ ಗೆದ್ದಿದ್ದಾರೆ. 'ಕನ್ನಡ ಸಿನಿಮಾ ನೋಡಲು ಪ್ರೇಕ್ಷಕರೇ ಬರುತ್ತಿಲ್ಲ' ಎಂಬ ಮಾತಿನಿಂದ 'ಚಿತ್ರಕ್ಕೆ ಟಿಕೇಟ್‌ಗಳೇ ಸಿಗುತ್ತಿಲ್ಲ, ಎಲ್ಲಾ ಹೌಸ್ ಫುಲ್ ಆಗಿದೆ' ಎಂಬ ಮಾತು ಬರುವಂತೆ ಮಾಡಿದ್ದಾರೆ.

# ಮಹಾವತಾರ ನರಸಿಂಹ ಸಿನಿಮಾಗೆ ಮೆಚ್ಚುಗೆ




'ಮಹಾವತಾರ ನರಸಿಂಹ' ಚಿತ್ರವನ್ನು ಅಶ್ವಿನ್ ಕುಮಾರ್ ನಿರ್ದೇಶಿಸಿದ್ದು, ಕ್ಲೆಮ್ ಪ್ರೊಡಕ್ಷನ್ಸ್ ಅಡಿಯಲ್ಲಿ ಶಿಲ್ಪಾ ಧವನ್, ಕುಶಾಲ್ ದೇಸಾಯಿ ಮತ್ತು ಚೈತನ್ಯ ದೇಸಾಯಿ ನಿರ್ಮಿಸಿದ್ದಾರೆ. ಈ ಚಿತ್ರವನ್ನು 5 ಭಾರತೀಯ ಭಾಷೆಗಳಲ್ಲಿ 3ಆ ಯಲ್ಲಿ ಬಿಡುಗಡೆ ಮಾಡಲಾಗಿದೆ. ಅಶ್ವಿನ್ ಕುಮಾರ್ ನಿರ್ದೇಶನದ 'ಮಹಾವತಾರ ನರಸಿಂಹ' ಅನಿಮೇಟೆಡ್ ಚಿತ್ರ. ಈ ಚಿತ್ರವು ವಿಷ್ಣು ಪುರಾಣವನ್ನು ಆಧರಿಸಿದ ಪ್ರಸಿದ್ಧ ಕಥೆಯನ್ನು ಅನಿಮೇಷನ್ ಮೂಲಕ ಚಿತ್ರಿಸುತ್ತದೆ, ಇದರಲ್ಲಿ ರಾಕ್ಷಸ ಹಿರಣ್ಯಕಶ್ಯಪು ಮತ್ತು ವಿಷ್ಣುವಿನ ಭಕ್ತ ಪ್ರಹ್ಲಾದನ ನಡುವಿನ ಸಂಘರ್ಷವಿದೆ.

ಈ ಚಿತ್ರ ಜುಲೈ 25 ರಂದು ಚಿತ್ರಮಂದಿರಗಳಲ್ಲಿ ಬಿಡುಗಡೆಯಾಯಿತು ಮತ್ತು ಅದನ್ನು ನೋಡಿದ ನಂತರ, ಪ್ರೇಕ್ಷಕರು ತಮ್ಮ ಪ್ರತಿಕ್ರಿಯೆಗಳನ್ನು ನೀಡುತ್ತಿದ್ದಾರೆ ಮತ್ತು ಚಿತ್ರವನ್ನು ಹೊಗಳುತ್ತಿದ್ದಾರೆ.

ಪ್ರೇಕ್ಷಕರು ಚಿತ್ರಕ್ಕೆ ಸಕಾರಾತ್ಮಕ ರೀತಿಯಲ್ಲಿ ಪ್ರತಿಕ್ರಿಯಿಸುತ್ತಿದ್ದಾರೆ. ಒಬ್ಬ ಬಳಕೆದಾರರು ಇದು ಅದ್ಭುತ ಚಿತ್ರ ಎಂದು ಬರೆದಿದ್ದಾರೆ. ಮತ್ತೊಬ್ಬ ಬಳಕೆದಾರರು 'ನನ್ನ ಭಾವನೆಗಳನ್ನು ನಿಯಂತ್ರಿಸಲು ಸಾಧ್ಯವಿಲ್ಲ, ಇದುವರೆಗಿನ ಅತ್ಯುತ್ತಮ ಚಿತ್ರ. ಈ ಅದ್ಭುತ ಚಿತ್ರವನ್ನು ಚಿತ್ರಮಂದಿರಗಳಲ್ಲಿ ಮಾತ್ರ ಅನುಭವಿಸಬಹುದು. ಹಿನ್ನೆಲೆ ಸಂಗೀತ ಅದ್ಭುತವಾಗಿದೆ' ಎಂದು ಬರೆದಿದ್ದಾರೆ. ಮತ್ತೊಬ್ಬ ಬಳಕೆದಾರರು ಇದು ಬ್ಲಾಕ್‌ಬಸ್ಟರ್ ಚಿತ್ರ ಎಂದು ಬರೆದಿದ್ದಾರೆ. ಇದಲ್ಲದೆ, ಇತರ ಬಳಕೆದಾರರು ಇದನ್ನು ಉತ್ತಮ ಚಿತ್ರ ಎಂದು ಕರೆಯುತ್ತಿದ್ದಾರೆ. ಹೊಂಬಾಳೆ ಫಿಲ್ಮ್ಸ್‌ನ 'ಮಹಾವತಾರ ನರಸಿಂಹ' ಚಿತ್ರಮಂದಿರಗಳಲ್ಲಿ ಬಿಡುಗಡೆಯಾಗಿದೆ. ಉತ್ತಮ ದೃಶ್ಯಗಳು ಮತ್ತು ಆಸಕ್ತಿದಾಯಕ ಕಥೆಯೊಂದಿಗೆ, 'ಮಹಾವತಾರ ನರಸಿಂಹ' ವೀಕ್ಷಿಸಲು ಜನರು ಹೆಚ್ಚಿನ ಸಂಖ್ಯೆಯಲ್ಲಿ ಚಿತ್ರಮಂದಿರಗಳಿಗೆ ಬರುತ್ತಿದ್ದಾರೆ.

# ಬಿಡುಗಡೆಗೆ ಮುನ್ನವೇ ಭರ್ಜರಿ ಕಲೆಕ್ಷನ್

**50 ಕೋಟಿ ಬ್ಯುಸಿನೆಸ್**

ವಿಜಯ್ ದೇವರಕೊಂಡ ನಟನೆಯ 'ಕಿಂಗ್ಡಮ್' ಸಿನಿಮಾ ಕೆಲವೇ ದಿನಗಳಲ್ಲಿ ಬಿಡುಗಡೆ ಆಗಲಿದೆ. ಕಳೆದ ಕೆಲ ಸಿನಿಮಾಗಳಲ್ಲಿ ನಿರಾಸೆ ಅನುಭವಿಸಿರುವ ವಿಜಯ್ ದೇವರಕೊಂಡ ಈ ಸಿನಿಮಾದ ಮೇಲೆ ಭಾರಿ ನಿರೀಕ್ಷೆ ಇರಿಸಿಕೊಂಡಿದ್ದಾರೆ. ಅದಕ್ಕೆ ತಕ್ಕಂತೆ ಸಿನಿಮಾ ಬಿಡುಗಡೆಗೆ ಮುಂಚೆಯೇ ಭರ್ಜರಿ ಪ್ರೀ ರಿಲೀಸ್ ಬ್ಯುಸಿನೆಸ್ ಮಾಡಿದೆ. ವಿಜಯ್ ದೇವರಕೊಂಡ ನಟನೆಯ ಕಳೆದ ಕೆಲ ಸಿನಿಮಾಗಳು ನಿರೀಕ್ಷಿತ ಪ್ರದರ್ಶನವನ್ನು ಬಾಕ್ಸ್ ಆಫೀಸ್‌ನಲ್ಲಿ ತೋರಿಲ್ಲ. ಇದು ಸ್ವತಃ ವಿಜಯ್ ದೇವರಕೊಂಡ ಮತ್ತು ಅವರ ಅಭಿಮಾನಿಗಳಿಗೆ ಬೇಸರ ಮೂಡಿಸಿದೆ. ಹಾಗೆಂದು ವಿಜಯ್ ದೇವರಕೊಂಡಗೆ ಅವಕಾಶಗಳೇನು ಕಡಿಮೆ ಆಗಿಲ್ಲ. ಇದೀಗ ನಟ ವಿಜಯ್ ದೇವರಕೊಂಡ 'ಕಿಂಗ್‌ಡಮ್' ಹೆಸರಿನ ಸಿನಿಮಾನಲ್ಲಿ ನಟಿಸಿದ್ದು, ಇದೇ ತಿಂಗಳ 31ಕ್ಕೆ ಸಿನಿಮಾ ಬಿಡುಗಡೆ ಆಗಲಿದೆ. ಸಿನಿಮಾಕ್ಕಾಗಿ ಸಾಕಷ್ಟು ಶ್ರಮವನ್ನು ವಿಜಯ್ ದೇವರಕೊಂಡ ಹಾಕಿದ್ದು, ಶ್ರಮದ ಪ್ರತಿಫಲ ಸಿನಿಮಾ ಬಿಡುಗಡೆಗೆ ಮುನ್ನವೇ ಸಿಗಲಾರಂಭಿಸಿದೆ. ವಿಜಯ್ ದೇವರಕೊಂಡ ನಟನೆಯ 'ಕಿಂಗ್‌ಡಮ್' ಸಿನಿಮಾ ಬಿಡುಗಡೆಗೆ ಮುಂಚೆಯೇ 50 ಕೋಟಿಗೂ ಹೆಚ್ಚು ಮೊತ್ತವನ್ನು ಗಳಿಕೆ ಮಾಡಿದೆ. ಸಿನಿಮಾದ ವಿದೇಶ ಬಿಡುಗಡೆ ಹಕ್ಕು, ವಿಶೇಷವಾಗಿ ಉತ್ತರ ಅಮೆರಿಕದ ಹಕ್ಕುಗಳು ಭಾರಿ ಮೊತ್ತಕ್ಕೆ ಮಾರಾಟವಾಗಿವೆ. ಭಾರತದಲ್ಲಿಯೂ ಸಹ ಸಿನಿಮಾದ ಬಿಡುಗಡೆ ಹಕ್ಕಿಗೆ ಭರ್ಜರಿ ದರವೇ ನಿಗದಿ ಆಗಿದೆ. ಸಿನಿಮಾದ ಆಡಿಯೋ ಹಕ್ಕುಗಳ ಮಾರಾಟದಿಂದಲೂ ಉತ್ತಮ ಮೊತ್ತವೇ ದೊರಕಿದ್ದು, ಈ ವರೆಗೆ ಸುಮಾರು 50 ಕೋಟಿ ಬ್ಯುಸಿನೆಸ್ ಆಗಿದೆ ಎನ್ನಲಾಗುತ್ತಿದೆ. ಅದೂ ಡಿಜಿಟಲ್ ಹಕ್ಕು ಮಾರಾಟದ ಹೊರತಾಗಿ! 'ಕಿಂಗ್‌ಡಮ್' ಸಿನಿಮಾದ ಡಿಜಿಟಲ್ ಹಕ್ಕು ಮಾರಾಟ ಹೊರತಾಗಿಯೇ ಈ ವರೆಗೆ 50 ಕೋಟಿ ಬ್ಯುಸಿನೆಸ್ ಆಗಿರುವುದು ಬಹಳ ಒಳ್ಳೆಯ ಬೆಳವಣಿಗೆ ಆಗಿದ್ದು, ಸಿನಿಮಾದ ನಿರ್ಮಾಪಕರು ಈಗಾಗಲೇ ಸೇಫ್ ಆಗಿದ್ದಾರೆ ಎನ್ನಲಾಗುತ್ತಿದೆ. ಸಿನಿಮಾದ ಬಿಡುಗಡೆಯನ್ನು ಬಲು ಜೋರಾಗಿಯೇ ನಿರ್ಮಾಪಕರು ಮಾಡುತ್ತಿದ್ದು, ಆಂಧ್ರ-ತೆಲಂಗಾಣಗಳಲ್ಲಿ ಅದ್ದೂರಿಯಾಗಿ ಬಿಡುಗಡೆ ಮಾಡಲು ಯೋಜನೆ ಹಾಕಿಕೊಂಡಿದ್ದಾರೆ. ಕಳೆದ ಗುರುವಾರ ಬಿಡುಗಡೆ ಆದ ಪವನ್ ಕಲ್ಯಾಣ್ ನಟನೆಯ 'ಹರಿ ಹರ ವೀರ ಮಲ್ಲು' ಸಿನಿಮಾದ ಕಳಪೆ ಪ್ರದರ್ಶನ ಸಹ 'ಕಿಂಗ್ಡಮ್'ಗೆ ವರವಾಗಿ ಪರಿಣಮಿಸಲಿದೆ. 'ಕಿಂಗ್ಡಮ್' ಸಿನಿಮಾದ ಸೆನ್ಸಾರ್ ಮುಗಿದಿದ್ದು, ಯು/ಎ ಪ್ರಮಾಣ ಪತ್ರ ದೊರೆತಿದೆ. ವಿಜಯ್ ದೇವರಕೊಂಡ ಬಲು ಸಕ್ರಿಯವಾಗಿ ಪ್ರಚಾರದಲ್ಲಿ ತೊಡಗಿಕೊಂಡಿದ್ದಾರೆ. 'ಕಿಂಗ್ಡಮ್' ಪಕ್ಕಾ ಆಕ್ಷನ್ ಥ್ರಿಲ್ಲರ್ ಕತೆ ಒಳಗೊಂಡಿದ್ದು, ಸಿನಿಮಾದ ಟ್ರೈಲರ್ ಜುಲೈ 26 ಬಿಡುಗಡೆ ಆಗಲಿದೆ. ತಿರುಪತಿಯಲ್ಲಿ ಇದಕ್ಕಾಗಿ ವಿಶೇಷ ಕಾರ್ಯಕ್ರಮವನ್ನು ಸಹ ಚಿತ್ರತಂಡ ಹಮ್ಮಿಕೊಂಡಿದೆ.





# 200 ಕೋಟಿ ಕ್ಲಬ್ ಸೇರಿದ ಸೆನ್ಸೇಷನ್ ಸೈಯಾರ

**ಬಾಕ್ಸಾಫೀಸ್‌ನಲ್ಲೂ ಹಣ ಹಾಗೆ ಹರಿಯುತ್ತಿದೆ.**

ಇತ್ತೀಚೆಗೆ ಭಾರತೀಯ ಚಿತ್ರರಂಗದಲ್ಲಿ ಒಳ್ಳೆಯ ಕಂಟೆಂಟ್‌ನ ಸಿನಿಮಾಗಳು ಬರುತ್ತಿಲ್ಲ. ಸಿನಿಮಾ ನೋಡೋಕೆ ಥಿಯೇಟರ್‌ನತ್ತ ಪ್ರೇಕ್ಷಕರು ಕೂಡಾ ಬರ್ತಿಲ್ಲ ಅನ್ನುವ ಮಾತುಗಳ ಮಧ್ಯೆ, ಹೊಸಬರ ಸಿನಿಮಾಗಳು ಬಾಕ್ಸಾಫೀಸ್‌ನಲ್ಲಿ ಭರ್ಜರಿ ಸೌಂಡ್ ಮಾಡ್ತಿವೆ. ಜುಲೈ 18ರಂದು ತೆರೆಕಂಡ ಬಾಲಿವುಡ್ ಸಿನಿಮಾ 'ಸೈಯಾರ' ಬಾಕ್ಸಾಫೀಸ್ ಉಡೀಸ್ ಮಾಡಿದೆ. ನಿರೀಕ್ಷೆಗೂ ಮೀರಿ ಕಲೆಕ್ಷನ್ ಮಾಡ್ತಿದೆ.

ಸೈಯಾರ ಅದ್ಭುತವಾಗಿ ರೆಸ್ಪಾನ್ಸ್ ಪಡೆದುಕೊಂಡು ಎರಡನೇ ವಾರವೂ ಯಶಸ್ವಿ ಪ್ರದರ್ಶನ ಕಾಣ್ತಿರುವ ಸಿನಿಮಾ. ಅಹಾನ್ ಪಾಂಡೆ ಹಾಗೂ ಅನೀತಾ ಪಡ್ಡಾ ಅಭಿನಯಕ್ಕೆ ಮನಸೋತ ಪ್ರೇಕ್ಷಕರ ಸಂಖ್ಯೆ ದಿನದಿಂದ ದಿನಕ್ಕೆ ಜಾಸ್ತಿ ಆಗುತ್ತಿದೆ. ಬಾಕ್ಸಾಫೀಸ್‌ನಲ್ಲೂ ಹಣ ಹಾಗೆ ಹರಿಯುತ್ತಿದೆ. ಸಿನಿಮಾ ನಿರ್ಮಾಣ ಮಾಡಿದ ನಿರ್ಮಾಪಕರ ಜೇಬು ತುಂಬುತ್ತಿದೆ. ಈ ಮೂಲಕ ನಿರ್ಮಾಪಕರಿಗೆ, ಇಂಡಸ್ಟ್ರಿ ಜನರಿಗೆ ಮತ್ತಷ್ಟು ಹೊಸ ಉತ್ಸಾಹ ಸಿಕ್ಕಿದೆ. ಈ ವರ್ಷದ ಮೊದಲಾರ್ಧವನ್ನ ಮರೆತು, ದ್ವಿತಿಯಾರ್ಧದ ಕಡೆಗೆ ಕುತೂಹಲದಿಂದ ಕಾಯುತ್ತಿದ್ದಾರೆ. ಸೈಯಾರ ತೆರೆಕಂಡ ಮೊದಲ ದಿನವೇ 21.5 ಕೋಟಿ ರೂ. ಗಳಿಕೆ ಮಾಡಿತ್ತು. ವೀಕೆಂಡ್‌ನಲ್ಲಿ ಭರ್ಜರಿ ಮೊತ್ತವನ್ನೇ ಕಲೆಹಾಕಿತ್ತು.

# ಕರುಣ್ ಕಣ್ಣೀರು ಸಮಾಧಾನ ಮಾಡಿದ ಕೆಎಲ್ ರಾಹುಲ್

ಇಂಗ್ಲೆಂಡ್ ವಿರುದ್ಧದ ಟೆಸ್ಟ್ ಸರಣಿಗೂ ಮುನ್ನ ಕರುಣ್ ನಾಯರ್ ಟೀಮ್ ಇಂಡಿಯಾ ಪರ 6 ಟೆಸ್ಟ್ ಪಂದ್ಯಗಳನ್ನಾಡಿದ್ದರು. 7 ಇನಿಂಗ್ಸ್‌ಗಳಲ್ಲಿ ಬ್ಯಾಟ್ ಬೀಸಿದ್ದ ಅವರು ತ್ರಿಶತಕ ಸಿಡಿಸುವ ಮೂಲಕ ಮಿಂಚಿದ್ದರು. ಆದರೆ ಈ ತ್ರಿಪಲ್ ಸೆಂಚುರಿ ಬಳಿಕ ವಿಫಲರಾದ ಕಾರಣ ಅವರನ್ನು ಆ ಬಳಿಕ ಭಾರತ ತಂಡಕ್ಕೆ ಆಯ್ಕೆ ಮಾಡಿರಲಿಲ್ಲ. ಇದೀಗ 8 ವರ್ಷಗಳ ಬಳಿಕ ಭಾರತ ತಂಡದಲ್ಲಿ ಕಾಣಿಸಿಕೊಂಡರೂ ಭರ್ಜರಿ ಪ್ರದರ್ಶನ ನೀಡುವಲ್ಲಿ ವಿಫಲರಾಗಿದ್ದಾರೆ.



ಡಿಯರ್ ಕ್ರಿಕೆಟ್ ಇನ್ನೊಂದು ಅವಕಾಶ ನೀಡು ಎಂದು ಬೇಡಿಕೊಂಡಿದ್ದ ಕರುಣ್ ನಾಯರ್‌ಗೆ 8 ವರ್ಷಗಳ ಬಳಿಕ ಭಾರತ ತಂಡದಲ್ಲಿ ಮರಳಿ ಸ್ಥಾನ ಲಭಿಸಿತ್ತು. ಹೀಗೆ ಲಭಿಸಿದ ಅವಕಾಶದೊಂದಿಗೆ ಪ್ಲೇಯಿಂಗ್ ಇಲೆವೆನ್‌ನಲ್ಲೂ ಕಾಣಿಸಿಕೊಂಡರು. ಆದರೆ ಈ ಅವಕಾಶಗಳನ್ನು ಬಳಸಿಕೊಳ್ಳುವಲ್ಲಿ ಕರುಣ್ ನಾಯರ್ ಸಂಪೂರ್ಣ ವಿಫಲರಾಗಿದ್ದಾರೆ. ಇಂಗ್ಲೆಂಡ್ ವಿರುದ್ಧ ಆಡಿದ 6 ಇನಿಂಗ್ಸ್‌ಗಳಲ್ಲಿ ಕರುಣ್ ಕಲೆಹಾಕಿದ ಒಟ್ಟು ಸ್ಕೋರ್ 131 ರನ್‌ಗಳು ಮಾತ್ರ. ಇತ್ತ ತಂಡದಿಂದ ಹೊರಬಿದ್ದ ಬೆನ್ನಲ್ಲೇ ಕರುಣ್ ನಾಯರ್ ಅಳುತ್ತಿರುವ ಫೋಟೋವೊಂದು ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗಿತ್ತು. ಈ ಫೋಟೋದಲ್ಲಿ ಕರುಣ್ ಕಣ್ಣೀರು ಹಾಕುತ್ತಿದ್ದರೆ, ಅತ್ತ ಕೆಎಲ್ ರಾಹುಲ್ ತನ್ನ ಸಹಪಾಠಿಯನ್ನು ಸಮಾಧಾನಪಡಿಸುತ್ತಿರುವುದು ಕಾಣಬಹುದು.

ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗಿರುವ ಫೋಟೋ ಮ್ಯಾಂಚೆಸ್ಟರ್ ಟೆಸ್ಟ್ ಪಂದ್ಯದ ವೇಳೆ ತೆಗೆದಿದ್ದಲ್ಲ. ಬದಲಾಗಿ ಲಾರ್ಡ್ಸ್ ಟೆಸ್ಟ್ ಪಂದ್ಯದ ವೇಳೆ ಕಂಡು ಬಂದ ದೃಶ್ಯ. ಇಂಗ್ಲೆಂಡ್ ವಿರುದ್ಧದ ಮೂರನೇ ಟೆಸ್ಟ್ ಪಂದ್ಯದ ದ್ವಿತೀಯ ಇನಿಂಗ್ಸ್‌ನಲ್ಲಿ ಕರುಣ್ ಕೇವಲ 14 ರನ್‌ಗಳಿಸಿ ಔಟಾಗಿದ್ದರು. ತನ್ನ ಕೆರಿಯರ್‌ಗೆ ನಿರ್ಣಾಯಕವಾಗಿದ್ದ ಈ ಇನಿಂಗ್ಸ್‌ನಲ್ಲಿ ಉತ್ತಮ ಪ್ರದರ್ಶನ ನೀಡದೇ ಔಟಾಗಿದ್ದರಿಂದ ಅವರು ನಿರಾಸೆಗೊಂಡಿದ್ದರು. ಹೀಗಾಗಿಯೇ ಔಟಾದ ಬಳಿಕ ಲಾರ್ಡ್ಸ್ ಬಾಲ್ಕನಿಯಲ್ಲಿ ಬೇಸರದಲ್ಲಿ ಕಾಣಿಸಿಕೊಂಡಿದ್ದರು. ಈ ವೇಳೆ ಕರ್ನಾಟಕದ ಮತ್ತೋರ್ವ ಆಟಗಾರನಾಗಿರುವ ಕೆಎಲ್ ರಾಹುಲ್ ಅವರನ್ನು ಸಮಾಧಾನ ಮಾಡುತ್ತಿರುವುದು ಕಂಡು ಬಂದಿದೆ. ಇದೇ ಫೋಟೋ ಇದೀಗ ನಾಲ್ಕನೇ ಟೆಸ್ಟ್ ಪಂದ್ಯದ ವೇಳೆ ಕಂಡು ಬಂದ ಸನ್ನಿವೇಶ ಎಂಬ ಟ್ಯಾಗ್ ಲೈನ್‌ನೊಂದಿಗೆ ಹರಿಬಿಡಲಾಗಿದೆ. ಒಟ್ಟಿನಲ್ಲಿ ಎಂಟು ವರ್ಷಗಳ ಬಳಿಕ ಟೀಮ್ ಇಂಡಿಯಾಗೆ ಕಂಬ್ಯಾಕ್ ಮಾಡಿದ ಕರುಣ್ ನಾಯರ್ ನಿರೀಕ್ಷಿತ ರೀತಿಯಲ್ಲಿ ಪ್ರದರ್ಶನ ನೀಡಿಲ್ಲ ಎಂಬುದೇ ಸತ್ಯ. ಆಡಿದ 6 ಇನಿಂಗ್ಸ್‌ಗಳಲ್ಲಿ ಅವರು ಒಂದೇ ಒಂದು ಅರ್ಧಶತಕ ಬಾರಿಸಿಲ್ಲ. ಅತ್ತ ಸಿಕ್ಕ 2ನೇ ಅವಕಾಶದಲ್ಲಿ 61 ರನ್ ಗಳಿಸುವ ಮೂಲಕ ಸಾಯಿ ಸುದರ್ಶನ್ ಮುಂದಿನ ಪಂದ್ಯಕ್ಕೂ ತನ್ನ ಸ್ಥಾನವನ್ನು ಭದ್ರಪಡಿಸಿಕೊಂಡಿದ್ದಾರೆ. ಹೀಗಾಗಿ 5ನೇ ಟೆಸ್ಟ್ ಪಂದ್ಯದಲ್ಲೂ ಕರುಣ್ ನಾಯರ್‌ಗೆ ಅವಕಾಶ ಸಿಗುವುದಿಲ್ಲ ಎಂದೇ ಹೇಳಬಹುದು. ಅಲ್ಲದೆ ಮುಂಬರುವ ಸರಣಿಗಳಿಂದಲೂ ಕರುಣ್ ನಾಯರ್ ಹೊರಬೀಳುವ ಸಾಧ್ಯತೆಯನ್ನು ತಳ್ಳಿ ಹಾಕುವಂತಿಲ್ಲ. ಏಕೆಂದರೆ ಅತ್ತ ಸರ್ಫರಾಝ್ ಖಾನ್, ತಿಲಕ್ ವರ್ಮಾ ಸೇರಿದಂತೆ ಕೆಲ ಯುವ ದಾಂಡಿಗರು ಅವಕಾಶವನ್ನು ಎದುರು ನೋಡುತ್ತಿದ್ದು, ಹೀಗಾಗಿ ಇಂಗ್ಲೆಂಡ್ ವಿರುದ್ಧದ ಟೆಸ್ಟ್ ಸರಣಿಯ ಬಳಿಕ ಕರುಣ್ ನಾಯರ್ ತಂಡದಿಂದ ಹೊರಬಿದ್ದರೂ ಅಚ್ಚರಿಪಡಬೇಕಿಲ್ಲ.



# ಟೀಮ್ ಇಂಡಿಯಾ ವಿರುದ್ಧ ಹೊಸ ಇತಿಹಾಸ ಬರೆದ ರೂಟ್

ಭಾರತ ಮತ್ತು ಇಂಗ್ಲೆಂಡ್ ನಡುವಣ 4ನೇ ಟೆಸ್ಟ್ ಪಂದ್ಯದಲ್ಲಿ ಜೋ ರೂಟ್ ಭರ್ಜರಿ ಶತಕ ಸಿಡಿಸಿ ಮಿಂಚಿದ್ದಾರೆ. ಈ ಪಂದ್ಯದಲ್ಲಿ 4ನೇ ಕ್ರಮಾಂಕದಲ್ಲಿ ಕಣಕ್ಕಿಳಿದ ರೂಟ್ 248 ಎಸೆತಗಳಲ್ಲಿ 14 ಫೋರ್‌ಗಳೊಂದಿಗೆ 150 ರನ್ ಬಾರಿಸಿದ್ದಾರೆ. ಈ ಭರ್ಜರಿ ಶತಕದೊಂದಿಗೆ ಜೋ ರೂಟ್ ಹೊಸ ಇತಿಹಾಸ ನಿರ್ಮಿಸಿದ್ದಾರೆ. ಟೆಸ್ಟ್ ಕ್ರಿಕೆಟ್ ಇತಿಹಾಸದಲ್ಲೇ ಭಾರತದ ವಿರುದ್ಧ ಅತ್ಯಧಿಕ ಸೆಂಚುರಿ ಸಿಡಿಸಿದ್ದು ಯಾರು ಈ ಪ್ರಶ್ನೆಗೆ ಸದ್ಯದ ಉತ್ತರ ಜೋಸೆಫ್ ಎಡ್ವರ್ಡ್ ರೂಟ್ ಅಲಿಯಾಸ್ ಜೋ ರೂಟ್. ಮ್ಯಾಂಚೆಸ್ಟರ್‌ನಲ್ಲಿ ನಡೆಯುತ್ತಿರುವ ಟೀಮ್ ಇಂಡಿಯಾ ವಿರುದ್ಧದ 4ನೇ ಟೆಸ್ಟ್ ಪಂದ್ಯದಲ್ಲಿ 150 ರನ್‌ಗಳ ಮ್ಯಾರಥಾನ್ ಇನಿಂಗ್ಸ್ ಆಡುವ ಮೂಲಕ ರೂಟ್ ಹೊಸ ಇತಿಹಾಸ ನಿರ್ಮಿಸಿದ್ದಾರೆ. ಈ ಮೂಲಕ ಟೆಸ್ಟ್ ಕ್ರಿಕೆಟ್ ಇತಿಹಾಸದಲ್ಲೇ ಭಾರತದ ವಿರುದ್ಧ ಅತೀ ಹೆಚ್ಚು ಶತಕ ಬಾರಿಸಿದ ಬ್ಯಾಟರ್ ಎನಿಸಿಕೊಂಡಿದ್ದಾರೆ. ಇದಕ್ಕೂ ಮುನ್ನ ಈ ದಾಖಲೆ ಆಸ್ಟ್ರೇಲಿಯಾದ ಸ್ಟೀವ್ ಸ್ಮಿತ್ ಹೆಸರಿನಲ್ಲಿತ್ತು. ಟೀಮ್ ಇಂಡಿಯಾ ವಿರುದ್ಧ 46 ಟೆಸ್ಟ್ ಇನಿಂಗ್ಸ್ ಆಡಿರುವ ಸ್ಮಿತ್ ಒಟ್ಟು 11 ಶತಕ ಬಾರಿಸಿ ಈ ವಿಶೇಷ ದಾಖಲೆ ನಿರ್ಮಿಸಿದ್ದರು.



ಆದರೀಗ ಸ್ಮಿತ್ ದಾಖಲೆಯನ್ನು ಮುರಿದು ಜೋ ರೂಟ್ ಅಗ್ರಸ್ಥಾನಕ್ಕೇರಿದ್ದಾರೆ. ಜೋ ರೂಟ್ ಭಾರತದ ವಿರುದ್ಧ ಈವರೆಗೆ 62 ಇನಿಂಗ್ಸ್ ಆಡಿದ್ದಾರೆ. ಈ ವೇಳೆ ಬರೋಬ್ಬರಿ 12 ಶತಕಗಳನ್ನು ಬಾರಿಸಿದ್ದಾರೆ. ಈ ಮೂಲಕ ಟೀಮ್ ಇಂಡಿಯಾ ವಿರುದ್ಧ ಅತ್ಯಧಿಕ ಸೆಂಚುರಿ ಸಿಡಿಸಿದ ಬ್ಯಾಟರ್ ಎಂಬ ಹೆಗ್ಗಳಿಕೆಯನ್ನು ತನ್ನದಾಗಿಸಿಕೊಂಡಿದ್ದಾರೆ. ಅಷ್ಟೇ ಅಲ್ಲದೆ ಭಾರತ-ಇಂಗ್ಲೆಂಡ್ ನಡುವಣ ಟೆಸ್ಟ್ ಸರಣಿಯಲ್ಲಿ ಅತ್ಯಧಿಕ ರನ್ ಕಲೆಹಾಕಿದ ಬ್ಯಾಟರ್ ಎಂಬ ದಾಖಲೆ ಕೂಡ ಜೋ ರೂಟ್ ಹೆಸರಿನಲ್ಲಿತ್ತು. ಟೀಮ್ ಇಂಡಿಯಾ ವಿರುದ್ಧ ಆಡಿದ 62 ಇನಿಂಗ್ಸ್‌ಗಳ ಮೂಲಕ ರೂಟ್ ಈವರೆಗೆ ಕಲೆಹಾಕಿರುವುದು ಬರೋಬ್ಬರಿ 3249 ರನ್‌ಗಳು. ರೂಟ್ ಅವರನ್ನು ಹೊರತುಪಡಿಸಿ ಭಾರತದ ಅಥವಾ ಇಂಗ್ಲೆಂಡ್‌ನ ಬ್ಯಾಟರ್ 3000 ರನ್‌ಗಳ ಗಡಿದಾಟಿಲ್ಲ ಎಂಬುದು ವಿಶೇಷ. ಸದ್ಯ ಟೆಸ್ಟ್ ಕ್ರಿಕೆಟ್ ಇತಿಹಾಸದಲ್ಲೇ ಅತ್ಯಧಿಕ ರನ್ ಕಲೆಹಾಕಿದ ಬ್ಯಾಟರ್‌ಗಳ ಪಟ್ಟಿಯಲ್ಲಿ ಜೋ ರೂಟ್ ದ್ವಿತೀಯ ಸ್ಥಾನದಲ್ಲಿದ್ದು, ಅಗ್ರಸ್ಥಾನಕ್ಕೇರಲು ಇನ್ನು ಕೇವಲ 2513 ರನ್‌ಗಳು ಮಾತ್ರ ಬೇಕಿದೆ. ಸದ್ಯ 15921 ರನ್‌ಗಳೊಂದಿಗೆ ಸಚಿನ್ ತೆಂಡೂಲ್ಕರ್ ಅಗ್ರಸ್ಥಾನದಲ್ಲಿ ಜೋ ರೂಟ್ ಈ ವಿಶ್ವ ದಾಖಲೆಯನ್ನು ಮುರಿಯಲಿದ್ದಾರಾ ಕಾದು ನೋಡಬೇಕಿದೆ.

# ದಿ ಹಂಡ್ರೆಡ್ ಲೀಗ್‌ನಲ್ಲೂ ಕಣಕ್ಕಿಳಿಯಲಿದೆ ಸೂಪರ್ ಜೈಂಟ್ಸ್

**ಮ್ಯಾಚ್ ಫಿಕ್ಸಿಂಗ್ ಆರೋಪ ಮಾಡಿದ್ದ ಹಸಿನ್**

ದಿ ಹಂಡ್ರೆಡ್ ಲೀಗ್ ಶುರುವಾಗಿದ್ದು 2021 ರಲ್ಲಿ. ಈ ಟೂರ್ನಿಯಲ್ಲಿ 100 ಎಸೆತಗಳ ಪಂದ್ಯ ನಡೆಯಲಿದೆ. ಟಿ20 ಬದಲಿಗೆ ಇಲ್ಲಿ ಪ್ರತಿ ಇನಿಂಗ್ಸ್‌ಗೆ 100 ಎಸೆತಗಳನ್ನು ಎಸೆಯಲಾಗುತ್ತದೆ. ಹಾಗೆಯೇ ಒಂದು ಓವರ್‌ನಲ್ಲಿ 5 ಎಸೆತಗಳು ಇರಲಿವೆ. ಇಲ್ಲಿ ಗಮನಿಸಬೇಕಾದ ಮುಖ್ಯ ಅಂದರೆ ಒಬ್ಬ ಬೌಲರ್ ಸತತ 2 ಓವರ್ ಅಥವಾ 10 ಎಸೆತಗಳನ್ನು ಎಸೆಯಬಹುದು. ಹೀಗೆ ಹಲವು ರೀತಿಯಲ್ಲಿ ವಿಭಿನ್ನವಾಗಿ ಟೂರ್ನಿಗೆ ಇದೀಗ ಐಪಿಎಲ್ ಫ್ರಾಂಚೈಸಿಗಳು ಎಂಟ್ರಿ ಕೊಟ್ಟಿದ್ದಾರೆ. ಇಂಡಿಯನ್ ಪ್ರೀಮಿಯರ್ ಲೀಗ್‌ನ ಫ್ರಾಂಚೈಸಿಗಳು ಇದೀಗ ಇಂಗ್ಲೆಂಡ್ ಕ್ರಿಕೆಟ್ ಲೀಗ್‌ನತ್ತ ಮುಖ ಮಾಡಿದ್ದಾರೆ. ಇಂಗ್ಲೆಂಡ್ ಕ್ರಿಕೆಟ್ ಬೋರ್ಡ್ ಆಯೋಜಿಸುವ ದಿ ಹಂಡ್ರೆಡ್ ಲೀಗ್‌ನಲ್ಲಿ ಐಪಿಎಲ್‌ನ ಮೂರು ಫ್ರಾಂಚೈಸಿಗಳು ತಂಡಗಳನ್ನು ಖರೀದಿಸಿದೆ. ಐಪಿಎಲ್‌ನ ಮೂರು ಪ್ರಮುಖ ಫ್ರಾಂಚೈಸಿಗಳಾದ ಮುಂಬೈ ಇಂಡಿಯನ್ಸ್, ಲಕ್ನೋ ಸೂಪರ್ ಜೈಂಟ್ಸ್ ಹಾಗೂ ಸನ್ ರೈಸರ್ಸ್ ಹೈದರಾಬಾದ್ ದಿ ಹಂಡ್ರೆಡ್ ಲೀಗ್ ತಂಡಗಳ ಮಾಲೀಕತ್ವನ್ನು ಪಡೆದುಕೊಂಡಿದೆ. ಈ ಮೂಲಕ ಇಂಗ್ಲೆಂಡ್ ಕ್ರಿಕೆಟ್ ಲೀಗ್‌ನತ್ತ ಐಪಿಎಲ್ ಫ್ರಾಂಚೈಸಿಗಳು ಹೊಸ ಹೆಜ್ಜೆಯನ್ನಿಟ್ಟಿದೆ. ಅದರಂತೆ ಇದೀಗ ಲಕ್ನೋ ಸೂಪರ್ ಜೈಂಟ್ಸ್ ಫ್ರಾಂಚೈಸಿ ಖರೀದಿಸಿದ ಮ್ಯಾಂಚೆಸ್ಟರ್ ಒರಿಜಿನಲ್ಸ್ ತಂಡದ ಹೆಸರನ್ನು ಬದಲಿಸಲಾಗಿದೆ. ಅಲ್ಲದೆ ಇನ್ಮುಂದೆ ಮ್ಯಾಂಚೆಸ್ಟರ್ ಒರಿಜಿನಲ್ಸ್ ತಂಡವು ಮ್ಯಾಂಚೆಸ್ಟರ್ ಸೂಪರ್ ಜೈಂಟ್ಸ್ ಹೆಸರಿನಲ್ಲಿ ಕಣಕ್ಕಿಳಿಯಲಿದೆ ಎಂದು ತಿಳಿಸಿದೆ. ಇದರೊಂದಿಗೆ ಸೂಪರ್ ಜೈಂಟ್ಸ್ ಹೆಸರಿನ ಮೂರು ತಂಡಗಳು ರೂಪುಗೊಂಡಂತಾಗಿದೆ. ಅಂದರೆ ಐಪಿಎಲ್‌ನಲ್ಲಿ ಲಕ್ನೋ ಸೂಪರ್ ಜೈಂಟ್ಸ್, ಸೌತ್ ಆಫ್ರಿಕಾ ಟಿ20 ಲೀಗ್‌ನಲ್ಲಿ ಡರ್ಬನ್ ಸೂಪರ್ ಜೈಂಟ್ಸ್, ದಿ ಹಂಡ್ರೆಡ್ ಲೀಗ್‌ನಲ್ಲಿ ಮ್ಯಾಂಚೆಸ್ಟರ್ ಸೂಪರ್ ಜೈಂಟ್ಸ್ ತಂಡಗಳು ಕಣಕ್ಕಿಳಿಯಲಿವೆ. ಇನ್ನು ಮುಂಬೈ ಇಂಡಿಯನ್ಸ್ ಫ್ರಾಂಚೈಸಿಯು ಓವಲ್ ಇನ್ವಿನ್ಸಿಬಲ್ ತಂಡದ




ಶೇ. 49 ರಷ್ಟು ಪಾಲನ್ನು ಖರೀದಿಸಿದೆ. ಈ ಮೂಲಕ ರಿಲಯನ್ಸ್ ಒಡೆತನದ ಇಂಡಿಯಾವಿನ್ ಸ್ಪೋರ್ಟ್ಸ್ ಪ್ರೈ. ಲಿಮಿಟೆಡ್ 100 ಎಸೆತಗಳ ಟೂರ್ನಿಗೆ ಕಾಲಿಟ್ಟಿದೆ. ಅಲ್ಲದೆ ಮುಂಬೈ ಇಂಡಿಯನ್ಸ್ ಫ್ರಾಂಚೈಸಿ ಎಂಐ ಓವಲ್ ಹೆಸರಿನಲ್ಲಿ ಕಣಕ್ಕಿಳಿಯುವ ಸಾಧ್ಯತೆಯಿದೆ. ಹಾಗೆಯೇ ಸನ್‌ರೈಸರ್ಸ್ ಹೈದರಾಬಾದ್ ಫ್ರಾಂಚೈಸಿ ಕೂಡ ದಿ ಹಂಡ್ರೆಡ್ ಲೀಗ್‌ನಲ್ಲಿ ತಂಡವನ್ನು ಖರೀದಿಸುವಲ್ಲಿ ಯಶಸ್ವಿಯಾಗಿದೆ. ನಾರ್ದರ್ನ್ ಸೂಪರ್ ಚಾರ್ಜರ್ಸ್ ಯಾರ್ಕ್‌ಷೈರ್ ಒಡೆತನದಲ್ಲಿದ್ದು ಸಂಪೂರ್ಣ ಪಾಲನ್ನು ಸನ್ ಗ್ರೂಪ್ ಖರೀದಿಸಿದ್ದು, ಹೀಗಾಗಿ ಮುಂಬರುವ ದಿ ಹಂಡ್ರೆಡ್ ಲೀಗ್‌ನಲ್ಲಿ ನಾರ್ದರ್ನ್ ಸೂಪರ್‌ಚಾರ್ಜರ್ಸ್ ತಂಡವು ಸನ್‌ರೈಸರ್ಸ್ ಹೆಸರಿನಲ್ಲಿ ಕಣಕ್ಕಿಳಿಯುವ ಸಾಧ್ಯತೆಯಿದೆ.

# ಟೀಮ್ ಇಂಡಿಯಾ ಮುಂದಿರುವುದು ಇದೊಂದೇ ಆಯ್ಕೆ

**32 ಪಂದ್ಯಗಳು ಡ್ರಾ ಆಗಿದೆ**

ಇಂಗ್ಲೆಂಡ್ ತಂಡದ ಮೊದಲ ಇನಿಂಗ್ಸ್ ಕೊನೆಗೊಳಿಸಲು ಟೀಮ್ ಇಂಡಿಯಾ ಇನ್ನೂ ಮೂರು ವಿಕೆಟ್‌ಗಳನ್ನು ಪಡೆಯಲೇಬೇಕು. ಅದರಲ್ಲೂ ಬೆನ್ ಸ್ಟೋಕ್ಸ್ ಹಾಗೂ ಲಿಯಾಮ್ ಡಾಸನ್ ಉತ್ತಮವಾಗಿ ಬ್ಯಾಟ್ ಬೀಸುತ್ತಿದ್ದಾರೆ. ಹೀಗಾಗಿ ಇಂಗ್ಲೆಂಡ್ ತಂಡವು ಮೊದಲೆರಡು ಸೆಷನ್‌ಗಳ ಮೂಲಕ ಬೃಹತ್ ಮೊತ್ತ ಕಲೆಹಾಕಲು ಯತ್ನಿಸುವುದು ಖಚಿತ.

ಈ ಮೂಲಕ 186 ರನ್‌ಗಳ ಮುನ್ನಡೆ ಹೊಂದಿರುವ ಇಂಗ್ಲೆಂಡ್ ತಂಡವು ಕನಿಷ್ಠ 250 ರನ್‌ಗಳ ಮುನ್ನಡೆ ಪಡೆಯುವ ಗುರಿಯೊಂದಿಗೆ ಕಣಕ್ಕಿಳಿಯಲಿದೆ. ಅಂದರೆ ಇಂಗ್ಲೆಂಡ್ 600 ರನ್ ಕಲೆಹಾಕದೇ ಡಿಕ್ಲೇರ್ ಘೋಷಿಸುವ ಸಾಧ್ಯತೆಯಿಲ್ಲ.



**ಟೀಮ್ ಇಂಡಿಯಾ ಮುಂದಿರುವುದು ಒಂದೇ ಆಯ್ಕೆ:** ಇಂಗ್ಲೆಂಡ್ ತಂಡವು ಕನಿಷ್ಠ 200 ರನ್‌ಗಳ ಮುನ್ನಡೆ ಸಾಧಿಸಿದರೆ, ಟೀಮ್ ಇಂಡಿಯಾ ಮುಂದಿರುವುದು ಡ್ರಾ ಆಯ್ಕೆ ಮಾತ್ರ. ಏಕೆಂದರೆ ದ್ವಿತೀಯ ಇನಿಂಗ್ಸ್‌ನ ಕೊನೆಯ 2 ಸೆಷನ್‌ನಲ್ಲಿ ಟೀಮ್ ಇಂಡಿಯಾ ಬ್ಯಾಟ್ ಬೀಸಿದರೂ 200 ರಿಂದ 300 ರನ್‌ಗಳಿಸಲಷ್ಟೇ ಶಕ್ತರಾಗಲಿದ್ದಾರೆ. ಅಲ್ಲದೆ ಐದನೇ ದಿನದಾಟದಲ್ಲೂ ಬ್ಯಾಟಿಂಗ್ ಕಾಯ್ದುಕೊಳ್ಳಬೇಕಾದ ಅನಿವಾರ್ಯತೆ ಎದುರಾಗಲಿದೆ. ಒಂದು ವೇಳೆ ಟೀಮ್ ಇಂಡಿಯಾ ಆಕ್ರಮಣಕಾರಿ ಆಟಕ್ಕೆ ಮುಂದಾಗಿ ದ್ವಿತೀಯ ಇನಿಂಗ್ಸ್‌ನಲ್ಲಿ 350 ರನ್‌ಗಳಿಸಿದರೂ, ಇಂಗ್ಲೆಂಡ್ ತಂಡಕ್ಕೆ ಸಿಗುವ ಗುರಿ ಕೇವಲ 150 ರನ್‌ಗಳು ಮಾತ್ರ.

ಅಂದರೆ ಮೊದಲ ಇನಿಂಗ್ಸ್‌ನಲ್ಲಿ ಇಂಗ್ಲೆಂಡ್ 200 ರನ್ ಮುನ್ನಡೆ ಪಡೆದರೆ, ದ್ವಿತೀಯ ಇನಿಂಗ್ಸ್‌ನಲ್ಲಿ ಭಾರತ ತಂಡವು 350 ರನ್‌ಗಳಿಸಿದರೂ ಆತಿಥೇಯ ಪಡೆ ಕಡಿಮೆ ಮೊತ್ತದ ಟಾರ್ಗೆಟ್ ಪಡೆಯಲಿದೆ. ಹೀಗಾಗಿ ಭಾರತ ತಂಡವು ಈ ಪಂದ್ಯವನ್ನು ಡ್ರಾನತ್ತ ಕೊಂಡೊಯ್ಯಬೇಕಿರುವುದು ಅನಿವಾರ್ಯ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966